22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 289 | ನವದೆಹಲಿ | ಬೆಲೆ ₹ 10 | ಏಪ್ರಿಲ್ 25 2025, ಶುಕ್ರವಾರ

**ಒಳಪುಟಗಳಲ್ಲಿ**

ಹೆಚ್ಚುತ್ತಿರುವ ವನ್ಯಜೀವಿಗಳ ಸಾವು ನಿಗಾ ಇಡಲು ಸಚಿವ ಖಂಡ್ರೆ ಸೂಚನೆ ಪು.5

# ಪಹಲ್ಗಾಮ್ ಉಗ್ರರ ದಾಳಿಯಲ್ಲಿ ಸಾವಿಗೀಡಾದ ಕನ್ನಡಿಗರ ಪಾರ್ಥಿವ ಶರೀರ ಆಗಮನ: ಗಣ್ಯರಿಂದ ಅಂತಿಮ ನಮನ



ಬೆಂಗಳೂರು, ಏ.24– ಜಮ್ಮು-ಕಾಶ್ಮೀರದ ಪಹಲ್ಗಾಮ್‌ನಲ್ಲಿ ಉಗ್ರರ ಪೈಶಾಚಿಕ ಕೃತ್ಯಕ್ಕೆ ಬಲಿಯಾದ ಕನ್ನಡಿಗರ ಮೃತದೇಹಗಳು ಇಂದು ಬೆಂಗಳೂರಿಗೆ ತಲುಪಿವೆ. ವಿಶೇಷ ವಿಮಾನದ ಮೂಲಕ ಉಗ್ರರ ದಾಳಿಯಲ್ಲಿ ಮೃತಪಟ್ಟ ಬೆಂಗಳೂರಿನ ಭರತ್‌ಭೂಷಣ್ ಹಾಗೂ ಶಿವಮೊಗ್ಗದ ಮಂಜುನಾಥರ ಪಾರ್ಥಿವ ಶರೀರಗಳನ್ನು ಬೆಂಗಳೂರಿಗೆ ತರಲಾಗಿದ್ದು, ಮಂಜುನಾಥ್ ರಾವ್ ಅವರ ಪಾರ್ಥೀವ ಶರೀರವನ್ನು ಶಿವಮೊಗ್ಗಕ್ಕೆ ಕಳುಹಿಸಿಕೊಟ್ಟಿದ್ದು, ಈ ಇಬ್ಬರ ಅಂತ್ಯಕ್ರಿಯೆ ಪೊಲೀಸ್ ಗೌರವದೊಂದಿಗೆ ಸಂಜೆ ನಡೆಯಿತು. ಕಾರ್ಗೋ ವಿಮಾನದ ಮೂಲಕ ಬೆಂಗಳೂರು ತಲುಪಿದ ಮೃತದೇಹಗಳನ್ನ ಬೆಳಗ್ಗೆ 5 ಗಂಟೆಗೆ ಕುಟುಂಬಸ್ಥರಿಗೆ ಹಸ್ತಾಂತರಿಸಲಾಯಿತು. ಕೆಂಪೇಗೌಡ ಇಂಟರ್ನ್ಯಾಷನಲ್ ಏರ್ಪೋರ್ಟ್‌ನಲ್ಲಿ ಕೇಂದ್ರ ಸಚಿವ ವಿ.ಸೋಮಣ್ಣ, ಸಂಸದ ತೇಜಸ್ವಿ ಸೂರ್ಯ ಪಾರ್ಥೀವ ಶರೀರದ ದರ್ಶನ ಪಡೆದು ಅಂತಿಮ ನಮನ ಸಲ್ಲಿಸಿದರು.

ಮತ್ತಿಕೆರೆಯಲ್ಲಿರುವ ಭರತ್‌ಭೂಷಣ್ ನಿವಾಸಕ್ಕೆ ಬೆಳಗ್ಗೆ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋತ್, ಮುಖ್ಯಮಂತ್ರಿ ಸಿದ್ಧರಾಮಯ್ಯ ಭೇಟಿನೀಡಿ ಪಾರ್ಥಿವ ಶರೀರಕ್ಕೆ ಅಂತಿಮ ನಮನ ಸಲ್ಲಿಸಿ ಕುಟುಂಬದವರಿಗೆ ಸಾಂತ್ವನ ಹೇಳಿದರು. ಭರತ್‌ಭೂಷಣ್ ನಿವಾಸದಲ್ಲಿ ಕುಟುಂಬಸ್ಥರ ಆಕ್ರಂದನ ಮುಗಿಲುಮುಟ್ಟಿತ್ತು. ಪ್ರವಾಸದಿಂದ ಮಗ ವಾಪಸ್ ಬರುವ ನಿರೀಕ್ಷೆಯಲ್ಲಿದ್ದ ಭರತ್ ಭೂಷಣ್ ತಾಯಿ ಮೃತದೇಹದ ಮುಂದೆ ಕಣ್ಣೀರಿಟ್ಟ ದೃಶ್ಯ ಮನಕಲಕುವಂತಿತ್ತು. ಮೃತದೇಹದ ಅಂತಿಮ ದರ್ಶನಕ್ಕೆ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದ್ದು, ಕುಟುಂಬಸ್ಥರು, ಸ್ಥಳೀಯರು ಅಂತಿಮ ನಮನ ಸಲ್ಲಿಸಿದರು. ರಾಜ್ಯ ಬಿಜೆಪಿ ಅಧ್ಯಕ್ಷ ವಿಜಯೇಂದ್ರ, ಬಿಜೆಪಿ ಮುಖಂಡ ಸಿ.ಟಿ.ರವಿ ಮತ್ತು ಶಾಸಕ ಮುನಿರತ್ನ ಸೇರಿದಂತೆ ಹಲವು ರಾಜಕೀಯ ನಾಯಕರು, ಗಣ್ಯರು ಮೃತದೇಹದ ಅಂತಿಮ ದರ್ಶನ ಪಡೆದರು.

ಶಿವಮೊಗ್ಗದ ಮಂಜುನಾಥ್ ರಾವ್ ಅವರ ಪಾರ್ಥೀವ ಶರೀರವನ್ನು ಬೆಳಗ್ಗೆ ಬೆಂಗಳೂರಿನಿಂದ ತುಮಕೂರು ಮಾರ್ಗವಾಗಿ ಶಿವಮೊಗ್ಗಕ್ಕೆ ಕೊಂಡೊಯ್ಯಲಾಯಿತು. ತುಮಕೂರಿನ ಜಾಸ್ ಟೋಲ್ ಗೇಟ್ ಬಳಿ ಬಂದ ಪಾರ್ಥೀವ ಶರೀರಕ್ಕೆ ಬಿಜೆಪಿ ಶಾಸಕ ಜ್ಯೋತಿ ಗಣೇಶ್, ಬಿಜೆಪಿ ಜಿಲ್ಲಾಧ್ಯಕ್ಷ ಹೆಬ್ಬಾಕ ರವಿಶಂಕರ್ ಹಾರ ಹಾಕಿ ಗೌರವ ಸಮರ್ಪಣೆ ಮಾಡಿದರು. ಅಂಬ್ಯುಲೆನ್ಸ್ ಮೂಲಕ ತೆರಳಿದ ಮಂಜುನಾಥ್ ಮೃತದೇಹದ ಜೊತೆಯಲ್ಲಿ ಅವರ ಪತ್ನಿ ಹಾಗೂ ಕುಟುಂಬದವರು ಕೂಡ ಸಾಗಿದರು. ಮಂಜುನಾಥ್ ಮೃತ ದೇಹವು ತುಮಕೂರು, ಶಿರಾ, ಚಿತ್ರದುರ್ಗ, ಹೊಳಲ್ಕೆರೆ ಚನ್ನಗಿರಿ ಮಾರ್ಗವಾಗಿ ಶಿವಮೊಗ್ಗ ತಲುಪಿದೆ.

## ರಾಜ್ಯ ಸರ್ಕಾರದಿಂದ ಸಂಪೂರ್ಣ ಬೆಂಬಲ ಸಿಎಂ

ನಮ್ಮ ದೇಶದಲ್ಲಿ ಉಗ್ರ ಚಟುವಟಿಕೆ ಇರಬಾರಬಾರದು. ಭಯೋತ್ಪಾದನೆಯನ್ನು ಸಂಪೂರ್ಣ ಮಟ್ಟ ಹಾಕಬೇಕು. ಕೇಂದ್ರ ಸರ್ಕಾರ ಎಲ್ಲಾ ಉಗ್ರರನ್ನು ನಾಶಪಡಿಸುವ ಕೆಲಸ ಮಾಡಬೇಕು. ಕೇಂದ್ರ ಸರ್ಕಾರದ ಜತೆ ನಾವೆಲ್ಲ ಇದ್ದೇವೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು. ಪಹಲ್ಗಾಮ್‌ನಲ್ಲಿ ಉಗ್ರ ದಾಳಿಯಲ್ಲಿ ಮೃತಪಟ್ಟ ಭರತ್ ಭೂಷಣ್ ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆದ ಬಳಿಕ ಬೆಂಗಳೂರಿನಲ್ಲಿ ಮಾತನಾಡಿದ ಅವರು, ಅಮಾನೀಯವಾದ ಕೃತ್ಯ ಇದು, ಇದನ್ನು ತೀವ್ರವಾಗಿ ಖಂಡಿಸುತ್ತೇನೆ ಎಂದರು.ಭರತ್ ಭೂಷಣ್ ಅವರನ್ನು ಹಾಡಹಗಲೇ ಹೆಂಡತಿ, ಮಗುವಿನ ಕಣ್ಣೆದುರೇ ಶೂಟ್ ಮಾಡಿ ಹತ್ಯೆ ಮಾಡಿದ್ದಾರೆ. ಈ ರೀತಿಯ ಘಟನೆ ಮತ್ತೆ ಮರುಕಳಿಸದಂತೆ ನೋಡಿಕೊಳ್ಳಬೇಕು. ನಮ್ಮ ದೇಶದಲ್ಲಿ ಉಗ್ರರು ಇರದಂತೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಸಿದ್ದರಾಮಯ್ಯ ಆಗ್ರಹಿಸಿದರು. ಅವರ ಕುಟುಂಬದವರಿಗೆ ತಲಾ 10 ಲಕ್ಷ ರೂ. ಪರಿಹಾರ ನೀಡುತ್ತೇವೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು. ಭರತ್‌ಭೂಷಣ್, ಮಂಜುನಾಥ್ ಅಂತ್ಯಕ್ರಿಯೆಗೆ ಸರ್ಕಾರದಿಂದ ವ್ಯವಸ್ಥೆ ಮಾಡಲಾಗುತ್ತದೆ.



ಭರತ್ ಭೂಷನ್ ಅವರ ಅಂತಿಮ ದರ್ಶನದ ಬಳಿಕ ರಾಜ್ಯಪಾಲರು ಬರಿಗಾಲಿನಲ್ಲಿಯೇ ಬಂದು ಮಾಧ್ಯಮಗಳೊಂದಿಗೆ ಮಾತನಾಡಿದರು. ಇಂತಹ ಕ್ರೌರ್ಯ ಎಸಗಿದ ಪಾಕಿಸ್ತಾನಕ್ಕೆ ಭಾರತ ತಕ್ಕ ತಿರುಗೇಟು ನೀಡುವುದಂತೂ ಖಚಿತ ಎಂದು ವಿಶ್ವಾಸ ವ್ಯಕ್ತಪಡಿಸಿದರು.ಶೀಘ್ರವೇ ಪಾಕಿಸ್ತಾನದ ಮೇಲೆ ಭಾರತ ದಾಳಿ ಮಾಡಬಹುದು. ದೇಶದ ಜನರ ಆಕ್ರೋಶ ಅರ್ಥ ಮಾಡಿಕೊಂಡು ಕೇಂದ್ರ ಕಠಿಣ ಕ್ರಮಕ್ಕೆ ಮುಂದಾಗುವುದಂತೂ ಖಚಿತ. ಎಂಥಾ ಕಠಿಣ ಕ್ರಮಕ್ಕೆ ಕೇಂದ್ರ ಮುಂದಾಗುತ್ತದೆ ಅಂದರೆ ಮತ್ತೊಮ್ಮೆ ಪಾಕಿಸ್ತಾನ ನಮ್ಮ ದೇಶದ ಮೇಲೆ ಉಗ್ರ ಚಟುವಟಿಕೆ ನಡೆಸಲು ಹೆದರಬೇಕು ಎಂದು ಗೆಹ್ಲೋಟ್ ಹೇಳಿಕೆ ನೀಡಿದರು.

ಕಾರ್ಮಿಕ ಸಚಿವ ಸಂತೋಷ್ ಲಾಡ್ ಜಮ್ಮು-ಕಾಶ್ಮೀರಕ್ಕೆ ತೆರಳಿ ಗುರುವಾರ ಮಧ್ಯಾಹ್ನ 180 ಜನ ಕನ್ನಡಿಗರನ್ನು ಸುರಕ್ಷಿತವಾಗಿ ಬೆಂಗಳೂರಿಗೆ ಅಂತರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಕರೆತಂದಿದ್ದಾರೆ. ಬೆಂಗಳೂರಿನ ಕೆಂಪೇಗೌಡ ವಿಮಾನ ನಿಲ್ದಾಣದಕ್ಕೆ ಬಂದಿಳಿದ ಪ್ರವಾಸಿಗರು ಆ ಬಳಿಕ ತಮ್ಮ ತಮ್ಮ ಪ್ರದೇಶಗಳಿಗೆ ತೆರಳಿದರು ಎಂದು ತಿಳಿಸಿದರು.

## ಉಗ್ರರ ಬೆನ್ನಟ್ಟಿ ಕೊಲ್ಲುವೆವು



ಪಟನಾ, ಏ.24: ಪಹಲ್ಗಾಮ್ ನಲ್ಲಿ ಪ್ರವಾಸಿಗರನ್ನು ಬಲಿ ತೆಗೆದುಕೊಂಡ ಉಗ್ರಗಾಮಿಗಳನ್ನು ಬೆನ್ನಟ್ಟಿ ಕೊಲ್ಲುವು ದಾಗಿ ಪ್ರಧಾನಿ ಮೋದಿ ಘೋಷಿ ಸಿದ್ದಾರೆ. ಮಧು ಬನಿಯಲ್ಲಿ ಗುರು ವಾರ ಸಂಜೆ ಬಹಿರಂಗ ಸಭೆಯಲ್ಲಿ ಮಾತನಾಡಿದ ಅವರು, ಉಗ್ರರು ಮತ್ತು ಅವರಿಗೆ ಬೆಂಬಲ ನೀಡಿದವರನ್ನು ಗುರುತಿಸಿ ಪತ್ತೆಮಾಡಿ ಬೇಟೆ ಯಾಡುವೆವು, ಅವರನ್ನು ಬಿಡುವ ಪ್ರಶ್ನೆಯೇ ಇಲ್ಲ, ಈ ದುಷ್ಕೃತ್ಯಕ್ಕೆ ಪ್ರತಿಕಾರ ತೀರಿಸಿಕೊಳ್ಳುವೆವು ಎಂದು ಇಡೀ ಜಗತ್ತಿಗೆ ತಿಳಿಸುತ್ತೇನೆ ಎಂದು ಪ್ರಧಾನಿ ಸ್ಪಷ್ಟಪಡಿಸಿದರು.

## ಆಕಸ್ಮಿಕವಾಗಿ ಅಂತರಾಷ್ಟ್ರೀಯ ಗಡಿ ದಾಟಿದ ಬಿಎಸ್‌ಎಫ್ ಯೋಧನನ್ನು ವಶಕ್ಕೆ ಪಡೆದ ಪಾಕಿಸ್ತಾನ ರೇಂಜರ್ಸ್

ನವದೆಹಲಿ, ಏ.24: ಆಕಸ್ಮಿಕವಾಗಿ ಅಂತರಾಷ್ಟ್ರೀಯ ಗಡಿ ದಾಟಿದ ಬಿಎಸ್‌ಎಫ್ ಯೋಧನನ್ನು ಇದೀಗ ಪಾಕಿಸ್ತಾನ ರೇಂಜರ್‌ಗಳು ವಶಕ್ಕೆ ಪಡೆದುಕೊಂಡಿದ್ದಾರೆ ಎಂಬ ಮಾಹಿತಿ ಲಭ್ಯವಾಗಿದೆ. ಹೌದು ಗೊತ್ತಿಲ್ಲದೆ ಬಿಎಸ್‌ಎಫ್ ಯೋಧನೊಬ್ಬ ಗಡಿ ದಾಟಿದ್ದಾನೆ.

ಪಂಜಾಬ್‌ನ ಫಿರೋಜ್ಪುರ ಬಳಿ ಕರ್ತವ್ಯದ ವೇಳೆ ಆಕಸ್ಮಿಕವಾಗಿ ಅಂತರರಾಷ್ಟ್ರೀಯ ಗಡಿ ದಾಟಿದ ಗಡಿ ಭದ್ರತಾ ಪಡೆ (ಬಿಎಸ್‌ಎಫ್) ಕಾನ್‌ಸ್ಟೆಬಲ್ ಒಬ್ಬರನ್ನು ಪಾಕಿಸ್ತಾನಿ ರೇಂಜರ್‌ಗಳು ಬುಧವಾರ ಬಂಧಿಸಿದ್ದಾರೆ.

ಶೂನ್ಯ ರೇಖೆಯ ಬಳಿಯ ಜನನಿಬಿಡ ಪ್ರದೇಶದಲ್ಲಿ ಬೆಳೆ ಕೊಯ್ಲು ಮಾಡುತ್ತಿದ್ದ ಭಾರತೀಯ ರೈತರನ್ನು ಮೇಲ್ವಿಚಾರಣೆ ಮಾಡುವ ನಿಯಮಿತ ಕಾರ್ಯಾಚರಣೆಯ ಸಂದರ್ಭದಲ್ಲಿ ಈ ಘಟನೆ ಸಂಭವಿಸಿದೆ. ಬಿಎಸ್‌ಎಫ್‌ನ 182 ನೇ ಬೆಟಾಲಿಯನ್‌ಗೆ ಸೇರಿದ ಕಾನ್‌ಸ್ಟೆಬಲ್ ಪಿಕೆ ಸಿಂಗ್ ಆ ಸಮಯದಲ್ಲಿ ತಮ್ಮ ಸಮವಸ್ತ್ರದಲ್ಲಿ ತಮ್ಮ ಸರ್ವಿಸ್ ರೈಫಲ್ ಅನ್ನು ಹಿಡಿದಿದ್ದರು. ಗಡಿ ಬೇಲಿ ಮತ್ತು ಶೂನ್ಯ ರೇಖೆಯ ನಡುವೆ ಇರುವ ಹೊಲಗಳಿಗೆ ಪ್ರವೇಶ ದ್ವಾರವಾದ ಗೇಟ್ ಸಂಖ್ಯೆ 208/1 ಬಳಿ ಅವರು ರೈತರೊಂದಿಗೆ ಹೊಗುತ್ತಿದ್ದರು. ಆ ಸಮಯದಲ್ಲಿ ಪಾಕಿಸ್ತಾನಿ ರೇಂಜರ್‌ಗಳು ಅವರನ್ನು ಗಮನಿಸಿ ಬಂಧಿಸಿದರು.

# ಪಹಲ್ಗಾಮ್ ದಾಳಿಯ ನಂತರ ಪಾಕ್ ವಿರುದ್ಧ ಸರ್ಕಾರದ ಕ್ರಮಕ್ಕೆ ಸರ್ವಪಕ್ಷಗಳ ಬೆಂಬಲ



ನವದೆಹಲಿ, ಏ.24: ಪಹಲ್ಗಾಮ್‌ನಲ್ಲಿ ನಡೆದ ಭೀಕರ ಭಯೋತ್ಪಾದಕ ದಾಳಿಯಲ್ಲಿ 26 ಪ್ರವಾಸಿಗರು ಬಲಿಯಾದ ನಂತರ, ಪಾಕಿಸ್ತಾನಕ್ಕೆ ಸಂಬಂಧಿಸಿದಂತೆ ಭದ್ರತೆಗಾಗಿ ಸಂಪುಟ ಸಮಿತಿ ತೆಗೆದುಕೊಂಡ ಕ್ರಮಕ್ಕೆ ಗುರುವಾರ ಎಲ್ಲಾ ರಾಜಕೀಯ ಪಕ್ಷಗಳ ನಾಯಕರು ಒಗ್ಗಟ್ಟಿನ ಪ್ರದರ್ಶನ ನೀಡಿದರು ಮತ್ತು ಸರ್ವಾನುಮತದಿಂದ ಬೆಂಬಲ ನೀಡಿದರು. ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅಧ್ಯಕ್ಷತೆಯಲ್ಲಿ ಸರ್ಕಾರ ಸರ್ವಪಕ್ಷ ಸಭೆ ಕರೆದಿತ್ತು.

ಭಯೋತ್ಪಾದನೆಯ ವಿರುದ್ಧ ಹೋರಾಡಲು ಸರ್ಕಾರ ತೆಗೆದುಕೊಳ್ಳುವ ಯಾವುದೇ ಭವಿಷ್ಯದ ಕ್ರಮಕ್ಕೆ ಸಭೆಯಲ್ಲಿ ಹಾಜರಿದ್ದ ಎಲ್ಲಾ ನಾಯಕರು ಸರ್ವಾನುಮತದಿಂದ ಬೆಂಬಲ ವ್ಯಕ್ತಪಡಿಸಿದರು. ಸಭೆಯಲ್ಲಿ ಕೇಂದ್ರ ಸಚಿವರಾದ ಅಮಿತ್ ಶಾ, ರಾಜನಾಥ್ ಸಿಂಗ್, ನಿರ್ಮಲಾ ಸೀತಾರಾಮನ್, ಎಸ್ ಜೈಶಂಕರ್, ಕಿರಣ್ ರಿಜಿಜು, ಜೆಪಿ ನಡ್ಡಾ, ಲೋಕಸಭೆಯಲ್ಲಿ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ, ಸಮಾಜವಾದಿ ಪಕ್ಷದ ರಾಮ್ ಗೋಪಾಲ್ ಯಾದವ್, ಟಿಎಂಸಿಯ ಸುದೀಪ್ ಬಂಡೋಪಾಧ್ಯಾಯ, ಬಿಜೆಡಿಯ ಸಸ್ಮಿತ್ ಪಾತ್ರ, ಎನ್ಸಿಪಿ-ಎಸ್ಪಿಯ ಸುಪ್ರಿಯಾ ಸುಳೆ, ಎಎಪಿಯ ಸಂಜಯ್ ಸಿಂಗ್ ಸೇರಿದಂತೆ ಇತರರು ಭಾಗವಹಿಸಿದ್ದರು.

ಸಭೆಯ ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ ಕೇಂದ್ರ ಸಚಿವ ಕಿರಣ್ ರಿಜಿಜು, ಪಾಕಿಸ್ತಾನಕ್ಕೆ ಸಂಬಂಧಿಸಿದಂತೆ ಸಿಸಿಎಸ್ ತೆಗೆದುಕೊಂಡ ಕ್ರಮವನ್ನು ಎಲ್ಲಾ ನಾಯಕರು ಸರ್ವಾನುಮತದಿಂದ ಬೆಂಬಲಿಸಿದ್ದಾರೆ ಮತ್ತು ಭಯೋತ್ಪಾದನೆ ವಿರುದ್ಧ ಹೋರಾಡಲು ಸರ್ಕಾರ ತೆಗೆದುಕೊಳ್ಳುವ ಯಾವುದೇ ಭವಿಷ್ಯದ ಕ್ರಮಕ್ಕೂ ಸರ್ವಾನುಮತದಿಂದ ಬೆಂಬಲ ವ್ಯಕ್ತಪಡಿಸಿದ್ದಾರೆ" ಎಂದು ಹೇಳಿದರು. "ದೇಶದಲ್ಲಿನ ಭಯೋತ್ಪಾದಕ ಚಟುವಟಿಕೆಗಳ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಮತ್ತು ಸರ್ಕಾರ ಶೂನ್ಯ ಸಹಿಷ್ಣುತೆಯನ್ನು ಅಳವಡಿಸಿಕೊಳ್ಳುತ್ತದೆ" ಎಂದು ಸರ್ಕಾರ ಈಗಾಗಲೇ ಸದನದ ನಾಯಕರಿಗೆ ವಿವರಿಸಿದೆ ಎಂದು ಅವರು ಹೇಳಿದರು. "ಸರ್ಕಾರ ತೆಗೆದುಕೊಳ್ಳುತ್ತಿರುವ ಮತ್ತು ಸರ್ಕಾರ ಭವಿಷ್ಯದಲ್ಲಿ ತೆಗೆದುಕೊಳ್ಳಲಿರುವ ಎಲ್ಲಾ ಕ್ರಮಗಳಿಗೆ ಎಲ್ಲಾ ರಾಜಕೀಯ ನಾಯಕರು ಸರ್ಕಾರದೊಂದಿಗೆ ತಮ್ಮ ಒಗ್ಗಟ್ಟನ್ನು ವ್ಯಕ್ತಪಡಿಸಿದ್ದಾರೆ" ಎಂದು ರಿಜಿಜು ಹೇಳಿದರು. ಭೀಕರ ಭಯೋತ್ಪಾದಕ ದಾಳಿಯಲ್ಲಿ ಜೀವ ಕಳೆದುಕೊಂಡವರಿಗೆ ಗೌರವ ಸಲ್ಲಿಸಲು ಎರಡು ನಿಮಿಷಗಳ ಮೌನವನ್ನು ಆಚರಿಸಲಾಯಿತು ಎಂದು ಅವರು ಹೇಳಿದರು.

> ಭಯೋತ್ಪಾದನಾ ದಾಳಿಯನ್ನು ಎಲ್ಲಾ ಪಕ್ಷಗಳು ಖಂಡಿಸಿವೆ ಎಂದು ರಾಹುಲ್ ಗಾಂಧಿ ಹೇಳಿದರು. "ಸರ್ಕಾರದ ಯಾವುದೇ ಕ್ರಮಕ್ಕೆ ವಿರೋಧ ಪಕ್ಷವು ಸಂಪೂರ್ಣ ಬೆಂಬಲ ನೀಡಿದೆ" ಎಂದು ಅವರು ಹೇಳಿದರು.

> ಸಭೆಯ ನಂತರ ಮಲ್ಲಿಕಾರ್ಜುನ್ ಖರ್ಗೆ, "ಪಹಲ್ಗಾಮ್ ಭಯೋತ್ಪಾದಕ ದಾಳಿಯನ್ನು ನಾವೆಲ್ಲರೂ ಬಲವಾಗಿ ಖಂಡಿಸಿದ್ದೇವೆ. ಜಮ್ಮು ಮತ್ತು ಕಾಶ್ಮೀರದಲ್ಲಿ ಶಾಂತಿ ಸ್ಥಾಪಿಸುವುದು ಬಹಳ ಮುಖ್ಯ, ಇದಕ್ಕಾಗಿ ಸರ್ಕಾರ ಗಂಭೀರ ಪ್ರಯತ್ನಗಳನ್ನು ಮಾಡಬೇಕಾಗುತ್ತದೆ ಎಂದು ಹೇಳಿದರು.

# ಪಾಕ್ ಪ್ರೇರಿತ ಭಯೋತ್ಪಾದನಾ ಕೃತ್ಯಕ್ಕೆ ಪ್ರತೀಕಾರ ಶತಃಸಿದ್ಧ

* ಶಿವಮೊಗ್ಗದ ಮಂಜುನಾಥ ಪಾರ್ಥೀವ ಶರೀರಕ್ಕೆ ಕೇಂದ್ರ ಸರ್ಕಾರದ ಪರವಾಗಿ ಸಚಿವ ಪ್ರಲ್ಹಾದ ಜೋಶಿ ಶ್ರದ್ಧಾಂಜಲಿ
* ಭಯೋತ್ಪಾದನೆಗೆ ಇತಿಶ್ರೀ ಹಾಡಲು ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಬದ್ಧ
* ಸರ್ಕಾರ ಮತ್ತು ದೇಶವೇ ನಿಮ್ಮ ಜತೆಗಿದೆ; ಕುಟುಂಬಕ್ಕೆ ಸಾಂತ್ವನ, ಆತ್ಮಸ್ಥೈರ್ಯ ಹೇಳಿದ ಸಚಿವರು
* ಇಡೀ ದೇಶ ಒಟ್ಟಾಗಿ ಭಯೋತ್ಪಾದನಾ ಪಿಡುಗನ್ನು ಕೊನೆಗಾಣಿಸಲು ಕರೆ

ಶಿವಮೊಗ್ಗ, ಏ.24: ಕಾಶ್ಮೀರದ ಪಹಲ್ಗಾಮ್ನಲ್ಲಿ ಅಮಾಯಕ ಪ್ರವಾಸಿಗರ ಮೇಲೆ ಪಾಕಿಸ್ತಾನ ಪ್ರೇರಿತವಾಗಿ ಭಯೋತ್ಪಾದನಾ ದಾಳಿ ನಡೆದಿದ್ದು, ಭಾರತ ಇದಕ್ಕೆ ತಕ್ಕ ಪ್ರತೀಕಾರ ತೀರಿಸಿಕೊಳ್ಳುವುದು ಶತಸಿದ್ಧ ಎಂದು ಕೇಂದ್ರ ಆಹಾರ ಮತ್ತು ನಾಗರೀಕ ಸಚಿವ ಪ್ರಲ್ಹಾದ ಜೋಶಿ ಘೋಷಿಸಿದರು.

ಭಯೋತ್ಪಾದಕ ದಾಳಿಗೆ ತುತ್ತಾದ ಶಿವಮೊಗ್ಗದ ಉದ್ಯಮಿ ಮಂಜುನಾಥ ರಾವ್ ಅವರ ಪಾರ್ಥೀವ ಶರೀರಕ್ಕೆ ಕೇಂದ್ರ ಸರ್ಕಾರದ ಪರವಾಗಿ ಶ್ರದ್ಧಾಂಜಲಿ, ನುಡಿ ನಮನ ಸಲ್ಲಿಸಿದ ಸಚಿವರು, ಇತ್ತೀಚಿನ ವರ್ಷಗಳಲ್ಲಿ ಜಮ್ಮು-ಕಾಶ್ಮೀರದಲ್ಲಿ ನೆಲೆಸಿದ್ದ ಶಾಂತಿ-ಸೌಹಾರ್ದತೆಗೆ ಪಾಕ್ ಪ್ರೇರಿತವಾಗಿ ಭಯೋತ್ಪಾದಕರು ಕೊಳ್ಳಿಯಿಡುವ ಕೃತ್ಯವೆಸಗಿದ್ದಾರೆ. ಭಾರತ ಇದಕ್ಕೆ ತಕ್ಕ ಶಾಸ್ತಿ ಮಾಡುತ್ತದೆ ಎಂದು ಹೇಳಿದರು.

ಪಹಲ್ಗಾಮ್ ಭಯೋತ್ಪಾದಕ ದಾಳಿಯಲ್ಲಿ ಶಿವಮೊಗ್ಗದ ಮಂಜುನಾಥ ರಾವ್ ಸೇರಿದಂತೆ 27 ಜನ ಬಲಿಯಾಗಿದ್ದಾರೆ. ಭಾರತ ಇದನ್ನು ಸಹಿಸಿಕೊಳ್ಳಲು ಸಾಧ್ಯವಿಲ್ಲ. ಈ ಕುಕೃತ್ಯವೆಸಗಿದ ಭಯೋತ್ಪಾದಕರನ್ನು ಹಾಗೇ ಬಿಡುವುದಿಲ್ಲ. ನಮ್ಮ ಜನರ ಸಾವು-ನೋವು ತಂದೊಡ್ಡಿದವರಿಗೆ ತಕ್ಕ ಪಾಠ, ಶಿಕ್ಷೆ ವಿಧಿಸಿಯೇ ತೀರುತ್ತೇವೆ ಎಂದು ಹೇಳಿದರು.

**ಭಯೋತ್ಪಾದನೆಗೆ ಇತಿಶ್ರೀ ಹಾಡಲು ಸಂಕಲ್ಪ:** ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಕೇಂದ್ರ ಸರ್ಕಾರ ಭಯೋತ್ಪಾದನೆಗೆ ಇತಿಶ್ರೀ ಹಾಡಲು ಸಂಕಲ್ಪ ತೊಟ್ಟಿದೆ. ಪಹಲ್ಗಾಮ್‌ನಲ್ಲಿ ದೊಡ್ಡ ಸಂಖ್ಯೆಯಲ್ಲಿ ಅಮಾಯಕರನ್ನು ಬಲಿ ಪಡೆದಿರುವ ಪಾಕ್ ಉಗ್ರರನ್ನು ಸೆದೆ ಬಡಿಯುತ್ತದೆ. ದುಷ್ಕೃತ್ಯವೆಸಗಿದ ಯಾರನ್ನೂ ಸುಮ್ಮನೆ ಬಿಡುವುದಿಲ್ಲ. ಈ ನಿಟ್ಟಿನಲ್ಲಿ ಈಗಾಗಲೇ ಕೇಂದ್ರ ಸರ್ಕಾರ ಮೊದಲ ಹೆಜ್ಜೆ ಎನ್ನುವಂತೆ ರಾಜತಾಂತ್ರಿಕವಾಗಿ 5 ಮಹತ್ವದ ನಿರ್ಣಯಗಳನ್ನು ತೆಗೆದುಕೊಂಡಿದೆ ಎಂದು ತಿಳಿಸಿದರು.



## ಮಲೆನಾಡ ಮಗನಿಗೆ ಕೇಂದ್ರ ಸರ್ಕಾರದಿಂದ ಸಚಿವ ಪ್ರಲ್ಹಾದ ಜೋಶಿ ಶ್ರದ್ಧಾಂಜಲಿ

ಪಹಲ್ಗಾಮ್ ಭಯೋತ್ಪಾದನಾ ದಾಳಿಗೆ ತುತ್ತಾದ ಮಲೆನಾಡಿನ ಮಗನಿಗೆ ಕೇಂದ್ರ ಸರ್ಕಾರದ ಪರವಾಗಿ ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ಶ್ರದ್ಧಾಂಜಲಿ ಸಲ್ಲಿಸಿದರು. ಕಾಶ್ಮೀರ ಪ್ರವಾಸದಲ್ಲಿದ್ದಾಗ ಉಗ್ರರ ಗುಂಡಿಗೆ ಬಲಿಯಾದ ಶಿವಮೊಗ್ಗದ ರಿಯಲ್ ಎಸ್ಟೇಟ್ ಉದ್ಯಮಿ ಮಂಜುನಾಥ ರಾವ್ ಅವರ ಪಾರ್ಥೀವ ಶರೀರಕ್ಕೆ ಅಂತಿಮವಾಗಿ ಪುಷ್ಪ ನಮನ ಸಲ್ಲಿಸಿದರು.

ಇದೇ ವೇಳೆ ಮಂಜುನಾಥ ರಾವ್ ಪತ್ನಿ ಪಲ್ಲವಿ ಮತ್ತು ಅವರ ತಾಯಿಗೆ ಸಾಂತ್ವನ ಹೇಳಿದ ಸಚಿವರು, ಕೇಂದ್ರ ಸರ್ಕಾರ ಮತ್ತು ಇಡೀ ದೇಶದ ಜನ ತಮ್ಮ ಜತೆಗಿದೆ ಎಂದು ಆತ್ಮಸ್ಥೈರ್ಯ ತುಂಬಿದರು. ಭಗವಂತ ಮಂಜುನಾಥ ಅವರ ಆತ್ಮಕ್ಕೆ ಚಿರಶಾಂತಿ ಕರುಣಿಸಲಿ ಹಾಗೂ ಕುಟುಂಬಕ್ಕೆ ದುಃಖ ಸಹಿಸಿಕೊಳ್ಳುವ ಶಕ್ತಿ ಭರಿಸಲಿ ಎಂದು ಪ್ರಾರ್ಥಿಸಿದರು. ಮಂಜುನಾಥ ಅವರ ಪಾರ್ಥೀವ ಶರೀರವನ್ನು ಶಿವಮೊಗ್ಗ ನಗರಕ್ಕೆ ತರುತ್ತಲೇ ನೆರೆದವರು "ಪಾಪಿ(ಕಿ)ಸ್ತಾನಕ್ಕೆ ದಿಕ್ಕಾರ-ಮಂಜುನಾಥ್ ರಾವ್ ಅಮರ್ ರಹೇ.." ಘೋಷಣೆ ಮೊಳಗಿಸಿದರು. ಸಂಸದ ಬಿ.ವೈ.ರಾಘವೇಂದ್ರ ಹಾಗೂ ಶಿವಮೊಗ್ಗದ ಬಿಜೆಪಿ ಜಿಲ್ಲಾ ಘಟಕದ ಪದಾಧಿಕಾರಿಗಳು, ಮುಖಂಡರು, ಕಾರ್ಯಕರ್ತರು ಹಾಗೂ ಮೃತ ಮಂಜುನಾಥ ರಾವ್ ಅವರ ಬಳಗ ಅಂತಿಮ ನಮನ ಸಲ್ಲಿಸಿದರು.

ಪ್ರಧಾನಿ ನರೇಂದ್ರ ಮೋದಿ ಅವರು ಸೌದಿ ಪ್ರವಾಸ ಮೊಟಕುಗೊಳಿಸಿ ವಾಪಸ್ಸಾಗಿ ಭಯೋತ್ಪಾದನಾ ಚಟುವಟಿಕೆ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುತ್ತಿದ್ದಾರೆ. ಗೃಹ ಸಚಿವ ಅಮಿತ್ ಶಾ, ರಕ್ಷಣಾ ಸಚಿವ ರಾಜನಾಥ್ಸಿಂಗ್ ಅವರು ಪಹಲ್ಗಾಮ್‌ಗೆ ತೆರಳಿ ಪರಿಸ್ಥಿತಿ ಅವಲೋಕಿಸಿದ್ದು, ಅಲ್ಲಿನ ಪ್ರವಾಸಿಗರ ರಕ್ಷಣಾ ಕಾರ್ಯದಲ್ಲಿ ನಿರತರಾಗಿದ್ದಾರೆ. ಮೃತಪಟ್ಟವರ ಪಾರ್ಥೀವ ಶರೀರಗಳನ್ನು ಕುಟುಂಬದವರಿಗೆ ತಲುಪಿಸುವ ಕಾರ್ಯ ಕೈಗೊಂಡಿದ್ದಾರೆ ಎಂದರು.

**ಇಡೀ ದೇಶ ಒಟ್ಟಾಗಿ ಎದುರಿಸಬೇಕು:** ಜಮ್ಮು-ಕಾಶ್ಮೀರ ಸೇರಿದಂತೆ ದೇಶದೆಲ್ಲಡೆ ಇತ್ತೀಚಿನ ವರ್ಷಗಳಲ್ಲಿ ಭಯಂಯೋತ್ಪಾದನಾ ಚಟುವಟಿಕೆ ಇಲ್ಲದಂತಾಗಿತ್ತು. ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದ ಸರ್ಕಾರ ಅದನ್ನು ಮಟ್ಟ ಹಾಕಿತ್ತು. ಇದೀಗ ಪಾಕ್ ಪ್ರೇರಿತ ಭಯೋತ್ಪಾದಕರು ಬಾಲ ಬಿಚ್ಚಿದ್ದು, ಭಾರತ ಸರ್ಕಾರ ಅದನ್ನು ತುಂಡರಿಸುತ್ತದೆ. ಇಡೀ ದೇಶವೇ ಒಗ್ಗಟ್ಟಾಗಿ ಭಯೋತ್ಪಾದನೆಯನ್ನು ಎದುರಿಸಲಿದೆ ಸಂದೇಶ ರವಾನಿಸಿದರು.

ಪಾರ್ಟಿ-ಪಕ್ಷ ಎನ್ನದೆ ಭಯೋತ್ಪಾದನೆ ಪಿಡುಗಿನ ವಿರುದ್ಧ ಹೋರಾಟ: ಪಹಲ್ಗಾಮ್‌ನಲ್ಲಿ ನಡೆದ ಈ ಭಯೋತ್ಪಾದನಾ ಕೃತ್ಯದ ವಿರುದ್ಧ ನಾವೆಲ್ಲ ಪಾರ್ಟಿ-ಪಕ್ಷ, ಜಾತಿ-ಪಂಥವನ್ನು ಮೀರಿ ಹೋರಾಡಬೇಕಿದೆ. ದೇಶವಾಸಿಗಳೆಲ್ಲ ಒಟ್ಟಾಗಿ ಭಯೋತ್ಪಾದನಾ ಚಟುವಟಿಕೆಯನ್ನು ಕೊನೆಗಾಣಿಸಬೇಕಿದೆ ಎಂದು ಕರೆ ನೀಡಿದರು.

ಪ್ರವಾಸೋದ್ಯಮ ಬೆಳವಣಿಗೆ ಸಹಿಸದೆ ದುಷ್ಕೃತ್ಯ: ಜಮ್ಮು-ಕಾಶ್ಮೀರ ಕಣಿವೆಯಲ್ಲಿ ಇತ್ತೀಚಿನ ವರ್ಷಗಲ್ಲಿ ಬಹು ದೊಡ್ಡ ಪ್ರಮಾಣದಲ್ಲಿ ಪ್ರವಾಸೋದ್ಯಮ ಬೆಳೆದಿದೆ. ಹಿಂದೆ ಐದಾರು ಲಕ್ಷ ಇದ್ದ ಪ್ರವಾಸಿಗರ ಸಂಖ್ಯೆ ಈಗ 25 ಲಕ್ಷಕ್ಕೆ ಏರಿಕೆ ಕಂಡಿದೆ. ಅಷ್ಟರ ಮಟ್ಟಿಗೆ ಪ್ರವಾಸೋದ್ಯಮ ಅಭಿವೃದ್ಧಿ ಕಂಡಿದೆ. ಅನೇಕರ ಜೀವನವನ್ನು ರೂಪಿಸಿದ್ದು, ಆರ್ಥಿಕ ಚಟುವಟಿಕೆಯ ಕೇಂದ್ರವಾಗಿ ಮಾರ್ಪಟ್ಟಿದೆ. ಅಲ್ಲದೇ, ಶಾಂತಿ-ಸೌಹಾರ್ದತೆ ಸಹ ನೆಲೆಸಿದೆ. ಇದರ ಮೇಲೆ ಉಗ್ರರ ಕೆಟ್ಟ ಕಣ್ಣು ಬಿದ್ದಿದ್ದು, ಪಾಕ್ ಪ್ರೇರಿತವಾಗಿ ಕೊಳ್ಳಿಯಿಡುವ ಕೃತ್ಯವೆಸಗಿದ್ದಾರೆ ಎಂದು ಕಿಡಿ ಕಾರಿದರು.

# ಮಲೆ ಮಹದೇಶ್ವರ ಬೆಟ್ಟದಲ್ಲಿ ರಾಜ್ಯ ಸಚಿವ ಸಂಪುಟ ಸಭೆ: ಹಲವು ನಿರ್ಣಯಗಳ ಸ್ವೀಕಾರ

ಚಾಮರಾಜನಗರ, ಏ.24: ಮಲೆಮಹದೇಶ್ವರ ಬೆಟ್ಟದಲ್ಲಿ ಇಂದು ಐತಿಹಾಸಿಕ ಸಚಿವ ಸಂಪುಟ ನಡೆಸಲಾಗಿದ್ದು, ನಾಲ್ಕು ವಿಭಾಗದಲ್ಲಿ ಸಚಿವ ಸಂಪುಟ ಸಭೆ ನಡೆಸಲು ನಿರ್ಧರಿಸಲಾಗಿದೆ ಎಂದು ಸಿಎಂ ಸಿದ್ದರಾಮಯ್ಯ ಅವರು ತಿಳಿಸಿದರು. ಸಭೆಯಲ್ಲಿ 78 ವಿಷಯಗಳ ಮೇಲೆ ಚರ್ಚೆ ಮಾಡಿ ತೀರ್ಮಾನಿಸಲಾಗಿದೆ. ಕಲಬುರಗಿ ವಿಭಾಗದಲ್ಲಿ 56 ವಿಷಯಗಳ ಬಗ್ಗೆ ತೀರ್ಮಾನಿಸಲಾಗಿದೆ. ಕೊಳ್ಳೇಗಾಲದಲ್ಲಿ ತಾಲೂಕು ಆಸ್ಪತ್ರೆಯನ್ನು ಜಿಲ್ಲಾಸ್ಪತ್ರೆಯಾಗಿ ಮೇಲ್ದರ್ಜೆಗೆ ಏರಿಸಿ, 256 ಬೆಡ್ ಆಸ್ಪತ್ರೆಯಾಗಿ ನಿರ್ಮಾಣ ಮಾಡಲಾಗುತ್ತದೆ. ಹನೂರಿನಲ್ಲಿ ಪ್ರಜಾಸೌಧ ನಿರ್ಮಾಣ, ಹನೂರಿನಲ್ಲಿ 50 ಬೆಡ್ ವ್ಯವಸ್ಥೆಯ ತಾಲೂಕು ಆಸ್ಪತ್ರೆಗೆ ನಿರ್ಧಾರಿಸಲಾಗಿದೆ ಎಂದರು. ಇನ್ನು ಚಿಕ್ಕಲ್ಲೂರಿನಲ್ಲಿ ಮಂಟೇಸ್ವಾಮಿ, ಸಿದ್ದಪ್ಪಾಜಿ, ರಾಚಪ್ಪಾಜಿ ಅಭಿವೃದ್ಧಿ ಪ್ರಾಧಿಕಾರ ಮಾಡಲೂ ಸಂಪುಟ ತೀರ್ಮಾನಿಸಿದೆ. ಇಲವಾಲದಲ್ಲಿ ಅಂತರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣ ನಿರ್ಮಾಣಕ್ಕೆ ಸಂಪುಟ ಅನುಮೋದನೆ ನೀಡಿದೆ. ಖಾದಿ ಗ್ರಾಮೋದ್ಯೋಗ ಅಭಿವೃದ್ಧಿಗೆ ರೂ.20 ಕೋಟಿ ಅನುದಾನ ನೀಡಲಾಗುವುದು. ಮೈಸೂರು ವಿಮಾನ ನಿಲ್ದಾಣ ರನ್‌ವೇ ವಿಸ್ತರಣೆಗೆ ಸಂಪುಟದ ಒಪ್ಪಿಗೆ ನೀಡಿದ್ದು, ಮೈಸೂರು ಹಳೇ ಜಿಲ್ಲಾಧಿಕಾರಿ ಕಚೇರಿಯಲ್ಲಿ ರೂ.37 ಕೋಟಿ ಖರ್ಚು ಮಾಡಿ ಮ್ಯೂಸಿಯಂ ನಿರ್ಮಾಣ, ಕೊಳ್ಳೇಗಾಲದಲ್ಲಿ ತಾಲೂಕು ಆಸ್ಪತ್ರೆಯನ್ನು ಜಿಲ್ಲಾಸ್ಪತ್ರೆಯಾಗಿ ಮೇಲ್ದರ್ಜೆಗೆ, 256 ಬೆಡ್ ಆಸ್ಪತ್ರೆಯಾಗಿ ನಿರ್ಮಾಣ ಮಾಡಲಾಗುತ್ತದೆ ಅನುಮೋದನೆ ನೀಡಲಾಗಿದೆ ಎಂದು ಹೇಳಿದರು. 3642.25 ಕೋಟಿ ರೂಪಾಯಿಯನ್ನು ಒಂದೇ ಬಾರಿ ಪ್ರಸ್ತಾವನೆ ಮಾಡೊಕ್ಕಾಗುತ್ತಾ ಎಂದು ಪ್ರಶ್ನಿಸಿರುವ ಸಿಎಂ, ಇದನ್ನು ವಿರೋಧ ಪಕ್ಷಗಳಿಗೆ ತಿಳಿಸಬೇಕಿದೆ. ಒಂದೇ ಸಂಪುಟದಲ್ಲಿ ಕೊಟ್ಟಿದ್ದೇವೆ. ಒಟ್ಟು ರೂ.3647 ಕೋಟಿ 42 ಲಕ್ಷ ಮೌಲ್ಯದ ಕಾಮಗಾರಿಗೆ ಕ್ಯಾಬಿನೆಟ್ ಅಂಗೀಕರಿಸಿದೆ ಎಂದು ಮಾಹಿತಿ ನೀಡಿದರು. ಹಿಂದಿನ ಪ್ರಾಧಿಕಾರದ ಸಭೆಯಲ್ಲಿ ತೆಗೆದುಕೊಂಡ ನಿರ್ಣಯಗಳು ಒಂದೂವರೆ ವರ್ಷದಿಂದ ಜಾರಿ ಆಗದೇ ಇರುವುದಕ್ಕೆ ಮುಖ್ಯಮಂತ್ರಿಗಳು ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಯವರನ್ನು ತೀವ್ರವಾಗಿ ಪ್ರಶ್ನಿಸಿದರು.




ಮಲೈ ಮಹದೇಶ್ವರ ಬೆಟ್ಟ ಇನ್ನು ಮುಂದೆ ಪಾನ ಮುಕ್ತ: ಸಿ.ಎಂ ಘೋಷಣೆ

ಮಲೈ ಮಹದೇಶ್ವರ ಬೆಟ್ಟ ಇನ್ನು ಮುಂದೆ ಪಾನ ಮುಕ್ತ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಘೋಷಿಸಿದರು. ಲ್ಲಿಯವರೆಗೂ ಬೆಟ್ಟದಲ್ಲಿ, ಪ್ರಾಧಿಕಾರದ ವ್ಯಾಪ್ತಿಯಲ್ಲಿ ಮಾರಾಟ ಮುಕ್ತ ಇತ್ತು. ಇನ್ನು ಮುಂದೆ ಹೊರಗಿನಿಂದ ತರುವುದಕ್ಕೂ ತಡೆ ಹಾಕಬೇಕು ಎಂದು ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಮತ್ತು ಪ್ರಾಧಿಕಾರದ ಅಧಿಕಾರಿಗಳಿಗೆ ಸೂಚನೆ ನೀಡಿದರು. ಮಲೈ ಮಹದೇಶ್ವರ ಬೆಟ್ಟದಲ್ಲಿ ಅಕ್ರಮವಾಗಿ ಮದ್ಯ ಮಾರಾಟ ಆಗುವುದನ್ನು ಸಂಪೂರ್ಣ ತಡೆಯಬೇಕು. ಚಾಳಿ ಬಿದ್ದ ಆರೋಪಿಯೊಬ್ಬ ಗಡಿಪಾರು ಆದರೂ ಅಕ್ರಮ ಮಾರಾಟ ಮಾಡುತ್ತಿರುವುದನ್ನು ಅಧಿಕಾರಿಗಳಿಂದ ತಿಳಿದ ಸಿಎಂ ಅವರನ್ನು ತಕ್ಷಣ ಕಠಿಣ ಕಾನೂನಿನ ಅಡಿ ಕ್ರಮ ತೆಗೆದುಕೊಳ್ಳುವಂತೆ ಸೂಚಿಸಿದರು.

ಮಲೈ ಮಹದೇಶ್ವರ ಲಾಡು ಪ್ರಸಾದಕ್ಕೂ ನಂದಿನಿ ತುಪ್ಪ ಬಳಕೆಗೆ ಸಭೆ ನಿರ್ಣಯ:

ಮಲೈ ಮಹದೇಶ್ವರ ಬೆಟ್ಟದ ಪ್ರಸಾದ ಲಾಡುಗೆ, ತಿರುಪತಿ ದೇವಸ್ಥಾನದ ಮಾದರಿಯಲ್ಲಿ ನಂದಿನಿ ತುಪ್ಪ ಬಳಸಿ, ಪ್ರಸಾದದ ಗುಣಮಟ್ಟವನ್ನು ಇನ್ನಷ್ಟು ಉನ್ನತೀಕರಿಸುವುದು. ಮದಿನ ದಿನಗಳಲ್ಲಿ 100 ಗ್ರಾಂ ತೂಕದ ಪ್ರಸಾದ ಲಾಡನ್ನು ಕೇವಲ 35 ರೂಪಾಯಿಗೆ ವಿತರಿಸುವ ಬಗ್ಗೆ ಸಭೆ ನಿರ್ಣಯಿಸಿತು.

## ನಿತ್ಯ ಪಂಚಾಂಗ 25.04.2025 ಶುಕ್ರವಾರ



ಶ್ರೀ ವಿಶ್ವಾವಸು ನಾಮ ಸಂವತ್ಸರ,
ಉತ್ತರಾಯಣ ವಸಂತ ಋತು
ಚಾಂದ್ರಮಾನ, ಚೈತ್ರ ಬಹುಳ

ದ್ವಾದಶಿ, ಉತ್ತರಾ ಬಾದ್ರಾ ನಕ್ಷತ್ರ,
ಪ್ರದೋಷ, ಬಾಯಾರು ಮಲರಾಯ ಧ್ವಜ,
ಕೊಡ್ಡಕ್ಕ ಉತ್ಸವಾರಂಭ,
ಡಾ, ಚನ್ನಬಸವ ಪಟ್ಟದೇವರು ಭಾಲ್ಕಿ ಸ್ಮರಣೋತ್ಸವ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| | ರಾಹುಕಾಲ | ಯಮಗಂಡ | ಗುಳಿಕಕಾಲ |
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 –12.00 | 1.30 – 3.00 |
| ಮಂಗಳ | 3.00 – 4.30 | 9.00 –10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 –12.00 |
| ಗುರು | 1.30 – 3.00 | 6.00 – 7.30 | 9.00 –10.30 |
| ಶುಕ್ರ | 10.30 –12.00 | 3.00 – 4.30 | 7.30 – 9.00 |
| ಶನಿ | 9.00 –10.30 | 1.30 – 3.00 | 6.00 – 7.30 |

# ಚಾಮರಾಜನಗರ ಅಭಿವೃದ್ಧಿಗೆ ಸರ್ಕಾರದ ಮೂಲಮಂತ್ರ: ಡಿಸಿಎಂ ಡಿ.ಕೆ.ಶಿವಕುಮಾರ್ ಭರವಸೆ



**ಮಲೆ ಮಹದೇಶ್ವರ ಬೆಟ್ಟ (ಚಾಮರಾಜನಗರ ಜಿಲ್ಲೆ), ಏ.24:** ಬೆಟ್ಟದಲ್ಲಿ ನಡೆ ನಡೆಯಲಿರುವ ಸಚಿವ ಸಂಪುಟ ಸಭೆಯಲ್ಲಿ ಭಾಗವಹಿಸಲು ಬುಧವಾರ ರಾತ್ರಿಯೇ ಬೆಟ್ಟಕ್ಕೆ ಆಗಮಿಸಿದ ಡಿಕೆ ಶಿವಕುಮಾರ್ ಇಂದು (ಏ.24) ಬೆಳಗ್ಗೆ ಮಲೆ ಮಹದೇಶ್ವರ ಸ್ವಾಮಿ ದರ್ಶನ ಪಡೆದರು. ಬೆಳಿಗ್ಗೆ ಮಹದೇಶ್ವರ ಸ್ವಾಮಿ ದರ್ಶನ ಪಡೆದ ಅವರು ವಿಶೇಷ ಪೂಜೆ ಸಲ್ಲಿಸಿದರು. ಈ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇಂದು ಮಹದೇಶ್ವರರ ದರ್ಶನ ಪಡೆದಿದ್ದೇನೆ. ಚಾಮರಾಜನಗರ ಅಭಿವೃದ್ಧಿಗಾಗಿ ಇಡೀ ಸರ್ಕಾರ ಇಂದು ಮಹದೇಶ್ವರ ಬೆಟ್ಟಕ್ಕೆ ಬಂದಿದೆ. ನಮ್ಮ ಸರ್ಕಾರ ಬಂದ ಮೇಲೆ ಎಲ್ಲಾ ದೇವಾಲಯಗಳಲ್ಲಿ ಪ್ರಾಧಿಕಾರ ತೆರೆದಿದ್ದೇವೆ. ಸಾಕಷ್ಟು ಅಭಿವೃದ್ಧಿ ಕಾರ್ಯಗಳನ್ನು ಮಾಡುತ್ತಿದ್ದೇವೆ. ಚಾಮರಾಜನಗರ ಅಭಿವೃದ್ಧಿಗೆ ಇಡೀ ಸರ್ಕಾರ ಇಂದು ಮಹದೇಶ್ವರ ಬೆಟ್ಟಕ್ಕೆ ಬಂದಿದೆ. ರಸ್ತೆ ಸೇರಿದಂತೆ ಹಲವು ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಂಡಿದ್ದೇವೆ.

ರಾಜ್ಯದ ಪ್ರಮುಖ ಧಾರ್ಮಿಕ ಕ್ಷೇತ್ರಗಳ ಅಭಿವೃದ್ಧಿಗೆ ನಾವು ಪ್ರಾಧಿಕಾರಗಳನ್ನು ರಚನೆ ಮಾಡಿದ್ದೇವೆ, ಮಾಡುತ್ತಿದ್ದೇವೆ. ಧಾರ್ಮಿಕ ಕ್ಷೇತ್ರಗಳ ಅಭಿವೃದ್ಧಿ ಮಾಡಿದ್ದು ಕಾಂಗ್ರೆಸ್ ಸರಕಾರ ಮಾತ್ರ. ಈ ಕೆಲಸಗಳನ್ನು ಹಿಂದಿನ ಬಿಜೆಪಿ, ಜೆಡಿಎಸ್ ಸರ್ಕಾರಗಳು ಏಕೆ ಮಾಡಲಿಲ್ಲ, ನಾವು ಸರ್ವ ಜನಾಂಗಕ್ಕೂ ಒಳಿತು ಬೇಡಿಕೊಳ್ಳುತ್ತೇವೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಹೇಳಿದರು. ಚಾಮರಾಜನಗರದ ಮಲೆ ಮಹದೇಶ್ವರ ಬೆಟ್ಟದಲ್ಲಿ ದೇವರ ದರ್ಶನದ ಬಳಿಕ ಮಾಧ್ಯಮಗಳಿಗೆ ಗುರುವಾರ ಪ್ರತಿಕ್ರಿಯೆ ನೀಡಿದರು. ಹೊಸದಾಗಿ ಸವದತ್ತಿ ಎಲ್ಲಮ್ಮ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ, ಈ ಹಿಂದೆ ಮಲೆಮಹದೇಶ್ವರ, ಚಾಮುಂಡಿ ಬೆಟ್ಟ ಪ್ರಾಧಿಕಾರ ರಚನೆ ಮಾಡಿದ್ದೆವು. ಮಲೆ ಮಹದೇಶ್ವರ ಸನ್ನಿಧಾನದ ಇತಿಹಾಸ ತೆಗೆದುಕೊಂಡರೆ ಈ ಹಿಂದೆ ಹೇಗಿತ್ತು ಈಗ ಹೇಗಿದೆ ಎನ್ನುವುದಕ್ಕೆ ಸಾಕ್ಷಿ ಕಣ್ಣ ಮುಂದಿದೆ. ಜನರು ದೇವಸ್ಥಾನಕ್ಕೆ ಬಂದಾಗ ಪ್ರಾರ್ಥನೆ ಮಾಡಲು ಪ್ರಶಾಂತವಾದ, ಉತ್ತಮವಾದ ವಾತಾವರಣ ನಿರ್ಮಾಣ ಮಾಡಿಕೊಡಬೇಕು ಎಂಬುದು ನಮ್ಮ ಆಶಯ ಎಂದರು.

ಮಹದೇಶ್ವರನ ದರ್ಶನ ಮಾಡಿ ಪೂಜೆ ಸಲ್ಲಿಸಬೇಕು ಎಂದೇ ಬುಧವಾರ ರಾತ್ರಿಯೇ ಬಂದು ಇಲ್ಲಿ ವಾಸ್ತವ್ಯ ಹೂಡಿದ್ದೆ. ಮಲೆ ಮಹದೇಶ್ವರ ಸ್ವಾಮಿ ವಿಶೇಷವಾದ ದೇವರು. ಬಡವರು, ಮಧ್ಯಮ ವರ್ಗ ಹಾಗೂ ಎಲ್ಲಾ ವರ್ಗಗಳ ಜನರು ಆರಾಧಿಸುವ ದೇವರು. ಬುಡಕಟ್ಟು ಜನರು ಸಹ ಆರಾಧಿಸುವ ಪದ್ಧತಿಯಿದೆ ಎಂದರು.

ಸಂಪುಟ ಸಭೆಯಿಂದ ಚಾಮರಾಜನಗರಕ್ಕೆ ಇರುವ ನಿರೀಕ್ಷೆಗಳೇನು ಎಂದು ಕೇಳಿದಾಗ, ನಿರೀಕ್ಷೆಗಳನ್ನು ಈಡೇರಿಸಲು ಎಂದೇ ಇಡೀ ಸರ್ಕಾರ ಜಿಲ್ಲೆಗೆ ಬಂದಿದೆ. ನಮ್ಮ ಊರಿನಿಂದ ಈ ಹಿಂದೆ ಬೆಟ್ಟಕ್ಕೆ ಬರಬೇಕು ಎಂದರೆ 4–5 ಗಂಟೆ ಪ್ರಯಾಣವಾಗುತ್ತಿತ್ತು. ಈಗ ರಸ್ತೆ ಅಭಿವೃದ್ಧಿಯಾಗಿದೆ. ಪ್ರತಿವರ್ಷ ಲಕ್ಷಾಂತರ ಜನ ಕಾವೇರಿ ನದಿ ದಾಟಿಕೊಂಡು ಕ್ಷೇತ್ರಕ್ಕೆ ಬರುತ್ತಾರೆ.

ಇದಕ್ಕೆ ಅನುಕೂಲವಾಗುವಂತೆ ಮೇಕೆದಾಟು ಆದ ನಂತರ ಮೇಲ್ಸೇತುವೆ ರಸ್ತೆ ನಿರ್ಮಾಣದ ಬಗ್ಗೆ ಯೋಚನೆ ಮಾಡಲಾಗುವುದು. ಕಾವೇರಿ ಜಲಾನಯನ ಪ್ರದೇಶದಲ್ಲಿ ಏನೇನು ಕೆಲಸ ಮಾಡಬೇಕು ಎಂದು ತೀರ್ಮಾನ ಮಾಡಲಾಗುವುದು ಎಂದರು ಮಹದೇಶ್ವರ ಬೆಟ್ಟದಲ್ಲಿ ಸಚಿವ ಸಂಪುಟ ಸಭೆ ನಡೆಸುವ ಮೂಲಕ ಆಚಾರ ವಿಚಾರಗಳನ್ನು ಜನರಿಗೆ ತಿಳಿಸಬೇಕು ಎನ್ನುವುದು ನಮ್ಮ ಆಲೋಚನೆ ಎಂದು ತಿಳಿಸಿದರು.

## ದೇಶದ ಭದ್ರತೆ ವಿಚಾರದಲ್ಲಿ ರಾಜಕಾರಣ ಮಾಡುವುದಿಲ್ಲ - ಡಿಸಿಎಂ ಡಿ.ಕೆ.ಶಿವಕುಮಾರ್

**ಬೆಂಗಳೂರು, ಏ.24:** ದೇಶದ ಭದ್ರತೆ ವಿಚಾರವನ್ನು ನಾವು ರಾಜಕೀಯಕ್ಕೆ ಬಳಸಿಕೊಳ್ಳಲು ಇಷ್ಟಪಡುವುದಿಲ್ಲ. ಕೆಲವರು ರಾಜಕೀಯಕ್ಕೆ ಬಳಸಿಕೊಳ್ಳುತ್ತಿದ್ದಾರೆ. ಈ ನೆಲದ ಕಾನೂನಿನ ಪ್ರಕಾರ ಎಲ್ಲವೂ ನಡೆಯುತ್ತದೆ. ನಮಗೆ ದೇಶದ ಐಕ್ಯತೆ ಮುಖ್ಯ" ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಹೇಳಿದರು. ಸಚಿವ ಸಂಪುಟ ಸಭೆ ಬಳಿಕ ಮಾಧ್ಯಮಗಳ ಪ್ರಶ್ನೆಗಳಿಗೆ ಉತ್ತರಿಸಿದರು. ರಾಹುಲ್ ಗಾಂಧಿ ಅವರು ದೇಶದ ಹೊರಗಡೆ ಇದ್ದಾಗಲೇ ಭಯೋತ್ಪಾದಕ ದಾಳಿಯಾಗುತ್ತವೆ ಎನ್ನುವ ಬಿಜೆಪಿ ಐಟಿ ಸೆಲ್ ಮಾಡಿದ ಆರೋಪದ ವಿರುದ್ದ ಎಫ್ಐಆರ್ ದಾಖಲಾಗಿರುವ ಬಗ್ಗೆ ಕೇಳಿದಾಗ, ಇಂತಹ ಸಂದಿಗ್ಧ ಸಂದರ್ಭದಲ್ಲಿ ಕೇಂದ್ರ ಸರ್ಕಾರಕ್ಕೆ ನಾವು ಬೆಂಬಲ ನೀಡಬೇಕು. ದೇಶದಲ್ಲಿ ಶಾಂತಿ ಮುಖ್ಯ ಎಂದರು. ದೇಶದ ಮುಸ್ಲಿಂ ಸಮುದಾಯ ಹಿಂದುಗಳ ವಿರುದ್ಧ ಇದ್ದಾರೆ ಎನ್ನುವ ವ್ಯಾಖ್ಯಾನ ಹುಟ್ಟುತ್ತಿರುವ ಬಗ್ಗೆ ಕೇಳಿದಾಗ, ನಾವು ಶಾಂತಿಯನ್ನು ಕಾಪಾಡಬೇಕು. ಯಾರೂ ಸಹ ಇದನ್ನು ರಾಜಕೀಯಕರಣ ಮಾಡಬಾರದು. ಭಾರತೀಯರನ್ನು ಕಾಪಾಡಬೇಕು ಎನ್ನುವುದು ಮುಖ್ಯವಾಗಬೇಕು" ಎಂದು ಹೇಳಿದರು.

# ಕಾವೇರಿ ಆರತಿ

## 92 ಕೋಟಿ ರೂ. ಅನುದಾನ ಶಾಸಕ ಗೂಳಿಗೌಡ ಅಭಿನಂದನೆ

### ಮೂಲಭೂತ ಸೌಕರ್ಯವನ್ನು ಕಲ್ಪಿಸಲು ಅನುದಾನ ಬಳಕೆ: ಶಾಸಕ ಸ್ಪಷ್ಟನೆ



**ಬೆಂಗಳೂರು, ಏ.24:** ಕಾವೇರಿ ಮಾತೆಗೆ ಗಂಗಾರತಿ ಮಾದರಿಯಲ್ಲಿ ಕಾವೇರಿ ಆರತಿ ನೆರವೇರಿಸುವ ಸಂಬಂಧ ರಾಜ್ಯ ಸರ್ಕಾರವು ಗುರುವಾರ ನಡೆದ ಸಚಿವ ಸಂಪುಟದಲ್ಲಿ 92 ಕೋಟಿ ರೂ.ಗಳನ್ನು ಮೀಸಲಿಟ್ಟಿರುವುದು ಸ್ವಾಗತಾರ್ಹ ಕ್ರಮವಾಗಿದೆ. ಇದಕ್ಕೆ ಕಾರಣರಾಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಚಲವರಾಯಸ್ವಾಮಿ ಅವರನ್ನು ಹಾಗೂ ಶಾಸಕರಾದ ರಮೇಶ್ ಬಂಡಿಸಿದ್ದೇಗೌಡ ಅವರನ್ನು ಕಾವೇರಿ ಪ್ರಾಂತ್ಯದ ಮಹಾಜನತೆ ಪರವಾಗಿ ಅಭಿನಂದಿಸುತ್ತೇನೆ ಎಂದು ವಿಧಾನ ಪರಿಷತ್ ಶಾಸಕರಾದ ದಿನೇಶ್ ಗೂಳಿಗೌಡ ಹೇಳಿದ್ದಾರೆ.

ದೇಶದ ಪುಣ್ಯ ನದಿಗಳಲ್ಲಿ ಕಾವೇರಿಯೂ ಒಂದು. ಅತ್ಯಂತ ಶ್ರೇಷ್ಠವಾದ ತಾಯಿ ಕಾವೇರಿಗೆ ಪೂಜೆ ಸಲ್ಲಿಸಲು ಈ ಅನುದಾನವನ್ನು ಬಳಸಿಕೊಳ್ಳಲಾಗುತ್ತದೆ. ಅಲ್ಲಿ ಕಾವೇರಿ ಆರತಿಗೆ ಸಂಬಂಧಪಟ್ಟಂತೆ ಎಲ್ಲ ಮೂಲಭೂತ ಸೌಕರ್ಯವನ್ನು ಕಲ್ಪಿಸಲು ಇಂದಿನ ಸಚಿವ ಸಂಪುಟವು 92 ಕೋಟಿ ರೂಪಾಯಿಗೆ ಅನುಮೋದನೆಯನ್ನು ನೀಡಿದೆ ಎಂದು ಅವರು ಸಂತಸ ವ್ಯಕ್ತಪಡಿಸಿದ್ದಾರೆ.

**ಕಾವೇರಿ ಆರತಿಗಾಗಿ ಮನವಿ ಮಾಡಿದ್ದ ಶಾಸಕರು:** ಗಂಗಾರತಿ ಮಾದರಿಯಲ್ಲಿ ಕರ್ನಾಟಕದಲ್ಲಿ ಕಾವೇರಿ ಆರತಿ ಮಾಡುವ ಸಂಬಂಧ ಈ ಹಿಂದೆ ಶಾಸಕರಾದ ರಮೇಶ್ ಬಾಬು ಬಂಡಿಸಿದ್ದೇಗೌಡ ಮತ್ತು ದಿನೇಶ್ ಗೂಳಿಗೌಡ ಅವರು ಸಿಎಂ, ಡಿಸಿಎಂಗೆ ಮನವಿ ಮಾಡಿದ್ದನ್ನು ಸ್ಮರಿಸಬಹುದು.

# ಒಳಮೀಸಲಾತಿ ಅನುಷ್ಠಾನಕ್ಕೆ ನಮ್ಮ ಸರ್ಕಾರ ಬದ್ಧ: ಆಹಾರ ಸಚಿವ ಕೆ.ಎಚ್.ಮುನಿಯಪ್ಪ



**ಚಾಮರಾಜನಗರ, ಏ.24:** ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆಯ ಸಚಿವರಾದ ಕೆ.ಎಚ್.ಮುನಿಯಪ್ಪ ಗುರುವಾರ ಹನೂರು ತಾಲ್ಲೂಕಿನ ಬೂದಬಾಲು ಗ್ರಾಮದಲ್ಲಿ ಐತಿಹಾಸಿಕ ಹಿನ್ನಲೆಯಿರುವ ವೆಂಕಟೇಶ್ವರ ದೇವರ ದರ್ಶನವನ್ನು ಪಡೆದರು.

ನಂತರ ಗ್ರಾಮಸ್ಥರು ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಸಚಿವರು ಈ ಗ್ರಾಮದಲ್ಲಿ ಐತಿಹಾಸಿಕ ಹಿನ್ನಲೆಯ ಇರುವ ವೆಂಕಟೇಶ್ವರ ದೇವರ ದರ್ಶನ ಮಾಡಿದ್ದು ನನ್ನ ಪುಣ್ಯ ಎಂದರು ನಮ್ಮ ಸರ್ಕಾರ ಬಡವರ ಹಾಗೂ ರೈತರ ಪರವಾಗಿದ್ದು ಎಲ್ಲಾ ವರ್ಗದ ಸರ್ವತೋಮುಖ ಅಭಿವೃದ್ಧಿಗೆ ಬದ್ದವಾಗಿ ಆಡಳಿತ ನಡೆಸುತ್ತಿದ್ದೇವೆ ಎಂದರು. ಒಳಮೀಸಲಾತಿ ವಿಚಾರವಾಗಿ ಸುಪ್ರೀಂ ಕೋರ್ಟ್‌ನ ಮಹತ್ತದ ತೀರ್ಪಿನಿಂದಾಗಿ ಪರಿಶಿಷ್ಟ ಜಾತಿಯ ಮಾದಿಗ ಸಮುದಾಯದವರಿಗೆ ಒಂದು ಸುವರ್ಣಯುಗ ಮುಂದಿನ ತಿಂಗಳಲ್ಲಿ ಪ್ರಾರಂಭವಾಗುತ್ತದೆ ಈಗಾಗಲೇ ನ್ಯಾಯಮೂರ್ತಿ ನಾಗಮೋಹನ್ ದಾಸ್ ರವರ ಏಕ ಸದಸ್ಯ ಆಯೋಗದ ಮೂಲಕ ಮಧ್ಯಂತರ ವರದಿ ಸಲ್ಲಿಸಿದ್ದು ನಿರ್ದಿಷ್ಟ ದತ್ತಾಂಶಗಳ ಸಂಗ್ರಹಣೆಗಾಗಿ ಪರಿಶಿಷ್ಟ ಜಾತಿಯ 101 ಜಾತಿಗಳ ಸಮೀಕ್ಷೆ ನಡೆಸಲು ಸಿದ್ದತೆ ನಡೆಸುತ್ತಿದ್ದು ಅತೀ ಶೀಘ್ರವಾಗಿ ದತ್ತಾಂಶದ ಸಂಗ್ರಹಣೆಯಾಗಲಿದೆ ಮುಂದಿನ ದಿನಗಳಲ್ಲಿ ಈ ಸಮುದಾಯಕ್ಕೆ ಉತ್ತಮ ದಿನಗಳು ಬರಲಿದ್ದು ಯುವಕರಿಗೆ ಉದ್ಯೋಗಗಳನ್ನು ಕಲ್ಪಿಸಲು ಸಹಕಾರಿಯಾಗಲಿದೆ ಎಂದರು. ಹಸಿರು ಕ್ರಾಂತಿಯ ಹರಿಕಾರರಾದ ಬಾಬು ಜಗಜೀವನ್ ರಾಮ್ ಅವರು ಈ ದೇಶದಲ್ಲಿ ಹಲವಾರು ಯೋಜನೆಗಳ ರೂಪಿಸಿದ ಪರಿಣಾಮ ಇಂದಿಗೂ ಅವರು ಅಜರಾಮರರಾಗಿದ್ದಾರೆ ಅವರು ಸೋಲಿಲ್ಲದೆ ಎಂಟು ಬಾರಿ ಸಂಸದರಾಗಿ ಆಯ್ಕೆ ಯಾದ ಕೀರ್ತಿ ಅವರಿಗೆ ಸಲ್ಲುತ್ತದೆ.

ಅವರ ನಂತರ ದಕ್ಷಿಣ ಭಾರತದಲ್ಲಿ 7 ಬಾರಿ ನನ್ನನ್ನು ತಾವು ಆಯ್ಕೆಮಾಡಿದ್ದು ತಮ್ಮ ಆಶೀರ್ವಾದದಿಂದ ನಾನು ರಾಜಕೀಯವಾಗಿ ತಮ್ಮ ಸೇವೆ ಮಾಡಲು ಸಹಕರಿಸಿದ್ದೀರ ಎಂದರು. ಈ ಭಾಗದಲ್ಲಿ ಮಾನ್ಯ ಶಾಸಕರೊಂದಿಗೆ ಮಾತುಕತೆ ನಡೆಸಿ ರಸ್ತೆ ಹಾಗೂ ಜಗಜೀವನ್‌ರಾಮ್ ಭವನದ ಕಾಮಗಾರಿ ಪೂರ್ಣಗೊಳಿಸಲು ಮಾತನಾಡುತ್ತೇನೆ ಎಂದರು. ಈ ಭಾಗದ ಎಲ್ಲಾ ಜನರು ಶಿವಭಕ್ತ ರಿದ್ದೀರಿ ಮತ್ತು ಬಸವಣ್ಣರವರ ಚಿಂತನೆಗಳನ್ನು ಮೈಗೂಡಿಸಿ ಕೊಂಡಿದ್ದೀರಾ ಅದೇ ರೀತಿ ಡಾ. ಬಿ. ಆರ್.ಅಂಬೇಡ್ಕರ್ ರವರ ಕೊಟ್ಟಂತಹ ಸಂವಿಧಾನದಡಿ ಗಾಂಧೀಜಿಯವರ ಕಂಡಂತ ಕನಸನ್ನು ಈ ರಾಜ್ಯದಲ್ಲಿ ಈಡೇರಿಸುತ್ತಿದ್ದೇವೆ ಎಂದರು. ಈ ಸಂದರ್ಭದಲ್ಲಿ ಮಾಜಿ ಸಚಿವ ಶಿವಣ್ಣ ಕೋಟೆ, ಸಚಿವರ ಆಪ್ತ ಕಾರ್ಯದರ್ಶಿ ಡಾ.ಎಚ್.ನಟರಾಜ್, ಮುಖಂಡರಾದ ಮಹದೇವಪ್ಪ ಹಾಗೂ ರಮೇಶ್ ಉಪಸ್ಥಿತರಿದ್ದರು.



ಮಲೆ ಮಹದೇಶ್ವರ ಬೆಟ್ಟದಲ್ಲಿ ನಡೆಯುತ್ತಿರುವ ವಿಶೇಷ ಕ್ಯಾಬಿನೆಟ್ ಸಭೆಗೂ ಮುನ್ನ, ಕಾಶ್ಮೀರದಲ್ಲಿ ಭಯೋತ್ಪಾದಕರ ದಾಳಿಗೆ ಬಲಿಯಾದವರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು.

# ರಾಮನಗರ ಟೌನ್‌ಶಿಪ್ ನಿರ್ಮಾಣ ಮಾಜಿ ಪ್ರದಾನಿ ದೇವೇಗೌಡ ವಿರೋಧ



**ಬೆಂಗಳೂರು, ಏ.24:** ರಾಮನಗರ ಜಿಲ್ಲೆಯ ಬಿಡದಿ ಹೋಬಳಿ ವ್ಯಾಪ್ತಿಯಲ್ಲಿ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಟೌನ್‌ಶಿಪ್ ನಿರ್ಮಾಣಕ್ಕೆ ರೈತರ ಭೂಮಿಯನ್ನು ಸ್ವಾಧೀನ ಮಾಡಿಕೊಳ್ಳುವುದಕ್ಕೆ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರು ತೀವ್ರ ವಿರೋಧ ವ್ಯಕ್ತಪಡಿಸಿದ್ದಾರೆ. ಈ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರು ಪತ್ರ ಬರೆದಿದ್ದಾರೆ. ದೇವೇಗೌಡರ ಪತ್ರದ ಪ್ರಮುಖ ಅಂಶಗಳು ಈ ಕೆಳಗಿನಂತಿವೆ. ಬೆಂಗಳೂರು ಗ್ರಾಮಾಂತರ ಲೋಕಸಭೆ ಕ್ಷೇತ್ರದ ಬಿಡದಿ ಹೋಬಳಿಯ ಬೈರಮಂಗಲ, ಕಂಚುಗಾರನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ 24 ಗ್ರಾಮಗಳಲ್ಲಿನ ಹಲವಾರು ಸರ್ವೆ ನಂಬರುಗಳಲ್ಲಿರುವ ಸುಮಾರು 10 ಸಾವಿರ ಎಕರೆ ಜಮೀನನ್ನು ಸರ್ಕಾರವು ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಟೌನ್‌ಶಿಪ್ ಯೋಜನೆ ನಿರ್ಮಾಣಕ್ಕೆ ಭೂಸ್ವಾಧೀನ ಪ್ರಕ್ರಿಯೆ ಪ್ರಾರಂಭಿಸಿರುವುದಾಗಿ ವರದಿಯಾಗಿದೆ. ರಾಮನಗರ ಜಿಲ್ಲೆಯ ರಾಮನಗರ ಮತ್ತು ಕನಕಪುರ ತಾಲ್ಲೂಕುಗಳಲ್ಲಿ ಈಗಾಗಲೇ ರಾಜ್ಯ ಸರ್ಕಾರ ಕೈಗಾರಿಕಾಭಿವೃದ್ಧಿಗಾಗಿ ಸಾವಿರಾರು ಎಕರೆ ರೈತರ ಭೂಮಿಯನ್ನು ವಶಪಡಿಸಿಕೊಂಡು ಕೈಗಾರಿಕಾಭಿವೃದ್ಧಿ ಪ್ರದೇಶವನ್ನು ಸ್ಥಾಪಿಸಿದೆ. ರಾಮನಗರ ಜಿಲ್ಲೆ ಬೆಂಗಳೂರು ಮಹಾನಗರಕ್ಕೆ ಹೊಂದಿಕೊಂಡಂತೆ ಇದ್ದು, ಇದ್ದು ಹಲವಾರು ಉದ್ಯಮಗಳು ಖಾಸಗಿಯಾಗಿ ಕೈಗಾರಿಕೆಗಳನ್ನು ಸ್ಥಾಪಿಸಿದ್ದಾರೆ. ಉಳಿದಂತೆ ಇರುವ ಕೃಷಿ ಭೂಮಿಯಲ್ಲಿ ರೈತರು ತಮ್ಮ ಜೀವನ ನಿರ್ವ ಹಣೆಗೆ ಹೈನು ಗಾರಿಕೆ, ರೇಷ್ಮೆ, ತೋಟ ಗಾರಿಕೆ, ಕೃಷಿಗಾಗಿ ಅವಲಂಬಿತ ರಾಗಿದ್ದಾರೆ. ಬಹುಪಾಲು ರೈತರು ಅತೀ ಸಣ್ಣ ಮತ್ತು ಸಣ್ಣ ಹಿಡುವಳಿದಾರರಾಗಿದ್ದು ಬಡ ಕುಟುಂಬಕ್ಕೆ ಸೇರಿದವರಾಗಿದ್ದಾರೆ. ರೈತರು ತಮ್ಮ ಜಮೀನಿನಲ್ಲಿ ಮತ್ತು ಜಮೀನಿನ ಸುತ್ತ ಲಕ್ಷಾಂತರ ಮರ–ಗಿಡಗಳನ್ನು ಬೆಳೆಸಿದ್ದಾರೆ. ಇಂತಹ ಪ್ರದೇಶವನ್ನು ಟೌನ್‌ಶಿಪ್ ಯೋಜನೆಗೆ ಸ್ವಾಧೀನ ಪಡಿಸಿಕೊಂಡರೆ ಪರಿಸರಕ್ಕೆ ಅಪಾರ ಹಾನಿ ಉಂಟಾಗುತ್ತದೆ. ಸಾವಿರಾರು ಕುಟುಂಬಗಳ ಜೀವನ ನಿರ್ವಹಣೆಗೆ ದಕ್ಕೆ ಉಂಟಾಗಿ, ರೈತ ಕುಟುಂಬದ ಯುವಕರು ನಿರುದ್ಯೋಗಿಗಳಾಗಿ ಬೀದಿಪಾಲಾಗುತ್ತಾರೆ. ಈ ಬಡ ರೈತರ ಜೀವನೋಪಾಯಕ್ಕೆ ಕೃಷಿ ಭೂಮಿಯೇ ಆಧಾರವಾಗಿದೆ. ಇದಲ್ಲದೆ, ಕರ್ನಾಟಕ ಹೌಸಿಂಗ್ ಬೋರ್ಡ್ ಹಾಗೂ ಇತರ ಸರ್ಕಾರಿ ಪ್ರಾಧಿಕಾರಗಳು ರಾಮನಗರ ಜಿಲ್ಲೆಯ ಬಿಡದಿ ಸುತ್ತ–ಮುತ್ತಲು ಹಲವಾರು ವಸತಿ ಯೋಜನೆಗಳನ್ನು ರೂಪಿಸಿ, ರೈತರ ಜಮೀನನ್ನು ಸ್ವಾಧೀನಪಡಿಸಿಕೊಂಡು ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿವೆ. ಅದ್ದರಿಂದ, ರಾಜ್ಯ ಸರ್ಕಾರ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ನಿರ್ಮಿಸುತ್ತಿರುವ ಟೌನ್‌ಶಿಪ್ ಯೋಜನೆಗೆ ಸ್ವಾಧೀನಪಡಿಸಿಕೊಳ್ಳುತ್ತಿರುವ ರೈತರ ಭೂಮಿಯನ್ನು ಭೂಸ್ವಾಧೀನ ಪ್ರಕ್ರಿಯೆಯಿಂದ ಬಡ ರೈತರ ಹಿತದೃಷ್ಠಿಯಿಂದ ಕೈಬಿಡಬೇಕೆಂದು ಈ ಮೂಲಕ ಒತ್ತಾಯಿಸುತ್ತೇನೆ ಎಂದು ಪತ್ರದಲ್ಲಿ ಹೇಳಿದ್ದಾರೆ.

# ಹಿಂದುಳಿದ ಜಾತಿ ವಿಂಗಡಣೆಯಲ್ಲಿ ಆಯೋಗದಿಂದ ತಾರತಮ್ಯ ಶಂಕರ ಬಿದರಿ ಆಕ್ರೋಶ



**ಬೆಂಗಳೂರು, ಏ.24:** ಲಿಂಗಾಯತ ಪಂಥಕ್ಕೆ ಸೇರಿದ ಅತ್ಯಂತ ಹಿಂದುಳಿದ, ವೃತ್ತಿ ಆಧಾರಿತ ಜಾತಿಗಳನ್ನು ಪ್ರವರ್ಗ 3 ಬಿ ಗೆ ಸೇರಿಸುವ ಮೂಲಕ ಹಿಂದುಳಿದ ವರ್ಗಗಳ ಆಯೋಗ ಘೋರ ಅಪರಾಧ ಎಸಗಿದೆ ಎಂದು ಅಖಿಲ ಭಾರತ ವೀರಶೈವ–ಲಿಂಗಾಯತ ಮಹಾಸಭಾದ ಅಧ್ಯಕ್ಷ ಶಂಕರ ಬಿದರಿ ಆರೋಪಿಸಿದರು. ಸುದ್ದಿಗೋಷ್ಠಿಯಲ್ಲಿ ಗುರುವಾರ ಮಾತನಾಡಿದ ಅವರು, ನಾಲ್ಕು ವರ್ಣಗಳಿಗೆ ಸೇರಿದ 99ಕ್ಕೂ ಹೆಚ್ಚು ವೃತ್ತಿಗಳ ಜನರು 12ನೇ ಶತಮಾನದಲ್ಲಿ ಬಸವಣ್ಣನವರು ಪ್ರತಿಪಾದಿಸಿದ ಲಿಂಗಾಯತ ಪಂಥಕ್ಕೆ ಸೇರ್ಪಡೆಯಾದರು. ಅದೇ ವೃತ್ತಿಯ ಕೆಲವರು ಸನಾತನ ಹಿಂದೂ ಧರ್ಮದ ಭಾಗವಾಗಿಯೇ ಮುಂದುವರಿದಿದ್ದಾರೆ. ಹಿಂದೂ ಧರ್ಮ ಹಾಗೂ ಲಿಂಗಾಯತ ಪಂಥಗಳಲ್ಲಿ ವಿಭಜಿತವಾದರೂ ಎರಡೂ ಕಡೆ ಗುರುತಿಸಿಕೊಂಡಿರುವ ಅವರ ವೃತ್ತಿ ಇಂದಿಗೂ ಒಂದೇ ತೆರನಾಗಿವೆ. ಆದರೆ, ಹಿಂದುಳಿದ ಜಾತಿಗಳನ್ನು ವಿಂಗಡಿಸುವಾಗ ಆಯೋಗ ಭೇದ ಮಾಡಿದೆ. ಇಂತಹ ತಾರತಮ್ಯ ಸರಿಯಲ್ಲ ಎಂದು ದೂರಿದರು.



ಶಿವಮೊಗ್ಗದಲ್ಲಿ ಗುರುವಾರ ನಡೆದ ಜಮ್ಮು ಮತ್ತು ಕಾಶ್ಮೀರ ಭಯೋತ್ಪಾದಕ ದಾಳಿಯಲ್ಲಿ ಹುತಾತ್ಮರಾದ ಮಂಜುನಾಥ ರಾವ್ ಅವರಿಗೆ ಕುಟುಂಬ ಸದಸ್ಯರು ಮತ್ತು ಸಂಬಂಧಿಕರು ಅಂತಿಮ ನಮನ ಸಲ್ಲಿಸಿದರು

# ಲಂಚ ಸ್ವೀಕಾರ ಆರೋಪ: ವಾಣಿಜ್ಯ ತೆರಿಗೆ ಪರಿವೀಕ್ಷಕ ನಿಜಾನಂದಮೂರ್ತಿ ಲೋಕಾಯುಕ್ತ ಪೊಲೀಸ್ ಬಲೆಗೆ

**ಬೆಂಗಳೂರು ನಗರ ಜಿಲ್ಲೆ ಏ.24:** 2025ನೇ ಏ.24 ರಂದು ಸಂಜೆ ಸುಮಾರು 6.50 ಗಂಟೆಯಲ್ಲಿ ನಾಗರಭಾವಿ ಹತ್ತಿರುವ ಇರುವ ನಮ್ಮೂರ ತಿಂಡಿ ಹೊಟೇಲ್ ಹತ್ತಿರ ಆರೋಪಿ ವಾಣಿಜ್ಯ ತೆರಿಗೆ ಪರಿವೀಕ್ಷಕ ನಿಜಾನಂದಮೂರ್ತಿ ಎಂ.ಆರ್. ಅವರು ಖಾಸಗಿ ವ್ಯಕ್ತಿಯಾದ ಮನೋಜ್ ಎಂ ಎಂಬುವವರ ಕಡೆಯಿಂದ 20 ಲಕ್ಷ ರೂ. ಲಂಚದ ಹಣವನ್ನು ಪಡೆದುಕೊಳ್ಳುತ್ತಿರುವಾಗ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಲೋಕಾಯುಕ್ತ ಪೊಲೀಸರು ದಾಳಿ ನಡೆಸಿ ಹಣದ ಸಮೇತ ವಶಕ್ಕೆ ಪಡೆದು ತನಿಖೆ ಕೈಗೊಳ್ಳಲಾಗಿದೆ.

ವಾಣಿಜ್ಯ ತೆರಿಗೆ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಕೆಲವು ಅಧಿಕಾರಿಗಳು ಸರಕು ಸಾಗಾಣಿಕೆ ಕಂಪನಿಗಳ ಮಾಲೀಕರ ಕಡೆಯಿಂದ ಪ್ರತಿ ತಿಂಗಳು ಲಂಚದ ಹಣವನ್ನು ಪಡೆದುಕೊಂಡು, ದೆಹಲಿಯಿಂದ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೆದ್ದಾರಿ ಮಾರ್ಗವಾಗಿ ಪಾನ್ ಮಸಾಲವನ್ನು ಸಾಗಾಣಿಕೆ ಮಾಡುತ್ತಿರುವ ಪಾನ್ ಮಸಾಲ ಸರಕು ಸಾಗಾಣಿಕೆದಾರರಿಗೆ ಅಕ್ರಮವಾಗಿ ಮತ್ತು ಕಾನೂನು ಬಾಹಿರವಾಗಿ ಸಾಗಾಣಿಕೆ ಮಾಡಲು ಅನುವು ಮಾಡಿಕೊಡುತ್ತಿದ್ದರು.

ಇದನ್ನು ಗಂಭೀರವಾಗಿ ಪರಿಗಣಿಸಿದ ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಗ್ರಾಮಾಂತರ ಜಿಲ್ಲಾ ಪೊಲೀಸ್ ಠಾಣೆಯ ಪೊಲೀಸ್ ಅಧೀಕ್ಷಕರಾದ ಪವನ್ ನೆಟ್ಟೂರ್‌ರವರ ಮಾರ್ಗದರ್ಶನದಲ್ಲಿ ವೆಂಕಟೇಶ ಟಿ.ಸಿ ಡಿವೈಎಸ್ಪಿ, ಗಿರೀಶ ಪಾಂಡು ರೋಡಕರ್, ಡಿವೈಎಸ್ಪಿ ಮತ್ತು ಹಾಲಪ್ಪ ವೈ ಬಾಲದಂಡಿ, ಪೊಲೀಸ್ ಇನ್‌ಸ್ಪೆಕ್ಟರ್, ಚಂದ್ರಕಾಂತ ಎಲ್.ಟಿ ಪೊಲೀಸ್ ನಿರೀಕ್ಷಕರು ಹಾಗೂ ಸಿಬ್ಬಂದಿ ವರ್ಗದವರು ಕಾರ್ಯಾಚರಣೆ ನಡೆಸಿ ಹಣದ ಮಾಲು ಸಮೇತ ಅರೋಪಿಯನ್ನು ವಶಕ್ಕೆ ಪಡೆಯಲಾಗಿದೆ.

ಇಂತಹ ಘಟನೆಗಳಿಂದಾಗಿ ಕರ್ನಾಟಕ ರಾಜ್ಯ ಸರ್ಕಾರದ ಬೊಕ್ಕಸಕ್ಕೆ ಕೋಟ್ಯಾಂತರ ರೂಪಾಯಿ ನಷ್ಟ ಉಂಟು ಮಾಡುತ್ತಿದ್ದರು. ಪದೀಯ ಕಾರ್ಯಕ್ಕೆ ಸಂಬಂಧಿಸಿದಂತೆ ಪಾಲಿಸಬೇಕಾದ ಕಾನೂನನ್ನು ಪಾಲಿಸದೆ ಖಾಸಗಿ ಕಂಪನಿ ಹಾಗೂ ಖಾಸಗಿ ಜನರಿಗೆ ಕಾನೂನು ಬಾಹಿರ ಲಾಭ ಮಾಡಿಕೊಡುವ ಸಲುವಾಗಿ ಲಂಚದ ಹಣವನ್ನು ಪಡೆದುಕೊಂಡು ಸರ್ಕಾರಕ್ಕೆ ವಂಚನೆಯನ್ನು ಮಾಡಿ ಸಾಗಾಣಿಕೆದಾರರ ವೈಯಕ್ತಿಕ ಹಿತಾಸಕ್ತಿಯನ್ನು ಕಾಪಾಡಲು ಅನುಕೂಲವನ್ನು ಮಾಡಿಕೊಟ್ಟು ಅಪರಾಧಿಕ ನಂಬಿಕೆ ದ್ರೋಹವನ್ನು ಎಸಗಿ ಸರ್ಕಾರಕ್ಕೆ ಮೋಸಮಾಡಿ ಅಕ್ರಮ ನಷ್ಟವನ್ನುಂಟು ಮಾಡುತ್ತಿರುವ ಬಗ್ಗೆ ಇದ್ದಂತಹ ಮಾಹಿತಿಯನ್ನು ಖಚಿತ ಪಡಿಸಿಕೊಂಡು ಮೊ. ಸಂ 06/2025 ಕಲಂ 7(a),7(b),8,9,10 ಪಿ.ಸಿ ಆಕ್ಟ್ 1988 (ತಿದ್ದುಪಡಿ 2018) ಜೊತೆಗೆ 318(2)(3), 336(2), ಭಾರತೀಯ ನ್ಯಾಯ ಸಂಹಿತೆ–2023 ರೀತ್ಯ ದಿನಾಂಕ: 23–04–2025 ರಂದು ಪ್ರಕರಣ ದಾಖಲು ಮಾಡಲಾಗಿರುತ್ತೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲೆ. ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕರು ತಿಳಿಸಿದ್ದಾರೆ.

# ನಾರಾಯಣ ಸೇವಾ ಸಂಸ್ಥಾನದಿಂದ ಕೃತಕ ಅಂಗಾಂಗ ಜೋಡಣಾ ಶಿಬಿರ ಆಯೋಜನೆ

## ಕರ್ನಾಟಕದಲ್ಲಿ 700 ಕ್ಕೂ ಹೆಚ್ಚು ವಿಕಲ ಚೇತನರ ಬದುಕಿನಲ್ಲಿ ಆಶಾಕಿರಣ




**ಬೆಂಗಳೂರು, ಏ, 24;** ಮಾನವೀಯ ಸೇವೆಗೆ ಹೆಸರಾದ ನಾರಾಯಣ ಸೇವಾ ಸಂಸ್ಥಾನದಿಂದ ಏಪ್ರಿಲ್ 27 ರ ಭಾನುವಾರ ಸತತ ಮೂರನೇ ವರ್ಷ ಬೆಂಗಳೂರಿನಲ್ಲಿ ಉಚಿತ ನಾರಾಯಣ್ ಉಚಿತ ಕೃತಕ ಅಂಗಾಂಗ ಮತ್ತು ಕ್ಯಾಲಿಪರ್ ಜೋಡಣಾ ಶಿಬಿರ ಮತ್ತು ಅಂತರರಾಷ್ಟ್ರೀಯ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಆಯೋಜಿಸಲಾಗಿದೆ.

ಬಸವನಗುಡಿಯ ಬುಲ್ ಟೆಂಪಲ್ ರಸ್ತೆಯ ಮರಾಠಾ ಹಾಸ್ಟೆಲ್ ಮೈದಾನದಲ್ಲಿ ಬೆಳಿಗ್ಗೆ 8:00 ರಿಂದ ಸಂಜೆ 5:00 ರವರೆಗೆ ನಡೆಯಲಿದ್ದು, ಅಲ್ಲಿ ಮೊದಲೇ ನೋಂದಾಯಿಸಿಕೊಂಡ ಅಂಗವಿಕಲ ವ್ಯಕ್ತಿಗಳಿಗೆ ಮಾತ್ರ ಉಚಿತ ಕೃತಕ ಅಂಗಗಳನ್ನು ಜೋಡಿಸಲಾಗುತ್ತದೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ನಾರಾಯಣ ಸೇವಾ ಸಂಸ್ಥಾನದ ನಿರ್ದೇಶಕ ಭಗವಾನ್ ಪ್ರಸಾದ್ ಗೌರ್, ಕಳೆದ 40 ವರ್ಷಗಳಿಂದ ವಿಶೇಷ ಚೇತನರ ಪರವಾಗಿ ಕೆಲಸ ಮಾಡುತ್ತಿದೆ. ಫೆಬ್ರವರಿ 2 ರಂದು ಬೆಂಗಳೂರಿನಲ್ಲಿ 1,050 ಕ್ಕೂ ಹೆಚ್ಚು ಮಂದಿ ಭಾಗವಹಿಸಿದ್ದರು. ಅವರಲ್ಲಿ 694 ವ್ಯಕ್ತಿಗಳು ರಸ್ತೆ ಅಥವಾ ಇತರ ಅಪಘಾತಗಳಿಂದಾಗಿ ಕೈಕಾಲುಗಳನ್ನು ಕಳೆದುಕೊಂಡಿದ್ದರು. ಈ ವ್ಯಕ್ತಿಗಳಿಗೆ ಇದೀಗ ಅಂಗಾಂಗ ಜೋಡಿಸಲಾಗುತ್ತಿದೆ ಎಂದರು.

ಜರ್ಮನ್ ತಂತ್ರಜ್ಞಾನದಿಂದ ತಯಾರಿಸಿದ ನಾರಾಯಣ್ ಲಿಂಬ್ಸ್ ಅಳವಡಿಸಲಾಗುವುದು. ಇದು ಅವರಿಗೆ ಹೊಸ ಜೀವನವನ್ನು ನೀಡಲಿದೆ. ಈ ವ್ಯಕ್ತಿಗಳಲ್ಲಿ ಅನೇಕರು ತಮ್ಮ ಕುಟುಂಬಗಳ ಮೇಲೆ ಅವಲಂಬಿತರಾಗಿದ್ದರು, ಆದರೆ ಈ ಬೆಂಬಲದೊಂದಿಗೆ, ಅವರು ಮುಖ್ಯವಾಹಿನಿಗೆ ಮತ್ತೆ ಸೇರಲು ಸಬಲೀಕರಣಗೊಳ್ಳುತ್ತಿದ್ದಾರೆ. ಇದು ರಾಷ್ಟ್ರ ಮತ್ತು ಸಮಾಜ ಎರಡಕ್ಕೂ ಹೆಮ್ಮೆಯ ಕ್ಷಣ ಎಂದರು.

ಇದೇ ಸಂದರ್ಭದಲ್ಲಿ ಶಿಬಿರದ ಅಧಿಕೃತ ಪೋಸ್ಟರ್ ಅನ್ನು ಭಗವಾನ್ ಪ್ರಸಾದ್ ಗೌರ್ ಜೊತೆ ನಾರಾಯಣ ಸೇವಾ ಸಂಸ್ಥಾನದ ಬೆಂಗಳೂರು ಉಸ್ತುವಾರಿ ಖಿಬಿಲಾಲ್ ಮೆನಾರಿಯಾ, ಮುಂಬೈ ಶಾಖೆ ಮುಖ್ಯಸ್ಥ ಲಲಿತ್ ಲೋಹರ್, ಸಾಮಾಜಿಕ ಕಾರ್ಯಕರ್ತ ರಾಕೇಶ್ ವೈಷ್ಣವ್, ಗಾನವಿ ಮತ್ತು ಮಾಧ್ಯಮ ಸಂಯೋಜಕರಾದ ಚಂದ್ರಶೇಖರಯ್ಯ ಬಿಡುಗಡೆ ಮಾಡಿದರು.

ನಾರಾಯಣ ಸೇವಾ ಸಂಸ್ಥಾನವು ದೇಶದ ವಿವಿಧ ಪ್ರದೇಶಗಳಲ್ಲಿ ಪ್ರತಿ ವಾರ ಇದೇ ರೀತಿಯ ಶಿಬಿರಗಳನ್ನು ನಡೆಸುತ್ತದೆ. ಅಂತರರಾಷ್ಟ್ರೀಯವಾಗಿ, ಕೀನ್ಯಾ, ಉಗಾಂಡಾ, ಮೇರು, ತಾಂಜಾನಿಯಾ ಮತ್ತು ನೇಪಾಳದಂತಹ ದೇಶಗಳಲ್ಲಿಯೂ ಶಿಬಿರಗಳನ್ನು ಆಯೋಜಿಸಲಾಗಿದೆ. ಪ್ರತಿ ತಿಂಗಳು ಸರಾಸರಿ 1,800 ಕೃತಕ ಅಂಗಗಳನ್ನು ಅಳವಡಿಸಲಾಗುತ್ತದೆ ಎಂದು ಭಗವಾನ್ ಪ್ರಸಾದ್ ಗೌರ್ ಮಾಹಿತಿ ನೀಡಿದರು.

ಶಿಬಿರದ ಉದ್ಘಾಟನೆಗೆ, ಮುಖ್ಯಮಂತ್ರಿ ಮತ್ತು ಉಪಮುಖ್ಯಮಂತ್ರಿ ಸೇರಿದಂತೆ ಹಲವಾರು ಗಣ್ಯರನ್ನು ಆಹ್ವಾನಿಸಲಾಗಿದೆ.

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,A/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಪಹಲ್ಗಾಮ್ ದಾಳಿ ಸುಳಿವಿದ್ದರೂ ಭದ್ರತಾಪಡೆ ನಿರ್ಲಕ್ಷ್ಯ

**ನವದೆಹಲಿ,ಏ.24:** ಜಮ್ಮು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭೀಕರ ಉಗ್ರರ ದಾಳಿಯು ಗಂಭೀರ ಗುಪ್ತಚರ ಮತ್ತು ಭದ್ರತಾ ವೈಫಲ್ಯ ಎಂದು ಮೂಲಗಳನ್ನು ಉಲ್ಲೇಖಿಸಿ ಮಾಧ್ಯಮ ವರದಿ ಮಾಡಿದೆ. ಘಟನೆಗೆ ಕೆಲವು ದಿನಗಳ ಮೊದಲೇ ಪಾಕಿಸ್ತಾನ ಆಕ್ರಮಿತ ಕಾಶ್ಮೀರ(ಪಿಒಕೆ)ದಲ್ಲಿ ನೆಲೆಸಿರುವ ಭಯೋತ್ಪಾದಕನೊಬ್ಬ ದಾಳಿಯ ಬಗ್ಗೆ ಸುಳಿವು ನೀಡಿದ್ದನು ಎಂದು ಮೂಲಗಳು ಹೇಳಿದ್ದು, ಆದರೆ ಗುಪ್ತಚರ ಸಂಸ್ಥೆಗಳು ಮತ್ತು ಭದ್ರತಾ ಪಡೆಗಳು ಅದರ ಮೇಲೆ ಕ್ರಮ ಕೈಗೊಳ್ಳಲು ವಿಫಲವಾಗಿದ್ದು, ಇದು ಭೀಕರ ದುರಂತಕ್ಕೆ ಕಾರಣವಾಯಿತು ಎಂದು ವರದಿಯಾಗಿದೆ. ಪಹಲ್ಗಾಮ್ ದಾಳಿ ಪಿಒಕೆ ಮತ್ತು ಪಾಕಿಸ್ತಾನದಲ್ಲಿ ನೆಲೆಗೊಂಡಿದ್ದ ಅಂತರರಾಷ್ಟ್ರೀಯ ನಿರ್ವಾಹಕರು ಕಾಲ ಕಾಲಕ್ಕೆ ಉಗ್ರರಿಗೆ ನಿರ್ದೇಶನಗಳನ್ನು ನೀಡುತ್ತಿದ್ದರು ಎಂದು ವರದಿಯಾಗಿದೆ. ದಾಳಿಯಲ್ಲಿ ಭಾಗಿಯಾಗಿರುವ ಉಗ್ರರು ಶಸ್ತ್ರಾಸ್ತ್ರಗಳನ್ನು ಬಳಸುವಲ್ಲಿ ಉತ್ತಮ ತರಬೇತಿ ಪಡೆದಿದ್ದರು ಮತ್ತು ಪ್ರವಾಸಿಗರು ಹೆಚ್ಚಿನ ಸಂಖ್ಯೆಯಲ್ಲಿ ಬರುವ ಜನಪ್ರಿಯ ಪ್ರವಾಸಿ ತಾಣಗಳಾಗಿದ್ದರೂ ಭದ್ರತಾ ಪಡೆಗಳ ನಿಯೋಜನೆ ಕಡಿಮೆ ಇರುವ ಪ್ರದೇಶಗಳ ವಿವರವಾದ ವರದಿ ಒದಗಿಸಿದ್ದರು ಎಂದು ಗುಪ್ತಚರ ಮೂಲಗಳು ತಿಳಿಸಿವೆ.



ದಾಳಿಕೋರರು ಹೆಲ್ಮೆಟ್ ಅಳವಡಿಸಿದ ಕ್ಯಾಮರಾಗಳನ್ನು ಹೊಂದಿದ್ದರು ಎಂದು ವರದಿಯು ಉಲ್ಲೇಖಿಸಿದ್ದು, ಇದು ಪ್ರವಾಸಿಗರ ಹತ್ಯಾಕಾಂಡವನ್ನು ರೆಕಾರ್ಡ್ ಮಾಡಲು ಮತ್ತು ದೃಶ್ಯಗಳನ್ನು ಅವರ ಭಯೋತ್ಪಾದಕ ಅಂಗಸಂಸ್ಥೆಗಳಿಗೆ ರವಾನಿಸಲು ಉದ್ದೇಶಿಸಲಾಗಿದೆ ಎಂದು ಮೂಲಗಳು ತಿಳಿಸಿವೆ. ಏತನ್ಮಧ್ಯೆ, ಬುಧವಾರ ಭದ್ರತಾ ಸಂಸ್ಥೆಗಳು ಭಯೋತ್ಪಾದಕ ದಾಳಿಯಲ್ಲಿ ಭಾಗಿಯಾಗಿದ್ದಾರೆಂದು ಶಂಕಿಸಲಾಗಿರುವ ಮೂವರು ವ್ಯಕ್ತಿಗಳ ರೇಖಾಚಿತ್ರಗಳನ್ನು ಬಿಡುಗಡೆ ಮಾಡಿದೆ. ಆರೋಪಿಗಳನ್ನು ಆಸಿಫ್ ಫೌಜಿ, ಸುಲೇಮಾನ್ ಶಾ ಮತ್ತು ಅಬು ತಲ್ಹಾ ಎಂದು ಗುರುತಿಸಲಾಗಿದ್ದು ಅವರು ಮೂಸಾ, ಯೂನಸ್ ಮತ್ತು ಆಸಿಫ್ ಎಂಬ ಸಂಕೇತನಾಮಗಳನ್ನು ಹೊಂದಿದ್ದಾರೆ ಎನ್ನಲಾಗಿದೆ.

ಅವರು ಪೂಂಚ್‌ನಲ್ಲಿ ಭಯೋತ್ಪಾದನೆಗೆ ಸಂಬಂಧಿಸಿದ ಘಟನೆಗಳಲ್ಲಿಯೂ ಭಾಗಿಯಾಗಿದ್ದರು ಎಂದು ಅಧಿಕಾರಿಗಳು ಹೇಳಿದ್ದಾರೆ.

ಪಾಕಿಸ್ತಾನ ಮೂಲದ ನಿಷೇಧಿತ ಲಷ್ಕರ್-ಎ-ತೈಬಾ ಭಯೋತ್ಪಾದಕ ಗುಂಪಿನ ಸಂಘಟನೆಯಾದ ರೆಸಿಸ್ಟೆನ್ಸ್ ಫ್ರಂಟ್ (ಟಿಆರ್‌ಎಫ್) ಮಂಗಳವಾರ ಮಧ್ಯಾಹ್ನ ದಾಳಿಯ ಹೊಣೆಯನ್ನು ಹೊತ್ತುಕೊಂಡಿತ್ತು. ಲಷ್ಕರ್-ಎ-ತೈಬಾ (ಎಲ್‌ಇಟಿ)ದ ಹಿರಿಯ ಕಮಾಂಡರ್ ಅಲಿಯಾಸ್ ಖಾಲಿದ್ ಎಂದೂ ಕರೆಯಲ್ಪಡುವ ಸೈಫುಲ್ಲಾ ಕಸೂರಿಯನ್ನು ಹತ್ಯಾಕಾಂಡದ ಹಿಂದಿನ ಸಂಚುಕೋರರು ಎಂದು ಗುಪ್ತಚರ ಸಂಸ್ಥೆಗಳು ಗುರುತಿಸಿವೆ. ಸೈಫುಲ್ಲಾ ಖಾಲಿದ್ ಪಾಕಿಸ್ತಾನದ ಗುಜ್ರನ್ ವಾಲಾ ನಗರದಿಂದ ಕಾರ್ಯನಿರ್ವಹಿಸುತ್ತಿದ್ದಾನೆ ಎಂದು ಮೂಲಗಳು ತಿಳಿಸಿವೆ.

ಕೇಂದ್ರ ಗೃಹ ಸಚಿವ ಅಮಿತ್ ಶಾ ಬುಧವಾರ ನಡೆದ ಭದ್ರತಾ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿದ್ದರು, ಇದರಲ್ಲಿ ಲೆಫ್ಟಿನೆಂಟ್ ಗವರ್ನರ್ ಕೂಡ ಭಾಗವಹಿಸಿದ್ದರು. ದೇಶವು ಭಯೋತ್ಪಾದನೆಗೆ ಮಣಿಯುವುದಿಲ್ಲ ಮತ್ತು ಪ್ರವಾಸಿಗರ ಹತ್ಯೆಗೆ ಕಾರಣರಾದವರನ್ನು ಬಿಡಲಾಗುವುದಿಲ್ಲ ಎಂದು ಅವರು ಪ್ರತಿಪಾದಿಸಿದ್ದಾರೆ. ಮೂಲಗಳ ಪ್ರಕಾರ, ಕೇಂದ್ರವು ಭದ್ರತೆ ಕುರಿತ ಸಂಪುಟ ಸಮಿತಿ ಮತ್ತು ಸರ್ವಪಕ್ಷ ಸಭೆಯನ್ನು ಕರೆದಿದ್ದು, ಈ ಸಂದರ್ಭದಲ್ಲಿ ಸರ್ಕಾರವು ಅಂತರರಾಷ್ಟ್ರೀಯ ಸಮುದಾಯವನ್ನು ವಿಶ್ವಾಸಕ್ಕೆ ತೆಗೆದುಕೊಳ್ಳುವ ಗುರಿಯನ್ನು ಹೊಂದಿದೆ

# ಪಹಲ್ಗಾಮ್ ಉಗ್ರರ ದಾಳಿ ಚರ್ಚೆಗೆ ಕಾಂಗ್ರೆಸ್ ತುರ್ತು ಕಾರ್ಯಕಾರಿಣಿ ಸಭೆ




ನವದೆಹಲಿಯಲ್ಲಿ ಗುರುವಾರ ನಡೆದ ಕಾಂಗ್ರೆಸ್ ಕಾರ್ಯಕಾರಿ ಸಮಿತಿ ಸಭೆಯಲ್ಲಿ ಪಹಲ್ಗಾಮ್ ಭಯೋತ್ಪಾದಕ ದಾಳಿಯ ಸಂತ್ರಸ್ತರಿಗೆ ಗೌರವ ಸಲ್ಲಿಸಲು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಪಕ್ಷದ ನಾಯಕರಾದ ಸೋನಿಯಾ ಗಾಂಧಿ, ರಾಹುಲ್ ಗಾಂಧಿ ಮತ್ತು ಕೆ.ಸಿ. ವೇಣುಗೋಪಾಲ್ ಅವರೊಂದಿಗೆ ಮೌನ ಆಚರಿಸಿದರು.

**ನವದೆಹಲಿ, ಏ.24:** ಪಹಲ್ಗಾಮ್ ಭಯೋತ್ಪಾದಕ ದಾಳಿಯ ಕುರಿತು ಚರ್ಚಿಸಲು ಕಾಂಗ್ರೆಸ್‌ನ ಉನ್ನತ ನಾಯಕರು ಗುರುವಾರ (ಏ.24) ಪಕ್ಷದ ಕಾರ್ಯಕಾರಿ ಸಮಿತಿಯ (ಸಿಡಬ್ಲ್ಯುಸಿ) ತುರ್ತು ಸಭೆ ನಡೆಸಿದರು. ಸಭೆಯಲ್ಲಿ ನಿರ್ಣಯಗಳನ್ನು ಕೈಗೊಳ್ಳಲಾಗಿದೆ ಎಂದು ಹೇಳಲಾಗಿದೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕಾಂಗ್ರೆಸ್ ನಾಯಕಿ ಸೋನಿಯಾ ಗಾಂಧಿ, ಪ್ರತಿಪಕ್ಷದ ನಾಯಕ ರಾಹುಲ್ ಗಾಂಧಿ, ಎಐಸಿಸಿ ಪ್ರಧಾನ ಕಾರ್ಯದರ್ಶಿಗಳಾದ ಕೆ.ಸಿ. ವೇಣು ಗೋಪಾಲ್, ಜೈರಾಮ್ ರಮೇಶ್, ಪ್ರಿಯಾಂಕಾ ಗಾಂಧಿ ವಾದ್ರಾ ಸೇರಿದಂತೆ ಹಲವರು ದೆಹಲಿಯ 24, ಅಕ್ಬರ್ ರಸ್ತೆಯ ಕಾಂಗ್ರೆಸ್ ಕಚೇರಿಯಲ್ಲಿ ನಡೆದ ಸಭೆಯಲ್ಲಿ ಭಾಗವಹಿಸಿದ್ದರು.

ಮೌನಾಚರಣೆ ಮಾಡುವ ಮೂಲಕ ಭಯೋತ್ಪಾದಕ ದಾಳಿಯಲ್ಲಿ ಸಾವಿಗೀಡಾದವರಿಗೆ ಸಭೆಯಲ್ಲಿ ಕಾಂಗ್ರೆಸ್ ನಾಯಕರು ನಮನ ಸಲ್ಲಿಸಿದರು. ರಾಹುಲ್ ಗಾಂಧಿ ಅವರು ಕಾಂಗ್ರೆಸ್ ಕಾರ್ಯಕಾರಿ ಸಮಿತಿ ಸಭೆಯಲ್ಲಿ ಭಾಗವಹಿಸಲು ಅಮೆರಿಕ ಪ್ರವಾಸವನ್ನು ಮೊಟಕು ಗೊಳಿಸಿ ಭಾರತಕ್ಕೆ ವಾಪಸ್ ಆಗಿದ್ದರು. ಕೇಂದ್ರ ಗೃಹ ಸಚಿವ ಅಮಿತ್ ಶಾ, ಜಮ್ಮು ಕಾಶ್ಮೀರದ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ಮತ್ತು ಕೇಂದ್ರಾಡಳಿತ ಪ್ರದೇಶದ ಹಿರಿಯ ಕಾಂಗ್ ನಾಯಕರಿಗೆ ಕರೆ ಮಾಡಿ ಭಯೋತ್ಪಾದಕ ದಾಳಿಯ ಕುರಿತು ಮಾಹಿತಿ ಪಡೆದುಕೊಂಡಿದ್ದಾರೆ ಎಂದು ಮಲ್ಲಿಕಾರ್ಜುನ ಖರ್ಗೆ ಮತ್ತು ರಾಹುಲ್ ಗಾಂಧಿ ತಿಳಿಸಿದ್ದಾರೆ.

# ಕಾಶ್ಮೀರದ ಪರಿಸ್ಥಿತಿ ಭಯಾನಕ: ಲಾಡ್

**ಬೆಂಗಳೂರು,ಏ.24:** ಈಗ ಕಾಶ್ಮೀರಕ್ಕೆ ಹೋಗುವುದು ಸ್ಮಶಾನಕ್ಕೆ ಹೋದಂತೆ. ಕಾಶ್ಮೀರದ ಪರಿಸ್ಥಿತಿ ತುಂಬಾ ಭಯಾನಕವಾಗಿದೆ. ಮಿಲಿಟರಿ ಮತ್ತು ಪ್ಯಾರಾ ಮಿಲಿಟರಿ ಪಡೆಗಳು ಎಲ್ಲೆಡೆ ಇದ್ದವು. ಎಲ್ಲಾ ಪ್ರವಾಸಿಗರು ತೀವ್ರ ಭಯ ಮತ್ತು ಆಘಾತದಲ್ಲಿದ್ದರು. ಅವರಲ್ಲಿ ಹೆಚ್ಚಿನವರು ಮಕ್ಕಳು, ಕುಟುಂಬ ಸದಸ್ಯರೊಂದಿಗೆ ಹೋಗಿದ್ದರು. ಪ್ರವಾಸಿಗರಲ್ಲಿರುವ ಭಯವನ್ನು ಪದಗಳಲ್ಲಿ ವ್ಯಕ್ತಪಡಿಸಲು ಸಾಧ್ಯವಿಲ್ಲ ಎಂದು ಕಾರ್ಮಿಕ ಸಚಿವ ಸಂತೋಷ್ ಲಾಡ್ ಅವರು ಗುರುವಾರ ಹೇಳಿದ್ದಾರೆ.



ಮರು ಕ್ಷಣದಲ್ಲಿ ಏನಾಗುತ್ತದೆ ಎಂದು ನಾನು ಸೇರಿದಂತೆ ಯಾರಿಗೂ ತಿಳಿದಿರಲಿಲ್ಲ. ಬೆಂಗಳೂರಿಗೆ ಸುರಕ್ಷಿತವಾಗಿ ಹಿಂತಿರುಗುವುದು ನಮ್ಮೆಲ್ಲರ ಅದೃಷ್ಟವಾಗಿತ್ತು. ಜನರಿಗೆ ಅತ್ಯಂತ ಭಯಾನಕ ಅನುಭವಗಳು ಆಗಿವೆ. ನಾನು ಇನ್ನೂ ಕೆಲವು ರಕ್ಷಣಾ ಕಾರ್ಯಾಚರಣೆಯ ಭಾಗವಾಗಿದ್ದೆ. ಆದರೆ ಇದು ಇನ್ನೂ ಭಯಾನಕವಾಗಿತ್ತು ಎಂದಿದ್ದಾರೆ.ಎಲ್ಲವೂ ಸರಿಯಾದ ನಂತರ ಮತ್ತು ಸೂಕ್ತ ಭದ್ರತಾ ವ್ಯವಸ್ಥೆಗಳನ್ನು ಮಾಡಿದ ನಂತರ ಪ್ರವಾಸಿಗರು ಅಲ್ಲಿಗೆ ಹೋಗುವ ಬಗ್ಗೆ ಯೋಚಿಸಬಹುದು ಎಂದು ಸಂತೋಷ್ ಲಾಡ್ ಅವರು ಇಂದು ಮಧ್ಯಾಹ್ನ ಕಾಶ್ಮೀರದ ಪಹಲ್ಗಾಮ್‌ನಿಂದ 180 ಪ್ರವಾಸಿಗರೊಂದಿಗೆ ಬೆಂಗಳೂರಿಗೆ ಆಗಮಿಸಿದ ನಂತರ ತಿಳಿಸಿದ್ದಾರೆ. ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ಹೊರಗೆ ಮಾಧ್ಯಮದವರೊಂದಿಗೆ ಮಾತನಾಡಿದ ಸಚಿವರು, "ಕಾಶ್ಮೀರದಲ್ಲಿರುವವರೆಗೂ ನಾನು ಸೇರಿದಂತೆ ಎಲ್ಲರೂ ತೀವ್ರ ಭಯದಲ್ಲಿದ್ದೆವು. ಕಾಶ್ಮೀರದ ಎಲ್ಲಾ ರಸ್ತೆಗಳನ್ನು ಸುತ್ತುವರಿಯಲಾಗಿತ್ತು. ನಾವು ಕರ್ನಾಟಕದ ಪ್ರವಾಸಿಗರಲ್ಲಿ ವಿಶ್ವಾಸವನ್ನು ತುಂಬಿದೆವು. ನಾನು 40ಕ್ಕೂ ಹೆಚ್ಚು ಸ್ಥಳಗಳಿಗೆ ಭೇಟಿ ನೀಡಿ ಪ್ರವಾಸಿಗರೊಂದಿಗೆ ವೈಯಕ್ತಿಕವಾಗಿ ಮಾತನಾಡಿದೆ. ರಾಜ್ಯದ ಶೇ.90 ರಿಂದ 95 ರಷ್ಟು ಜನ ಹಿಂತಿರುಗಿದ್ದಾರೆ. ಇನ್ನೂ ಅಲ್ಲಿರುವವರ ನಮ್ಮೊಂದಿಗೆ ಸಂಪರ್ಕ ನಡೆಸಲು ಸಾಧ್ಯವಾಗದಿರಬಹುದು. ಕರ್ನಾಟಕದ ಯಾರೂ ಅಲ್ಲಿ ಯಾವುದೇ ತೊಂದರೆ ಸಿಲುಕಿಲ್ಲ ಎಂದು ಹೇಳಿದ್ದಾರೆ.ಪಹಲ್ಗಾಮ್‌ನಲ್ಲಿ ನಡೆದ ಭೀಕರ ಭಯೋತ್ಪಾದಕ ದಾಳಿಯ ನಂತರ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕರ್ನಾಟಕದ ಜನರ ರಕ್ಷಣೆಗೆ ಮತ್ತು ಸುರಕ್ಷಿತವಾಗಿ ವಾಪಸ್ ಕರೆತರಲು ರಾಜ್ಯ ಸರ್ಕಾರದ ಪರವಾಗಿ ಲಾಡ್ ಅವರನ್ನು ಅಧಿಕಾರಿಗಳ ತಂಡದೊಂದಿಗೆ ಕಳುಹಿಸಿದ್ದರು.

# ರಾಜ್ಯದಲ್ಲಿ ಅವಧಿ ಮೀರಿ ನೆಲೆಸಿರುವ ವಿದೇಶಿಗರ ಬಗ್ಗೆ ಎಚ್ಚರಿಕೆ ವಹಿ: ಗೃಹ ಇಲಾಖೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ

**ಚಾಮರಾಜನಗರ, ಏ.24:** ಕರ್ನಾಟಕದಲ್ಲಿ ಅವಧಿ ಮೀರಿ ನೆಲೆಸಿರುವ ವಿದೇಶಿಗರ ಬಗ್ಗೆ ಎಚ್ಚರಿಕೆಯಿಂದ ಇರುವಂತೆ ಗೃಹ ಇಲಾಖೆಗೆ ಸೂಚನೆ ನೀಡಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಅವರು ಇಂದು ಮಲೆ ಮಹದೇಶ್ವರ ಹೆಲಿಪ್ಯಾಡ್ ನಲ್ಲಿ ಮಾಧ್ಯಮದವರ ಜೊತೆ ಮಾತನಾಡಿದರು. ಉಗ್ರರನ್ನು ಮಟ್ಟಹಾಕಬೇಕಿರುವುದು ಕೇಂದ್ರ ಸರ್ಕಾರದ ಜವಾಬ್ದಾರಿ ನೆಲೆಸಿರುವ ವಿದೇಶದವರ ಬಗ್ಗೆ ಕಣ್ಗಾವಲು ಇರಿಸಲು ಕೇಂದ್ರ ಗೃಹ ಸಚಿವರು ಸೂಚಿಸಿರುವ ಬಗ್ಗೆ ಪ್ರತಿಕ್ರಿಯೆ ನೀಡಿ ಉಗ್ರರು ಯಾವುದೇ ರಾಜ್ಯದಲ್ಲಿರಲಿ ಅವರನ್ನು ಮಟ್ಟಹಾಕಬೇಕಾಗಿರುವುದು ಕೇಂದ್ರ ಸರ್ಕಾರದ ಜವಾಬ್ದಾರಿ ಎಂದರು.

**ಬಂದೋಬಸ್ತು ಸಡಿಲಗೊಳಿಸಬಾರದಿತ್ತು:** ಉಗ್ರರ ಚಟುವಟಿಕೆಗಳಿಗೆ ಅವಕಾಶ ಕೊಡಕೂಡದು. ಪಹಲ್ಗಾಮ್ ಘಟನೆ ಅತ್ಯಂತ ಖಂಡನೀಯವಾದ ಹಾಗೂ ಅಮಾನುಷವಾದ ಘಟನೆ. ಇದನ್ನು ತೀವ್ರವಾಗಿ ಖಂಡಿಸುತ್ತೇನೆ. ಪುಲ್ವಾಮಾ ಘಟನೆಯೂ ಇದೇ ಜಿಲ್ಲೆಯಲ್ಲಿ ನಡೆದಿದ್ದರಿಂದ ಎಚ್ಚರಿಕೆಯಿಂದ ಇರಬೇಕಾಗಿತ್ತು. ಬಂದೋಬಸ್ತು ಸಡಿಲಗೊಳಿಸಬಾರದಿತ್ತು. ಇಲ್ಲಿ ಗುಪ್ತಚರ ವ್ಯವಸ್ಥೆಯ ವೈಫಲ್ಯವಾಗಿದೆ ಎಂದರು.



**ಉಗ್ರರನ್ನು ಹಾಕಲು ಎಲ್ಲ ಸಹಕಾರ:** ಘಟನೆ ನಡೆದ ಬಳಿಕ ಕ್ರಮ ತೆಗೆದುಕೊಳ್ಳುವುದು ಬೇರೆ. ಘಟನೆಯಾಗದಂತೆ ತೆಗೆದುಕೊಳ್ಳುವ ಕ್ರಮಗಳು ಬೇರೆ. ಅದನ್ನು ಕೇಂದ್ರ ಸರ್ಕಾರ ಮಾಡಬೇಕಿತ್ತು. ಪುಲ್ವಾಮಾ 40 ಸೈನಿಕರು ಪ್ರಾಣತೆತ್ತರು. ಈ ಘಟನೆಯಲ್ಲಿ 28 ಜನ ನಾಗರಿಕರು ಮೃತರಾಗಿದ್ದಾರೆ. ಇದನ್ನು ತ 'ಪ್ಪಿಸಲು ಕ್ರಮ ವಹಿಸಬೇಕಿತ್ತು.ಇಂಥ ಘಟನೆ ಮರುಕಳಿಸದಂತೆ ಎಚ್ಚರ ವಹಿಸಬೇಕು.ಉಗ್ರರು ಯಾವುದೇ ಧರ್ಮ ಜಾರಿಗೆ ಸೇರಿರಲಿ ಅವರೆಲ್ಲರನ್ನೂ ಮಟ್ಟ ಹಾಕಬೇಕಿರುವುದು ಸರ್ಕಾರದ ಜವಾಬ್ದಾರಿ ಅದಕ್ಕೆ ಬೇಕಾಗಿರುವ ಎಲ್ಲಾ ಸಹಕಾರ, ಬೆಂಬಲವನ್ನು ನಾವು, ನಮ್ಮ ಸರ್ಕಾರ ಪಕ್ಷ ಕೊಡುತ್ತದೆ ಎಂದರು.

**10ಲಕ್ಷ ಪರಿಹಾರ:**ಉಗ್ರರ ದಾಳಿಯಲ್ಲಿ ಮೃತಪಟ್ಟ ರಾಜ್ಯದ ಮೂವರ ಕುಟುಂಬಗಳಿಗೆ ತಲಾ 10 ಲಕ್ಷ ಪರಿಹಾರ ನೀಡಲಾಗುತ್ತಿದೆ. ಪೊಲೀಸ್ ಗೌರವದಿಂದ ಅಂತ್ಯಕ್ರಿಯೆ ನಡೆಯಲಿದೆ ಎಂದರು.

**ಕಾದು ನೋಡಿ:** ಬಜೆಟ್‌ನಲ್ಲಿ ಜಿಲ್ಲೆಗೆ ಯಾವುದೇ ಅನುದಾನ ಘೋಷಣೆಯಾಗಿಲ್ಲ ಎಂಬ ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿಗಳು ಸಚಿವ ಸಂಪುಟ ಸಭೆಯ ನಂತರ ಮಾತನಾಡುವುದಾಗಿ ತಿಳಿಸಿದರು.

ಕೇಂದ್ರ ಸರ್ಕಾರದ ರಾಜಕೀಯ ದ್ವೇಷ

ಕೇಂದ್ರ ಸರ್ಕಾರ ಮೇಕೆದಾಟು ಯೋಜನೆಗೆ ಒಪ್ಪಿಗೆ ನೀಡಿದರೆ ತಕ್ಷಣವೇ ಯೋಜನೆಯನ್ನು ಜಾರಿಗೆ ತರಲಾಗುವುದು. ಈ ಬಗ್ಗೆ ಪ್ರಧಾನಿ ,ಗೃಹ ಸಚಿವರನ್ನು ಭೇಟಿ ಮಾಡಿದ್ದರೂ ಏನು ಆಗಿಲ್ಲ. ಕೇಂದ್ರ ಸರ್ಕಾರ ಘೋಷಣೆ ಮಾಡಿದ್ದ ಅನುದಾನವನ್ನು ಕೊಡುತ್ತಿಲ್ಲ. 2023-24 ರಲ್ಲಿ ಕೇಂದ್ರ ಬಜೆಟ್ ನಲ್ಲಿ ಭದ್ರಾ ಮೇಲ್ದಂಡೆ ಯೋಜನೆಗೆ ಘೋಷಣೆ ಮಾಡಿದ್ದ 5300 ಕೋಟಿ ಅನುದಾನವನ್ನು ಈವರೆಗೆ ಕೊಟ್ಟಿಲ್ಲ. ಇದು ರಾಜಕೀಯ ದ್ವೇಷದಂತೆ ಕಾಣುತ್ತದೆ ಎಂದರು.

# ಮಹದೇಶ್ವರ ಬೆಟ್ಟ ಇನ್ನು ಮುಂದೆ ಮದ್ಯಪಾನಮುಕ್ತ

**ಮಲೈ ಮಹದೇಶ್ವರ ಏ24:** ಮಲೈ ಮಹದೇಶ್ವರ ಬೆಟ್ಟ ಇನ್ನು ಮುಂದೆ ಪಾನ ಮುಕ್ತ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಘೋಷಿಸಿದರು. ಇಲ್ಲಿಯವರೆಗೂ ಬೆಟ್ಟದಲ್ಲಿ, ಪ್ರಾಧಿಕಾರದ ವ್ಯಾಪ್ತಿಯಲ್ಲಿ ಮಾರಾಟ ಮುಕ್ತ ಇತ್ತು. ಇನ್ನು ಮುಂದೆ ಹೊರಗಿನಿಂದ ತರುವುದಕ್ಕೂ ತಡೆ ಹಾಕಬೇಕು ಎಂದು ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಮತ್ತು ಪ್ರಾಧಿಕಾರದ ಅಧಿಕಾರಿಗಳಿಗೆ ಸೂಚನೆ ನೀಡಿದರು. ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ನಡೆದ ಶ್ರೀ ಮಲೈ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಸಭೆಯಲ್ಲಿ ತೆಗೆದುಕೊಂಡ ಇತರೆ ನಿರ್ಣಯಗಳು.

ಹಿಂದಿನ ಪ್ರಾಧಿಕಾರದ ಸಭೆಯಲ್ಲಿ ತೆಗೆದುಕೊಂಡ ನಿರ್ಣಯಗಳು ಒಂದೂವರೆ ವರ್ಷದಿಂದ ಜಾರಿ ಆಗದೇ ಇರುವುದಕ್ಕೆ ಮುಖ್ಯಮಂತ್ರಿಗಳು ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಯವರನ್ನು ತೀವ್ರವಾಗಿ ಪ್ರಶ್ನಿಸಿದರು. ಪ್ರಾಧಿಕಾರದ ಕೆಲಸ ಕಾರ್ಯಗಳು, ಕಾಮಗಾರಿಗಳು ಸೂಕ್ತವಾಗಿ, ವೇಗವಾಗಿ ನಡೆಯಲು ಒಬ್ಬ ಂಇಇ ಯನ್ನು ಪ್ರಾಧಿಕಾರಕ್ಕೇ ನೇಮಿಸಲು ಲೋಕೋಪಯೋಗಿ ಇಲಾಖೆ ಕಾರ್ಯದರ್ಶಿ ಸತ್ಯನಾರಾಯಣ್ ಅವರಿಗೆ ಸೂಚಿಸಿದರು.

ಹಿಂದಿನ ಸಭೆಯ ನಿರ್ಣಯದಂತೆ ಪ್ರವಾಸಿಗರ ಶೆಲ್ಟರ್ ಮತ್ತು ಶೌಚಾಲಯಗಳ ಕಾಮಗಾರಿ ಪೂರ್ಣಗೊಳ್ಳದ ಬಗ್ಗೆ ಸಿಎಂ ತರಾಟೆಗೆ ತೆಗೆದುಕೊಂಡರು.

ಪ್ರಾಧಿಕಾರ ಮತ್ತು ಮಹದೇಶ್ವರ ಬೆಟ್ಟಕ್ಕೆ ಸೇರಿದ ಜಾಗದಲ್ಲಿ ನೆಲೆಸಿರುವ 13 ಕುಟುಂಬಗಳಿಗೆ ಪರ್ಯಾಯ ಸ್ಥಳ ಒದಗಿಸಿ ಸ್ಥಳಾಂತರಿಸುವ ಮತ್ತು ಉಳಿದಿರುವವರನ್ನು ಹಾಗೇ ಉಳಿಸಿ, ಹೊಸದಾಗಿ ವಾಣಿಜ್ಯ ಉದ್ದೇಶದ ನಿರ್ಮಾಣಗಳಿಗೆ ಅವಕಾಶ ಆಗದಂತೆ ಖಚಿತವಾಗಿ ತಡೆಯುವ ಬಗ್ಗೆ ಚರ್ಚೆ ನಡೆಸಲಾಯಿತು.

ಮಲೈ ಮಹದೇಶ್ವರ ಬೆಟ್ಟದಲ್ಲಿ ಅಕ್ರಮವಾಗಿ ಮದ್ಯ ಮಾರಾಟ ಆಗುವುದನ್ನು ಸಂಪೂರ್ಣ ತಡೆಯಬೇಕು. ಚಾಳಿ ಬಿದ್ದ ಆರೋಪಿಯೊಬ್ಬ ಗಡಿಪಾರು ಆದರೂ ಅಕ್ರಮ ಮಾರಾಟ ಮಾಡುತ್ತಿರುವುದನ್ನು ಅಧಿಕಾರಿಗಳಿಂದ ತಿಳಿದ ಸಿಎಂ ಅವರನ್ನು ತಕ್ಷಣ ಕಠಿಣ ಕಾನೂನಿನ ಅಡಿ ಕ್ರಮ ತೆಗೆದುಕೊಳ್ಳುವಂತೆ ಸೂಚಿಸಿದರು.

ಪ್ರಾಧಿಕಾರದಲ್ಲಿ ಕೆಲಸ ಮಾಡುವ 66 ಕಾರ್ಮಿಕ ಕುಟುಂಬಗಳಿಗೆ ತಲಾ 20 ಲಕ್ಷ ವೆಚ್ಚದಲ್ಲಿ, ಒಟ್ಟು 12-13 ಕೋಟಿ ವೆಚ್ಚದಲ್ಲಿ ಆದಷ್ಟು ಬೇಗ ನೂತನ ಮನೆ ಕಟ್ಟಿ ಕೊಡಲು ಸಭೆ ನಿರ್ಣಯ. ಮಲೈ ಮಹದೇಶ್ವರ ಬೆಟ್ಟದ ಪ್ರಸಾದ ಲಾಡುಗೆ , ತಿರುಪತಿ ದೇವಸ್ಥಾನದ ಮಾದರಿಯಲ್ಲಿ ನಂದಿನಿ ತುಪ್ಪ ಬಳಸಿ, ಪ್ರಸಾದದ ಗುಣಮಟ್ಟವನ್ನು ಇನ್ನಷ್ಟು ಉನ್ನತೀಕರಿಸುವುದು. ಮದಿನ ದಿನಗಳಲ್ಲಿ 100 ಗ್ರಾಂ ತೂಕದ ಪ್ರಸಾದ ಲಾಡುವನ್ನು ಕೇವಲ 35 ರೂಪಾಯಿಗೆ ವಿತರಿಸುವ ಬಗ್ಗೆ ಸಭೆ ನಿರ್ಣಯಿಸಿತು.




## ಜಮ್ಮು-ಕಾಶ್ಮೀರದಲ್ಲಿ ನಡೆದ ಭಯೋತ್ಪಾದನೆ ಕುರಿತು ಸಂಪುಟದಲ್ಲಿ ಖಂಡನಾ ನಿರ್ಣಯ

**ಬೆಂಗಳೂರು,ಏ,24;** ಜಮ್ಮು ಕಾಶ್ಮೀರದ ಪಹಲ್ಗಾಮ್ ನಲ್ಲಿ ನಡೆದ ಮುಗ್ಧ ನಾಗರಿಕರ ಮೇಲೆ ಉಗ್ರರು ನಡೆಸಿದ ದಾಳಿಯನ್ನು ರಾಜ್ಯ ಸಚಿವ ಸಂಪುಟ ಸಭೆ ಖಂಡನಾ ನಿರ್ಣಯ ಕೈಗೊಂಡಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ನಮ್ಮ ಸರ್ಕಾರವು ತೀವ್ರವಾಗಿ ಖಂಡಿಸುತ್ತದೆ. ಎಲ್ಲ ಮೃತರಿಗೆ ರಾಜ್ಯದ ಜನರ ಪರವಾಗಿ ನೋವಿನ ಸಂತಾಪಗಳನ್ನು ಸಲ್ಲಿಸಲು ತೀರ್ಮಾನಿಸಿದೆ. ಉಗ್ರರ ದಾಳಿಗಳು ಮನುಷ್ಯ ಕುಲದ ಮೇಲೆ ನಡೆಸುತ್ತಿರುವ ಭೀಬತ್ಸ ಕೃತ್ಯಗಳು ಎಂದು ತೀರ್ಮಾನಿಸಬೇಕು. ಎಲ್ಲ ರೀತಿಯ ಉಗ್ರವಾದವನ್ನು ಬುಡಸಮೇತ ಕಿತ್ತು ಹಾಕಲು ಇಡೀ ದೇಶ ಒಂದಾಗಿ ನಿಂತು ಶ್ರಮಿಸಬೇಕು. ಈ ಘಟನೆಗೆ ಕಾರಣವಾಗಿರುವ ವೈಫಲ್ಯಗಳ ಕುರಿತು ಸಮರ್ಥವಾಗಿ ಮತ್ತು ಸಮರ್ಪಕವಾಗಿ ತನಿಖೆ ನಡೆಸಬೇಕು ಎಂದು ಆಗ್ರಹಿಸಲು ತೀರ್ಮಾನಿಸಲಾಯಿತು, ಮುಂದೆ ಈ ರೀತಿಯ ಯಾವುದೇ ಘಟನೆಗಳು ನಡೆಯದಂತೆ ಎಚ್ಚರಿಕೆ ವಹಿಸಬೇಕು ಎಂದು ರಾಜ್ಯದ ಜನರ ಪರವಾಗಿ ಕೇಂದ್ರ ಸರ್ಕಾರವನ್ನು ಒತ್ತಾಯಿಸಿದೆ.

**ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ನಡೆದ ಶ್ರೀ ಮಲೈ ಮಹದೇಶ್ವರಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಸಭೆಯಲ್ಲಿ ತೆಗೆದುಕೊಂಡ ಇತರೆ ನಿರ್ಣಯಗಳು:**

- ಕಾಶ್ಮೀರ ಭಯೋತ್ಪಾದಕ ದಾಳಿಯಲ್ಲಿ ಮೃತರಾದ ಎಲ್ಲ ಹುತಾತ್ಮರಿಗೆ ಶ್ರದ್ಧಾಂಜಲಿ ಮತ್ತು ಧರ್ಮಗುರು ಪೋಪ್ ಅವರ ನಿಧನಕ್ಕೆ ಶ್ರದ್ಧಾಂಜಲಿ ಸಲ್ಲಿಸಲಾಯಿತು
- 3647 ಕೋಟಿ 42 ಲಕ್ಷ ಮೌಲ್ಯದ ಕಾಮಗಾರಿಗೆ ಕ್ಯಾಬಿನೆಟ್ ಅಂಗೀಕಾರ.
- PWD, ಬೃಹತ್-ಸಣ್ಣ ನೀರಾವರಿ ಇಲಾಖೆ, ಇಂಧನ ಇಲಾಖೆ, ಆರೋಗ್ಯ ಇಲಾಖೆ, ಗ್ರಾಮೀಣಾಭಿವೃದ್ಧಿ, ಬುಡಕಟ್ಟು ಅಭಿವೃದ್ಧಿ, ಬುಡಕಟ್ಟು ಹಳ್ಳಿಗಳಿಗೆ ರಸ್ತೆಗಳಿಗೆ
- 1787 ಕೋಟಿ ನೀರಾವರಿ, sc/st ಜನರ ವಸತಿ, ಕೇರಿಗಳಿಗೆ ಮೂಲಭೂತ ಸೌಕರ್ಯ ಒದಗಿಸಲಾಗುವುದು.
- ಮಾನವ-ಪ್ರಾಣಿ ಸಂಘರ್ಷ ತಡೆಯಲು 210 ಕೋಟಿ. ರೈಲ್ವೇ ಬ್ಯಾರಿಕೇಡ್ ಪೂರ್ಣಗೊಳಿಸಲಾಗುವುದು.
- ಕುಡಿಯುವ ನೀರಿಗಾಗಿ 315 ಕೋಟಿ,

ಕಲ್ಬುರ್ಗಿ ವಿಭಾಗದ ಕ್ಯಾಬಿನೆಟ್ ಸಭೆ ಬಳಿಕ ಇಂದು ಮೈಸೂರು ವಿಭಾಗದ ಸಂಪುಟ ಸಭೆ ನಡೆಸಿದ್ದೇವೆ. ಇದೇ ರೀತಿ ಬೆಳಗಾವಿ ವಿಭಾಗದ ಸಂಪುಟ ಸಭೆ ಬಿಜಾಪುರದಲ್ಲಿ, ಬೆಂಗಳೂರು ವಿಭಾಗದ ಸಭೆ ನಂದಿ ಬೆಟ್ಟದಲ್ಲಿ ನಡೆಯಲಿದೆ.

ಆರೋಗ್ಯ ಸುಧಾರಣೆಗೆ 228 ಕೋಟಿ, ಕೊಳ್ಳೇಗಾಲದಲ್ಲಿ ಜಿಲ್ಲಾ ಆಸ್ಪತ್ರೆ ನಿರ್ಮಾಣಕ್ಕೆ ಸಂಪುಟ ಅಂಗೀಕಾರ. 250 ಬೆಡ್ ಗಳ ಜಿಲ್ಲಾಸ್ಪತ್ರೆ.

- ಪ್ರವಾಸೋದ್ಯಮ ಇಲಾಖೆಗೆ 300 ಕೋಟಿ.
- ಹನೂರಿನಲ್ಲಿ ಹೊಸ ತಾಲ್ಲೂಕಿಗೆ ತಾಲ್ಲೂಕಾ ಆಸ್ಪತ್ರೆ, ತಾಲ್ಲೂಕಾ ಭವನ ನಿರ್ಮಾಣ.
- ಚಿಕ್ಕಹಲ್ಲೂರಿನಲ್ಲಿ ರಾಜಪ್ಪಾಜಿ, ಸಿದ್ದಪ್ಪಾಜಿ, ಮಂಟೇಸ್ವಾಮಿ ಅಭಿವೃದ್ಧಿ ಕೇಂದ್ರ.
- ಮೈಸೂರಿನ ತಾಲ್ಲೋಕಿನ ಇಲವಾಲದಲ್ಲಿ ಅಂತರಾಷ್ಟ್ರೀಯ ಕ್ರೀಡಾಂಗಣಕ್ಕೆ ಜಾಗ ಕೊಡಲು ಅಂಗೀಕಾರ
- 40 ಕೋಟಿ ಅಂದಾಜಿನಲ್ಲಿ ಬದನವಾಳು ಅಭಿವೃದ್ಧಿ.
- ಮೈಸೂರಿನ ವಿಮಾನ ನಿಲ್ದಾಣದ ರನ್ ವೇ ವಿಸ್ತರಣೆಗೆ 101 ಕೋಟಿ ಮೊತ್ತದ ಜಾಗ ನೀಡಲಾಗುವುದು.
- ಮೈಸೂರಿನ ಅಠಾರ ಕಚೇರಿಯ 100 ಕೋಟಿ ವೆಚ್ಚದ ಮ್ಯೂಸಿಯಂ ನಿರ್ಮಾಣಕ್ಕೆ ಒಪ್ಪಿಗೆ.
- ಗುಂಡ್ಲುಪೇಟೆ 110 ಕೆರೆಗಳಿಗೆ ನೀರು ತುಂಬಿಸುವ 475 ಕೋಟಿ ವೆಚ್ಚ.
- ಚಾಮರಾಜನಗರದಲ್ಲಿ ಹೊಸ ಪ್ರವಾಸಿ ಮಂದಿರ ನಿರ್ಮಾಣ, ಚಾಮರಾಜನಗರ ಟೌನ್ ನಲ್ಲಿ ಕುಡಿಯುವ ನೀರು, ಒಳ ಚರಂಡಿ ನಿರ್ಮಾಣ
- ಚಾಮರಾಜನಗರದಲ್ಲಿ ಕ್ರೀಡಾಂಗಣ ನಿರ್ಮಾಣಕ್ಕೆ 15 ಕೋಟಿ.
- *ಒಟ್ಟಾಗಿ, 3647.62 ಕೋಟಿ ವೆಚ್ಚದಲ್ಲಿ ಮೈಸೂರು ವಿಭಾಗದಲ್ಲಿ ತುರ್ತು ಅಭಿವೃದ್ಧಿ ಕಾರ್ಯಗಳು ನಡೆಯಲಿವೆ.

# ರಾಜ್ಯದ ಪ್ರವಾಸಿಗರಿಂದ ಜಮ್ಮು-ಕಾಶ್ಮೀರದ ಪ್ರಯಾಣ ರದ್ದು

**ಬೆಂಗಳೂರು,ಏ.24:** ಪಹಲ್ಗಾಮ್ ಭಯೋತ್ಪಾದಕ ದಾಳಿಯಿಂದ ಭಯಬೀತಗೊಂಡಿರುವ, ಕರ್ನಾಟಕದ ಅನೇಕ ಪ್ರವಾಸಿಗರು ಜಮ್ಮು ಮತ್ತು ಕಾಶ್ಮೀರಕ್ಕೆ ತಮ್ಮ ಪ್ರಯಾಣ ಬುಕಿಂಗ್‌ಗಳನ್ನು ರದ್ದುಗೊಳಿಸಿದ್ದಾರೆ.

ಕರ್ನಾಟಕ ಪ್ರವಾಸೋದ್ಯಮ ಸಂಘ (ಕೆಟಿಎಸ್) ಸಂಗ್ರಹಿಸಿದ ಪ್ರಾಥಮಿಕ ಮಾಹಿತಿಯ ಪ್ರಕಾರ, ಪ್ರವಾಸ ನಿರ್ವಾಹಕರ ಮೂಲಕ ಜಮ್ಮು ಮತ್ತು ಕಾಶ್ಮೀರಕ್ಕೆ ಹೋಗಲು ಯೋಜಿಸಿದ್ದ 5,000 ಕ್ಕೂ ಹೆಚ್ಚು ಪ್ರವಾಸಿಗರು ತಮ್ಮ ಬುಕಿಂಗ್ ಗಳನ್ನು ರದ್ದುಗೊಳಿಸಿದ್ದಾರೆ ಜೊತೆಗೆ ಹಣವನ್ನು ಕಳೆದುಕೊಳ್ಳುವ ಬಗ್ಗೆ ಚಿಂತಿಸುತ್ತಿಲ್ಲ.ಸಂಘಟಿತ ನಿರ್ವಾಹಕರ ಮೂಲಕ ಬುಕ್ ಮಾಡಿದ ಮತ್ತು ರದ್ದುಗೊಳಿಸಿದ ಜನರ ಸಂಖ್ಯೆ ದೊಡ್ಡದಾಗಿದೆ, ಆದರೆ ಅಸಂಘಟಿತ ನಿರ್ವಾಹಕರ ಮೂಲಕ ಹಾಗೆ ಮಾಡಿದವರ ಸಂಖ್ಯೆ ಇನ್ನೂ ಹೆಚ್ಚಾಗಿದೆ. ಮುಂದಿನ ಬಾರಿ ಟೂರಿಂಗ್ ಸೀಸನ್ ಅಕ್ಟೋಬರ್‌ನಿಂದ ಪ್ರಾರಂಭವಾದಾಗ ಮಾತ್ರ ಪ್ರವಾಸೋದ್ಯಮದ ಭವಿಷ್ಯ ತಿಳಿಯುತ್ತದೆ ಎಂದು ಕೆಟಿಎಸ್ ಕಾರ್ಯದರ್ಶಿ ಎಸ್ ಮಹಾಲಿಂಗಯ್ಯ ಹೇಳಿದರು.ಕರ್ನಾಟಕದಲ್ಲಿ ಸುಮಾರು 1,000 ದೇಶೀಯ ಪ್ರವಾಸ ನಿರ್ವಾಹಕರಿದ್ದು, ಅವರಲ್ಲಿ 100 ಜನರು ಕೆಟಿಎಸ್ನಲ್ಲಿ ನೋಂದಾಯಿಸಿಕೊಂಡಿದ್ದಾರೆ. ಜಮ್ಮು ಕಾಶ್ಮೀರಕ್ಕೆ ಹೋಗಿದ್ದ ಮತ್ತು ಬುಕಿಂಗ್ ಮಾಡಿದ ಜನರ ಬಗ್ಗೆ ಎಲ್ಲಾ ಪ್ರವಾಸ ನಿರ್ವಾಹಕರಿಂದ ಮಾಹಿತಿಯನ್ನು ಸಂಗ್ರಹಿಸಲಾಗುತ್ತಿದೆ ಎಂದು ಮಹಾಲಿಂಗಯ್ಯ ಹೇಳಿದರು.

ಮಂಗಳವಾರದ ಘಟನೆಯು ಕಾಶ್ಮೀರಕ್ಕೆ ಆಗಮಿಸುವ ವಿದೇಶಿ ಪ್ರವಾಸಿಗರ ಸಂಖ್ಯೆಯ ಮೇಲೆ ಮಾತ್ರವಲ್ಲದೆ ಇಡೀ ದೇಶದ ಮೇಲೆ ಪರಿಣಾಮ ಬೀರಿದೆ. ಇದು ದೇಶೀಯ ಪ್ರವಾಸೋದ್ಯಮ ಕ್ಷೇತ್ರದ ಮೇಲೂ ಪರಿಣಾಮ ಬೀರುತ್ತದೆ ಮತ್ತು ಅದರ ಪರಿಣಾಮವು ದೀರ್ಘಕಾಲದವರೆಗೆ ಇರುತ್ತದೆ. ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಇಲಾಖೆಯ ಅಧಿಕಾರಿಯೊಬ್ಬರು ಮಾತನಾಡಿ ಇತರ ರಾಜ್ಯಗಳಿಗೆ ಪ್ರವಾಸೋದ್ಯಮದ ಮೇಲೂ ಪರಿಣಾಮ ಬೀರುತ್ತದೆ ಎಂದು ಹೇಳಿದರು.

ಕರ್ನಾಟಕಕ್ಕೆ ಬರುವ ಜನರಲ್ಲಿಯೂ ಇದರ ಪರಿಣಾಮ ಕಂಡುಬರುತ್ತದೆ" ಎಂದು ಅವರು ಹೇಳಿದರು.ಜೂನ್ವರೆಗಿನ ಜಮ್ಮು ಮತ್ತು ಕಾಶ್ಮೀರಕ್ಕೆ ದೇಶೀಯ ಪ್ರವಾಸಿ ಋತುವು ಈಗ ಸಂಪೂರ್ಣವಾಗಿ ನಾಶವಾಗಿದೆ ಎಂದು ಪ್ರವಾಸ ನಿರ್ವಾಹಕರು ಹೇಳಿದ್ದಾರೆ. ಅಕ್ಟೋಬರ್ ಬುಕಿಂಗ್‌ಗಳ ಮೇಲೂ ಇದರ ಪರಿಣಾಮ ಕಂಡುಬರುತ್ತಿದೆ. ಅಮರನಾಥ, ವೈಷ್ಣೋದೇವಿ ಮತ್ತು ಸುತ್ತಮುತ್ತಲಿನ ಪ್ರದೇಶಗಳಿಗೆ 50% ಬುಕಿಂಗ್ಗಳನ್ನು ರದ್ದುಗೊಳಿಸಿರುವುದರಿಂದ ಧಾರ್ಮಿಕ ಪ್ರವಾಸೋದ್ಯಮದ ಮೇಲೂ ಪರಿಣಾಮ ಬೀರಿದೆ ಎಂದು ಪ್ರವಾಸ ನಿರ್ವಾಹಕರು ತಿಳಿಸಿದ್ದಾರೆ. ಸರ್ಕಾರವು ಪೂರ್ವಭಾವಿ ಕ್ರಮಗಳನ್ನು ತೆಗೆದುಕೊಂಡು ಪ್ರವಾಸಿಗರಲ್ಲಿ ವಿಶ್ವಾಸ ತುಂಬಿದರೆ ಪ್ರವಾಸೋದ್ಯಮವನ್ನು ಪುನರುಜ್ಜೀವನಗೊಳಿಸಬಹುದು ಎಂದು ಪ್ರವಾಸ ನಿರ್ವಾಹಕರು ಮತ್ತು ತಜ್ಞರು ಹೇಳಿದ್ದಾರೆ. ಸ್ಥಳದಲ್ಲಿ ಸಾಕಷ್ಟು ಭದ್ರತೆ ಇರಬೇಕು. ಸರ್ಕಾರವು ಭಾರತದಾದ್ಯಂತ ಹಸಿರು ಪೊಲೀಸ್ ತಂಡಗಳನ್ನು ನಿಯೋಜಿಸಬೇಕು. ಇವರು ಜನರು ಮತ್ತು ಪ್ರವಾಸಿ ಸ್ಥಳಗಳ ಮೇಲೆ ನಿಗಾ ಇಡಲು ಪ್ರವಾಸಿ ತಾಣಗಳಲ್ಲಿ ಸಮರ್ಪಿತ ಪೊಲೀಸ್ ಸಿಬ್ಬಂದಿ ನಿಯೋಜಿಸಬೇಕು. ಇದು ಬಹುಕಾಲದಿಂದ ಬಾಕಿ ಇರುವ ಬೇಡಿಕೆಯಾಗಿದೆ" ಎಂದು ಈಎಅಅಖ ಪ್ರವಾಸೋದ್ಯಮ ಸಮಿತಿಯ ಸದಸ್ಯ ಶಿವ ಷಣ್ಮುಖಂ ಹೇಳಿದರು.ಕೇಂದ್ರ, ರಾಜ್ಯ ಮತ್ತು ಕೇಂದ್ರಾಡಳಿತ ಪ್ರದೇಶ ಸರ್ಕಾರಗಳ ಜೊತೆಗೆ ಗೃಹ ಮತ್ತು ಪ್ರವಾಸೋದ್ಯಮ ಇಲಾಖೆಗಳು ಒಟ್ಟಾಗಿ ಕಠಿಣ ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂದು ಅವರು ಹೇಳಿದರು.

# ಸಿದ್ದರಾಮಯ್ಯ, ಖರ್ಗೆ ಜವಾಬ್ದಾರಿಯಿಂದ ಮಾತನಾಡಲಿ: ಬಿವೈವಿ

**ಬೆಂಗಳೂರು, ಏ.24:** ಜವಾಬ್ದಾರಿಯುತ ಸ್ಥಾನದಲ್ಲಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಸಚಿವ ಪ್ರಿಯಾಂಕ್ ಖರ್ಗೆ ಇವರುಗಳು ಹೊಣೆಯರಿತು ಮಾತನಾಡಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಹಾಗೂ ಶಾಸಕ ಬಿ.ವೈ. ವಿಜಯೇಂದ್ರ ಅವರು ತಿಳಿಸಿದ್ದಾರೆ. ಇಂದು ಮಾಧ್ಯಮಗಳ ಜೊತೆ ಮಾತನಾಡಿದ ಅವರು, ನೀವು ಕೇಂದ್ರದ ಬೇಹುಗಾರಿಕಾ ವೈಫಲ್ಯಗಳ ಬಗ್ಗೆ ಮಾತನಾಡುತ್ತೀರಿ. ಸಿದ್ದರಾಮಯ್ಯನವರೇ, ನೀವು ಸೋನಿಯಾ ಗಾಂಧಿ, ರಾಹುಲ್ ಗಾಂಧಿಗೆ ಪ್ರಶ್ನೆ ಮಾಡಬೇಕಿದೆ. ಕಾಂಗ್ರೆಸ್ಸಿನವರು ಸ್ವಾತಂತ್ರ್ಯ ಬಂದ ಬಳಿಕ ಈ ದೇಶವನ್ನು 60 ವರ್ಷಗಳ ಕಾಲ ಆಡಳಿತ ನಡೆಸಿದ್ದಾರೆ.ಭಯೋತ್ಪಾದನೆಯನ್ನು ಈ ದೇಶದಿಂದ ಕಿತ್ತು ಹಾಕಲು ಕಾಂಗ್ರೆಸ್ ಪಕ್ಷಕ್ಕೆ ಯಾಕೆ ಸಾಧ್ಯವಾಗಿಲ್ಲ ಎಂದು ಕೇಳಲು ಸವಾಲೆಸೆದರು.

ಇದರ ಬಗ್ಗೆ ಚರ್ಚಿಸುವುದನ್ನು ಬಿಟ್ಟು, ಇಂಥ ಸಂದಿಗ್ಧ ಪರಿಸ್ಥಿತಿಯಲ್ಲಿ ಪ್ರತಿಯೊಬ್ಬ ಭಾರತೀಯರೂ ಒಟ್ಟಾಗಿ, ಒಂದಾಗಿ ನಿಲ್ಲಬೇಕಾಗಿದೆ. ಈ ಜಗತ್ತಿಗೆ ಒಂದು ಸ್ಪಷ್ಟ ಸಂದೇಶ ನೀಡಬೇಕಾಗಿದೆ ಎಂದು ತಿಳಿಸಿದರು. ಭಯೋತ್ಪಾದನೆ ಎಂಬುದು ಕೇವಲ ಭಾರತಕ್ಕೆ ಸೀಮಿತವಾಗಿಲ್ಲ; ಇದು ಜಾಗತಿಕ ಸಮಸ್ಯೆ. ಹಾಗಾಗಿ ಪ್ರಧಾನಿ ನರೇಂದ್ರ ಮೋದಿಜೀ ಅವರು ಯಾವುದೇ ದೇಶಕ್ಕೆ ಹೋದಾಗಲೂ ಉಗ್ರವಾದವನ್ನು ಜಗತ್ತು ಖಂಡಿಸಬೇಕು; ಬುಡಸಮೇತ ಕಿತ್ತು ಹಾಕಬೇಕೆಂದು ಬಲವಾಗಿ ಪ್ರತಿಪಾದನೆ ಮಾಡುತ್ತಿದ್ದಾರೆ ಎಂದು ವಿವರಿಸಿದರು. ಸಿದ್ದರಾಮಯ್ಯ, ಮಲ್ಲಿಕಾರ್ಜುನ ಖರ್ಗೆ, ಪ್ರಿಯಾಂಕ್ ಖರ್ಗೆ ಅವರಿಗೆ ಕೇಳಲು ಬಯಸುತ್ತೇನೆ. ನೀವು ಮಲ್ಲಿಕಾರ್ಜುನ ಖರ್ಗೆ ಅವರ ಟ್ವೀಟ್ ನೋಡಿ. ಮಲ್ಲಿಕಾರ್ಜುನ ಖರ್ಗೆ ಅವರು ಟ್ವೀಟ್ನಲ್ಲಿ ಭಾರತೀಯ ಪ್ರವಾಸಿಗರ ಮೇಲೆ ಭಯೋತ್ಪಾದಕರು ದಾಳಿ ಮಾಡಿದ್ದಾಗಿ ಹೇಳಿದ್ದಾರೆ. ಪಾಪ ಮಲ್ಲಿಕಾರ್ಜುನ ಖರ್ಗೆ ಅವರಿಗೆ ಹಿಂದೂ ಎಂದು ಅನಿಸಲೇ ಇಲ್ಲ. ಉಗ್ರರು ಪ್ರತಿಯೊಬ್ಬರನ್ನು ಶೂಟ್ ಮಾಡಬೇಕಾದರೆ ಹಿಂದೂವೇ, ಮುಸಲ್ಮಾನರೇ ಎಂದು ಪತ್ತೆ ಹಚ್ಚಿ ಗುಂಡಿಟ್ಟು ಸಾಯಿಸಿದ್ದಾರೆ ಎಂದು ಟೀಕಿಸಿದರು. ಆದರೆ, ಮಲ್ಲಿಕಾರ್ಜುನ ಖರ್ಗೆ ಅವರಿಗೆ ಕೇವಲ ಭಾರತೀಯ ಪ್ರವಾಸಿಗರಷ್ಟೇ ಕಾಣುತ್ತಿದ್ದಾರೆ. ಇದು ದೇಶದ ದುರ್ದೈವ ಎಂದು ಬೇಸರ ವ್ಯಕ್ತಪಡಿಸಿದರು. ರಾಜಕಾರಣ ಮಾಡುವುದನ್ನು ಬಿಡಬೇಕಿದೆ. ಪ್ರತಿಯೊಬ್ಬ ಭಾರತೀಯರೂ ಒಟ್ಟಾಗಿ, ಒಂದಾಗಿ ನಿಲ್ಲಬೇಕೆಂದು ಮನವಿ ಮಾಡಿದರು. ಜಮ್ಮು ಕಾಶ್ಮೀರದ ಭಯೋತ್ಪಾದಕರ ದಾಳಿಯನ್ನು ಮೋದಿಜೀ ಅವರ ಸರಕಾರವು ಗಂಭೀರವಾಗಿ ಪರಿಗಣಿಸಿದೆ. ಆರ್ಟಿಕಲ್ 370 ರದ್ದತಿ ಹಿಂದೆ ಕಾಶ್ಮೀರವನ್ನು ಸಹಜ ಸ್ಥಿತಿಗೆ ತರುವ ಸದುದ್ದೇಶ ಇತ್ತು. ಪ್ರವಾಸಿಗರನ್ನು ಗುರಿ ಮಾಡಿ, ಜಮ್ಮು ಕಾಶ್ಮೀರಕ್ಕೆ ವಿದೇಶಿ ಪ್ರವಾಸಿಗರು ಬರಬಾರದು; ಅಲ್ಲಿನ ಯುವಕರಿಗೆ ಉದ್ಯೋಗ ಸಿಗಬಾರದು; ಯುವಜನತೆ ಬೀದಿಗೆ ಬಂದು ಅವರನ್ನು ಭಯೋತ್ಪಾದನೆಗೆ ಬಳಸಿಕೊಳ್ಳಬೇಕೆಂಬ ದುರುದ್ದೇಶ ಇದರ ಹಿಂದಿದೆ ಎಂಬ ಚರ್ಚೆಗಳು ನಡೆದಿವೆ ಎಂದು ತಿಳಿಸಿದರು.



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಲೈ ಮಹದೇಶ್ವರ ಬೆಟ್ಟದಲ್ಲಿ ನಿರ್ಮಿಸಿರುವ ವಜ್ರಮಲೆ ಭವನವನ್ನು ಲೋಕಾರ್ಪಣೆಗೊಳಿಸಿದರು.

# ಪಹಲ್ಗಾಮ್ ಭಯೋತ್ಪಾದಕ ದಾಳಿ-ಪಾಕಿಸ್ತಾನದ ಕುಮ್ಮಕ್ಕು ಜಿ20 ರಾಷ್ಟ್ರಗಳ ರಾಯಭಾರಿಗಳಿಗೆ ಭಾರತದ ವಿವರಣೆ

**ನವದೆಹಲಿ,ಏ.24:** ಪಹಲ್ಗಾಮ್ ಭಯೋತ್ಪಾದಕ ದಾಳಿ ಮತ್ತು ಪಾಕಿಸ್ತಾನದ ಸಂಪರ್ಕದ ಕುರಿತು ಭಾರತ ಗುರುವಾರ ಜಿ20 ರಾಷ್ಟ್ರಗಳ ರಾಯಭಾರಿಗಳು ಮತ್ತು ಇತರ ಹಲವು ನಿಕಟ ಪಾಲುದಾರ ರಾಷ್ಟ್ರಗಳ ರಾಯಭಾರಿಗಳಿಗೆ ವಿವರಿಸಿದೆ.



ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಶ್ರಿ ಅವರು ಎಸ್ಟೋನಿಯಾ, ಸ್ಲೋವಾಕ್ ಗಣರಾಜ್ಯ, ಲಿಥುವೇನಿಯಾ, ಬಲ್ಗೇರಿಯಾ, ಐರ್ಲೆಂಡ್, ಗ್ರೀಸ್, ಐಸ್‌ಲ್ಯಾಂಡ್, ಮಲೇಷ್ಯಾ, ಸ್ವಿಟ್ಜರ್ಲೆಂಡ್, ಜರ್ಮನಿ, ಫ್ರಾನ್ಸ್, ಜಪಾನ್, ಇಂಡೋನೇಷ್ಯಾ, ಮಲೇಷ್ಯಾ, ಓಮನ್, ಯುಎಇ, ಕತಾರ್, ನಾರ್ವೆಯ ರಾಯಭಾರಿಗಳು ಮತ್ತು ಉನ್ನತ ರಾಜತಾಂತ್ರಿಕರಿಗೆ ಪಹಲ್ಗಾಮ್ ಭಯೋತ್ಪಾದಕ ದಾಳಿಯ ಬಗ್ಗೆ ವಿವರಿಸಿದರು, ಇದರಲ್ಲಿ 26 ಪ್ರವಾಸಿಗರನ್ನು ಕ್ರೂರವಾಗಿ ಗುಂಡಿಕ್ಕಿ ಕೊಂದರು. ಪ್ರತ್ಯೇಕವಾಗಿ, ವಿದೇಶಾಂಗ ಸಚಿವ ಎಸ್ ಜೈಶಂಕರ್ ಮತ್ತು ಗೃಹ ಸಚಿವರು ಅಧ್ಯಕ್ಷ ದ್ರೌಪದಿ ಮುರ್ಮು ಅವರನ್ನು ಭೇಟಿ ಮಾಡಿ ತೆಗೆದುಕೊಂಡ ಕ್ರಮಗಳ ಬಗ್ಗೆ ವಿವರಿಸಿದರು. ಜಿ20 ರಾಷ್ಟ್ರಗಳು ಮತ್ತು ಇತರ ರಾಷ್ಟ್ರಗಳ ರಾಯಭಾರಿಗಳಿಗೆ ಸೌತ್ ಬ್ಲಾಕ್‌ನಲ್ಲಿ ವಿವರಿಸಲಾಯಿತು. ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಶ್ರಿ ಅವರು ಭಯೋತ್ಪಾದನೆಯ ವಿರುದ್ಧ ಭಾರತದ "ಶೂನ್ಯ ಸಹಿಷ್ಣುತೆ" ನೀತಿಯ ಬಗ್ಗೆಯೂ ಅವರಿಗೆ ತಿಳಿಸಿದರು.

ಬಿಹಾರದ ಮಧುಬನಿ ಜಿಲ್ಲೆಯಲ್ಲಿ ನಡೆದ ಸಮಾರಂಭದಲ್ಲಿ ಮಾತನಾಡಿದ ಪ್ರಧಾನಿ ಮೋದಿ, "ಭಾರತವು ಪ್ರತಿಯೊಬ್ಬ ಭಯೋತ್ಪಾದಕರನ್ನು, ಅವರನ್ನು ನಿರ್ವಹಿಸುವವರನ್ನು ಮತ್ತು ಅವರ ಬೆಂಬಲಿಗರನ್ನು ಗುರುತಿಸುತ್ತದೆ, ಟ್ರ್ಯಾಕ್ ಮಾಡುತ್ತದೆ ಮತ್ತು ಶಿಕ್ಷಿಸುತ್ತದೆ. ನಾವು (ಭಾರತ) ಅವರನ್ನು ಭೂಮಿಯ ತುದಿಯವರೆಗೆ ಹಿಂಬಾಲಿಸುತ್ತೇವೆ. ಅವರಿಗೆ ಅವರ ಕಲ್ಪನೆಗೂ ಮೀರಿ ಶಿಕ್ಷೆಯಾಗುತ್ತದೆ." "ಭಯೋತ್ಪಾದನೆಯ ವಿರುದ್ಧ ಕ್ರಮ ಕೈಗೊಳ್ಳಲು ಇದು ಸಕಾಲ" ಎಂದು ಪ್ರಧಾನಿ ಮೋದಿ ಹೇಳಿದರು.

1960 ರ ಸಿಂಧೂ ಜಲ ಒಪ್ಪಂದವನ್ನು ಸ್ಥಗಿತಗೊಳಿಸುವುದು, ಅಟ್ಟಾರಿ ಭೂ-ಸಾರಿಗೆ ಪೋಸ್ಟ್ ಅನ್ನು ಮುಚ್ಚುವುದು, ಪಾಕಿಸ್ತಾನಿ ಮಿಲಿಟರಿ ಅಟ್ಯಾಚ್ಗಳನ್ನು ಹೊರಹಾಕುವುದು ಮತ್ತು ಪಾಕಿಸ್ತಾನಿಗಳಿಗೆ ಇನ್ನು ಮುಂದೆ ವೀಸಾ ನೀಡದಿರುವ ನಿರ್ಧಾರ ಸೇರಿದಂತೆ ಪಾಕಿಸ್ತಾನದೊಂದಿಗಿನ ಸಂಬಂಧಗಳನ್ನು ಕೆಳಮಟ್ಟಕ್ಕಿಳಿಸುವುದಾಗಿ ಭಾರತ ಘೋಷಿಸಿದ ನಂತರ ರಾಯಭಾರಿಗಳೊಂದಿಗಿನ ಸಭೆ ಬಂದಿದೆ ಮತ್ತು ಭಾರತದಲ್ಲಿರುವವರು ಏ.27 ರೊಳಗೆ ಹೊರಹೋಗುವಂತೆ ತಿಳಿಸಲಾಯಿತು.


ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲಿನ ದಾಳಿಯನ್ನು ಖಂಡಿಸಿ ಮುಗ್ಧ ನಾಗರಿಕರ ನಷ್ಟಕ್ಕೆ ಶೋಕ ವ್ಯಕ್ತಪಡಿಸಲು ಮತ್ತು ಅವರ ಕುಟುಂಬಗಳಿಗೆ ನ್ಯಾಯ ದೊರಕಿಸಿಕೊಡುವಂತೆ ಒತ್ತಾಯಿಸಲು ಗುರುವಾರ ನವದೆಹಲಿಯ ಜಂತರ್ ಮಂತರ್‌ನಲ್ಲಿ ಶಾಂತಿಯುತ ಮೇಣದಬತ್ತಿ ಮೆರವಣಿಗೆ ನಡೆಸಿದ ಅಲ್.

# ಸರ್ವಪಕ್ಷ ಸಭೆಗೆ ಸಣ್ಣ ಪಕ್ಷಗಳಿಗಿಲ್ಲ ಆಹ್ವಾನ

**ನವದೆಹಲಿ, ಏ.24:** ಜಮ್ಮು ಕಾಶ್ಮೀರದ ಪಹಲ್ಗಾಮ್ನಲ್ಲಿ ನಡೆದ ಭಯೋತ್ಪಾದಕ ದಾಳಿಗೆ ಪ್ರತಿಕ್ರಿಯೆಯಾಗಿ ಕೇಂದ್ರ ಸರ್ಕಾರವು ಕರೆದಿದ್ದ ಸರ್ವಪಕ್ಷ ಸಭೆಯಿಂದ ತಮ್ಮ ಪಕ್ಷವನ್ನು ಹೊರಗಿಡಲಾಗುವ ಬಗ್ಗೆ ಗುರುವಾರ ಂಋಒಋಒ ನಾಯಕ ಮತ್ತು ಹೈದರಾಬಾದ್ ಸಂಸದ ಅಸಾದುದ್ದೀನ್ ಓವೈಸಿ ತೀವ್ರ ಟೀಕೆ ವ್ಯಕ್ತಪಡಿಸಿದ್ದಾರೆ.



ಸಂಸತ್ತಿನಲ್ಲಿ ಹೆಚ್ಚಿನ ಸದಸ್ಯರು ಇರುವ ಪಕ್ಷಗಳನ್ನು ಮಾತ್ರ ಸರ್ಕಾರವು ಈ ಸಭೆಯಗೆ ಆಹ್ವಾನಿಸಿದೆ ಎಂದು ಓವೈಸಿ ಆರೋಪಿಸಿದ್ದಾರೆ. ಪಹಲ್ಗಾಮ್ ದಾಳಿ ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಅವರೊಂದಿಗಿನ ಸಂಭಾಷಣೆಯನ್ನು ನೆನಪಿಸಿಕೊಂಡ ಅವರು, ಸಭೆಯನ್ನು ಹೆಚ್ಚು ದೀರ್ಘವಾಗಿ ನಡೆಸದಂತೆ ಕನಿಷ್ಠ ಐದರಿಂದ 10 ಸಂಸದರನ್ನು ಹೊಂದಿರುವ ಪಕ್ಷಗಳನ್ನು ಮಾತ್ರ ಸಭೆಗೆ ಆಹ್ವಾನಿಸಲಾಗಿದೆ ಎಂದು ಹೇಳಿದ್ದಾಗಿ ಓವೈಸಿ ಹೇಳಿದ್ದಾರೆ. ಕಡಿಮೆ ಸಂಸದರನ್ನು ಹೊಂದಿರುವ ಪಕ್ಷಗಳನ್ನು ಏಕೆ ಆಹ್ವಾನಿಸಬಾರದು ಎಂದು ನಾನು ಕೇಳಿದಾಗ, ಸಭೆ ತುಂಬಾ ದೀರ್ಘವಾಗುತ್ತದೆ ಎಂದು ಅವರು ಹೇಳಿದರು. ಈ ವೇಳೆ ನಾನು ನಮ್ಮಂತಹ ಸಣ್ಣ ಪಕ್ಷಗಳ ಬಗ್ಗೆ ಏನು ಅಭಿಪ್ರಾಯ ಎಂದು ಕೇಳಿದಾಗ ಅವರು ನನ್ನ ಧ್ವನಿ ತುಂಬಾ ಜೋರಾಗಿದೆ ಎಂದು ತಮಾಷೆ ಮಾಡಿದರು ಎಂದು ಓವೈಸಿ ಹೇಳಿದ್ದಾರೆ.

ಇಂತಹ ಗಂಭೀರ ಸಭೆಯು ಎಲ್ಲರನ್ನೂ ಒಳಗೊಳ್ಳುವಂತಿರಬೇಕು ಎಂದು ಓವೈಸಿ ಒತ್ತಿ ಹೇಳಿದ್ದಾರೆ. ಇದು ಬಿಜೆಪಿ ಅಥವಾ ಇನ್ನೊಂದು ಪಕ್ಷದ ಆಂತರಿಕ ಸಭೆಯಲ್ಲ. ಭಯೋತ್ಪಾದನೆ ಮತ್ತು ಭಯೋತ್ಪಾದಕರಿಗೆ ಆಶ್ರಯ ನೀಡುವ ದೇಶಗಳ ವಿರುದ್ಧ ಬಲವಾದ ಮತ್ತು ಒಗ್ಗಟ್ಟಿನ ಸಂದೇಶವನ್ನು ಕಳುಹಿಸಲು ಇರುವ ಸರ್ವಪಕ್ಷ ಸಭೆಯಾಗಿದೆ. ಎಲ್ಲಾ ಪಕ್ಷಗಳ ಕಳವಳಗಳನ್ನು ಕೇಳಲು ಪ್ರಧಾನಿ ನರೇಂದ್ರ ಮೋದಿ ಹೆಚ್ಚುವರಿಯಾಗಿ ಒಂದಿಷ್ಟು ಗಂಟೆ ಕಳೆಯಲು ಸಾಧ್ಯವಿಲ್ಲವೇ ಎಂದು ಅವರು ಕೇಳಿದ್ದಾರೆ. ಯಾವುದೇ ಪಕ್ಷವು ಪ್ರಸ್ತುತ ಸಂಪೂರ್ಣ ಬಹುಮತವನ್ನು ಹೊಂದಿಲ್ಲ ಮತ್ತು ಪಕ್ಷದ ಗಾತ್ರವನ್ನು ಲೆಕ್ಕಿಸದೆ ಎಲ್ಲಾ ಸಂಸದರನ್ನು ಜನರು ಆಯ್ಕೆ ಮಾಡಿದ್ದಾರೆ ಎಂದು ಓವೈಸಿ ಹೇಳಿದ್ದಾರೆ.

ನಿಮ್ಮ ಸ್ವಂತ ಪಕ್ಷಕ್ಕೆ ಬಹುಮತವಿಲ್ಲ. ಒಬ್ಬ ಸಂಸದರನ್ನು ಹೊಂದಿರುವ ಪಕ್ಷವಾಗಲಿ ಅಥವಾ 100 ಸಂಸದರನ್ನು ಹೊಂದಿರುವ ಪಕ್ಷವಾಗಲಿ, ಎಲ್ಲರೂ ಭಾರತೀಯರಿಂದ ಆಯ್ಕೆಯಾಗಿದ್ದಾರೆ. ಆದ್ದರಿಂದ ಇಂತಹ ಗಂಭೀರ ವಿಷಯದಲ್ಲಿ ಎಲ್ಲರ ಮಾತು ಕೂಡಾ ಕೇಳಬೇಕಿದೆ. ಇದು ರಾಜಕೀಯ ವಿಚಾರವಲ್ಲ, ರಾಷ್ಟ್ರೀಯ ವಿಷಯವಾಗಿದೆ. ಎಲ್ಲರ ಅಭಿಪ್ರಾಯವನ್ನೂ ಕೇಳಬೇಕು., ಅವರು ಒತ್ತಿ ಹೇಳಿದ್ದಾರೆ. ಸಂಸತ್ತಿನಲ್ಲಿ ಪ್ರತಿನಿಧಿಸುವ ಎಲ್ಲಾ ಪಕ್ಷಗಳನ್ನು ಚರ್ಚೆಗಳಲ್ಲಿ ಸೇರಿಸಿಕೊಳ್ಳುವಂತೆ ಅವರು ಪ್ರಧಾನಿ ನರೇಂದ್ರ ಮೋದಿಯವರನ್ನು ಒತ್ತಾಯಿಸಿದ್ದಾರೆ. ಇದನ್ನು ನಿಜವಾದ ಸರ್ವಪಕ್ಷ ಸಭೆಯನ್ನಾಗಿ ಮಾಡಲು ನಾನು ಪ್ರಧಾನಿ ನರೇಂದ್ರ ಮೋದಿಯವರನ್ನು ಒತ್ತಾಯಿಸುತ್ತೇನೆ. ಸಂಸತ್ತಿನಲ್ಲಿ ಸಂಸದರನ್ನು ಹೊಂದಿರುವ ಪ್ರತಿಯೊಂದು ಪಕ್ಷವನ್ನು ಆಹ್ವಾನಿಸಬೇಕು. ಎಂದು ಅವರು ಆಗ್ರಹಿಸಿದ್ದಾರೆ.


ಸಚಿವರಾದ ಜೈಶಂಕರ್ ಮತ್ತು ಅಮಿತ್ ಶಾ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿ ಮಾಡಿ ಪಹಲ್ಗಾಮ್ ದಾಳಿ ಹಿನ್ನೆಲೆಯಲ್ಲಿ ಕೈಗೊಂಡ ಕ್ರಮಗಳ ಬಗ್ಗೆ ವಿವರಿಸಿದರು.

# ಮೂವರು ನಕ್ಸಲರ ಹತ್ಯೆ

**ರಾಯಪುರ, ಏ.24:** ಛತ್ತೀಸ್‌ಗಢದ ಬಿಜಾಪುರ ಜಿಲ್ಲೆಯ ಕರೇಗುಟ್ಟಾ ಪ್ರದೇಶದಲ್ಲಿ ಭದ್ರತಾ ಪಡೆಗಳು ನಡೆಸಿದ ಬೃಹತ್ ನಕ್ಸಲ್ ವಿರೋಧಿ ಕಾರ್ಯಾಚರಣೆಯಲ್ಲಿ ಮೂವರು ನಕ್ಸಲರು ಸಾವಿಗೀಡಾಗಿದ್ದಾರೆ ಎಂದು ಪೊಲೀಸ್ ಅಧಿಕಾರಿಗಳು ಗುರುವಾರ ತಿಳಿಸಿದ್ದಾರೆ.



ಛತ್ತೀಸ್‌ಗಢದ ನಾರಾಯಣಪುರದಲ್ಲಿ ನಾಲ್ವರು ಮಹಿಳೆಯರು ಸೇರಿದಂತೆ ಐವರು ನಕ್ಸಲರು ಶರಣಾದ ಬಳಿಕ ಏ.21 ಸೋಮವಾರ ಶೋಧ ಕಾರ್ಯಾಚರಣೆಯನ್ನು ಪ್ರಾರಂಭಿಸಲಾಗಿದೆ ಎಂದು ಇಂಡೋ ಟಿಬೆಟಿಯನ್ ಗಡಿ ಪೊಲೀಸರು (ಐಟಿಬಿಪಿ) ತಿಳಿಸಿದ್ದಾರೆ. ಇಲ್ಲಿಯವರೆಗೆ, ಎನ್ಕೌಂಟರ್ ನಡೆದ ಸ್ಥಳದಿಂದ ಮೂವರು ನಕ್ಸಲರ ಶವಗಳನ್ನು ವಶಪಡಿಸಿಕೊಳ್ಳಲಾಗಿದೆ. ಭೀಕರ ಗುಂಡಿನ ಚಕಮಕಿಯಲ್ಲಿ ಹಲವಾರು ಇತರ ಮಾವೋವಾದಿಗಳು ಸಾವನ್ನಪ್ಪಿರುವ ಶಂಕೆಯಿದೆ ಎಂದು ವರದಿಗಳು ಹೇಳಿವೆ.

ಛತ್ತೀಸ್‌ಗಢದ ಬಸ್ತಾರ್ ಪ್ರದೇಶದಲ್ಲಿ ಪ್ರಾರಂಭಿಸಲಾದ ಅತಿದೊಡ್ಡ ದಂಗೆ ನಿಗ್ರಹ ಕಾರ್ಯಾಚರಣೆಗಳಲ್ಲಿ ಒಂದಾದ ಈ ಕಾರ್ಯಾಚರಣೆಯಲ್ಲಿ, ಜಿಲ್ಲಾ ಮೀಸಲು ಪಡೆ, ಬಸ್ತಾರ್ ಫೈಟರ್ಸ್, ವಿಶೇಷ ಕಾರ್ಯಪಡೆ , ರಾಜ್ಯ ಪೊಲೀಸರ ಎಲ್ಲಾ ಘಟಕಗಳು, ಹಾಗೆಯೇ ಕೇಂದ್ರ ಮೀಸಲು ಪೊಲೀಸ್ ಪಡೆ ಮತ್ತು ಅದರ ಕಮಾಂಡೋ ಬೆಟಾಲಿಯನ್ಸ್ ಫಾರ್ ರೆಸಲ್ಯೂಟ್ ಆಕ್ಷನ್ ಸೇರಿದಂತೆ ವಿವಿಧ ಘಟಕಗಳಿಗೆ ಸೇರಿದ ಸುಮಾರು 10,000 ಭದ್ರತಾ ಸಿಬ್ಬಂದಿ ಭಾಗವಹಿಸಿದ್ದಾರೆ ಎಂದು ವರದಿಯಾಗಿದೆ. ಈ ಕಾರ್ಯಾಚರಣೆಗೆ ತೆಲಂಗಾಣ ಪೊಲೀಸರು ಕೂಡ ಸಹಕಾರ ನೀಡಿದ್ದಾರೆ ಎಂದು ತಿಳಿದು ಬಂದಿದೆ.

ನಕ್ಸಲೀಯರ ಪ್ರಬಲ ಮಿಲಿಟರಿ ಗುಂಪಾದ ಬೆಟಾಲಿಯನ್ ನಂ.1 ಮತ್ತು ತೆಲಂಗಾಣ ರಾಜ್ಯ ಮಾವೋವಾದಿಗಳ ಸಮಿತಿಯ ಹಿರಿಯ ಕೇಡರ್ಗಳ ಉಪಸ್ಥಿತಿಯ ಬಗ್ಗೆ ಮಾಹಿತಿಯ ಆಧಾರದ ಮೇಲೆ ಕಾರ್ಯಾಚರಣೆ ಪ್ರಾರಂಭಿಸಲಾಗಿದೆ. ಇದು ಇನ್ನೂ ಹಲವು ದಿನಗಳವರೆಗೆ ಮುಂದುವರೆಯಲಿದೆ ಎಂದು ವರದಿಗಳು ಹೇಳಿವೆ. ?ದಟ್ಟ ಕಾಡು ಮತ್ತು ಬೆಟ್ಟಗಳಿಂದ ಆವೃತವಾದ ಪ್ರದೇಶವನ್ನು ಮಾವೋವಾದಿಗಳ ಬೆಟಾಲಿಯನ್ ನಂ. 1 ರ ನೆಲೆ ಎಂದು ಪರಿಗಣಿಸಲಾಗಿದೆ ಎಂದು ವರದಿ ತಿಳಿಸಿದೆ.

ಐವರು ಸಕ್ರಿಯ ನಕ್ಸಲರಾದ ದಾಸ್ರಿ ಧ್ರುವ (26), ಚನ್ನು ಗೋಟಾ (28), ಜ್ಯೋತಿ ವಡ್ಡೆ (19), ಸೀತಾ ವಡ್ಡೆ (19), ಸುನೀತಾ ವಡ್ಡೆ (25) ಶರಣಾಗಿದ್ದಾರೆ. ಅವರಿಗೆ ತಲಾ 50,000 ರೂಪಾಯಿ ಚೆಕ್ ಹಸ್ತಾಂತರಿಸಲಾಗಿದೆ, ಎಂದು ಐಟಿಬಿಪಿ ಹೇಳಿದೆ. ನಕ್ಸಲರ ಶರಣಾಗತಿ ಬಳಿಕ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಸುಕ್ಮಾ ಪೊಲೀಸ್ ವರಿಷ್ಠಾಧಿಕಾರಿ ಕಿರಣ್ ಗಂಗಾರಾಮ್ ಚವಾಣ್, ಶರಣಾದ ನಕ್ಸಲರು ಸರ್ಕಾರದ ಶರಣಾಗತಿ ನೀತಿಯಡಿಯಲ್ಲಿ ಎಲ್ಲಾ ಪ್ರಯೋಜನಗಳನ್ನು ಪಡೆಯಲಿದ್ದಾರೆ ಎಂದಿದ್ದಾರೆ.

ಶರಣಾದ ನಕ್ಸಲರು ಮಾದ್ ಮತ್ತು ನುವಾಪಾ ವಿಭಾಗಗಳಿಂದ ಬಂದವರು. ಸರ್ಕಾರದ ಎಲ್ಲಾ ಸವಲತ್ತುಗಳನ್ನು ಅವರಿಗೆ ನೀಡಲಾಗುವುದು. ಶರಣಾದವರಲ್ಲಿ ವಿವಿಧ ಶ್ರೇಣಿಯ ನಕ್ಸಲರಿದ್ದಾರೆ. ಕೆಲವು ನಕ್ಸಲರಿಗೆ 5 ಲಕ್ಷ ರೂಪಾಯಿ ಬಹುಮಾನ ಘೋಷಣೆಯಾಗಿದ್ದರೆ, ಇನ್ನು ಕೆಲವರಿಗೆ 8 ಲಕ್ಷ ರೂಪಾಯಿ ಬಹುಮಾನ ಘೋಷಣೆಯಾಗಿತ್ತು ಎಂದು ಸುಕ್ಮಾ ಎಸ್ಪಿ ಹೇಳಿದ್ದಾರೆ. ಈ ತಿಂಗಳ ಆರಂಭದಲ್ಲಿ, ದಂತೇವಾಡದಲ್ಲಿ ಮೂವರು ನಗದು ಬಹುಮಾನ ಘೋಷಣೆಯಾದವರು ಸೇರಿದಂತೆ 26 ಮಾವೋವಾದಿಗಳು ಹಿರಿಯ ಪೊಲೀಸ್ ಅಧಿಕಾರಿಗಳು ಮತ್ತು ಕೇಂದ್ರ ಮೀಸಲು ಪೊಲೀಸ್ ಪಡೆ (ಸಿಆರ್‌ಪಿಎಫ್) ಅಧಿಕಾರಿಗಳ ಮುಂದೆ ಶರಣಾಗಿದ್ದರು.

# ದೇವಾಲಯ ಪ್ರವೇಶ ನಿರಾಕರಣೆ
## ಅಧಿಕಾರಿಗಳ ಮೂಲಕ ಒಳಹೋದ ದಲಿತರು

**ಚೆನ್ನೈ ಏ. 24:** ತಮಿಳುನಾಡಿನ ನಾಮಕ್ಕಲ್ ಜಿಲ್ಲೆಯ ಹಳ್ಳಿಯೊಂದರಲ್ಲಿ ಹಬ್ಬದ ಸಂದರ್ಭದಲ್ಲಿ ಕೆಲವು ದಲಿತ ಗ್ರಾಮಸ್ಥರು ದೇವಸ್ಥಾನಕ್ಕೆ ಪ್ರವೇಶಿಸುವುದನ್ನು ಜಾತಿ ಹಿಂದೂಗಳು ತಡೆದಾಗ ಅವ್ಯವಸ್ಥೆ ಭುಗಿಲೆದ್ದಿತು. ಸೋಮವಾರದಿಂದ ಪ್ರಾರಂಭವಾದ ಮಹಾ ಮಾರಿಯಮ್ಮನ್ ದೇವಸ್ಥಾನದ ವಾರ್ಷಿಕ ಉತ್ಸವ ನಡೆಯುತ್ತಿರುವಾಗ ಮಂಗಳವಾರ ವೀಸನಂ ಗ್ರಾಮದ ನಿವಾಸಿಗಳು ದೇವಾಲಯಕ್ಕೆ ಪ್ರವೇಶಿಸುವುದನ್ನು ತಡೆದರು.

ಹಿಂದೂ ಧಾರ್ಮಿಕ ಮತ್ತು ದತ್ತಿ ಮಂಡಳಿಯಿಂದ ನಿರ್ವಹಿಸಲ್ಪಡುವ ದೇವಾಲಯದ ಉತ್ಸವದಲ್ಲಿ ಭಾಗವಹಿಸಲು ಮತ್ತು ದೇವಾಲಯದೊಳಗೆ ಪ್ರಾರ್ಥನೆ ಸಲ್ಲಿಸಲು ದಲಿತ ಗ್ರಾಮಸ್ಥರು ವಿನಂತಿಸಿದ್ದರು. ಆದಾಗ್ಯೂ, ಸವರ್ಣೀಯ ಜಾತಿಯ ಗ್ರಾಮಸ್ಥರು ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿ ದೇವಾಲಯಕ್ಕೆ ಪ್ರವೇಶಿಸುವುದನ್ನು ತಡೆದರು. ವರದಿಯ ಪ್ರಕಾರ, ದಲಿತರು ಈ ದೇವಸ್ಥಾನಕ್ಕೆ ಬರುವ ಬದಲು ತಮ್ಮದೇ ಆದ ದೇವಸ್ಥಾನವನ್ನು ನಿರ್ಮಿಸಿಕೊಳ್ಳಿ ಎಂದು ಅವರು ಹೇಳಿದ್ದರು ಎನ್ನಲಾಗಿದೆ.

ಉತ್ಸವಕ್ಕೆ ಮುಂಚಿತವಾಗಿ ದುಷ್ಕರ್ಮಿಗಳು ಕಂಬ (ದೇವಾಲಯದ ಉತ್ಸವದ ಆರಂಭವನ್ನು ಗುರುತಿಸಲು ಇರಿಸಲಾದ ಕಂಬ) ತೆಗೆದು ಹತ್ತಿರದ ಬಾವಿಗೆ ಎಸೆದಿದ್ದರು, ಇದು ಪ್ರದೇಶದಲ್ಲಿ ಉದ್ವಿಗ್ನತೆಯನ್ನು ಹೆಚ್ಚಿಸಿತು. ಸವರ್ಣೀಯರು ಮತ್ತು ದಲಿತರ ನಡುವಿನ ಪರಿಸ್ಥಿತಿ ಉಲ್ಬಣಗೊಂಡಾಗ ಸ್ಥಳೀಯ ಅಧಿಕಾರಿಗಳು ಮತ್ತು ಪೊಲೀಸರನ್ನು ಗ್ರಾಮಕ್ಕೆ ಕರೆಸಲಾಯಿತು. ದೇವಾಲಯ ಸಾರ್ವಜನಿಕರಿಗೆ ಸಂಬಂಧಿಸಿದೆ ಮತ್ತು ಸರ್ಕಾರ ನಡೆಸುವ ಮಾನವ ಸಂಪನ್ಮೂಲ ಮತ್ತು ಸಿಇ ಇಲಾಖೆಯ ಅಡಿಯಲ್ಲಿದೆ ಎಂದು ಅಧಿಕಾರಿಗಳು ಪ್ರತಿಪಾದಿಸಿದರು. ಆದ್ದರಿಂದ, ಎಲ್ಲಾ ಹಿಂದೂಗಳು ಅಲ್ಲಿ ಪ್ರಾರ್ಥನೆ ಮಾಡುವ ಹಕ್ಕನ್ನು ಹೊಂದಿದ್ದಾರೆ ಎಂದರು. ಇದರ ಹೊರತಾಗಿಯೂ, ಮೇಲ್ಜಾತಿಯ ಕೆಲವರು ದಲಿತರ ಪ್ರವೇಶವನ್ನು ವಿರೋಧಿಸುತ್ತಲೇ ಇದ್ದರು. ಯಾವುದೇ ಹಿಂಸಾಚಾರವನ್ನು ತಪ್ಪಿಸಲು, ಪೊಲೀಸರು ರಕ್ಷಣೆ ನೀಡಿದರು ಮತ್ತು ದಲಿತರು ದೇವಾಲಯಕ್ಕೆ ಪ್ರವೇಶಿಸಲು ಅವಕಾಶ ನೀಡಿದರು. ಇದನ್ನು ನೋಡಿದ ಹಲವಾರು ಮೇಲ್ಜಾತಿ ಮಹಿಳೆಯರು ದೇವಾಲಯದ ಸುತ್ತಲೂ ಜಮಾಯಿಸಿ, ಪ್ರತಿಭಟನೆ ನಡೆಸಲು ಪ್ರಾರಂಭಿಸಿದರು. ದೇವಾಲಯವನ್ನು ಮುಚ್ಚಬೇಕೆಂದು ಒತ್ತಾಯಿಸಿದರು ಮತ್ತು ಪೊಲೀಸರನ್ನು ಆವರಣದಿಂದ ಹೊರಹೋಗುವಂತೆ ಕೇಳಿದರು. ಸೆಪ್ಟೆಂಬರ್ 2024ರಲ್ಲಿ ತಿರುವಳ್ಳೂರು ಜಿಲ್ಲೆಯಲ್ಲಿ ಇದೇ ರೀತಿಯ ಘಟನೆ ಸಂಭವಿಸಿತು, ದಲಿತ ಗ್ರಾಮಸ್ಥರಿಗೆ ಹಿಂದೂ ಧಾರ್ಮಿಕ ಮತ್ತು ದತ್ತಿ ಮಂಡಳಿಗೆ ಒಳಪಟ್ಟ ಎಟ್ಟಿಯಮ್ಮನ್ ದೇವಾಲಯಕ್ಕೆ ಪ್ರವೇಶ ನಿರಾಕರಿಸಲಾಯಿತು, ಆವರಣಕ್ಕೆ ಪ್ರವೇಶಿಸಲು ಬಳಸುವ ಮಾರ್ಗದ ವಿವಾದದಿಂದಾಗಿ ಇದು ಸಂಭವಿಸಿತು. ಪ್ರಕ್ಷುಬ್ಧತೆ ಹೆಚ್ಚಾಯಿತು, ಅಧಿಕಾರಿಗಳು ಆಗ ದೇವಾಲಯವನ್ನು ತಾತ್ಕಾಲಿಕವಾಗಿ ಮುಚ್ಚಲು ಕಾರಣವಾಯಿತು. ಇದರ ನಂತರ, ದಲಿತರು ದೇವಾಲಯಕ್ಕೆ ಪ್ರವೇಶಿಸಲು ಮತ್ತು ಪ್ರಾರ್ಥನೆ ಸಲ್ಲಿಸಲು ಅವಕಾಶ ನೀಡಲಾಯಿತು.

# ತ್ರಿವಳಿ ತಲಾಖ್ ಮಾತ್ರ ನಿಷೇಧ, ತಲಾಖ್-ಇ-ಅಹ್ಸಾನ್ ಅಲ್ಲ: ಕೋರ್ಟ್

**ಮುಂಬೈ, ಏ.24:** ಮುಸ್ಲಿಂ ಮಹಿಳೆಯರ (ವಿವಾಹದ ಹಕ್ಕುಗಳ ರಕ್ಷಣೆ) ಕಾಯ್ದೆ-2019 ತಲಾಖ್-ಇ-ಬಿದತ್ ಹೆಸರಿನ ದಿಢೀರ್ ಮತ್ತು ಬದಲಿಸಲಾಗದ ವಿಚ್ಛೇದನ ನೀಡುವ ಪದ್ಧತಿಗೆ ಮಾತ್ರ ಅನ್ವಯಿಸುತ್ತದೆ, ಅಲ್ಲದೆ ಇಸ್ಲಾಂನಲ್ಲಿ ತಲಾಖ್-ಇ-ಅಹ್ಸಾನ್ ಎಂದು ಕರೆಯಲಾಗುವ ಸಾಂಪ್ರದಾಯಿಕ ವಿಚ್ಛೇದನಕ್ಕೆ ಅಲ್ಲ ಎಂದು ಬಾಂಬೆ ಹೈಕೋರ್ಟ್ ಹೇಳಿದೆ.

ದಿಢೀರ್ ತ್ರಿವಳಿ ತಲಾಖ್ ನಿಷೇಧಿಸುವ ಕಾಯ್ದೆಯಡಿ ಮುಸ್ಲಿಂ ವ್ಯಕ್ತಿ ಮತ್ತು ಅವರ ಪೋಷಕರ ವಿರುದ್ಧ ದಾಖಲಾಗಿದ್ದ ಪೊಲೀಸ್ ಪ್ರಕರಣವನ್ನು ರದ್ದುಗೊಳಿಸುವಾಗ ನ್ಯಾಯಾಲಯ ಈ ಹೇಳಿಕೆ ನೀಡಿದೆ. ತಲಾಖ್-ಎ-ಅಹ್ಸಾನ್ ವಿಧಾನವನ್ನು ಅನುಸರಿಸಿ ಗಂಡ ತನ್ನ ಹೆಂಡತಿಗೆ ವಿಚ್ಛೇದನ ನೀಡಿದ್ದರು. ಈ ವಿಧಾನದಡಿಯಲ್ಲಿ ತಲಾಖ್ ಅನ್ನು ಒಮ್ಮೆ ಉಚ್ಚರಿಸಲಾಗುತ್ತದೆ ಮತ್ತು ವಿಚ್ಛೇದನ ಜಾರಿಗೆ ಬರಲು 90 ದಿನಗಳ ಕಾಯುವ ಅವಧಿ ಇರುತ್ತದೆ. ಇಸ್ಲಾಮಿಕ್ ಕಾನೂನಿನಡಿಯ ಈ ವಿಚ್ಛೇದನ ಮಾರ್ಗವು ಇನ್ನೂ ಕಾನೂನು ಬದ್ಧವಾಗಿ ಇದೆ.

ತಲಾಖ್-ಎ-ಅಹ್ಸಾನ್ ವಿಧಾನದಲ್ಲಿ ವಿಚ್ಛೇದ ನೀಡಿದ್ದ ವ್ಯಕ್ತಿ ಮತ್ತು ಅವರ ಪೋಷಕರ ಮೇಲೆ 2019ರ ಕಾಯ್ದೆಯನ್ನು ಉಲ್ಲಂಘಿಸಿದ್ದಾರೆಂದು ಆರೋಪಿಸಿ ಪೊಲೀಸರು ಪ್ರಥಮ ಮಾಹಿತಿ ವರದಿ (ಎಫ್‌ಐಆರ್) ದಾಖಲಿಸಿದ್ದರು. ನ್ಯಾಯಮೂರ್ತಿ ವಿಭಾ ಕಂಕಣವಾಡಿ ಮತ್ತು ನ್ಯಾಯಮೂರ್ತಿ ಸಂಜಯ್ ದೇಶಮುಖ್ ಅವರಿದ್ದ ಪೀಠವು, ಈ ಪ್ರಕರಣದ ವಿಚ್ಛೇದನದ ರೂಪವು ನಿಷೇಧಿತ ವರ್ಗದ ಅಡಿಯಲ್ಲಿ ಬರುವುದಿಲ್ಲ ಎಂದು ಹೇಳಿದೆ.

ಪ್ರಕರಣದಲ್ಲಿ, ದಂಪತಿ 2022ರಲ್ಲಿ ವಿವಾಹವಾಗಿದ್ದರು. ಬಳಿಕ ಕೆಲ ತಿಂಗಳುಗಳ ಕಾಲ ಭಾರತದ ವಿವಿಧ ನಗರಗಳಲ್ಲಿ ಒಟ್ಟಿಗೆ ವಾಸವಿದ್ದರು. ವೈವಾಹಿಕ ಭಿನ್ನಾಭಿಪ್ರಾಯಗಳನ್ನು ಉಂಟಾದ ನಂತರ, ಪತಿ ಡಿಸೆಂಬರ್ 2023ರಲ್ಲಿ ಸಾಕ್ಷಿಗಳ ಸಮ್ಮುಖದಲ್ಲಿ ಒಂದು ಬಾರಿ ತಲಾಖ್ ಎಂದು ಉಚ್ಚರಿಸಿದ್ದರು. ಅದನ್ನು ಅನುಸರಿಸಿ ಔಪಚಾರಿಕ ನೋಟಿಸ್ ನೀಡಿದ್ದರು. 90 ದಿನಗಳ ಕಾಯುವ ಅವಧಿಯಲ್ಲಿ ದಂಪತಿ ಮತ್ತೆ ಒಂದಾಗಲು ಸಾಧ್ಯವಾಗಿರಲಿಲ್ಲ. ಇದರಿಂದಾಗಿ ಮುಸ್ಲಿಂ ವೈಯಕ್ತಿಕ ಕಾನೂನಿನಡಿಯಲ್ಲಿ ವಿಚ್ಛೇದನವು ಊರ್ಜಿತವಾಗಿತ್ತು.


ಆದರೆ, ವಿಚ್ಛೇದಿತ ಮಹಿಳೆ ಜಲಗಾಂವ್ನ ಭೂಸಾವಲ್ ಬಜಾರ್ ಪೇಠ್ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಿದ್ದರು. 2019ರ ಕಾಯ್ದೆಯಡಿಯಲ್ಲಿ ವಿಚ್ಛೇದನವು ಕಾನೂನುಬಾಹಿರವಾಗಿದೆ. ತನ್ನ ಅತ್ತೆ ಮಾವ ಕೂಡ ನನಗೆ ತಲಾಖ್ ನೀಡಿರುವುದನ್ನು ಬೆಂಬಲಿಸಿದ್ದಾರೆ. ಅವರನ್ನೂ ಕೂಡ ತಪ್ಪಿತಸ್ಥರನ್ನಾಗಿ ಮಾಡಬೇಕು ಎಂದು ಆಗ್ರಹಿಸಿದ್ದರು.

ತಲಾಖ್-ಎ-ಅಹ್ಸಾನ್ ವಿಧಾನವನ್ನು ತಾನು ಅನುಸರಿಸಿದ್ದೇನೆ ಎಂದು ಮಹಿಳೆಯ ವಿಚ್ಛೇದಿತ ಪತಿ ನ್ಯಾಯಾಲಯದಲ್ಲಿ ವಾದಿಸಿದ್ದರು. ಇದು ತಲಾಖ್-ಎ-ಬಿದತ್ (ದಿಢೀರ್ ತ್ರಿವಳಿ ತಲಾಖ್) ನಂತೆ ಅಲ್ಲ. ಮುಸ್ಲಿಂ ವೈಯಕ್ತಿಕ ಕಾನೂನಿನಲ್ಲಿ ತಲಾಖ್-ಎ-ಅಹ್ಸಾನ್ ಅನ್ನು ಮಾನ್ಯ ಮತ್ತು ಅಂಗೀಕೃತ ವಿಚ್ಛೇದನದ ರೂಪವೆಂದು ಗುರುತಿಸಿದ ಹಿಂದಿನ ನ್ಯಾಯಾಲಯದ ತೀರ್ಪುಗಳನ್ನು ಅವರ ವಕೀಲರು ಉಲ್ಲೇಖಿಸಿದ್ದರು. ಈ ನಿರ್ಧಾರದಲ್ಲಿ ನಮ್ಮದು ಯಾವುದೇ ಪಾತ್ರವಿಲ್ಲ ಎಂದು ಅತ್ತೆ-ಮಾವ ಹೇಳಿದ್ದರು.

ತಲಾಖ್-ಎ-ಅಹ್ಸಾನ್ ಮೂಲಕ ವಿಚ್ಛೇಧನ ನೀಡಿದ್ದರೂ, ಅದನ್ನು ವಾಪಸ್ ತೆಗೆದುಕೊಳ್ಳಲು ಸಾಧ್ಯವಿಲ್ಲ. ಹಾಗಾಗಿ, ಇದು 2019ರ ಕಾನೂನಿನ ಉಲ್ಲಂಘಣೆಯಾಗಿದೆ ಎಂದು ಮಹಿಳೆ ವಾದಿಸಿದ್ದರು. ಆದರೆ, ಹೈಕೋರ್ಟ್ ಮಹಿಳೆಯ ವಾದವನ್ನು ಒಪ್ಪಿಲ್ಲ. ಯಾವುದೇ ಮಾತುಕತೆಗಳು ಇಲ್ಲದೆ, ತಕ್ಷಣ ತಲಾಖ್ ನೀಡುವುದನ್ನು ಮಾತ್ರ ನಿಷೇಧಿಸಲಾಗಿದೆ. ಅರ್ಜಿದಾರರು ವಿಚಾರಣೆ ಎದುರಿಸಬೇಕು ಎಂದು ಸೂಚಿಸುವುದು ಕಾನೂನು ಪ್ರಕ್ರಿಯೆಯ ದುರುಪಯೋಗವಾಗುತ್ತದೆ. ಆದ್ದರಿಂದ ವಿಚಾರಣೆ ಮತ್ತು ಎಫ್‌ಐಆರ್ ರದ್ದುಗೊಳಿಸಲಾಗುತ್ತಿದೆ ಎಂದಿದೆ.

# ಅಮರನಾಥ ಯಾತ್ರೆ ಮೇಲೆ ಕಾರ್ಮೋಡ

**ನವದೆಹಲಿ, ಏ.24:** ಜಮ್ಮು ಮತ್ತು ಕಾಶ್ಮೀರದ ಅನಂತ್‌ನಾಗ್ ಜಿಲ್ಲೆಯಲ್ಲಿ ನೆಲೆಗೊಂಡಿರುವ ಸುಂದರವಾದ ಪಟ್ಟಣ ಪಹಲ್ಗಾಮ್ ನಲ್ಲಿ ಮಂಗಳವಾರ ನಡೆದ ಕ್ರೂರ ಭಯೋತ್ಪಾದಕ ದಾಳಿಯಲ್ಲಿ ಪ್ರವಾಸಿಗರು ಮತ್ತು ಭಾರತೀಯ ನೌಕಾಪಡೆಯ ಅಧಿಕಾರಿಯೊಬ್ಬರು ಸೇರಿದಂತೆ 26 ಜನರು ಸಾವನ್ನಪ್ಪಿದ್ದಾರೆ. ಕಣಿವೆಯಲ್ಲಿ ಇನ್ನೂ ಭಯದ ವಾತಾವರಣವಿದ್ದು, ಭದ್ರತಾ ವ್ಯವಸ್ಥೆಗಳನ್ನು ಹೆಚ್ಚಿಸಲಾಗಿದೆ. ಆದರೂ, ಜನರ ಮನಸ್ಸಿನಲ್ಲಿ ಇನ್ನೂ ಒಂದು ಭಯ ಉಳಿದಿದೆ. ಮತ್ತೊಂದೆಡೆ, ಅಮರನಾಥ ಯಾತ್ರೆ ಕೂಡ ಇನ್ನು ಮೂರು ತಿಂಗಳ ನಂತರ ನಡೆಯಲಿದೆ. ಈಗ ಅಮರನಾಥ ಯಾತ್ರೆ ನಡೆಯುತ್ತದೆಯೇ ಅಥವಾ ಇಲ್ಲವೇ ಎಂಬ ಪ್ರಶ್ನೆಗಳು ಎದ್ದಿವೆ.




ಭಯೋತ್ಪಾದಕ ದಾಳಿಯ ಹೊರತಾಗಿಯೂ, ಜುಲೈ 3 ರಿಂದ ಪ್ರಾರಂಭವಾಗುವ ಅಮರನಾಥ ಯಾತ್ರೆ ಯನ್ನು ರದ್ದುಗೊಳಿಸಲಾಗುವುದಿಲ್ಲ. ಭಕ್ತರು ಭಯಪಡುವ ಅಗತ್ಯವಿಲ್ಲ ಎಂದು ಜಮ್ಮು ಮತ್ತು ಕಾಶ್ಮೀರ ಉಪಮುಖ್ಯಮಂತ್ರಿ ಸುರೀಂದರ್ ಚೌಧರಿ ಹೇಳಿದ್ದಾರೆ. ಮೂಲಗಳ ಪ್ರಕಾರ, ಜುಲೈ 3 ರಿಂದ ಪ್ರಾರಂಭವಾಗುವ ಅಮರನಾಥ ಯಾತ್ರೆಗೆ ಹೊಸ ಭದ್ರತಾ ಯೋಜನೆಯನ್ನು ಜಾರಿಗೆ ತರಲಾಗುವುದು ಎಂದು ತಿಳಿದುಬಂದಿದೆ. ವಿಶೇಷ ಕೇಂದ್ರ ಕಮಾಂಡ್ ಕೇಂದ್ರವು ದಿನದ 24 ಗಂಟೆಗಳ ಕಾಲ ಮೇಲ್ವಿಚಾರಣೆ ಮಾಡಲಿದ್ದು, ಪಹಲ್ಗಾಮ್-ಸೋನ್ಮಾರ್ಗ್‌ನಲ್ಲಿ ಪ್ರವಾಸಿಗರ ಸಂಚಾರದ ಎಲ್ಲಾ ಸಾರಿಗೆ ಶಿಬಿರಗಳಲ್ಲಿ ಬಿಗಿ ಭದ್ರತೆ ಇರುತ್ತದೆ. ಡ್ರೋನ್ ಮತ್ತು ಇತರ ರೀತಿಯ ಎಲೆಕ್ಟ್ರಾನಿಕ್ ಕಣ್ಗಾವಲುಗಳನ್ನು ಮತ್ತಷ್ಟು ಹೆಚ್ಚಿಸಲಾಗುವುದು. ಯಾತ್ರೆಯ ಸಮಯದಲ್ಲಿ ಸಾಮಾನ್ಯವಾಗಿ ನಿಯೋಜಿಸಲಾಗುವ ಒಂದೂವರೆ ಲಕ್ಷ ಭದ್ರತಾ ಸಿಬ್ಬಂದಿಯ ಸಂಖ್ಯೆಯನ್ನು ಸಹ ಹೆಚ್ಚಿಸಲಾಗುವುದು ಎಂದು ಚೌಧರಿ ತಿಳಿಸಿದ್ದಾರೆ.

ವಾಸ್ತವವಾಗಿ, ಪ್ರತಿ ವರ್ಷ ಹೆಚ್ಚಿನ ಸಂಖ್ಯೆಯ ಭಕ್ತರು ಅಮರನಾಥ ಯಾತ್ರೆಗೆ ಬರುತ್ತಾರೆ. ಇದು ಅಮರನಾಥ ಯಾತ್ರೆಯ ಮೇಲೆ ಮಾತ್ರವಲ್ಲದೆ ವೈಷ್ಣೋದೇವಿ ಧಾಮ ಯಾತ್ರೆಯ ಮೇಲೂ ಪರಿಣಾಮ ಬೀರಬಹುದು. ಅಮರನಾಥ ಯಾತ್ರೆಯು ಸಮುದ್ರ ಮಟ್ಟದಿಂದ ಸುಮಾರು 13,000 ಅಡಿ ಎತ್ತರದಲ್ಲಿರುವ ಪವಿತ್ರ ಗುಹೆಗೆ ಎರಡು ಮಾರ್ಗಗಳನ್ನು ಒದಗಿಸುತ್ತದೆ. ಮೊದಲ ಮಾರ್ಗವು ದಕ್ಷಿಣ ಕಾಶ್ಮೀರದ ಗಂದೇರ್‌ಬಾಲ್ ಜಿಲ್ಲೆಯ ಬಾಲ್ಟಾಲ್‌ನಿಂದ ಮತ್ತು ಎರಡನೆಯದು ಅನಂತ್ನಾಗ್ ಜಿಲ್ಲೆಯ ಪಹಲ್ಗಾಮ್‌ನಿಂದ ಪ್ರಾರಂಭವಾಗುತ್ತದೆ. ಇದೀಗ ಪಹಲ್ಗಾಮ್ ಹೆಸರೇ ಜನರನ್ನು ಭಯಭೀತಗೊಳಿಸಿದೆ.

# ಕಾಶ್ಮೀರಿಗಳು ಶತ್ರುಗಳೆಂದು ಭಾವಿಸಬೇಡಿ: ಒಮರ್ ಅಬ್ದುಲ್ಲಾ

**ಕಾಶ್ಮೀರ, ಏ.24:** ಕಾಶ್ಮೀರಿಗಳು ನಿಮ್ಮ ಶತ್ರುಗಳು ಎಂಬ ಭಾವನೆಗೆ ಒಳಗಾಗಬೇಡಿ ಎಂದು ಜಮ್ಮು ಮತ್ತು ಕಾಶ್ಮೀರದ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ಗುರುವಾರ ದೇಶದ ಜನರಿಗೆ ಮನವಿ ಮಾಡಿದ್ದಾರೆ.

ದಾಳಿಯಲ್ಲಿನ ಸಂತ್ರಸ್ತರೊಂದಿಗೆ ನಾವಿದ್ದೇವೆ ಮತ್ತು ಈ ಘಟನೆಗೆ ಕಾಶ್ಮೀರಿಗಳನ್ನು ದೂಷಿಸುವುದನ್ನು ನಿಲ್ಲಿಸುವಂತೆ ದೇಶದ ಜನರಿಗೆ ಮನವಿ ಮಾಡಿದರು.



ದಾಳಿಯನ್ನು ಖಂಡಿಸಿ ವಿರೋಧ ವ್ಯಕ್ತಪಡಿಸಿದ ಕಾಶ್ಮೀರಿ ಜನರ ಪ್ರಯತ್ನಗಳನ್ನು ಶ್ಲಾಘಿಸಿದ ಅವರು, ಇದು ಸ್ಥಳೀಯ ಜನರಿಂದ ಆಗಿದ್ದಲ್ಲ, ಬಾಹ್ಯ ಅಂಶಗಳಿಂದ ನಡೆಸಲ್ಪಟ್ಟ ದಾಳಿಯಾಗಿದೆ ಎಂದು ಹೇಳಿದರು. ಇಂತಹ ದುರಂತ ಘಟನೆಯನ್ನು ಎದುರಿಸಬೇಕಾದ ಸಂತ್ರಸ್ತ ಕುಟುಂಬಗಳಿಗೆ ನಾನು ಒಗ್ಗಟ್ಟನ್ನು ತೋರಿಸಲು ಬಯಸುತ್ತೇನೆ... ಇಲ್ಲಿಗೆ ತಮ್ಮ ರಜೆಯನ್ನು ಆನಂದಿಸಲು ಬಂದ ನಮ್ಮ 25 ಅತಿಥಿಗಳು ಅಥವಾ ಅಲ್ಲಿನ ಜನರನ್ನು ರಕ್ಷಿಸಲು ತನ್ನ ಪ್ರಾಣ ತ್ಯಾಗ ಮಾಡಿದ ನಮ್ಮ ಕಣಿವೆಯ ಒಬ್ಬ ವ್ಯಕ್ತಿಯ ಕುಟುಂಬಗಳಿಗೆ ಸಂತಾಪ ಸೂಚಿಸುತ್ತೇವೆ. ದಾಳಿಯನ್ನು ಖಂಡಿಸಿದ ಕಾಶ್ಮೀರದ ಜನರಿಗೆ ನಾನು ಕೃತಜ್ಞನಾಗಿದ್ದೇನೆ ಎಂದು ಅಬ್ದುಲ್ಲಾ ಹೇಳಿದರು.


ಬೈಸರನ್ ಪಹಲ್ಗಾಮ್ ಭಯೋತ್ಪಾದಕ ದಾಳಿಯಲ್ಲಿ ಮೃತಪಟ್ಟ ಅನಂತ್‌ನಾಗ್‌ನ ಹಪತ್ನಾರ್ ನಿವಾಸದಲ್ಲಿ ಆದಿಲ್ ಹುಸೇನ್ ಅವರ ಕುಟುಂಬ ಸದಸ್ಯರನ್ನು ಪೀಪಲ್ಸ್ ಡೆಮಾಕ್ರಟಿಕ್ ಪಕ್ಷದ ನಾಯಕಿ ಇಲ್ತಿಜಾ ಮುಫ್ತಿ ಸಾಂತ್ವನ ಹೇಳಿದರು.

# ಕಾಂಗ್ರೆಸ್ ನಾಯಕರು ದ್ವಿಮುಖ ಭಾಷೆ ಮಾತನಾಡುವ ಪರಿಣತರು: ರವಿಕುಮಾರ್ ವ್ಯಂಗ್ಯ




**ಬೆಂಗಳೂರು, ಏ.24–** 'ಕಾಂಗ್ರೆಸ್ ನಾಯಕರು ದ್ವಿಮುಖವಾಗಿ ಮಾತನಾಡುವ ಕಲೆಯಲ್ಲಿ ಪರಿಣತರು. ಇಂತಹ ದ್ವಂದ್ವ ಭಾಷಣ ಮತ್ತು ದ್ವಂದ್ವ ನೀತಿಗಳು ಅವರಿಗೆ ಸಹಜವೇ ಎಂದು ಕರ್ನಾಟಕ ವಿಧಾನ ಪರಿಷತ್ತಿನಲ್ಲಿ ಪ್ರತಿಪಕ್ಷದ ಮುಖ್ಯ ಸಚೇತಕ ಎನ್. ರವಿ ಕುಮಾರ್ ಆರೋಪಿಸಿದರು.

ಒಂದು ಕಡೆ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಉಗ್ರವಾದದ ವಿರುದ್ಧ ಕೇಂದ್ರ ಸರ್ಕಾರಕ್ಕೆ ತಮ್ಮ ಪಕ್ಷ ಬೆಂಬಲ ನೀಡಲಿದೆ ಎನ್ನುತ್ತಾರೆ, ಆದರೆ ಇನ್ನೊಂದು ಕಡೆ ರಾಜ್ಯದ ಮಂತ್ರಿಗಳು ಪ್ರಿಯಾಂಕ್ ಖರ್ಗೆ ಮತ್ತು ಇಶ್ವರ್ ಖಾಂಡ್ರೆ ಅವರು ಪಹಲ್ಗಾಮ್ ದುಷ್ಕೃತ್ಯಕ್ಕೆ ಕೇಂದ್ರವನ್ನು ಗುರಿಯಾಗಿಸುತ್ತಿದ್ದಾರೆ ಎಂದು ರವಿ ಕುಮಾರ್ ಆರೋಪಿಸಿದರು.

ರಾಷ್ಟ್ರವ್ಯಾಪಿ ಸಂಕಟದ ಈ ಸಮಯದಲ್ಲಿ ತಮ್ಮ ರಾಜಕೀಯ ಬೇಳೆ ಬೇಯಿಸುವುದು ಖಂಡನೀಯವಾಗಿದೆ. ಈಗ ಬೇಕಾಗಿರುವುದು ಕಲ್ಮಷರಹಿತ ನಿರಂತರ ಬೆಂಬಲ, ಈ ರಾಜಕೀಯ ಪ್ರೇರಿತ ಮಾತುಗಳು ಅಲ್ಲ ಎಂದು ಅವರು ತಿಳಿಸಿದರು.

ಯುಪಿಎಆಡಳಿತಾವಧಿಯಲ್ಲಿ ಕಾಶ್ಮೀರದಲ್ಲಿ ಉಗ್ರದಾಳಿಗಳು ಸಾಮಾನ್ಯವಾಗಿದ್ದವು.

ಆದರೆ ಕಳೆದ 11 ವರ್ಷಗಳ ಮೋದಿ ಸರ್ಕಾರದ ಅವಧಿಯಲ್ಲಿ ಇಂತಹ ಘಟನೆಗಳು ಬಹುತೇಕ ಕಡಿಮೆಯಾಗಿರುವ ವರದಿಯಾಗಿವೆ ಎಂದು ಅವರು ಹೇಳಿದರು. ಪುಲ್ವಾಮಾ ಅಥವಾ ಉರಿ ದಾಳಿಗಳಾಗಲೀ, ಭಾರತ ಇವುಗಳಿಗೆ ಶಕ್ತಿಯುತವಾಗಿ ಪ್ರತಿಕ್ರಿಯಿಸಿತು ಸರ್ಜಿಕಲ್ ಸ್ಟ್ರೀಕ್' ಮತ್ತು ವಾಯುಪಡೆಯ ದಾಳಿ ರೂಪದಲ್ಲಿ. ಕಾಂಗ್ರೆಸ್ ಹಾಗೂ ಅದರ ಬೆಂಬಲಿತ ಪಕ್ಷಗಳು ಇಂತಹ ತೀವ್ರ ಕ್ರಮಗಳ ಬಗ್ಗೆ ಕಲ್ಪಿಸಿಕೊಳ್ಳಲಾಗಲಿಲ್ಲ' ಎಂದು ಅವರು ಹೇಳಿದರು.

ಇದರ ಜೊತೆಗೆ, ರಾಬರ್ಟ್ ವಾದ್ರಾ ಎಂಬ 'ಮೊದಲ ಕುಟುಂಬದ' ಅಳಿಯನಿಂದ ಬಂದ ಹೇಳಿಕೆ ನಿರ್ದಯವಾಗಿದೆ ಮತ್ತೆ ಶೋಚನೀಯ ಎಂದು ಅವರು ಉಲ್ಲೇಖಿಸಿದರು. 'ರಾಬರ್ಟ್ ವಾದ್ರಾ ಸರಕಾರದಲ್ಲಾಗಲೀ ಪಕ್ಷದಲ್ಲಾಗಲೀ ಯಾವುದೇ ಸ್ಥಾನದಲ್ಲಿಲ್ಲ. ಆದರೂ, ಅವರು ರಾಷ್ಟ್ರದ ವಿಷಯಗಳಲ್ಲಿ ತಮ್ಮ ಮೂಗು ತೂರಿಸುವ ಯತ್ನ ಮಾಡುತ್ತಿದ್ದಾರೆ ಎಂದರು.

ಹಿಂದುತ್ವ ಮತ್ತು ಸನಾತನ ಧರ್ಮ ಭಾರತದ ಆತ್ಮ. ಇದು ಯಾವುದೇ ರಾಜಕೀಯ ವಿಷಯವೋ ಅಥವಾ ಚರ್ಚೆ ಮಾಡುವ ವಿಷಯವೋ ಅಲ್ಲ. ಪಹಲ್ಗಾಮ್ ದಾಳಿಕಾರರು ಹಿಂದೂಗಳನ್ನು ಗುರಿಯಾಗಿಸಿಕೊಂಡು ಈ ಕ್ರೂರ ಕೃತ್ಯ ಮಾಡಿದ್ದಾರೆ.

ಈ ದಾಳಿಯಿಂದ ನಾವು ಭೀತಿಗೊಳಗಾಗುವುದಿಲ್ಲ. ಹಿಂದುತ್ವದ ನಮ್ಮ ನಿಶ್ಚಯವನ್ನು ಮತ್ತು ಸಂಕಲ್ಪವನ್ನು ಇನ್ನೂ ಬಲಪಡಿಸುತ್ತೇವೆ ಎಂದು ರವಿ ಕುಮಾರ್ ಹೇಳಿದರು.

# ಹೆಚ್ಚುತ್ತಿರುವ ವನ್ಯಜೀವಿಗಳ ಸಾವು ನಿಗಾ ಇಡಲು ಸಚಿವ ಖಂಡ್ರೆ ಸೂಚನೆ



**ಬೆಂಗಳೂರು, ಏ.24–** ಕಾಡು ಹಂದಿ ಬೇಟೆಗಾಗಿ ಕಾಡಿನಂಚಿನ ಗ್ರಾಮಗಳಲ್ಲಿ ಕಡಿಮೆ ತೀವ್ರತೆಯ ಕಚ್ಚಾ ಬಾಂಬ್ ಇಡಲಾಗುತ್ತಿದ್ದು, ಇದನ್ನು ಸೇವಿಸಿ ಜಾನುವಾರು ಮತ್ತು ವನ್ಯಜೀವಿಗಳು ಮೃತಪಡುತ್ತಿರುವ ದೂರುಗಳಿದ್ದು, ಈ ಬಗ್ಗೆ ಸೂಕ್ತ ನಿಗಾ ಇಡುವಂತೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಸೂಚನೆ ನೀಡಿದ್ದಾರೆ.

ಕೊಳ್ಳೆಗಾಲದ ಕೀರ್ತಿಚಕ್ರ ಪಿ ಶ್ರೀನಿವಾಸ್ ಅತಿಥಿಗೃಹದಲ್ಲಿಂದು ಅರಣ್ಯ ಇಲಾಖೆಯ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಅವರು, ಕಚ್ಚಾ ಬಾಂಬ್ ತಿಂದು ಹಲವು ಆನೆಯ ಮರಿಗಳೂ ತಿಂದು ಅದು ಬಾಯಿಯಲ್ಲೇ ಸ್ಫೋಟವಾಗಿ, ದವಡೆ ಛಿದ್ರವಾಗಿ, ಹಸಿವಿನಿಂದ ಬಳಲಿ ಸಾಯುತ್ತಿವೆ ಎಂದು ವರದಿಯಾಗಿದೆ ಇದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದ್ದು, ಆ ರೀತಿ ಬಾಂಬ್ ಇಡುವವರ ವಿರುದ್ಧ ಕಾನೂನು ರೀತ್ಯ ಕ್ರಮ ಜರುಗಿಸಿ ಎಂದು ನಿರ್ದೇಶಿಸಿದರು.

**ಆನೆ ಕಾಡಲ್ಲಿ ಬಿದಿರು ಬೆಳೆಸಲು ಸೂಚನೆ:** ಕಾವೇರಿ ವನ್ಯಜೀವಿ ವಿಭಾಗದಲ್ಲಿ ಸಮೃದ್ಧವಾಗಿ ಬಿದಿರು ಬೆಳೆಸಲಾಗಿದೆ, ಬಿದಿರು ಸ್ವಾಭಾವಿಕ ಮತ್ತು ಜೈವಿಕ ಬ್ಯಾರಿಕೇಡ್ ನಂತೆ ಕಾರ್ಯ ನಿರ್ವಹಿಸುತ್ತದೆ. ಇದು ಆನೆಗಳಿಗೆ ಆಹಾರವೂ ಆಗುತ್ತದೆ. ಜೊತೆಗೆ ಆನೆಗಳು ನಾಡಿಗೆ ಬಾರದಂತೆ ತಡೆಯುತ್ತದೆ. ಇದನ್ನು ಬೇರೆ ವಲಯದಲ್ಲಿ ಬೆಳೆಸಲು ಕ್ರಮ ಕೈಗೊಳ್ಳಿ ಎಂದು ಸೂಚನೆ ನೀಡಿದರು. ಅರಣ್ಯದೊಳಗಿನ ಹೋಂಸ್ಟೇ, ರೆಸಾರ್ಟ್ ತೆರವಿಗೆ ಸೂಚನೆ ಅರಣ್ಯ ದೊಳಗೆ ಮತ್ತು ಸೂಕ್ಷ್ಮ ಪರಿಸರ ವಲಯದಲ್ಲಿ ಹೋಂ ಸ್ಟೇ ಹೆಸರಲ್ಲಿ ಶಾಶ್ವತ ರೆಸಾರ್ಟ್ ಕಟ್ಟಡ ತಲೆ ಎತ್ತುತ್ತಿದೆ ಎಂದು ದೂರುಗಳು ಬಂದಿದ್ದು, ಇವುಗಳ ವಿರುದ್ಧ ಕಾನೂನಾತ್ಮಕವಾಗಿ ಕ್ರಮ ವಹಿಸುವಂತೆ ಅರಣ್ಯ ಸಚಿವ ಈಶ್ವರ ಖಂಡ್ರೆ ಸೂಚಿಸಿದರು.

ಶ್ರೀಗಂಧದ ಮರಗಳಿಗೆ ಜಿಯೋ ಟ್ಯಾಗ್ ಮಾಡಿ ಸಂರಕ್ಷಿಸುವಂತೆಯೂ ನಿರ್ದೇಶನ ನೀಡಿದರು ಸಭೆಯಲ್ಲಿ ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಅಂಜುಂ ಪರ್ವೇಜ್, ಎಪಿಸಿಸಿಎಫ್ ಕುಮಾರ್ ಪುಷ್ಕರ್, ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಹೀರಾಲಾಲ್ ಮೊದಲಾದವರು ಭಾಗಿಯಾಗಿದ್ದರು.

### ಪಹಲ್ಗಾಮ್‌ನಲ್ಲಿ ಉಗ್ರರ ದಾಳಿ ಹಿನ್ನೆಲೆ

# ಕನ್ನಡಿಗರ ನೆರವಿಗೆ ಪ್ರವಾಸೋದ್ಯಮ ಇಲಾಖೆ

**ಬೆಂಗಳೂರು, ಏ.24–** ಜಮ್ಮು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಉಗ್ರರ ದಾಳಿ ಹಿನ್ನೆಲೆಯಲ್ಲಿ ಕನ್ನಡಿಗರ ನೆರವಿಗೆ ಪ್ರವಾಸೋದ್ಯಮ ಇಲಾಖೆ ಆರಂಭಿಸಿದ್ದ ಸಹಾಯವಾಣಿಗೆ ಈವರೆಗೆ 56 ಕರೆಗಳು ಬಂದಿದ್ದು, ಸುಮಾರು 433 ಕನ್ನಡಿಗ ಪ್ರವಾಸಿಗರು ಜಮ್ಮು ಕಾಶ್ಮೀರ ಪ್ರವಾಸದಲ್ಲಿರುವುದು ತಿಳಿದು ಬಂದಿದೆ.

ಪಹಲ್‌ಗಾಂಲ್ಲಿ ಮಂಗಳವಾರ ನಡೆದ ಉಗ್ರರ ದಾಳಿಯಿಂದ ಇಬ್ಬರು ಕನ್ನಡಿಗರು ಸೇರಿ 26 ಮಂದಿ ಸಾವಿಗೀಡಾಗಿದ್ದರು. ಈ ಹಿನ್ನೆಲೆಯಲ್ಲಿ ಜಮ್ಮು ಕಾಶ್ಮೀರದ ಪ್ರವಾಸಕ್ಕೆ ತೆರಳಿರುವ ಕನ್ನಡಿಗರನ್ನು ರಾಜ್ಯಕ್ಕೆ ಮರಳಿ ತರಲು ರಾಜ್ಯ ಸರ್ಕಾರ ಮುಂದಾಗಿದೆ. ಈ ನಿಟ್ಟಿನಲ್ಲಿ ಜಮ್ಮು ಕಾಶ್ಮೀರಕ್ಕೆ ಪ್ರವಾಸ ತೆರಳಿರುವವರ ಸಂಬಂಧಿಕರು ಅಥವಾ ಪರಿಚಯಸ್ಥರು ಪ್ರವಾಸಕ್ಕೆ ತೆರಳಿರುವವರ ವಿವರಗಳನ್ನು ನೀಡಲು ಸಹಾಯವಾಣಿ ಆರಂಭಿಸಲಾಗಿದೆ.: 080–43344334, 080–43344335, 080–43344336, 080–43344342 ಎಂಬ ನಾಲ್ಕು ಸಹಾಯವಾಣಿ ಆರಂಭಿಸಲಾಗಿತ್ತು.

ಇದಕ್ಕೆ ನಿನ್ನೆಯಿಂದ ಈವರೆಗೆ ಸುಮಾರು 56 ಮಂದಿ ಜಮ್ಮು ಕಾಶ್ಮೀರಕ್ಕೆ ತೆರಳಿದ ಪ್ರವಾಸಿಗರು ಕರೆ ಮಾಡಿ ಸಂಪರ್ಕಿಸಿದ್ದಾರೆ. ಸುಮಾರು 433 ಕರ್ನಾಟಕದ ಪ್ರವಾಸಿಗರು ಜಮ್ಮು ಕಾಶ್ಮೀರ ಪ್ರವಾಸದಲ್ಲಿ ಇರುವುದು ತಿಳಿದು ಬಂದಿದೆ ಎಂದು ಪ್ರವಾಸೋದ್ಯಮ ಇಲಾಖೆ ಮಾಹಿತಿ ನೀಡಿದೆ. ಕರೆ ಮಾಡಿದ ಬಹುತೇಕರು ಯಾವುದೇ ಸಮಸ್ಯೆ ಇಲ್ಲ ಎಂದು ತಿಳಿಸಿದ್ದಾರೆ. ಉಳಿದಂತೆ ಎರಡು ಕರೆಗಳಲ್ಲಿ ತಮ್ಮನ್ನು ಹೋಟೆಲ್‌ನಿಂದ ಹೊರ ಹೋಗಲು ಬಿಡುತ್ತಿಲ್ಲ ಎಂದು ತಿಳಿಸಿದ್ದಾರೆ. ಕರೆ ಮಾಡಿದ ಪ್ರವಾಸಿಗರಲ್ಲಿ ಸುಮಾರು 46 ಕರೆಗಳ ಮೂಲಕ ಶ್ರೀನಗರದಲ್ಲಿ ಇರುವುದಾಗಿ ತಿಳಿಸಿದ್ದಾರೆ. ಜಮ್ಮುವಿನಿಂದ ಎರಡು, ಗುಲ್ಮಾರ್ಗ್‌ನಿಂದ ಎರಡು ಕರೆ, ಕಾಶ್ಮೀರದಿಂದ ಎರಡು ಕರೆ ಹಾಗೂ ಕತ್ರಾದಿಂದ ಒಂದು ಕರೆ ಬಂದಿದೆ. ಬಂದ ಕರೆಗಳ ಆಧಾರದಲ್ಲಿ ವೈಷ್ಣೋದೇವಿಯಲ್ಲಿ 60 ಕನ್ನಡಿಗರು ಇದ್ದಾರೆ. ಉಳಿದಂತೆ, ಶ್ರೀನಗರದಲ್ಲಿ 288 ಪ್ರವಾಸಿಗರು. ಜಮ್ಮುವಿನಲ್ಲಿ 30 ಪ್ರವಾಸಿಗರು, ಗುಲ್ಮಾರ್ಗ್‌ನಲ್ಲಿ 8 ಮಂದಿ ಕನ್ನಡಿಗರು, ಕಾಶ್ಮೀರದಲ್ಲಿ 15 ಮಂದಿ ಹಾಗೂ ಕತ್ರಾದಲ್ಲಿ 33 ಕನ್ನಡಿಗ ಪ್ರವಾಸಿಗರು ಇರುವ ಮಾಹಿತಿ ಲಭ್ಯವಾಗಿದೆ ಎಂದು ಎಂದು ಪ್ರವಾಸೋದ್ಯಮ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ. ಈಗಾಗಲೇ ಸುಮಾರು 174 ಕನ್ನಡಿಗ ಪ್ರವಾಸಿಗರನ್ನು ಶ್ರೀನಗರದಿಂದ ಸಚಿವ ಸಂತೋಷ್ ಲಾಡ್ ಹಾಗೂ ಅಧಿಕಾರಿಗಳ ತಂಡ ವಿಶೇಷ ವಿಮಾನದ ಮೂಲಕ ಬೆಂಗಳೂರಿಗೆ ಕರೆತಂದಿದ್ದಾರೆ.


# ಸಂಶೋಧಕರು ಸತ್ಯದ ಅನ್ವೇಷಣೆಗೆ ಮುಂದಾಗಲಿ ಸಮಕುಲಾಧಿಪತಿ ಪ್ರೊ.ವೈ. ಎಂ. ಜಯರಾಜ್ ಕರೆ



**ವಿಜಯಪುರ, ಏ.24–** ನಾವು ವಿಜ್ಞಾನ ಮತ್ತು ತಂತ್ರಜ್ಞಾನದಲ್ಲಿ ಬಹಳ ಮುಂದುವರೆದಿದ್ದೇವೆ ಆದರೆ ಸಮಾಜ ವಿಜ್ಞಾನದ ಹಂತದಿಂದ ಬಹಳಷ್ಟು ಪ್ರಾಚೀನರಾಗಿದ್ದೇವೆ ಎಂದು ಬಿ.ಎಲ್.ಡಿ.ಇ ಡೀಮ್ಡ್ ವಿವಿ ಸಮಕುಲಾಧಿಪತಿ ಪ್ರೊ.ವೈ.ಎಂ.ಜಯರಾಜ್ ಹೇಳಿದರು.

ನಗರದ ಬಿ.ಎಲ್.ಡಿ.ಇ.ಸಂಸ್ಥೆಯ ಎಸ್.ಬಿ.ಕಲಾ ಹಾಗೂ ಕೆಸಿಪಿ ವಿಜ್ಞಾನ ಮಹಾವಿದ್ಯಾಲಯದಲ್ಲಿ ಐಕ್ಯುಎಸಿ,ಐಐಸಿ ಮತ್ತು ಸಂಶೋಧನೆ ಮತ್ತು ಅಭಿವೃದ್ಧಿ ಕೋಶ ಹಾಗೂ ಎಲ್ಲ ಸ್ನಾತಕೋತ್ತರ ವಿಭಾಗಗಳ ಸಹಯೋಗಲ್ಲಿ ದಿನಾಂಕ:23–04–2025 ಬುಧವಾರದಂದು ಆಯೋಜಿಸಲಾದ ಸಂಶೋಧನಾ ಅಭ್ಯಾಸಗಳು: ಸಾಹಿತ್ಯ, ನೀತಿಶಾಸ್ತ್ರ, ಅಂಕಿ ಅಂಶಗಳು ಮತ್ತು ಶೈಕ್ಷಣಿಕದ ಕುರಿತ ಒಂದು ದಿನದ ರಾಜ್ಯ ಮಟ್ಟದ (ಹೈಬ್ರಿಡ್ ಮೋಡ್) ಕಾರ್ಯಗಾರ ಉದ್ಘಾಟಿಸಿ ಮಾತನಾಡಿದ ಅವರು ಸಂಶೋಧನೆ ಎಂದರೇನು ಅದಕ್ಕಾಗಿ ನೀವು ತೆಗೆದುಕೊಳ್ಳುವ ನಿರ್ಧಾರವೇನು.ಸಂಶೋಧಕರು ಸತ್ಯದ ಅನ್ವೇಷಣೆಯಲ್ಲಿ ಹೋಗಬೇಕು. ಅದು ಏನು,ಅದು ಏಕೆ, ಎಲ್ಲಿದೆ,ಈ ಎಲ್ಲಾ ಪ್ರಶ್ನೆಗಳು ಅಂತಿಮವಾಗಿ ಹೇಗೆ ರೂಪಿಸುತ್ತವೆ ಮತ್ತು ವಿಶೇಷವಾಗಿ ಸಂಶೋಧನೆಯು ಇತ್ತೀಚಿನ ಎಐ ಹಾಗು ಡಿಜಿಟಲ್ ತಂತ್ರಜ್ಞಾನದಿಂದಾಗಿ ಸರಳೀಕರಣವಾಗಿವೆ. ಹೊಸ ಆವಿಷ್ಕಾರಗಳು ಮತ್ತು ನಾವೀನ್ಯತೆಗಳು ಮೂಲಕ ವಿನೂತನವಾದ ಸಂಶೋಧನೆಯನ್ನು ಕೈಗೊಳ್ಳಬಹುದಾಗಿದೆ. ಇಂದಿನ ಆಧುನಿಕ ಯುಗದಲ್ಲಿ ಹಲವಾರು ಇತ್ತೀಚಿಗಿನ ಘಟನೆಗಳು ನಿದರ್ಶನ ಬಹುಶಃ ನಾವು ವಿಜ್ಞಾನ ಮತ್ತು ತಂತ್ರಜ್ಞಾನದಲ್ಲಿ ಬಹಳ ಮುಂದುವರಿದಿದ್ದೇವೆ ಆದರೆ ಸಮಾಜ ವಿಜ್ಞಾನದ ಹಂತದಿಂದ ಬಹಳಷ್ಟು ಪ್ರಾಚೀನರಾಗಿದ್ದೇವೆ. ಕಳೆದ ಕೆಲವು ದಿನಗಳ ಹಿಂದೆ ಕಾಶ್ಮೀರದಲ್ಲಿ ಘಟನೆ ಸ್ಮರಿಸಬಹುದು ಜಾಗತಿಕ ಮಟ್ಟದಲ್ಲಿ ಮತ್ತು ರಾಷ್ಟ್ರೀಯ ಮಟ್ಟದಲ್ಲಿ ಚರ್ಚೆಗೆ ಮುನ್ನೆಲೆಗೆ ಬರುತ್ತಿದೆ ಯಾರು ಏಕೆ ಕೊಂದರು ಏಕೆ ಬಲಿಯಾದರು ಸಂಘರ್ಷಕ್ಕೆ ಹಿಂದೂವೇ ಅಥವಾ ಧಾರ್ಮಿಕ ಸಂಘರ್ಷವೇ ನಮಗೆ ಗೊತ್ತಿಲ್ಲದ ಸಾಮಾಜಿಕ ಪರಿಕಲ್ಪನೆಯೇ ಇದು ರಾಷ್ಟ್ರೀಯ ದೃಷ್ಟಿಕೋನವನ್ನು ನೀಡಿ ಯಾರು ಕೊಲ್ಲುತ್ತಿದ್ದಾರೆ ಇದು ಶಂಶೋಧಕರಿಗೆ ಮುಂದೆ ಸಂಶೋಧನೆಯಾಗಿದೆ ಎಂದರು.ಇಂತಹ ಹಲವಾರು ಘಟನೆಗಳ ಗೊತ್ತಿಲ್ಲದ ವಿಷಯಗಳನ್ನು ಸಂಶೋಧನೆಗಳಿಂದ ಗೊಂದಲ ನಿವಾರಣೆ ಅಲ್ಲದೆ ವಿಷಯದ ಆಳವನ್ನು ಹೆಕ್ಕಿ ತೆಗೆಯಲು ನಮಗೆ

# ಪಹಲ್ಗಾಮ್‌ನಲ್ಲಿ ದಾಳಿ ಬಗ್ಗೆ ಬಿಜೆಪಿ–ಕಾಂಗ್ರೆಸ್ ಕಾರ್ಯಕರ್ತರ ನಡುವೆ ಹೇಳಿಕೆಗಳ ಸಮರ




**ಬೆಂಗಳೂರು, ಏ.24–** ಪಹಲ್ಗಾಮ್ ನಲ್ಲಿ ಭಯೋತ್ಪಾದಕ ದಾಳಿ ಸಂಬಂಧ ಸಾಮಾಜಿಕ ತಾಣಗಳಲ್ಲಿ ಬಿಜೆಪಿ ಹಾಗೂ ಕಾಂಗ್ರೆಸ್ ಕಾರ್ಯಕರ್ತರ ನಡುವೆ ಭಾರಿ ಚರ್ಚೆಗಳು ನಡೆಯುತ್ತಿವೆ.

ಇನ್ನೊಂದೆಡೆ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ವಿದೇಶಗಳಿಗೆ ಹೋದಾಗಲೆಲ್ಲಾ ಕಾಶ್ಮೀರದಲ್ಲಿ ಒಂದಲ್ಲಾ ಒಂದು ದಾಳಿ ನಡೆಯುತ್ತದೆ ಎಂದು ಕರ್ನಾಟಕ ಬಿಜೆಪಿ ಐಟಿ ಸೆಲ್ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಹಾಕಿದ್ದು, ಭಾರಿ ವಿವಾದಕ್ಕೀಡಾಗಿದೆ.

ಈ ಸಂಬಂಧ ಕರ್ನಾಟಕ ಪ್ರದೇಶ ಕಾಂಗ್ರೆಸ್ ಕಮಿಟಿಯ (KPCC) ಕಾನೂನು ಮತ್ತು ಮಾನವ ಹಕ್ಕುಗಳ ಘಟಕದ ಅಧ್ಯಕ್ ಸಿ.ಎಂ. ಧನಂಜಯ ಅವರು ದೂರು ನೀಡಿದ್ದು, ಈ ದೂರಿನ ಮೇರೆಗೆ ಬೆಂಗಳೂರಿನ ಹೈಗ್ರೌಂಡ್ಸ್ ಪೊಲೀಸ್ ಠಾಣೆಯಲ್ಲಿ ಬಿಜೆಪಿ ಐಟಿ ಸೆಲ್ ವಿರುದ್ಧ ಎಫ್ಐಆರ್ ದಾಖಲಾಗಿದೆ.ಪಹಲ್ಗಾಮ್, ಕಾಶ್ಮೀರದಲ್ಲಿ ನಡೆದ ಉಗ್ರದಾಳಿಯ ಹಿನ್ನೆಲೆಯಲ್ಲಿಯೇ ರಾಹುಲ್ ಗಾಂಧಿ ಅವರ ಭಾವಚಿತ್ರವನ್ನು ಸೇರಿಸಿ 'Every time @RahulGandhi leaves the country something sinister unfolds back home. #PahalgamTerrorist Attack #Hindus' ಎಂದು ಬಿಜೆಪಿ ಸಾಮಾಜಿಕ ಜಾಲತಾಣಗಳಲ್ಲಿ ಬರೆದುಕೊಂಡಿದೆ.

ಈ ಪೋಸ್ಟ್ ಸಮಾಜದಲ್ಲಿ ಶಾಂತಿಗೆ ಧಕ್ಕೆ ತರಬಲ್ಲಂತಹದ್ದಾಗಿದ್ದು, ಗುಂಪುಗಳ ನಡುವೆ ದ್ವೇಷ ಬೆಳೆಸುವ ಉದ್ದೇಶದಿಂದ ಮಾಡಲ್ಪಟ್ಟಿದೆ. ಜೊತೆಗೆ, ರಾಹುಲ್ ಗಾಂಧಿಯವರ ಗೌರವಕ್ಕೆ ಧಕ್ಕೆ ಉಂಟುಮಾಡುವ, ಅವಹೇಳನಕಾರಿ ಹಾಗೂ ಸುಳ್ಳು ಮಾಹಿತಿಯೊಂದಿಗೆ ಈ ಪೋಸ್ಟ್ ಪ್ರಕಟಿಸಲಾಗಿದೆ ಎಂದು ದೂರಿನಲ್ಲಿ ಉಲ್ಲೇಖಿಸಿದ್ದಾರೆ.ಇಂತಹ ಅಕ್ರಮ, ನಡವಳಿಕೆಗೆ ಸಂಬಂಧಪಟ್ಟಂತೆ, ಬಿಜೆಪಿ ಕರ್ನಾಟಕ ಐಟಿ ಸೆಲ್ನ ಮುಖ್ಯಸ್ಥರು ಹಾಗೂ ಇತರರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳುವಂತೆ ಧನಂಜಯ್ ಅವರು ಪೊಲೀಸ್ ಇಲಾಖೆಗೆ ಮನವಿ ಮಾಡಿದ್ದಾರೆ. ಈ ಪ್ರಕರಣದ ಸಂಬಂಧ ಎಫ್ಐಆರ್ ದಾಖಲಿಸಿರುವ ಪೊಲೀಸರು ತನಿಖೆ ಕೈಗೊಂಡಿದ್ದಾರೆ.

ಕಾಶ್ಮೀರದಲ್ಲಿನ ಉಗ್ರರ ದಾಳಿಯನ್ನು ಕಾಂಗ್ರೆಸ್ ಪಕ್ಷ ತೀವ್ರವಾಗಿ ಖಂಡಿಸಿದೆ. ಈ ಬಗ್ಗೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಪ್ರತಿಕ್ರಿಯಿಸಿ. ಕಾಶ್ಮೀರದಲ್ಲಿನ ಭಯೋತ್ಪಾದಕ ದಾಳಿ ದೇಶದ ಮೇಲಿನ ದಾಳಿ. ದೇಶದ ಏಕತೆ ಹಾಗೂ ಸಮಗ್ರತೆ ರಕ್ಷಣೆಗೆ ನಾವು ಒಂದಾಗಿ ನಿಲ್ಲುತ್ತೇವೆ. ಇಡೀ ದೇಶ ಆಘಾತಕ್ಕೆ ಒಳಗಾಗಿದ್ದು, ಪಾಕಿಸ್ತಾನದ ಭಯೋತ್ಪಾದಕ ಸಂಸ್ಥೆ ಈ ದಾಳಿಯ ಹೊಣೆ ಹೊತ್ತಿದೆ. ಹೀಗಾಗಿ ನಾವು ತಕ್ಕ ತಿರುಗೇಟು ನೀಡಬೇಕು. ಈ ವಿಚಾರದಲ್ಲಿ ನಾವೆಲ್ಲರೂ ಒಂದೇ. ಕೇಂದ್ರ ಸರ್ಕಾರಕ್ಕೆ ಎಲ್ಲಾ ರೀತಿಯ ಸಹಕಾರ ನೀಡಲು ಸಿದ್ಧವಿದ್ದೇವೆ ಎಂದಿದ್ದಾರೆ.

ಉಗ್ರರ ದಾಳಿ ವಿಚಾರದಲ್ಲಿ ರಾಷ್ಟ್ರಮಟ್ಟದಲ್ಲಿ ಯಾವುದೇ ರಾಜಕೀಯ ನಾಯಕರು ರಾಜಕಾರಣ ಮಾಡದೇ ಕೇಂದ್ರ ಸರ್ಕಾರದ ಪರವಾಗಿ ನಿಂತಿವೆ. ಉಗ್ರರನ್ನು ಮಟ್ಟಹಾಕಲೇಬೇಕು. ಇದಕ್ಕೆ ನಮ್ಮ ಬೆಂಬಲಿವಿದೆ ಎಂದು ಮೋದಿ ಸರ್ಕಾರದ ಪರವಾಗಿ ನಿಂತಿದ್ದಾರೆ. ಆದ್ರೆ, ಕರ್ನಾಟಕ ಬಿಜೆಪಿ ಐಟಿ ಸೆಲ್ ಮಾತ್ರ ಕೀಳುಮಟ್ಟದ ರಾಜಕಾರಣ ಮಾಡುತ್ತಿದೆ ಎಂದು ಟೀಕೆಗಳು ವ್ಯಕ್ತವಾಗುತ್ತಿವೆ.

## ಪಹಲ್ಗಾಮ್ ಭಯೋತ್ಪಾದಕರ ಪೈಶಾಚಿಕ ಕೃತ್ಯ ಖಂಡಿಸಿದ ಡಾ.ನಿರ್ಮಲಾನಂದನಾಥಸ್ವಾಮಿ



**ಬೆಂಗಳೂರು, ಏ.24–** ಜಮ್ಮು–ಕಾಶ್ಮೀರದ ಪಹಲ್ಯಾಮ್ ನಲ್ಲಿ ನಡೆದ ಭಯೋತ್ಪಾದಕರ ಪೈಶಾಚಿಕ ಕೃತ್ಯವನ್ನು ಖಂಡಿಸಿರುವ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷ ಡಾ.ನಿರ್ಮಲಾನಂದ ನಾಥಸ್ವಾಮಿ, ನಾವು ಒಂದಾಗಿದ್ದೇವೆ ಎಂಬ ಸಂದೇಶ ರವಾನಿಸಲೇಬೇಕು ಎಂದು ಪ್ರತಿಪಾದಿಸಿದ್ದಾರೆ. ಇದು ಸಾರ್ವಭೌಮತೆ ಮೇಲೆ ನಡೆದಿರುವ ದಾಳಿ. ಉಗ್ರರನ್ನು ಮಟ್ಟ ಹಾಕಲು ಸರ್ಕಾರ ಏನೆಲ್ಲ ಸಾಧ್ಯವೋ ಅದನ್ನು ಮಾಡಬೇಕು ಎಂದಿದ್ದಾರೆ. 26 ಮಂದಿ ಸಾವು ಆಘಾತ ನೀಡಿದೆ. ಪ್ರೀತಿಪಾತ್ರರ ಕಳೆದುಕೊಂಡ ಕುಟುಂಬದವರಿಗೆ ಸಂತಾಪ ಸೂಚಿಸಿ, ಗಾಯಗೊಂಡವರು ಚೇತರಿಸಿಕೊಳ್ಳಲಿ ಎಂದು ಹಾರೈಸಿದ್ದಾರೆ. ಒಂದು ಕಾಲದಲ್ಲಿ ಜಮ್ಮುಕಾಶ್ಮೀರ ಅಶಾಂತಿಯ ಬೀಡಾಗಿತ್ತು. ಮೋದಿ ನಿರ್ಧಾರಗಳಿಂದಾಗಿ ಕಳೆದ ಹಲವು ವರ್ಷಗಳಿಂದ ಶಾಂತಿ ನೆಲೆಸಿದೆ. ಇದನ್ನು ಸಹಿಸದ ಉಗ್ರರು ಮನುಷ್ಯತ್ವ ಮರೆತು ಅತ್ಯಂತ ಬರ್ಬರವಾಗಿ ಗುಂಡಿನ ದಾಳಿ ನಡೆಸಿರುವುದನ್ನು ಸಹಿಸಲು ಸಾಧ್ಯವಿಲ್ಲ. ಉಗ್ರರನ್ನು ಮಟ್ಟಹಾಕಲು ಸರ್ಕಾರ ಏನೆಲ್ಲಾ ಸಾಧ್ಯವೋ ಅದನ್ನೆಲ್ಲ ಮಾಡಬೇಕು. ಅದಕ್ಕೆ ಸಹಕಾರ ಕೊಡಬೇಕು ಎಂದು ಶ್ರೀಗಳು ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.



ಜಮ್ಮು ಮತ್ತು ಕಾಶ್ಮೀರದಲ್ಲಿ ಪ್ರವಾಸಿಗರ ಮೇಲೆ ನಡೆದ ಭಯೋತ್ಪಾದಕ ದಾಳಿಯನ್ನು ಖಂಡಿಸಿ ಹಿಂದೂ ಜಾಗೃತಿ ಸೇನೆಯ ಸದಸ್ಯರು ಗುರುವಾರ ಕಲಬುರಗಿಯಲ್ಲಿ ಪ್ರತಿಭಟನೆ ನಡೆಸಿದರು.

# ಓಂಪ್ರಕಾಶ್ ಕೊಲೆ ಪ್ರಕರಣ ದಾಖಲೆ ಸಿಸಿಬಿಗೆ ಹಸ್ತಾಂತರ ಪುತ್ರಿ ಕೃತಿ ವಿಚಾರಣೆಗೆ ಅಸ್ತು ಎಂದ ನಿಮಾನ್ಸ್ ವೈದ್ಯರು



**ಬೆಂಗಳೂರು, ಏ.24–** ರಾಜ್ಯದ ಮಾಜಿ ಡಿಜಿ ಹಾಗೂ ಐಜಿಪಿ ಓಂ ಪ್ರಕಾಶ್ ಕೊಲೆ ಪ್ರಕರಣದಲ್ಲಿ; ಪುತ್ರಿ ಕೃತಿ ವಿಚಾರಣೆಗೆ ಮಾನಸಿಕವಾಗಿ ಸದೃಢವಾಗಿದ್ದಾರೆ ಎಂದು ನಿಮ್ಹಾನ್ಸ್ ವೈದ್ಯರು ಹೇಳಿದ್ದಾರೆ. ಕೊಲೆಯಾದ ದಿನವೇ ಅವರ ಪತ್ನಿ ಪಲ್ಲವಿ ಮತ್ತು ಮಗಳು ಕೃತಿಯನ್ನು ಹೆಚ್‌ಎಸ್‌ಆರ್ ಲೇಔಟ್ ಪೊಲೀಸರು ವಶಕ್ಕೆ ಪಡೆದಿದ್ದರು. ವಿಚಾರಣೆ ಬಳಿಕ ಪಲ್ಲವಿಯನ್ನು ಬಂಧಿಸಿ ಜೈಲಿಗೆ ಕಳುಹಿಸಲಾಗಿತ್ತು. ಇನ್ನು ಓಂ ಪ್ರಕಾಶ್ ಮಗಳು ಕೃತಿಯ ವಿಚಾರಣೆಯನ್ನು ಆಕೆಗೆ ಮಾನಸಿಕ ಆರೋಗ್ಯ ಸಮಸ್ಯೆ ಇದೆ ಎಂಬ ಕಾರಣಕ್ಕೆ ಮುಂದೂಡಲಾಗಿತ್ತು. ಹೀಗಾಗಿ ಆಕೆಯನ್ನು ವೈದ್ಯಕೀಯ ಪರೀಕ್ಷೆಗೆ ಒಳಪಡಿಸಲು ನಿಮ್ಹಾನ್ಸ್ ಆಸ್ಪತ್ರೆಗೆ ಕಳುಹಿಸಿದ್ದ ಪೊಲೀಸರು, ವೈದ್ಯಕೀಯ ವರದಿ ಕೇಳಿದ್ದರು. ಇದೀಗ, ತನಿಖೆಗೆ ಒಳಪಡಿಸಲು ಕೃತಿ ಮಾನಸಿಕವಾಗಿ ಫಿಟ್ ಇದ್ದಾರೆ ಎಂದು ವೈದ್ಯಕೀಯ ವರದಿ ತಿಳಿಸಿದೆ. ಹೀಗಾಗಿ ಹೆಚ್‌ಎಸ್‌ಆರ್ ಲೇಔಟ್ ಪೊಲೀಸರು ವಿಚಾರಣೆಗೆ ಒಳಪಡಿಸಿದ್ದಾರೆ.

ಎರಡು ದಿನದ ಹಿಂದೆಯೇ, ಅಂದರೆ ಕೊಲೆ ನಡದ ಮರುದಿನವೇ ಪ್ರಕರಣವನ್ನು ಸಿಸಿಬಿಗೆ ವರ್ಗಾವಣೆ ಮಾಡಿ ಪೊಲೀಸ್ ಕಮಿಷನರ್ ಆದೇಶ ಹೊರಡಿಸಿದ್ದರು. ಆದರೆ,

> ನಿವೃತ್ತ ಡಿಜಿಪಿ ಓಂ ಪ್ರಕಾಶ್ ರವರ ಕೊಲೆ ಪ್ರಕರಣದ ತನಿಖೆಯನ್ನು ಸಿಸಿಬಿ ಪೊಲೀಸರು ಆರಂಭಿಸಿದ್ದಾರೆ. ಎಚ್‌ಎಸ್‌ಆರ್ ಲೇಔಟ್ ಠಾಣೆ ಪೊಲೀಸರುಪ್ರಕರಣದ ದಾಖಲೆಗಳನ್ನು ನಿನ್ನೆ ಸಿಸಿಬಿಗೆ ಹಸ್ತಾಂತರಿಸಿದ್ದು, ಸಿಸಿಬಿಯ ಮಹಿಳಾ ಭದ್ರತಾ ವಿಭಾಗದ (ಡಬ್ಲ್ಯೂಪಿಡಬ್ಲ್ಯೂ)ಎಸಿಪಿ ಧರ್ಮೇಂದ್ರ ಅವರ ತಂಡ ವಿವಿಧ ದೃಷ್ಟಿಕೋನಗಳಲ್ಲಿ ತನಿಖೆ ಕೈಗೊಂಡಿದೆ.

ಬುಧವಾರ ಕೇಸ್ ಫೈಲ್ ಅನ್ನು ಅಧಿಕೃತವಾಗಿ ಹಸ್ತಾಂತರ ಮಾಡಲಾಗಿದೆ. ಕೇಸ್ ಫೈಲ್ ಅನ್ನು ಹೊಸದಾಗಿ ಪ್ರಕರಣದ ತನಿಖಾಧಿಕಾರಿಯಾಗಿ ನೇಮಕ ಗೊಂಡಿರುವ ಸಿಸಿಬಿಯ ಎಸಿಪಿ ಧರ್ಮೇಂದ್ರ ಪಡೆದುಕೊಂಡಿದ್ದಾರೆ.

**ವಿಚಾರಣೆಗೆ ಸಹಕರಿಸಿದ ಕೃತಿ:** ಓಂ ಪ್ರಕಾಶ್ ಮಗಳು ಕೃತಿಯನ್ನು ಬುಧವಾರ ಬೆಳಗ್ಗೆಯಿಂದಲೂ ಪೊಲೀಸರು ವಿಚಾರಣೆಗೆ ಒಳಪಡಿಸಿದ್ದು, ಆಕೆ ಸರಿಯಾಗಿ ಸ್ಪಂದಿಸುತ್ತಿಲ್ಲ ಎಂದಿದ್ದಾರೆ. ಕೃತಿಯೇ ಕೊಲೆ ಮಾಡಿದ್ದಾಳೆ ಎಂದು ಬಂಧಿಸಲು ಸಾಕ್ಷಿಗಳು ಸಿಕ್ಕಿಲ್ಲ. ಸಂಜೆಯವರೆಗೂ ವಿಚಾರಣೆ ನಡೆಸಿ ಕೇಸ್ ಫೈಲ್ ಹಸ್ತಾಂತರ ಮಾಡುವ ಮೊದಲು ಆಕೆಯನ್ನು ಮನೆಗೆ ಕಳುಹಿಸಲಾಗಿದೆ. ಜೊತೆಗೆ ಸಿಸಿಬಿ ಅಧಿಕಾರಿಗಳು ಅವಶ್ಯಕತೆ ಇದ್ದಾಗ ನೋಟಿಸ್ ನೀಡಿ ಕೃತಿಯ ವಿಚಾರಣೆ ನಡೆಸಲು ತೀರ್ಮಾನ ಮಾಡಿದ್ದಾರೆ. ಈ ಎಲ್ಲ ಬೆಳವಣಿಗೆಗಳ ನಡುವೆ ಕೇಸ್ ಫೈಲ್ ಪಡೆದಿರುವ ಸಿಸಿಬಿ ಅಧಿಕಾರಿಗಳು ಇಂದು, ಜೈಲಿನಲ್ಲಿ ಇರುವ ಪಲ್ಲವಿಯನ್ನು ತಮ್ಮ ವಶಕ್ಕೆ ನೀಡುವಂತೆ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಲು ತಯಾರಿ ನಡೆಸಿದ್ದಾರೆ. ಇಂದು ಮುಕ್ತ ನ್ಯಾಯಾಲಯದಲ್ಲಿಯೇ ಪಲ್ಲವಿಯನ್ನು ಸಿಸಿಬಿ ವಶಕ್ಕೆ ಪಡೆಯುವ ಸಾಧ್ಯತೆ ಇದ್ದು, ವಿಚಾರಣೆ ನಂತರ ಯಾವ ಯಾವ ಅಂಶಗಳು ಹೊರಬರುತ್ತವೆ ಎಂಬುದನ್ನು

# ಬಾಲ್ಯವಿವಾಹ ನಿಷೇಧ: ಅಧಿಕಾರಿಗಳಿಗೆ ಬೆಂಗಳೂರು ಜಿಲ್ಲಾಧಿಕಾರಿ ಸೂಚನೆ



**ಬೆಂಗಳೂರು, ಏ.24–** ಜಿಲ್ಲೆಯಲ್ಲಿ ಬಾಲ್ಯ ವಿವಾಹಗಳು ನಡೆಯದಂತೆ ಜಿಲ್ಲೆಯ ಎಲ್ಲಾ ತಹಶೀಲ್ದಾರರು, ತಾಲೂಕು ಪಂಚಾಯತಿ ಕಾರ್ಯ ನಿರ್ವಹಣಾಧಿಕಾರಿ ಗಳು ಹಾಗೂ ಬಾಲ್ಯ ವಿವಾಹ ನಿಷೇಧಾಧಿಕಾರಿಗಳು ಸೂಕ್ತ ಕ್ರಮಕೈಗೊಳ್ಳ ಬೇಕು ಎಂದು ಜಿಲ್ಲಾಧಿಕಾರಿ ಜಿ.ಜಗದೀಶ ಸೂಚನೆ ನೀಡಿದ್ದಾರೆ.

ಏ.30 ರಂದು ಅಕ್ಷಯ ತೃತೀಯ ದಿನವಾಗಿ ರುವ ಹಿನ್ನೆಲೆಯಲ್ಲಿ ಜಿಲ್ಲೆಯಲ್ಲಿ, ಸಾಮೂಹಿಕ ಹಾಗೂ ವೈಯಕ್ತಿಕ ವಿವಾಹಗಳು ಅತೀ ಹೆಚ್ಚಾಗಿ ಆಯೋಜನೆಯಾಗುತ್ತಿದ್ದು, ಈ ವೇಳೆ ಬಾಲ್ಯ ವಿವಾಹ ನಡೆಯುವ ಸಾಧ್ಯತೆ ಅಧಿಕವಾಗಿರುವುದನ್ನು ಗಮನಿಸಲಾಗಿದೆ.

ಮದುವೆಯ ಹೆಸರಿನಲ್ಲಿ ಮಕ್ಕಳ ಮೇಲಾಗುವ ದೌರ್ಜನ್ಯಗಳನ್ನು ತಡೆಗಟ್ಟಲು ಹಾಗೂ ಅರಿವು ಕಾರ್ಯಕ್ರಮಗಳ ಮೂಲಕ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಸಾಕಷ್ಟು ಪ್ರಯತ್ನಗಳನ್ನು ಮಾಡುಲಾಗುತ್ತಿದ್ದರೂ ಸಹ ಅಪ್ರಾಪ್ತ ವಯಸ್ಸಿನ ಮಕ್ಕಳಿಗೆ ವಿವಾಹ ಮಾಡಲಾಗುತ್ತಿದೆ. ಏ.30 ರಂದು ಅಕ್ಷಯ ತೃತೀಯ ದಿನ ಇದೆ. ಆದ್ದರಿಂದ ಅಧಿಕಾರಿಗಳು ಕಟ್ಟೆಚ್ಚರ ವಹಿಸಬೇಕು ಎಂದು ನಿರ್ದೇಶನ ನೀಡಿದ್ದಾರೆ.ಬೆಂಗಳೂರು ನಗರ ಜಿಲ್ಲೆಯನ್ನು ಬಾಲ್ಯ ವಿವಾಹ ಮುಕ್ತ ಜಿಲ್ಲೆಯನ್ನಾಗಿ ಮಾಡಲು ಶ್ರಮಿಸೋಣ ಎಂದು ಹೇಳಿದ್ದಾರೆ.

ಬಾಲ್ಯ ವಿವಾಹ ನಡೆಯುವ ಮಾಹಿತಿ ಕಂಡು ಬಂದಲ್ಲಿ ಸಹಾಯವಾಣಿ 1098/112ಕ್ಕೆ ಕರೆ ಮಾಡಿ ಮಾಹಿತಿಯನ್ನು ನೀಡುವುದರ ಮೂಲಕ ಬಾಲ್ಯವಿವಾಹಗಳನ್ನು ತಡೆಗಟ್ಟಲು ಸಹಕಾರ ನೀಡಬೇಕು.

# ಜಾತಿಗಣತಿ ವರದಿ ತಿರಸ್ಕರಿಸಲು ನಾಥಪಂಥ ಜೋಗಿ ಮಹಾಸಭಾ ಆಗ್ರಹ

**ಬೆಂಗಳೂರು, ಏ.24–**ರಾಜ್ಯದಲ್ಲಿ ಸುಮಾರು 3 ಲಕ್ಷಕ್ಕೂ ಅಧಿಕ ಜನಸಂಖ್ಯೆ ಇರುವ ಜೋಗಿ ಜನಾಂಗವನ್ನು ಕೇವಲ 25,546 ಎಂದು ಹಿಂದುಳಿದ ವರ್ಗಗಳ ಆಯೋಗದ ಮಾಜಿ ಅಧ್ಯಕ್ಷರಾದ ಜಯಪ್ರಕಾಶ ಹೆಗ್ಡೆ ವರದಿ ತೋರಿಸಿದ್ದು, ಈ ವರದಿಯನ್ನು ತಿರಸ್ಕರಿಸುವಂತೆ ಜಾತಿಗಣತಿ ವರದಿ ತಿರಸ್ಕರಿಸಲು ನಾಥಪಂಥ ಜೋಗಿ ಮಹಾಸಭಾ ಆಗ್ರಹಿಸಿದೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಮಹಾಸಭಾದ ಅಧ್ಯಕ್ಷ ಎಚ್.ಎಸ್. ಕುಮಾರ ಸ್ವಾಮಿ ಮತ್ತು ಪ್ರಧಾನ ಕಾರ್ಯದರ್ಶಿ ಗಣೇಶ್ ಪ್ರಸಾದ್, ಈ ಹಿಂದೆ 1931ರಲ್ಲಿ ನಡೆಸಿದ ಜಾತಿಗಣತಿಯ ಪ್ರಕಾರ ಅಂದಿನ ಮೈಸೂರು ರಾಜ್ಯದಲ್ಲಿ ಜೋಗಿ ಜನಸಂಖ್ಯೆ ಒಟ್ಟು 14,909 (ಗಂಡಸರು– 7527 ಹೆಂಗಸರು 7382) ಎಂದು ದಾಖಲಾಗಿದೆ.

ಆದರೆ 94 ವರ್ಷಗಳ ನಂತರವೂ ಜೋಗಿ ಜನಾಂಗದ ಸಂಖ್ಯೆಯನ್ನು ಕೇವಲ 25,546 ಎಂದು ಇತ್ತೀಚಿನ ಜಾತಿಗಣತಿ ವರದಿಯಲ್ಲಿ ದಾಖಲಿಸಿರುವುದು ತೀರ ಹಾಸ್ಯಾಸ್ಪದ ಹಾಗೂ ಜೋಗಿ ಜನಾಂಗಕ್ಕೆ ಮಾಡುತ್ತಿರುವ ದ್ರೋಹ. ಇದನ್ನು ಯಾವುದೇ ಕಾರಣಕ್ಕೂ ಒಪ್ಪಿಕೊಳ್ಳಲು ಸಾಧ್ಯವೇ ಇಲ್ಲ ಎಂದರು.

ಅತೀ ಹಿಂದುಳಿದ ಪ್ರವರ್ಗ–1 ರ ಜಾತಿ ಪಟ್ಟಿಯಲ್ಲಿರುವ ಜೋಗಿ ಜನಾಂಗವು 46 ಅಲೆಮಾರಿ, ಅರೆ ಅಲೆಮಾರಿ ಜಾತಿಗಳಲ್ಲಿ ಜೋಗಿ ಜಾತಿಯೂ ಒಂದು. ಸರ್ಕಾರದಿಂದ ಸಾಮಾಜಿಕವಾಗಿ ಶೈಕ್ಷಣಿಕವಾಗಿ ಆರ್ಥಿಕವಾಗಿ ಹೆಚ್ಚಿನ ಸಹಾಯ ಬಯಸುತ್ತಿರುವ ಜೋಗಿ ಸಮಾಜವು ಈ ಸಮಯದಲ್ಲಿ ಇಂತಹ ಅವೈಜ್ಞಾನಿಕ ಮತ್ತು ಸತ್ಯಕ್ಕೆ ದೂರವಾದ ಅಂಕಿ ಅಂಶಗಳು ಮಾರಕವಾಗಲಿದೆ ಎಂದು ಪರಿಗಣಿಸಿ ಮುಖ್ಯಮಂತ್ರಿಗಳು ಈ ಜಾತಿಗಣತಿ ವರದಿಯನ್ನು ಜಾರಿಗೊಳಿಸದಂತೆ ತಡೆಯಬೇಕೆಂದು ಹೇಳಿದರು.

# ಕನ್ನಡಿಗ ಬೆಳಗಾವಿಯ ಸಚಿನ್ ಕತ್ತಿಗೆ ಒಲಿದ ಇಂಟೆಲ್‌ನ ಉನ್ನತ ಹುದ್ದೆ




**ಬೆಂಗಳೂರು ಏ.24–** ಇಂಟೆಲ್ ಕಂಪನಿಯು ತನ್ನ ನೆಟ್ವರ್ಕಿಂಗ್ ಚಿಪ್‌ನ ಮುಖ್ಯಸ್ಥ ಸಚಿನ್ ಕತ್ತಿ ಅವರಿಗೆ ಮುಖ್ಯ ತಂತ್ರಜ್ಞಾನ ಅಧಿಕಾರಿ (ಸಿಟಿಒ) ಮತ್ತು ಕೃತಕ ಬುದ್ಧಿಮತ್ತೆ (ಎಐ) ಮುಖ್ಯಸ್ಥರನ್ನಾಗಿ ಬಡ್ತಿ ನೀಡಿದೆ. ಗ್ರೆಗ್ ಲಾವೆಂಡರ್ ಅವರ ನಿವೃತ್ತಿಯಿಂದ ತೆರವಾಗಿದ್ದ ಸ್ಥಾನಕ್ಕೆ ಸಚಿನ್ ಅವರನ್ನು ನೇಮಿಸಲಾಗಿದೆ.

ಇಂಟೆಲ್‌ಗೆ ಸೇರುವ ಮೊದಲು, ಕತ್ತಿ ಅವರು ಉಹಾನಾ ಎಂಬ ಸ್ಟಾರ್ಟ್‌ಅಪ್ ಅನ್ನು ಸ್ಥಾಪಿಸಿದ್ದರು. ಇದು ಮೊಬೈಲ್ ನೆಟ್‌ವರ್ಕ್‌ಗಳಿಗೆ ನೈಜ–ಸಮಯದ ಎಐ ಅನ್ನು ತರುವ ಕೆಲಸ ಮಾಡುತ್ತಿದೆ. ಇದನ್ನು ವಿಎಂವೇರ್ ಕಂಪನಿ ಸ್ವಾಧೀನಪಡಿಸಿಕೊಂಡಿತು. ಕತ್ತಿ ಅವರು, ಇಂಟೆಲ್ನಲ್ಲಿ ನೆಟ್ವರ್ಕ್ ಮತ್ತು ಎಡ್ಜ್ ಗ್ರೂಪ್ನ ಹಿರಿಯ ಉಪಾಧ್ಯಕ್ಷ ಮತ್ತು ಜನರಲ್ ಮ್ಯಾನೇಜರ್ ಆಗಿ ಕೆಲಸ ಮಾಡಿದ್ದಾರೆ.

**ವೈಯಕ್ತಿಕ ಜೀವನ:** ವೈದ್ಯರ ಕುಟುಂಬದಲ್ಲಿ ಜನಿಸಿದ ಬೆಳಗಾವಿಯ ಕತ್ತಿ ಅವರು ತಮ್ಮ ಪತ್ನಿ ಸೀಮಾ ಮತ್ತು ಇಬ್ಬರು ಮಕ್ಕಳೊಂದಿಗೆ ಯುಎಸ್‌ನಲ್ಲಿ ನೆಲೆಸಿದ್ದಾರೆ. 2003ರಲ್ಲಿ ಐಐಟಿ–ಬಾಂಬೆಯಿಂದ ಪದವಿ ಪಡೆದ ನಂತರ, ಕತ್ತಿ ಅವರು ಮ್ಯಾಸಚೂಸೆಟ್ಸ್ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ (ಎಂಐಟಿ) ಗೆ ಹೋದರು, ಅಲ್ಲಿ ಅವರು ಎಂಎಸ್ ಮತ್ತು ಪಿಎಚ್‌ಡಿ ಪದವಿಗಳನ್ನು ಪಡೆದರು.

ಒಂದು ದಶಕದ ಹಿಂದೆ, ಕುಮು ನೆಟ್ವರ್ಕ್ಸ್ ಅನ್ನು ಸಹ–ಸ್ಥಾಪಿಸಿದರು. ಇದು ಸುಧಾರಿತ ಪೂರ್ಣ–ಡ್ಯುಪ್ಲೆಕ್ಸ್ ರೇಡಿಯೋ ತಂತ್ರಜ್ಞಾನದಲ್ಲಿ ಪರಿಣತಿ ಹೊಂದಿದೆ. ಅವರ ಇತ್ತೀಚಿನ ಸಂಶೋಧನೆಯು ಎಂಎಲ್–ಎಕ್ಸ್ರೇ ML EXray) ಮೇಲೆ ಕೇಂದ್ರೀಕರಿಸುತ್ತದೆ. ಇದು ಅಂಚಿನ ಸ್ಥಳಗಳಲ್ಲಿ ನಿಯೋಜಿಸಲಾದ ಯಂತ್ರ ಕಲಿಕೆ ಅಪ್ಲಿಕೇಶನ್‌ಗಳಿಗೆ ಗೋಚರತೆ ಮತ್ತು ಸ್ವಯಂಚಾಲಿತ ಕಾರ್ಯಾಚರಣೆಗಳನ್ನು ಒದಗಿಸುತ್ತದೆ.



ಜಮ್ಮು ಮತ್ತು ಕಾಶ್ಮೀರದಲ್ಲಿ ಪ್ರವಾಸಿಗರ ಮೇಲೆ ನಡೆದ ಭಯೋತ್ಪಾದಕ ದಾಳಿಯನ್ನು ಖಂಡಿಸಿ ಬೆಂಗಳೂರಿನ ವಕೀಲರ ಸಂಘದ ಸದಸ್ಯರು ಗುರುವಾರ ಪ್ರತಿಭಟನೆ ನಡೆಸಿದರು.

# ಪಹಲ್ಗಾಮ್ ದಾಳಿಗೆ ಭದ್ರತಾಲೋಪ ಕಾರಣ: ಇಂದಿರಾ ಗಾಂಧಿಯಂತೆ ಕಠಿಣ ಕ್ರಮ ಕೈಗೊಳ್ಳಲಿ– ರಾಮಲಿಂಗಾರೆಡ್ಡಿ

**ಕಲಬುರಗಿ, ಏ.24–** ಜಮ್ಮು–ಕಾಶ್ಮೀರದ ಪೆಹ್ಲಗಾಮ್‌ನಲ್ಲಿ ನಡೆದಿರುವ ಉಗ್ರರ ಭೀಕರ ದಾಳಿಯಲ್ಲಿ 26 ಜನ ಪ್ರವಾಸಿಗರ ಸಾವಿಗೆ ಭದ್ರತಾಲೋಪವೇ ಕಾರಣ. ಹಿಂದೆ ಪುಲ್ವಾಮಾದಲ್ಲಿ ದಾಳಿ ನಡೆದಾಗಲೇ, ಪಾಕಿಸ್ತಾನವನ್ನು ಒಡೆದು ಚೂರು ಚೂರು ಮಡಬೇಕಿತ್ತು. ಇಂದಿರಾ ಗಾಂಧಿ ಪಾಕಿಸ್ತಾನ ಒಡೆದು ಬಂಗ್ಲಾದೇಶ ಮಾಡಿದಂತೆ, ಮತ್ತೊಮ್ಮೆ ಪಾಕ್ ದೇಶವನ್ನು ತುಂಡು ತುಂಡಾಗಿ ಮಾಡಿದ್ದರೆ ಪಾಕಿಸ್ತಾನ ಇನ್ನೊಮ್ಮೆ ತಲೆ ಎತ್ತುತ್ತಿರಲಿಲ್ಲ ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಹೇಳಿದರು.

ನಗರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ರಾಮಲಿಂಗರೆಡ್ಡಿ, ಕೇಂದ್ರ ಸರಕಾರದ ವೈಫಲ್ಯದಿಂದ ದುರ್ಘಟನೆ ಸಂಭವಿಸಿದೆ. ಕೇಂದ್ರ ಸರಕಾರ ಕಳೆದ ಮೂರು ವರ್ಷಗಳಿಂದ ಸೇನೆಯಲ್ಲಿ ನೇಮಕಾತಿ ಮಾಡಿಕೊಂಡಿಲ್ಲ. ಅಗ್ನಿ ವೀರ ಅಂತ ಕೇವಲ ಕೆಲವು ವರ್ಷಕ್ಕೆ ಸೀಮಿತವಾಗಿ ಮಾಡಿಕೊಳ್ಳುತ್ತಿದೆ. ದೇಶದಲ್ಲಿ ಜನಸಂಖ್ಯೆ ಹೆಚ್ಚಾಗುತ್ತಿದೆ. ಆದ್ರೆ ಸೇನಾ ನೇಮಕಾತಿ ನಡೆಯುತ್ತಿಲ್ಲ. ಸೇನಾ ನೇಮಕಾತಿ ಮಾಡಿಕೊಂಡು ಬಂದೋಬಸ್ತ್ ಕೈಗೊಂಡಿದ್ದರೆ ಇಂತಹ ಘಟನೆ ನಡೆಯುತ್ತಿರಲಿಲ್ಲ ಎಂದು ಹೇಳಿದರು.

ದುರ್ಘಟನೆಗೆ ಕೇಂದ್ರ ಗುಪ್ತಚರ ಇಲಾಖೆಯ ವೈಫಲ್ಯವೂ ಎದ್ದು ಕಾಣುತ್ತಿದೆ. ಉಗ್ರರನ್ನು ಸದೆ ಬಡಿಯುವ ಕೆಲಸ ಪ್ರಧಾನಿ ಮೋದಿ ಮಾಡಬೇಕು. ಉಗ್ರರ ಮೂಲ ಗುರುತಿಸಿ ಸದೆ ಬಡೆಯಲು ಮಾಡಬೇಕಾದ ಎಲ್ಲಾ ಕ್ರಮ ಕೈಗೊಳ್ಳಬೇಕು. ಈ ಹಿಂದೆ ಇಂದಿರಾಗಾಂಧಿ ಪ್ರಧಾನಿ ಇದ್ದಾಗ ಶತ್ರು ರಾಷ್ಟ್ರ ಪಾಕಿಸ್ತಾನವನ್ನು ಇಬ್ಭಾಗ ಆಗುವಂತೆ ಮಾಡಿದ್ದರು. ಅದಕ್ಕಾಗಿಯೇ ದೇಶ ಅವರನ್ನು ಉಕ್ಕಿನ ಮಹಿಳೆ ಎನ್ನುತ್ತದೆ. ಮೋದಿ ಸಹ ಪಾಕಿಸ್ತಾನದ ವಿರುದ್ಧ ಇಂದಿರಾ ಗಾಂಧಿಯಂತೆ ದಿಟ್ಟ ಕ್ರಮಗಳನ್ನು ಕೈಕೊಳ್ಳಬೇಕೆಂದರು.

1.09 ಲಕ್ಷ ಸೇನಾ ನೇಮಕಾತಿ ಕಡಿಮೆ ಮಾಡಲಾಗಿದೆ. ಸೇನಾ ಬಲವೂ ಹೆಚ್ಚಳವಾಗಬೇಕು. ಒಟ್ಟಾರೆ ಉಗ್ರರ ದಾಳಿಯ ಘಟನೆಯ ಸಂಪೂರ್ಣ ಹೊಣೆ ಕೇಂದ್ರ ಸರ್ಕಾರದ್ದು. ಒಟ್ಟಾರೆ ಇಂತಹ ದಾಳಿ ಪುನರಾವರ್ತನೆಯಾಗದಂತೆ ಪ್ರಧಾನಿ ಮೋದಿ ಹಾಗೂ ಗೃಹ ಸಚಿವ ಅಮಿತ ಶಾ, ರಕ್ಷಣಾ ಸಚಿವ ರಾಜನಾಥಸಿಂಗ್ ಮುಂದಾಗಬೇಕು. ದೇಶದ್ರೋಹಿ ಉಗ್ರರು ಇಲ್ಲಿಯವರೇ ಇರಲಿ ಅಥವಾ ಹೊರಗಿನವರೇ ಇರಲಿ. ಅವರಮನ್ನು ಮಟ್ಟ ಹಾಕುವ ಕೆಲಸ ತುರ್ತಾಗಿ ಆಗಬೇಕು. ಈ ಹಿಂದೆ ಇಂದಿರಾ



ಗಾಂಧಿ ಏನು ಮಾಡಿದ್ದರು ಎಂಬುದನ್ನು ಅರಿತು ದೃಢ ಹೆಜ್ಜೆ ಇಡಬೇಕು. ಇದರಲ್ಲಿ ಇಲ್ಲದ್ದನ್ನು ಹುಡುಕಾಡಬಾರದು ಎಂದರು.

**ಮುಂದಿನ ತಿಂಗಳು ಗಾಣಗಾಪುರಕ್ಕೆ ಭೇಟಿ :** ಜಿಲ್ಲೆಯ ಶ್ರೀ ದತ್ತಾತ್ರೇಯ ಕ್ಷೇತ್ರ ದೇವಲ್ ಗಾಣಗಾಪುರ ಸಮಗ್ರ ಅಭಿವೃದ್ಧಿ ಯಾಗಬೇಕು ಹಾಗೂ ಅಭಿವೃದ್ಧಿ ಪ್ರಾಧಿಕಾರ ರಚನೆಯಾಗಬೇಕು ಎಂಬುದು ಬಹಳ ದಿನಗಳ ಬೇಡಿಕೆಯಿದೆ. ಹೀಗಾಗಿ ಮುಂದಿನ ತಿಂಗಳು ಅಧಿಕಾರಿಗಳೊಂದಿಗೆ ದೇವಲ್ ಗಾಣಾಗಾಪೂರಕ್ಕೆ ಭೇಟಿ ನೀಡಿ ಅಭಿವೃದ್ಧಿ ನೀಲಿನಕ್ಷೆ ರೂಪಿಸಲಾಗುವದು. ಈಗಾಗಲೇ ಚಾಮುಂಡಿ, ಹುಲಿಗೆಮ್ಮ, ಸವದತ್ತಿ, ಕುಕ್ಕೆ ಸುಬ್ರಹ್ಮಣ್ಯಂ ದೇವಾಲಯ ಅಭಿವೃದ್ಧಿ ಪ್ರಾಧಿಕಾರ ರಚನೆಯಾಗಿದೆ. ಜತೆಗೆ ಅಭಿವೃದ್ಧಿಗೂ ಪೂರಕವಾಗಿದೆ. ಈಗ ದೇವಲ್ ಗಾಣಗಾಪುರ, ಕುಕ್ಕೆ ಸುಬ್ರಹ್ಮಣ್ಯಂ ಸೇರಿ ಇತರ ಕ್ಷೇತ್ರಗಳ ಪ್ರಾಧಿಕಾರ ರಚನೆಗೆ ಮನವಿ ಹಾಗೂ ಒತ್ತಡ ಬರುತ್ತಿದ. ನೆರೆಯ ಆಂಧ್ರಪ್ರದೇಶದ ಶ್ರೀಶೈಲಂ ಕ್ಷೇತ್ರದಲ್ಲಿನ ಕರ್ನಾಟಕ ಭವನದ ನಿರ್ಮಾಣ ಕಾರ್ಯ ಚಾಲ್ತಿಗೆ ನೀಡುವ ನಿಟ್ಟಿನಲ್ಲಿ ರಾಜ್ಯದ ಡಿಸಿಎಂ ಡಿ.ಕೆ. ಶಿವಕುಮಾರ ಅವರು ಆಂಧ್ರದ ಡಿಸಿಎಂ ಅವರ ಜತೆ ಮಾತನಾಡಿದ್ದಾರೆ. ಆದರೆ ಒಪ್ಪಂದ ನಡುವಿನೆ ವಿಷಯ ಎರಡೂ ರಾಜ್ಯಗಳ ನಡುವೆ ಅಂತಿಮಗೊಳ್ಳಬೇಕಿದೆ ಎಂದು ಹೇಳಿದರು.

**ಕೆಕೆಆರ್‌ಟಿಸಿಗೆ 700 ಬಸ್:** ಬಜೆಟ್‌ದಲ್ಲಿ ಘೋಷಣೆಯಾಗಿರುವಂತೆ ಪ್ರಸಕ್ತವಾಗಿ 2000 ಬಸ್‌ಗಳನ್ನು ಖರೀದಿ ಮಾಡಲಾಗುತ್ತಿದೆ.

ಇದರಲ್ಲಿ ವಾಯುವ್ಯ ಸಾರಿಗೆ ನಿಗಮ ಹಾಗೂ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮಕ್ಕೆ ತಲಾ 700 ಹೊಸ ಬಸ್‌ಗಳನ್ನು ಕಲ್ಪಿಸಲಾ ಗುವುದು ಎಂದು ಸಚಿವ ರಾಮಲಿಂಗಾರೆಡ್ಡಿ ಇದೇ ಸಂದರ್ಭದಲ್ಲಿ ತಿಳಿಸಿದರು.

# ಕಲ್ಲು ಗಣಿಗಾರಿಕೆ, ಅಕ್ರಮ ಕ್ರಷರ್‌ಗಳ ಆರ್ಭಟ ಕಡಿವಾಣಕ್ಕೆ ನ್ಯಾ.ಬಿ.ವೀರಪ್ಪ ಸೂಚನೆ

**ದಾವಣಗೆರೆ, ಏ.24–** ಉಪಲೋಕಾಯುಕ್ತ ನ್ಯಾಯಮೂರ್ತಿ ಬಿ.ವೀರಪ್ಪ ನಗರದ ಗಣಿ ಮತ್ತು ಭೂ ವಿಜ್ಞಾನ, ಪ್ರಾದೇಶಿಕ ಸಾರಿಗೆ ಹಾಗೂ ಬೆಸ್ಕಾಂ ಕಚೇರಿಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ವೇಳೆ ಜಿಲ್ಲೆಯಲ್ಲಿನ ಕಲ್ಲು ಗಣಿಗಾರಿಕೆ ಹಾಗೂ ಅಕ್ರಮ ಕ್ರಷರ್‌ಗಳ ಆರ್ಭಟಕ್ಕೆ ಕಡಿವಾಣ ಹಾಕಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮೊದಲಿಗೆ ಗಣಿ ಇಲಾಖೆ ಕಚೇರಿ ಭೇಟಿ ನೀಡಿದ ನ್ಯಾ.ಬಿ.ವೀರಪ್ಪ ಜಿಲ್ಲೆಯಲ್ಲಿ ಪರವಾನಿಗೆ ಪಡೆದ ಕಲ್ಲುಕ್ವಾರಿ ಹಾಗೂ ಕ್ರಷರ್‌ಗಳ ಮಾಹಿತಿಯನ್ನು ಎಷ್ಟು ಎಂದು ಪ್ರಶ್ನಿಸಿದರು. ಜಿಲ್ಲೆಯಲ್ಲಿ 128 ಕ್ಕೂ ಹೆಚ್ಚು ಕ್ರಷರ್ಗಳಿಗೆ ಪರವಾನಿಗೆ ನೀಡಿರುವುದಾಗಿ ಅಧಿಕಾರಿಗಳು ಮಾಹಿತಿ ನೀಡಿದರು.

ಪರವಾನಗಿ ಪಡೆದ ಕಲ್ಲುಕ್ವಾರಿ ಹಾಗೂ ಕ್ರಷರ್‌ಗಳು ಸರಿಯಾಗಿ ರಾಜಧನ ಪಾವತಿಸಿವಿಯೇ. ಎಷ್ಟು ರಾಜಧನ ಸರ್ಕಾರಕ್ಕೆ ಸಂದಾಯವಾಗಿದೆ, ಎಷ್ಟು ನಿಂತಿವೆ ಎನ್ನುವ ಮಾಹಿತಿಯನ್ನು ಲೋಕಾಯುಕ್ತಕ್ಕೆ ನೀಡುವಂತೆ ಅವರು ನಿರ್ದೇಶಿಸಿದರು. ಕಲ್ಲುಕ್ವಾರಿಗಳ ಸುತ್ತ ತಂತಿ ಬೇಲಿ ಅಳವಡಿಸಬೇಕು. ಕ್ರಷರ್ಗಳು ಹೆಚ್ಚು ವಾಯುಮಾಲಿನ್ಯ ವಾಗದಂತೆ ಕಲ್ಲುಗಳನ್ನು ಪುಡಿ ಮಾಡಬೇಕು. ಈ ಸಂಬಂಧವಾಗಿ ಎಲ್ಲಾ ನಿಯಮಗಳನ್ನು ಪಾಲನೆ ಮಾಡಲಾಗುತ್ತಿದೆಯೇ ಎಂಬುದನ್ನು ಅಧಿಕಾರಿಗಳು ಪರಿಶೀಲಿಸಬೇಕು ಎಂದು ನ್ಯಾ.ಬಿ.ವೀರಪ್ಪ ಹೇಳಿದರು.

ಉಪಲೋಕಾಯುಕ್ತರ ಭೇಟಿ ವೇಳೆ ದಾವರಣಗೆರೆ ತಾಲ್ಲೂಕಿನ ಗಣಿ ಇಲಾಖೆ ಅಧಿಕಾರಿ ರಜೆ ಮೇಲೆ ತೆರಳಿದ್ದರು. ಇತರೆ ಅಧಿಕಾರಿಗಳು ಸರಿಯಾದ ಮಾಹಿತಿಯನ್ನು ನ್ಯಾಯಮೂರ್ತಿಗಳಿಗೆ ನೀಡಲಿಲ್ಲ. ಉಪಲೋಕಾಯುಕ್ತ ನ್ಯಾ.ಬಿ.ವೀರಪ್ಪನವರ ಗಣಿ ಇಲಾಖೆ ಕಚೇರಿ ಭೇಟಿ ಸಂದರ್ಭದಲ್ಲಿ ಗಣಿ ಇಲಾಖೆಯ ಅಧಿಕಾರಿಯೊಬ್ಬರು ಲಕ್ಷ ಲಕ್ಷ ಬಂಗಾರ ಖರೀದಿಸಿದ ಬಿಲ್‌ಗಳು ಅವರ ವಾಹನದಲ್ಲಿ ದೊರತಿವೆ. ಇವುಗಳನ್ನು ಪರಿಶೀಲಿಸಿ, ಬಿಲ್ನ ಪ್ರತಿ ಪಡೆದುಕೊಂಡ ನ್ಯಾಯಮೂರ್ತಿಗಳು ಸಂಬಂಧಪಟ್ಟ ಅಧಿಕಾರಿಗೆ ಬಂಗಾರ ಖರೀದಿ ವ್ಯವಹಾರ ಸಂಪೂರ್ಣ ವಿವರವನ್ನು ಲೋಕಾಯಕ್ತಕ್ಕೆ ನೀಡುವಂತೆ ತಾಕೀತು ಮಾಡಿದರು.ಇದೇ ವೇಳೆ ಸಿಕ್ಕ ವಾಚು ನ್ಯಾ.ಬಿ.ವೀರಪ್ಪ ಅವರ ಗಮನ ಸೆಳೆಯಿತು. ನೋಡಲು ಲಕ್ಷ ಲಕ್ಷ ಬೆಲೆಬಾಳುವಂತೆ ವಾಚು ಕಂಡಬರುತ್ತಿತ್ತು. ಈ ಕುರಿತು ಸಿಬ್ಬಂದಿಯನ್ನು ವಿಚಾರಿಸಿ, ಆನ್‌ಲೈನ್‌ನಲ್ಲಿ ವಾಚಿನ ಬೆಲೆ ಪರಿಶೀಲಿಸಿದಾಗ ಹೆಚ್ಚಿತ್ತು, ಆದರೆ ಅಂಗಡಿಯಲ್ಲಿ ಪರಿಶೀಲಿಸಿದಾಗ ಅಷ್ಟೊಂದು ಬೆಲೆ ಬಾಳದ ವಾಚು ಎಂಬುದು ಕಂಡುಬಂದಿತು.



ನಂತರ ಪ್ರಾದೇಶಿಕ ಸಾರಿಗೆ ಇಲಾಖೆ ಅಧಿಕಾರಿಗಳ ಕಚೇರಿ ಭೇಟಿ ನೀಡಿದ ನ್ಯಾ. ಬಿ.ವೀರಪ್ಪ, ಜಿಲ್ಲೆಯಲ್ಲಿ ಒಟ್ಟು ನೊಂದಾಯಿತ ವಾಹನಗಳ ಸಂಖ್ಯೆ, ಶಾಲಾ ವಾಹನಗಳು ಹಾಗೂ ಅದಿರು ಸಾಗಾಣಿಕೆ ವಾಹನಗಳ ಮಾಹಿತಿ ಪಡೆದುಕೊಂಡರು. ಕಲ್ಲುಕ್ವಾರಿ ಹಾಗೂ ಕ್ರಷರ್‌ಗಳಿಂದ ಕಲ್ಲಿನ ಪುಡಿಗಳನ್ನು ಸಾಗಾಟ ಮಾಡುವ ವಾಹನಗಳಿಗೆ ಜಿಪಿಎಸ್ ಅಳವಡಿಸುವಂತೆ ಹಾಗೂ ಅವುಗಳ ಓಡಾಟದ ಬಗ್ಗೆ ನಿಖರ ಮಾಹಿತಿ ಪಡೆದುಕೊಳ್ಳುವಂತೆ ಸಾರಿಗೆ ಅಧಿಕಾರಿಗಳಿಗೆ ನಿರ್ದೇಶಿಸಿದರು.

ಬೆಸ್ಕಾಂ ಕಚೇರಿಗೆ ಭೇಟಿ ನೀಡಿದ ನ್ಯಾ.ಬಿ.ವೀರಪ್ಪ ರೈತರಿಗೆ ಸರಬರಾಜು ಮಾಡುವ ಉಚಿತ ವಿದ್ಯುತ್ ಕುರಿತು ಮಾಹಿತಿ ಪಡೆದರು. ರಾತ್ರಿ ವೇಳೆ ಕ್ರಷರ್‌ಗಳು ಅನಧಿಕೃತವಾಗಿ ವಿದ್ಯುತ್ ಸಂಪರ್ಕ ಪಡೆದು ಕಾರ್ಯಾಚರಣೆ ನಡೆಸುತ್ತಿರುವುದಾಗಿ ಆರೋಪಗಳು

## ಶಾಸಕ ಇಕ್ಬಾಲ್ ಹುಸೇನ್ ಸೀರೆ ಹಂಚುವ ಮೂಲಕ ಮಹಿಳಾ ದಿನಾಚರಣೆ

# ಶಾಸಕನ ವಿರುದ್ಧ ಮಹಿಳೆಯರ ಆಕ್ರೋಶ

ರಾಮನಗರ, ಏ.24– ಕಾಶ್ಮೀರದ ಪಹಲ್ಗಾಮ್‌ನಲ್ಲಿ ಹಿಂದೂಗಳನ್ನು ಗುರಿಯಾಗಿಸಿ ನಡೆಸಿದ ಉಗ್ರರ ಗುಂಡಿನ ದಾಳಿಯಿಂದಾಗಿ 26 ಪ್ರವಾಸಿಗರು ಸಾವಿಗೀಡಾಗಿದ್ದಾರೆ. ಇದರಿಂದ ಇಡೀ ದೇಶವೇ ಹಿಂದೂಗಳ ನರಮೇಧದಿಂದ ಶೋಕಾಚರಣೆಯಲ್ಲಿ ಮುಳುಗಿದೆ. ಇಬ್ಬರು ಕನ್ನಡಿಗರ ಮೃತದೇಹದ ಅಂತ್ಯಕ್ರಿಯೆ ನಡೆಯುತ್ತಿದೆ. ಇಂತಹ ವೇಳೆಯಲ್ಲಿ ರಾಮನಗರದ ಶಾಸಕ ಇಕ್ಬಾಲ್ ಹುಸೇನ್ ಸಾವಿರಾರು ಮಹಿಳೆಯರಿಗೆ ಸೀರೆಯನ್ನು ಹಂಚುವ ಮೂಲಕ ಮಹಿಳಾ ದಿನಾಚರಣೆಯ ದಿಸೆಯಲ್ಲಿ ಸಂಭ್ರಮಾಚರಣೆಯಲ್ಲಿ ತೊಡಗಿದ್ದಾರೆ. ಸಾವಿರಾರು ಮಹಿಳೆಯರು ಸೀರೆಗಾಗಿ ನೂಕುನುಗ್ಗಲು ಮಾಡಿದ್ದಾರೆ.

ಹೌದು, ಇಡೀ ದೇಶವೇ ಕಾಶ್ಮೀರದಲ್ಲಿ ನಡೆದ ಹಿಂದೂ ಪ್ರವಾಸಿಗರ ಮೇಲೆ ಉಗ್ರರು ನಡೆಸಿದ ಗುಂಡಿನ ದಾಳಿಯಿಂದ ಶೋಕದಲ್ಲಿ ಮುಳುಗಿದೆ. ಏ.22ರ ಮಧ್ಯಾಹ್ನ ನಡೆದ ಘಟನೆಯಿಂದ ಎಲ್ಲರೂ ಬೆಚ್ಚಿ ಬಿದ್ದಿದ್ದು, ಹಿಂದೂಗಳಲ್ಲಿ ಆತಂಕ ಮನೆ ಮಾಡಿದ್ದು ಉಗ್ರರಿಗೆ ನೆರವು ನೀಡುತ್ತಿರುವ ಪಾಕಿಸ್ತಾನದ ಮೇಲೆ ಸೇಡು ತೀರಿಸಿಕೊಳ್ಳಬೇಕು ಎಂದು ಹಪಹಪಿಸುತ್ತಿದ್ದಾರೆ. ಇನ್ನು ಪ್ರವಾಸಕ್ಕೆಂದು ಹೋದ ಹಿಂದೂ ಅಮಾಯಕ ಪ್ರವಾಸಿಗರು ತಮ್ಮ ಜೀವಗಳನ್ನು ಕಳೆದುಕೊಂಡಿದ್ದಾರೆ. ಇದರಲ್ಲಿ ಶಿವಮೊಗ್ಗದ ಮಂಜುನಾಥ್ ಮತ್ತು ಬೆಂಗಳೂರಿನ ಭರತ್ ಭೂಷಣ್ ಒಬ್ಬರು ಹತರಾಗಿದ್ದಾರೆ. ಇಬ್ಬರ ಮೃತದೇಹಗಳನ್ನು ರಾಜ್ಯಕ್ಕೆ ತಂದು ಅಂತ್ಯಕ್ರಿಯೆ ನಡೆಸಲಾಗುತ್ತಿದೆ. ನಮ್ಮ ಕರ್ನಾಟಕ ರಾಜ್ಯ ಸೇರಿದಂತೆ ಇಡೀ ದೇಶವೇ ಶೋಕದಲ್ಲಿ ಮುಳುಗಿರುವಾಗ ರಾಮನಗರ ಶಾಸಕ ಇಕ್ಬಾಲ್ ಹುಸೇನ್ ಮಾತ್ರ ಇದಕ್ಕೂ ತನಗೂ ಸಂಬಂಧವೇ ಇಲ್ಲವೆಂಬಂತೆ ಸಂಭ್ರಮಾಚರಣೆಯಲ್ಲಿ ತೊಡಗಿದ್ದಾರೆ. ದೇಶವೇ ಶೋಕದಲ್ಲಿ ಮುಳುಗಿರುವಾಗ ರಾಮಗರದಲ್ಲಿ ಶಾಸಕ ಇಕ್ಬಾಲ್ ಹುಸೇನ್, ಬೃಹತ್ ಮಟ್ಟದಲ್ಲಿ ಮಹಿಳಾ ದಿನಾಚರಣೆ ಕಾರ್ಯಕ್ರಮವನ್ನು ಆಯೋಜನೆ ಮಾಡಿದ್ದಾರೆ. ಈ ಮಹಿಳಾ ದಿನಾಚರಣೆಯಲ್ಲಿ ಎಲ್ಲ ಮಹಿಳೆಯರಿಗೆ ಸೀರೆಗಳನ್ನು ಹಂಚಿಕೆ ಮಾಡಿದ್ದಾರೆ.

ರಾಮನಗರದ ದೊಡ್ಡ ಕ್ರಿಡಾಂಗಣದಲ್ಲಿ ಉಚಿತ ಸೀರೆ ಹಂಚಿಕೆ ಮಾಡಲಾಗುತ್ತಿದ್ದು, ಕಾಯ ಕ್ರಮಕ್ಕೆ ಬಂದಿದ್ದ ಮಹಿಳೆಯರು ಸೀರೆಗಾಗಿ ಮುಗಿ ಬಿದ್ದಿದ್ದಾರೆ. ನಾ ಮುಂದು, ತಾ ಮುಂದು ಎಂದು ಸೀರೆಗಾಗಿ ಪರದಾಡುತ್ತಿದ್ದಾರೆ. ಕೆಲವರು ಸುಮಾರು 7–8 ಅಡಿ ಎತ್ತರವಾಗಿ ನಿರ್ಮಾಣ ಮಾಡಲಾಗಿರುವ ಕಬ್ಬಿಣದ ಕಾಂಪೌಂಡ್‌ಗಳನ್ನು



ಹತ್ತಿ ಸೀರೆ ಪಡೆಯಲು ಪರದಾಡುತ್ತಿದ್ದಾರೆ. ಇದರಿಂದ ಶಾಸಕ ಇಕ್ಬಾಲ್ ಹುಸೇನ್‌ಗೆ ಅದೆಂಥಾ ಖುಷಿಯೋ ತಿಳಿಯುತ್ತಿಲ್ಲ.ಇನ್ನು ರಾಮನಗರದಲ್ಲಿ ಆಯೋಜನೆ ಮಾಡಿದ್ದ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ಜಿಲ್ಲಾ ಮಟ್ಟದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಮಹಿಳೆಯರಿಗೆ ಪ್ರಶಸ್ತಿ ಪ್ರದಾನ ಮತ್ತು ಸನ್ಮಾನವನ್ನೂ ಮಾಡಲಾಯಿತು.

ಈ ಕಾರ್ಯಕ್ರಮಕ್ಕೆ ಬಂದಿದ್ದ ಸಾವಿರಾರು ಮಹಿಳೆಯರಿಗೆ ಉಚಿತ ಸೀರೆ ವ್ಯವಸ್ಥೆ ಮಾಡಿದ್ದರು. ಉಚಿತ ಸೀರೆಗಾಗಿ ಮಹಿಳೆಯರ ತಳ್ಳಾಟ–ನೂಕಾಟ ಹೆಚ್ಚಾಗಿದ್ದು, ಓರ್ವ ಮಹಿಳೆಯ ಕೈ ಮುರಿದಿದೆ. ಕೂಡಲೇ ಮಹಿಳೆ ಜಿಲ್ಲಾಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಲಾಗುತ್ತಿದೆ. ಇನ್ನು ಮಹಿಳಾ ದಿನಾಚರಣೆ ಕಾರ್ಯಕ್ರಮಕ್ಕೆ ಸಾವಿರಾರು ಮಹಿಳೆಯರನ್ನ ಕರೆಸಿ ಸರಿಯಾದ ವ್ಯವಸ್ಥೆ ಮಾಡದ ಹಿನ್ನೆಲೆಯಲ್ಲಿ ಶಾಸಕನ ವಿರುದ್ಧ ನೂರಾರು ಮಹಿಳೆ ಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

# ರೈಲ್ವೆ ಅಭಿವೃದ್ಧಿ: ಜಿಲ್ಲಾ ವಾಣಿಜ್ಯ ಸಂಸ್ಥೆಯಿಂದ ಅಧಿಕಾರಿಗೆ ಮನವಿ



**ಬಳ್ಳಾರಿ, ಏ.24–** ದಿನಾಂಕ 23.04.2025, ಬುಧವಾರ ರಂದು ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಉಪಾಧ್ಯಕ್ಷರಾದ ಹಾಗೂ ವಿಭಾಗೀಯ ರೈಲ್ವೆ ಬಳಕೆದಾರರ ಸಲಹಾ ಸಮಿತಿ ಸದಸ್ಯರಾದ, ಸೊಂತ ಗಿರಿಧರ್ ಇವರು, ಹುಬ್ಬಳ್ಳಿ ವಿಭಾಗೀಯ ರೈಲ್ವೆ ವ್ಯವಸ್ಥಾಪಕಿ ಮೀನಾ ಬೇಲಾ, ಇವರನ್ನು ಭೇಟಿ ಮಾಡಿ, ರೈಲು ನಿಲ್ದಾಣದ ಅಭಿವೃದ್ಧಿ ಕಾರ್ಯಗಳನ್ನು ಆದಷ್ಟು ಬೇಗ ಪೂರ್ಣಗೊಳಿಸಬೇಕು, ರದ್ದಾದ ರೈಲುಗಳನ್ನು ಪುನಃ ಸ್ಥಾಪಿಸಬೇಕು, ಹೊಸ ರೈಲುಗಳನ್ನು ಪ್ರಾರಂಭಿಸಬೇಕು, ವಂದೇ ಭಾರತ್ ರೈಲು ಪ್ರಾರಂಭಿಸಬೇಕು. ಬುಕಿಂಗ್ ಕಚೇರಿಯ ಕೌಂಟರ್ ಬಳಿಯಿರುವ ರಿಸರ್ವೇಶನ್ ಕೌಂಟರ್ ಸ್ಥಳಾಂತರಿಸುವುದು ಸೂಕ್ತವಲ್ಲ ಎಂದು ತಿಳಿಸಲಾಯಿತು. ಮತ್ತು ರೈಲ್ವೆ ನಿಲ್ದಾಣದ ಇತರೆ ಅಭಿವೃದ್ಧಿ ಕಾರ್ಯಗಳ ಬಗ್ಗೆ ಚರ್ಚೆ ಮಾಡಿ, ಮನವಿಯನ್ನು ಸಲ್ಲಿಸಲಾಯಿತು.

ಹುಬ್ಬಳ್ಳಿ ವಿಭಾಗೀಯ ರೈಲ್ವೆ ವ್ಯವಸ್ಥಾಪಕ ಮೀನಾ ಬೇಲಾ, ರವರು ಮನವಿಯನ್ನು ಸ್ವೀಕರಿಸಿ, ಇದಕ್ಕೆ ಸ್ಪಂದಿಸಿದ ಮೀನಾ ಬೇಲಾ, ರವರು ತಾವು ಮನವಿಯಲ್ಲಿ ಸಲ್ಲಿಸಿದ ಕಾಮಗಾರಿಗಳನ್ನು ಪೂರ್ಣಗೊಳಿಸಿಲು ಪ್ರಯತ್ನ ಮಾಡುತ್ತೇನೆ, ಕುಂಭಮೇಳದ ಸಮಯದಲ್ಲಿ ಸ್ಥಗಿತಗೊಂಡಿದ್ದ ರೈಲ್ವೆ ಸಂಖ್ಯೆ 11303 ಮತ್ತು 11304, ಬೆಳಗಾವಿಯಿಂದ ಹೈದರಾಬಾದ್‌ಗೆ ಸಂಚಾರ ಮಾಡುವ ರೈಲ್ವೆಯನ್ನು ಶ್ರೀಘ್ರದಲ್ಲಿ ಪುನಾರರಂಭ ಮಾಡಲಾಗುತ್ತದೆ ಎಂದು ತಿಳಿಸಿದರು.

# ಪ್ರದೀಪ್ ಈಶ್ವರ್ ವಿರುದ್ಧ ಸಂಸದ ಸುಧಾಕರ್ ಕಿಡಿ

**ಚಿಕ್ಕಬಳ್ಳಾಪುರ, ಏ.24–** ಮಂಚೇನಹಳ್ಳಿಯಲ್ಲಿ ರೈತನ ಮೇಲೆ ಗುಂಡು ಹಾರಿಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಶಾಸಕ ಪ್ರದೀಪ್ ಈಶ್ವರ್ ವಿರುದ್ಧ ಸಂಸದ ಡಾ. ಕೆ. ಸುಧಾಕರ್ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಸುದ್ದಿಗಾರರೊಂದಿಗೆ, ನಾನು ಶಾಸಕನಿದ್ದಾಗ ಕನಗಾನಕುಪ್ಪ ಗ್ರಾಮದ ಬಳಿ ಕ್ರಷರ್ ಮಾಡಲು ಬಿಡಲಿಲ್ಲ. ಈಗ ಅದೇ ಗ್ರಾಮದಲ್ಲಿ ಸಿನಿಮಾ ಡೈಲಾಗ್ ಹೊಡೆದು ಕ್ರಷರ್ ನಿಲ್ಲಿಸುತ್ತೇನೆ ಎಂದು ವ್ಯಕ್ತಿ ಹೇಳಿದ್ದಾನೆ. ಇವತ್ತು ಎಷ್ಟು ಹಣಕ್ಕೆ ಮಾರಾಟ ಆಗಿದ್ದಾನೆ. ಜಿಲ್ಲೆಯಲ್ಲಿನ



ಪೊಲೀಸರು ಏನಾಗಿದ್ದಾರೆ, ಅಧಿಕಾರಿಗಳು ತಮ್ಮ ಕೈಗೆ ತಾವೇ ಬೇಡಿ ಹಾಕಿಕೊಂಡಿದ್ದಾರಾ? ಎಂದು ಪ್ರಶ್ನೆ ಮಾಡಿದ್ದಾರೆ.

ನನ್ನ 50 ವರ್ಷಗಳಲ್ಲಿ ಯಾವತ್ತೂ ಶೂಟೌಟ್ ಕಂಡಿರಲಿಲ್ಲ. ಹಾಡುಹಗಲೇ ಗುಂಡಿಕ್ಕಿ ಶೂಟ್ ಮಾಡುತ್ತಾನೆ ಅಂದ್ರೆ ಅರ್ಥ ಏನು? ಆ ಹುಡುಗ ಸಾವನ್ನಪ್ಪಿದರೆ ಗತಿ ಏನು? ಡಿಸಿಗೆ ದುಡ್ಡು ಕೊಟ್ಟರೆ ಯಾವುದಕ್ಕೆ ಬೇಕಾದರೂ ಸಹಿ ಹಾಕುತ್ತಾರೆ. ಚಿಕ್ಕಬಳ್ಳಾಪುರ ಹೆಸರನ್ನು ನಾನು ರಾಷ್ಟ್ರ ಮಟ್ಟಕ್ಕೆ ತೆಗೆದುಕೊಂಡು ಹೋಗಿದ್ದೆ. ಆದರೆ, ನೀವು ಹಾಡು ಹಗಲೇ ಗನ್ ಶೂಟ್ ಮಾಡುವ ಮಟ್ಟಕ್ಕೆ ತಂದಿದ್ದೀರಿ ನಮಸ್ಕಾರ ಎಂದು ವ್ಯಂಗ್ಯವಾಡಿದ್ದಾರೆ.

## ಮೂರು ತಿಂಗಳಲ್ಲಿ ಜಿಪಂ-ತಾಪಂ ಚುನಾವಣೆ

# 8 ತಿಂಗಳಲ್ಲಿ ಗ್ರಾಪಂ–ಪಪಂ ಚುನಾವಣೆ: ಡಾ.ಶರಣಪ್ರಕಾಶ ಪಾಟೀಲ್

**ಹುಬ್ಬಳ್ಳಿ, ಏ.24–** ಮೂರು ತಿಂಗಳಲ್ಲಿ ಜಿಲ್ಲಾ ಪಂಚಾಯತ್ ಹಗೂ ತಾಲ್ಲೂಕು ಪಂಚಾಯತ್ ಚುನಾವಣೆಗಳು ನಡೆಯಲಿದ್ದು, ಸರ್ಕಾರ ಎಲ್ಲ ಸಿದ್ಧತೆಗಳನ್ನು ಮಾಡಿಕೊಳ್ಳುತ್ತಿದೆ ಎಂದು ವೈದ್ಯಕೀಯ ಶಿಕ್ಷಣ ಸಚಿವ ಡ.ಶರಣಪ್ರಕಾಶ ಪಾಟೀಲ್ ತಿಳಿಸಿದರು.

ಸುದ್ದಿಗಾರರೊಂದಿಗೆ, ಜಿಲ್ಲಾ ಪಂಚಾಯತ್ ಮತ್ತು ತಾಲ್ಲೂಕು ಪಂಚಾಯತ್ ಜೊತೆಗೆ ಇನ್ನೆಂಟು ತಿಂಗಳಲಿ ಗ್ರಾಮ ಪಂಚಾಯತ್ ಮತ್ತು ಪಟ್ಟಣ ಪಂಚಾಯತ್ ಚುನಾವನೆಗಳೂ ನಡೆಯುವ ಸಾಧ್ಯತೆಗಳಿವೆ. ಈ ಹಿಂದಿನ ಸರ್ಕಾರ ಬಹಳಷ್ಟು ಗೊಂದಲ ಸೃಷ್ಟಿಸಿ, ಚುನಾವಣೆಯನ್ನೇ ನಡೆಸಲಿಲ್ಲ. ಅವರಿಗೆ ಚುನಾವಣೆ ನಡೆಸುವ ಇಚ್ಛೆಯೇ ಇರಲಿಲ್ಲ. ನಾವು ಅಧಿಕಾರ ವಿಕೇಂದ್ರೀಕರಣದ ಪರವಾಗಿರುವವರು. ಹಿಂದಿನ ಸರ್ಕಾರ ಮೀಸಲಾತಿಯಲ್ಲಿ ದೊಡ್ಡ ಸಮಸ್ಯೆ ಮಾಡಿದೆ. ಅದೆಲ್ಲವನ್ನು ಇದೀಗ ಸರಿಪಡಿಸಿ ಚುನಾವಣೆ ಮಾಡುತ್ತೇವೆ. .ಬಿಜೆಪಿಯವರಿಗೆ ನಾಚಿಕೆ ಎನ್ನುವುದಿದ್ದರೆ ಕೇಂದ್ರ ಸರ್ಕಾರ ಮಾಡಿರುವ ಬೆಲೆ ಏರಿಕೆ ವಿರುದ್ಧ ಪ್ರತಿಭಟನೆ ಮಾಡಲಿ. ನಾವು ಹಾಲಿನ ದರ ಏರಿಸಿದ್ದೇವೆ, ವಿದ್ಯುತ್ ಬೆಲೆ ಏರಿಸಿದ್ದೇವೆ. ಹಾಲಿನ ಹಣ ರೈತರಿಗೆ



ಹೋಗುತ್ತಿದೆ, ವಿದ್ಯುತ್ ಬೆಲೆ ಏರಿಕೆ ಗೃಹ ಜ್ಯೋತಿ ಅಡಿ ನಾವೇ ಭರಿಸುತ್ತಿದ್ದೇವೆ. ಆದರೆ ಕೇಂದ್ರ ಸರ್ಕಾರ 11 ವರ್ಷಗಳಲ್ಲಿ ಒಂದೇ ಒಂದು ಯೋಜನೆ ಬಡವರ ಪರ ಮಾಡಿಲ್ಲ. ಇಂಧನ ಬೆಲೆ , ಗ್ಯಾಸ್ ಬೆಲೆ ಏರಿಕೆ ಮಾಡಿದ್ದಾರೆ. ಕೇಂದ್ರ ಸರ್ಕಾರ ಶ್ರೀಮಂತರ ಸಾಲ ಮನ್ನಾ ಮಾಡಿದೆ ವಿನಃ ಯಾವೊಬ್ಬ ರೈತರ ಸಾಲ ಮನ್ನಾ ಮಾಡಿಲ್ಲ ಎಂದರು.

ಕಾರ್ಯಕರ್ತರಿಗೆ ಸೂಕ್ತ ಸ್ಥಾನಮಾನ: ಈಗಾಗಲೇ ಪಕ್ಷದ ನಿಷ್ಠಾವಂತ ಕಾರ್ಯಕರ್ತರಿಗೆ ಸೂಕ್ತ ಸ್ಥಾನಮಾನ ನೀಡಬೇಕೆನ್ನುವ ಉದ್ದೇಶದಿಂದ ಪಟ್ಟಿ ಸಿದ್ಧಪಡಿಸಿದ್ದು, ಶೀಘ್ರದಲ್ಲಿ ಪಟ್ಟಿ ಬಿಡುಗಡೆಯಾಗಲಿದೆ. ಅದರನ್ವಯ ಚುನಾವಣೆ ಸಹ ನಡೆಸಲಾಗುವುದು. ಜಾತಿಗಣತಿ ಕುರಿತು ಚರ್ಚೆಗಳು ನಡೆದಿವೆ. ಸಚಿವ ಸಂಪುಟದಲ್ಲಿ ಅಭಿಪ್ರಾಯ ವ್ಯಕ್ತವಾಗಿದೆಯೇ ಹೊರತು ಪರ–ವಿರೋಧ ಅಭಿಪ್ರಾಯ ವ್ಯಕ್ತವಾಗಿಲ್ಲ. ಸಿಎಂ ಸಿದ್ದರಾಮಯ್ಯನವರು ಸಚಿವರಿಗೆ ಅಭಿಪ್ರಾಯ ಹಂಚಿಕೊಳ್ಳಲು ಮುಕ್ತ ಅವಕಾಶ ಕಲ್ಪಿಸಿಕೊಟ್ಟಿದ್ದಾರೆ. ಮುಂದಿನ ಸಚಿವ ಸಂಪುಟ ಸಭೆಯಲ್ಲಿ ಸಮಗ್ರವಾಗಿ ಚರ್ಚಿಸಿ ಅಂತಿಮ ನಿರ್ಧಾರ ಕೈಗೊಳ್ಳಲಾಗುವುದು. ವಿದೇಶದಲ್ಲಿ ರಾಹುಲ್ ಗಾಂಧಿ ಭಾರತದ ಸಂವಿಧಾನ ಬಗ್ಗೆ ಹಗುರವಾಗಿ, ದೇಶದ ಕುರಿತು ಅವಹೇಳನಕಾರಿಯಾಗಿ ಏನೂ ಮಾತನಾಡಿಲ್ಲ. ಕೆಲವು ವಿಷಯಗಳ ಬಗ್ಗೆ ಮಾತನಾಡಿದ್ದಾರೆ ಅಷ್ಟೇ. ಪ್ರಧಾನಿ ಮೋದಿ ಸಹ ಈ ಹಿಂದೆ ಸಾಕಷ್ಟು ಬಾರಿ ವಿದೇಶದಲ್ಲಿ ಇಲ್ಲಿನ ವ್ಯವಸ್ಥೆ ಕುರಿತು ಮಾತನಾಡಿದ್ದಾರೆ. ಈ ಕುರಿತು ಹೆಚ್ಚಿಗೆ ಪ್ರತಿಕ್ರಿಯಿಸಲಾರೆ ಎಂದರು.

ಜನಿವಾರ ಕತ್ತರಿಸಿದ ಪ್ರಕರಣ ಖಂಡನೀಯ. ಈ ವಿಚಾರವಾಗಿ ಮುಖ್ಯಮಂತ್ರಿಗಳು ಸ್ಪಷ್ಟವಾಗಿ ಹೇಳಿದ್ದಾರೆ. ನಮ್ಮ ಸರ್ಕಾರ ಎಲ್ಲಾ ಧರ್ಮಗಳಿಗೂ ಮಾನ್ಯತೆ ಕೊಡುತ್ತದೆ. ಈ ಕುರಿತು ತಪ್ಪಿತಸ್ಥರ ಮೇಲೆ ಕ್ರಮ ಕೈಗೊಳ್ಳುವುದಾಗಿ ಸಿಎಂ ಹೇಳಿದ್ದಾರೆ. ಅದರಲ್ಲೇನೂ ಗೊಂದಲ ಇಲ್ಲ. ಈ ಘಟನೆ ಸರ್ಕಾರದ ನಿರ್ದೇಶನದ ಮೇರೆಗೆ ಮಾಡಿರುವಂಥದ್ದಲ್ಲ. ತಪ್ಪು ಮಾಡಿದವರ ಮೇಲೆ ಕ್ರಮ ಆಗುತ್ತದೆ. ಪರೀಕ್ಷೆ ಮಿಸ್ ಮಾಡಿಕೊಂಡ ವಿದ್ಯಾರ್ಥಿಗೆ ಯಾವ ರೀತಿ ನ್ಯಾಯ ಒದಗಿಸಬೇಕೆಂದು ಚಿಂತನೆ ಮಾಡಲಾಗುತ್ತಿದೆ. ಇದು ಒಂದೇ ಪರೀಕ್ಷೆ ಸಮಯದಲ್ಲಿ ಆಗಿರುವುದು. ಅಧಿಕಾರಿಗಳಿಗೆ ಸಂಬಂಧಪಟ್ಟ ಸಚಿವರು ಸೂಚನೆ ಕೊಟ್ಟಿದ್ದಾರೆ. ಯಾರ ಭಾವನೆಗೂ ಧಕ್ಕೆ ಆಗದಂತೆ ನಮ್ಮ ವರ್ತನೆ ಇರಬೇಕು ಎಂದರು.

ಅನ್ಯಭಾಷಿಕರನ್ನು ದ್ವೇಷಿಸುವ ಕೆಲಸ ಯಾರಿಂದಲೂ ಆಗಬಾರದು. ಬೆಂಗಳೂರಿನಲ್ಲಿ ವಿಂಗ್ ಕಮಾಂಡರ್‌ನಿಂದ ಹಲ್ಲೆ ಪ್ರಕರಣದ ಬಗ್ಗೆ ನನಗೆ ಸಂಪೂರ್ಣ ಮಾಹಿತಿ ಇಲ್ಲ. ನಾವು ಕನ್ನಡಿಗರಾಗಿ ನಮ್ಮ ಭಾಷೆ ಮೇಲೆ ಪ್ರೀತಿ ಇರುತ್ತದೆ. ಆದರೂ ನಾವು ಪರಭಾಷೆ ಸಹಿಷ್ಣುಗಳಾಗಿದ್ದೇವೆ. ಇಂತಹ ಘಟನೆಗಳು ಬೆಂಗಳೂರು, ಕರ್ನಾಟಕಕ್ಕೆ ಶೋಭೆ ತರುವುದಿಲ್ಲ. ಬೇರೆ ಭಾಷಿಗರು ಸಹ ಇಲ್ಲಿ ಬಂದು ನೆಲೆಸಿದ್ದಾರೆ. ಬೇರೆಯವರಿಗೆ ದ್ವೇಷ ಮಾಡುವ ಕೆಲಸ ನಾವು ಮಾಡಲ್ಲ. ಹೀಗಿರುವಾಗ ಅವರೂ ದ್ವೇಷಿಸುವ ಕೆಲಸ ಮಾಡಬಾರದು ಎಂದರು.

# ಪೆಹಲ್ಗಾಮ್ ದಾಳಿ ವಿರೋಧಿಸಿ ಬೀದರ್‌ನಲಗಲಿ ಎಬಿವಿಪಿ ಮೆರವಣಿಗೆ



**ಬೀದರ್, ಏ.24–** ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ವತಿಯಿಂದ ನಗರದ ಹೆಣ್ಣು ಮಗು ವೃತ್ತದಲ್ಲಿ ಭಯೋತ್ಪಾದಕರ ದಾಳಿಯಲ್ಲಿ ತೀವ್ರವಾಗಿ ಗಾಯ ಗೊಂಡಿರುವವರಿಗೆ ಹಾಗೂ ಹತ್ಯೆಗೊಳಗಾಗಿರುವವರಿಗೆ ಕ್ಯಾಂಡಲ್ ಮಾರ್ಚ ಮಾಡುವುದರ ಮೂಲಕ ಶ್ರದ್ಧಾಂಜಲಿ ಸಲ್ಲಿಸುವ ಕಾರ್ಯಕ್ರಮ ನಡೆಸಿದರು.

ಸಂಘಟನೆಯ ಜಿಲ್ಲಾ ಕಾರ್ಯದರ್ಶಿ ಹೇಮಂತ್ ಅವರು ಮಾತನಾಡಿ, ಜಮ್ಮು ಮತ್ತು ಕಾಶ್ಮೀರ ಭಾರತದ ಅವಿಭಾಜ್ಯ ಅಂಗವೆಂಬುದು ಸಾರ್ವಕಾಲಿಕ ಸತ್ಯ, ಅಲ್ಲಿನ ಪ್ರತ್ಯೇಕವಾದದ ಮನಸ್ಥಿತಿಯನ್ನು ಬದಲಾಯಿಸಲು ಹಾಗೂ ಜನ–ಜೀವನ ಸ್ಥಿತಿಗತಿಗಳನ್ನು ಸ್ಥಿರಗೊಳಿಸಿ ಶಾಂತಿಯುತ ಕಾಶ್ಮೀರವೆಂಬುದನ್ನು ಖಚಿತಪಡಿಸಿಕೊಳ್ಳಲು ಕೇಂದ್ರ ಸರ್ಕಾರ ಈಗಾಗಲೇ ಸಾಕಷ್ಟು ಕ್ರಮಗಳನ್ನು ತೆಗೆದುಕೊಂಡಿರುತ್ತದೆ. ಆದರೂ ಸಹ ಅಲ್ಲಿನ ಭಯೋತ್ಪಾದಕರ ನುಸುಳುಕೋರರ ಹಾವಳಿ ತಡೆಗಟ್ಟಲು ಸಾಧ್ಯವಾಗಿಲ್ಲ ಎಂದು ಕಳವಳ ವ್ಯಕ್ತಪಡಿದರು.


ಇತ್ತೀಚೆಗೆ ವಲಸೆ ಕಾರ್ಮಿಕರ ಮೇಲಿನ ದಾಳಿಗಳು ಮಾರುಕಟ್ಟೆಗಳಲ್ಲಿ ದಾಳಿಗಳು ಹಾಗೂ ಇಂದು ನಡೆದಿರುವ ಪ್ರವಾಸಿಗರ ಮೇಲಿನ ದಾಳಿ ಗಮನಿಸುವುದಾದರೆ ಕಾಶ್ಮೀರದ ಶಾಂತಿ ಮತ್ತು ಭಾರತದೊಂದಿಗಿನ ಏಕತೆಗೆ ಉಗ್ರರು ಅರ್ಥಾತ್ ಪ್ರತ್ಯೇಕವಾದಿಗಳು ತೀವ್ರ ಸವಾಲು ಒಡ್ಡುತ್ತಿರುವುದು ಕಳವಳಕಾರಿ ಸಂಗತಿಯಾಗಿದೆ. ಆದ್ದರಿಂದ ಕೇಂದ್ರ ಸರ್ಕಾರ ಉಗ್ರರ ವಿರುದ್ಧ ವ್ಯಾಪಕ ಕಠಿಣ ಕ್ರಮಗಳನ್ನು ಕೈಗೊಂಡು ತಕ್ಕ ಉತ್ತರವನ್ನು ನೀಡಬೇಕೆಂದು ಅವರು ಒತ್ತಾಯಿಸಿದರು.

# ಮೇ 5ರಂದು ಜಿಲ್ಲಾಮಟ್ಟದ ದಿಶಾ ಸಮಿತಿ ಸಭೆ–ಮಹಮ್ಮದ್ ಹ್ಯಾರಿಸ್ ಸುಮೇರ್

**ಬಳ್ಳಾರಿ, ಏ.24–** ಜಿಲ್ಲಾ ಪಂಚಾಯತ್ ವತಿಯಿಂದ ಜಿಲ್ಲಾ ಅಭಿವೃದ್ಧಿ ಸಮನ್ವಯ ಉಸ್ತುವಾರಿ ಸಮಿತಿ ದಿಶಾ ಸಮಿತಿಯ ಸಭೆಯನ್ನು ಮೇ 05ರಂದು ಬೆಳಿಗ್ಗೆ 10 ಗಂಟೆಗೆ ಸಂಡೂರು ತಾಲ್ಲೂಕಿನ ನಂದಿಹಳ್ಳಿ ಸ್ನಾತಕೋತ್ತರ ಕೇಂದ್ರದ ಸಭಾಂಗಣದಲ್ಲಿ ನಡೆಸಲು ನಿಗದಿಪಡಿಸಲಾಗಿದೆ ಎಂದು ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಹಾಗೂ ದಿಶಾ ಸಮಿತಿಯ ಸದಸ್ಯ ಕಾರ್ಯದರ್ಶಿಯೂ ಆದ ಮಹಮ್ಮದ್ ಹ್ಯಾರೀಸ್ ಸುಮೇರ್ ಅವರು ತಿಳಿಸಿದ್ದಾರೆ.

ಬಳ್ಳಾರಿ ಲೋಕಸಭಾ ಕ್ಷೇತ್ರದ ಸಂಸದರು ಹಾಗೂ ಜಿಲ್ಲಾ ಮಟ್ಟದ ದಿಶಾ ಸಮಿತಿಯ ಅಧ್ಯಕ್ಷರೂ ಆದ ಈ.ತುಕಾರಾಂ ಅವರು ಸಭೆಯ ಅಧ್ಯಕ್ಷತೆ ವಹಿಸುವರು.ಸಭೆಗೆ ಸಂಬಂಧಪಟ್ಟ ಇಲಾಖಾ ಅಧಿಕಾರಿಗಳು ಅಗತ್ಯಪೂರ್ಣ ಮಾಹಿತಿಯೊಂದಿಗೆ ತಪ್ಪದೇ ಹಾಜರಾಗಬೇಕು ಎಂದು ಅವರು ತಿಳಿಸಿದ್ದಾರೆ.

ಅಹವಾಲು ಸ್ವೀಕಾರ: ಮೇ 05 ರಂದು ಬೆಳಿಗ್ಗೆ 09.30 ಗಂಟೆಗೆ ಸಂಡೂರು ತಾಲ್ಲೂಕು ತಹಶೀಲ್ದಾರರ ಕಚೇರಿಯಲ್ಲಿ ಕೇಂದ್ರ ಮತ್ತು ಕೇಂದ್ರ ಪುರಸ್ಕೃತ ಹಾಗೂ ಇತರೆ ಯೋಜನೆಗಳ



ಕುರಿತಂತೆ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸುವರು. ಅಧಿಕಾರಿಗಳು ತಪ್ಪದೇ ಹಾಜರಿರಬೇಕು ಎಂದು ಅವರು ತಿಳಿಸಿದ್ದಾರೆ.

# ಸಮಾರಂಭಗಳಲ್ಲಿ ಹಾರದ ಬದಲು ಪುಸ್ತಕ ನೀಡಿ: ಪ್ರೊ.ಉಮಾಕಾಂತ ಸಲಹೆ

**ಬೀದರ್, ಏ.24–** ವ್ಯಕ್ತಿಯ ಜೀವನದ ಜನನದಿಂದ ಮರಣದ ಕೊನೇ ಸಂದರ್ಭದ ಎಲ್ಲ ಕಾರ್ಯಕ್ರಮಗಳಲ್ಲಿ ಪುಸ್ತಕಗಳನ್ನೇ ಕಾಣಿಕೆಯಾಗಿ ನೀಡಿ ಪುಸ್ತಕ ಸಂಸ್ಕೃತಿ ಹೆಚ್ಚಿಸಬೇಕೆಂದು ನವದೆಹಲಿಯ ವೆಂಕಟೇಶ್ವರ ವಿಶ್ವವಿದ್ಯಾಲಯದ ಪ್ರಾಧ್ಯಾಪಕ ಪ್ರೊ. ಉಮಾಕಾಂತ್ ಪಾಟೀಲ್ ಸಲಹೆ ಮಾಡಿದರು. ಯಾರು ಪುಸ್ತಕಗಳನ್ನು ತಲೆಬಾಗಿ ಓದುವರೋ ಅವರು ಜೀವನದಲ್ಲಿ ತಲೆಯೆತ್ತಿ ಓಡಾಡಬಲ್ಲರು. ಪುಸ್ತಕಗಳನ್ನು ಸ್ನೇಹಿತರಂತೆ ಪ್ರೀತಿಸರ್ಬೇಕು. ಅವು ಓದುವುದರಿಂದ ಧೈರ್ಯದಿಂದ ಬದುಕು ಸಾಹಿಸಬಹುದು. ಸಾಧು–ಸಂತರ, ಮಹಾತ್ಮ ಮಹಾನುಭಾವರ, ದೇಶಪ್ರೇಮಿಗಳ ಪುಸ್ತಕ ಓದಿ ಅವರ ಆದರ್ಶ ಮೈಗೂಡಿಸಿಕೊಳ್ಳಬೇಕು. ಪುಸ್ತಕಗಳನ್ನು ಹೆಚ್ಚು ಓದಿದವರ ದೇಶ ವಿಶ್ವದಲ್ಲಿ ಪ್ರಚಾರದಲ್ಲಿರುತ್ತದೆ. ಅಧ್ಯಕ್ಷ ಪ್ರೊ. ಜಗನ್ನಾಥ ಹೆಬ್ಬಾಳೆ ಅವರು ಆಶಯ ನುಡಿಗಳನ್ನಾಡಿ, 1995ರ ಯುನೆಸ್ಕೋ ಶೆಕ್ಸ್‌ಪಿಯರ್ ಸ್ಮರಣಾರ್ಥವಾಗಿ ವಿಶ್ವ ಪುಸ್ತಕ ದಿನಾಚರಣೆ ಆಚರಿಸಲು ಘೋಷಣೆ ಮಾಡಿತು. ವಿದ್ಯಾರ್ಥಿಗಳು ಸಾಮಾಜಿಕ ಜಾಲತಾಣ ಬಳಕೆ ಬಿಟ್ಟು ಪುಸ್ತಕಗಳನ್ನು ಓದಬೇಕು. ಇದರಿಂದ ಸಾಗರದಷ್ಟು ಜ್ಞಾನ ಸಿಗುತ್ತದೆ. ಪುಸ್ತಕದ ಕಡೆಗೆ ವಿದ್ಯಾರ್ಥಿಗಳು ಬರದೇ ಇದ್ದಾಗ, ಪುಸ್ತಕಗಳನ್ನೇ ವಿದ್ಯಾರ್ಥಿಗಳ ಹತ್ತಿರ ಕೊಂಡೊಯ್ಯುವ ಪ್ರಯತ್ನ ನಾವು ಮಾಡುತ್ತಿದ್ದೇವೆ ಎಂದರು.

# ಸಚಿವ ಖರ್ಗೆ ಹಟಾವೋ ಕಲಬುರಗಿ ಬಚಾವೋ ಆಂದೋಲನ: ನಾಳೆ ಸಿಎಂ ಬಳಿ ರೈತ ಹೋರಾಟ ಸಮಿತಿ ನಿಯೋಗ

**ಕಲಬುರಗಿ, ಏ.24–** ಜಿಲ್ಲೆಯಲ್ಲಿ ವ್ಯಾಪಕ ಅಕ್ರಮ ಮರಳುಗಾರಿಕೆ ತಡೆಯುವಲ್ಲಿ ವಿಫಲವಾಗಿರುವ ಹಾಗೂ ಮಾನವ ಹಕ್ಕುಗಳ ಉಲ್ಲಂಘನೆಯನ್ನು ಖಂಡಿಸಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಹಠಾವೋ, ಕಲಬುರಗಿ ಬಚಾವೋ ಎಂಬ ಘೋಷಣೆಯಡಿ ಏಪ್ರಿಲ್ 26ರಂದು ಬೆಂಗಳೂರಿನಲ್ಲಿ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರನ್ನು ಜಿಲ್ಲಾ ರೈತ ಹೋರಾಟ ಸಮಿತಿ ನಿಯೋಗ ಭೇಟಿ ಮಾಡಿ ಮನವಿ ಪತ್ರ ಸಲ್ಲಿಸಲಿದೆ ಎಂದು ಹಿರಿಯ ಹೋರಾಟಗಾರ ಮತ್ತು ರಾಜ್ಯ ಬಿಜೆಪಿ ಓಬಿಸಿ ಮೋರ್ಚಾ ಪ್ರಧಾನ ಕಾರ್ಯದರ್ಶಿ ಅವ್ವಣ್ಣ ಮ್ಯಾಕೇರಿ ಅವರು ಹೇಳಿದರು.

ನಗರದ ಪತ್ರಿಕಾಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ 16ರಂದು ಮುಖ್ಯಮಂತ್ರಿಗಳು ನಗರಕ್ಕೆ ಬಂದಾಗ ನೆಟೆ ರೋಗದಿಂದ ಹಾಳಾಗಿರುವ ಬೆಳೆಗಳಿಗೆ ಪರಿಹಾರ ಮತ್ತು ಚಿತ್ತಾಪುರ ತಾಲ್ಲೂಕಿನಲ್ಲಿ ಕೋಟ್ಯಾಂತರ ರೂ. ಗಳ ಅಕ್ರಮ ಮರಳುಗಾರಿಕೆ ತಡೆಯಲು ಒತ್ತಾಯಿಸಿ ಪೋಲಿಸ್ ಇಲಾಖೆಯಿಂದ ಅನುಮತಿ ಪಡೆದು ಮನವಿ ಪತ್ರ ಸಲ್ಲಿಸಲು ಹೋದಾಗ ಎಲ್ಲಿ ತಮ್ಮ ಅಕ್ರಮ ಮರಳುಗಾರಿಕೆ ಬಯಲಾಗಲಿದೆ ಎಂಬ ಭಯದಿಂದ ಪೊಲೀಸರ ಮೂಲಕ ಸಚಿವ ಪ್ರಿಯಾಂಕ್ ಖರ್ಗೆ ಅವರು ತಡೆದರು. ಆದಾಗ್ಯೂ, ಅವರ ವೈಫಲ್ಯವನ್ನು ನಾವು ನಿಯೋಗದ ಮೂಲಕ ಮುಖ್ಯಮಂತ್ರಿಗಳಿಗೆ ಬಹಿರಂಗಪಡಿಸುವುದಾಗಿ ತಿಳಿಸಿದರು.

ಕಳೆದ 2024–2025ನೇ ಸಾಲಿನಲ್ಲಿ ನೆಟೆರೋಗದಿಂದ ಹಾಳಾದ ತೊಗರಿ ಪರಿಹಾರಕ್ಕಾಗಿ ಎತ್ತಿನ ಬಂಡಿಗಳಿಂದ ಹೋರಾಟ ಮಾಡಿದ್ದರಿಂದ ಸರ್ಕಾರ 677 ಕೋಟಿ ರೂ.ಗಳ ವಿಮೆ, 1,01,657 ಹೆಕ್ಟರ್ ಪ್ರದೇಶದಲ್ಲಿ, 1,31,394 ರೈತರಿಗೆ ವಿಮೆ ಘೋಷಿಸಲಾಗಿತ್ತು. 85,495 ಹೆಕ್ಟರ್ ಪ್ರದೇಶದ 1,21,316 ವಿಮಾ ರಹಿತ ರೈತರಿಗೆ ಪರಿಹಾರು ನೀಡುವಂತೆ ಕೃಷಿ ನಿರ್ದೇಶಕರು ಸರ್ಕಾರಕ್ಕೆ ವರದಿಯನ್ನೂ ಸಲ್ಲಿಸಿದ್ದರು. ಆದಾಗ್ಯೂ, ಇಲ್ಲಿಯವರೆಗೂ ವಿಮಾ ಹಣ ಸಹ ಪಾವತಿಯಾಗಿಲ್ಲ. ವಿಮಾ ರಹಿತ ರೈತರಿಗೆ ಬರಬೇಕಾದ 300 ಕೋಟಿ ರೂ.ಗಳ ಪರಿಹಾರವೂ ಸಹ ಘೋಷಣೆ ಮಾಡಿಲ್ಲ. ಈ ಕುರಿತು ಮುಖ್ಯಮಂತ್ರಿಗಳ ಗಮನಕ್ಕೆ ತರಲಾಗುವುದು ಎಂದು ಅವರು ಹೇಳಿದರು.

ಚಿತ್ತಾಪುರ ತಾಲ್ಲೂಕಿನಲ್ಲಿ ಅಕ್ರಮ ಮರಳುಗಾರಿಕೆಯಿಂದ ಸರ್ಕಾರದ ಬೊಕ್ಕಸಕ್ಕೆ ಕೋ ಟ್ಯಾಂತರ ರೂ.ಗಳ ವಂಚನೆಯಾಗುತ್ತಿದೆ. ಕಾಗಿಣಾ ನದಿಯಲ್ಲಿ ಕೆಐಆರ್‌ಡಿಬಿ ಸಂಸ್ಥೆಗೆ 40 ಎಕರೆ ಅನುಮತಿ ಪಡೆದು ಖಾಸಗಿ ವ್ಯಕ್ತಿಗಳಿಗೆ ಮಾರಾಟ ಮಾಡಿ ನಿಯಮ ಉಲ್ಲಂಘಿಸಿದ್ದಾರೆ. ಸದರಿ ಖಾಸಗಿ ವ್ಯಕ್ತಿಗಳು ದುರ್ಲಾಭ ಪಡೆದು ನದಿಯ ಎರಡು ಕಡೆ ಶಾಶ್ವತ ರಸ್ತೆ ನಿರ್ಮಿಸಿ 60–70 ಅಡಿ ಆಳದಲ್ಲಿ ದಿನಾಲೂ 300 ಬೃಹತ್ ಗಾತ್ರದ ಟಿಪ್ಪರ್‌ಗಳ ಮುಖಾಂತರ ಹಗಲು ರಾತ್ರಿ ಎನ್ನದೇ ರಾಜಾರೋಷವಾಗಿ ಅಕ್ರಮ ಮರಳುಗಾರಿಕೆ ಮಾಡುವುದರಿಂದ ಸರ್ಕಾರಕ್ಕೆ ನೂರಾರು ಕೋಟಿ ರೂ.ಗಳು ತೆರಿಗೆ ವಂಚನೆಯಾಗುತ್ತಿದೆ. ಇದರಲ್ಲಿ ನೇರವಾಗಿ ಪೋಲಿಸ್, ಕಂದಾಯ, ಗಣಿ ಮತ್ತು ಸಾರಿಗೆ ಇಲಾಖೆಯ ಅಧಿಕಾರಿಗಳು ಶಾಮೀಲಾಗಿದ್ದಾರೆ. ಕೂಡಲೇ ಚಿತ್ತಾಪುರ ತಾಲ್ಲೂಕು ಕಾರ್ಯಪಡೆ ಸಮಿತಿಯ ಎಲ್ಲ ಅಧಿಕಾರಿಗಳನ್ನು ವಜಾಗೊಳಿಸಿ, ಅಕ್ರಮ ಮರಳುಗಾರಿಕೆ ಮಾಡಿದವರ ಮೇಲೆ ಪ್ರಕರಣ ದಾಖಲಿಸಿ, ಸರ್ಕಾರಕ್ಕೆ ತೆರಿಗೆ ತುಂಬಿಸಿಕೊಳ್ಳಬೇಕು ಎಂದು ಅವರು ಒತ್ತಾಯಿಸಿದರು.



ಬಿಜೆಪಿ ಓಬಿಸಿ ಮೋರ್ಚಾ ಪ್ರಧಾನ ಕಾರ್ಯದರ್ಶಿ ಅವ್ವಣ್ಣ ಮ್ಯಾಕೇರಿ ಮಾಧ್ಯಮಗಳೊಂದಿಗೆ ಮಾತನಾಡಿದರು.

ಚಿತ್ತಾಪುರ ತಾಲ್ಲೂಕಿನ ಬೆಳಗುಂಪಿ, ಬಾಗೋಡಿ, ಕಾಟಮದೇವರಹಳ್ಳಿ, ಇವಣಿ ಗ್ರಾಮಗಳಲ್ಲಿ ಹೆಸರಿಗೆ ಮಾತ್ರ ಪಟ್ಟಾ ಜಮೀನಿಗೆ ಪರವಾನಿಗೆ ಪಡೆದು ನೂರಾರು ಎಕರೆ ಪ್ರದೇಶದಲ್ಲಿ ಸುಮಾರು 60–70 ಅಡಿ ಆಳದವರೆಗೆ ಮರಳು ತೆಗೆದು ಮರಳು ಗಣಿಗಾರಿಕೆಯ ಎಲ್ಲ ನಿಯಮಗಳನ್ನು ಉಲ್ಲಂಘಿಸಿ ಅನಧಿಕೃತವಾಗಿ ತಾವಾಗಿ ಸುಮಾರು ಆರೇಳು ಧಾಕ್ಕಾಗಳಲ್ಲಿ 100–125 ಬೃಹತ್ ಗಾತ್ರದ ಟಿಪ್ಪರಗಳಿಂದ ಅಕ್ರಮ ಮರಳುಗಾರಿಕೆ ಮಾಡಿದ್ದಾರೆ. ಇದರಿಂದಲೂ ಸರ್ಕಾರಕ್ಕೆ ನೂರಾರು ಕೋಟಿ ರೂ.ಗಳು ನಷ್ಟವಾಗಿದೆ. ಕೂಡಲೇ ತಾಲ್ಲೂಕು ಕಾರ್ಯಪಡೆ ರದ್ದುಗೊಳಿಸಬೇಕು. ಅಕ್ರಮ ಮರಳು ಗಾರಿಕೆ ಮಾಡಿದವರಿಗೆ ಕಠಿಣ ಶಿಕ್ಷೆ ವಿಧಿಸಲು ಕ್ರಮ ಕೈಗೊಳ್ಳಬೇಕು. ಇಷ್ಟೊಂದು ದೊಡ್ಡ ಪ್ರಮಾಣದಲ್ಲಿ ಸಾವಿರಾರು ಕೋಟಿ ರೂ.ಗಳ ಲೂಟಿಮಾಡಿರುವ ದರೋಡೆಕೋರರನ್ನು ಸುಮ್ಮನೆ ಬಿಡುವ ತಾಲ್ಲೂಕು ಕಾರ್ಯಪಡೆ, ರೈತರು ಟ್ರ್ಯಾಕ್ಟರ್ ಎಂಜಿನ್ ತೆಗೆದುಕೊಂಡು ನದಿಯಲ್ಲಿ ತೊಳೆಯುವ ಸಂದರ್ಭದಲ್ಲಿ ಚಾಲಕ ಶ್ರೀಕಾಂತ್ ಪಟ್ಟೇದಾರ್ ಅವರಿಗೆ ಮರಳು ಕಳ್ಳತನ ಮಾಡಿದ ಆರೋಪದ ಮೇಲೆ ಹಲ್ಲೆ ಮಾಡಿ ಪ್ರಕರಣ ದಾಖಲಿಸಲಾಗಿದೆ ಎಂದು ಗಂಭೀರ ಆರೋಪ ಮಾಡಿದ ಮ್ಯಾಕೇರಿ ಅವರು, ನಿಜವಾಗಲೂ ತಹಸಿಲ್ದಾರ್ ಅವರಿಗೆ ಧಮ್ಮಿದ್ದರೆ, ತಾಕತ್ತು ಇದ್ದರೆ ದೊಡ್ಡ ಪ್ರಮಾಣದಲ್ಲಿ ಕಾಗಿಣಾ ನದಿಯಲ್ಲಿ ಲೂಟಿಯಾದಾಗಲೂ ಮಲಗಿಕೊಂಡಿದ್ದು, ಇಡೀ ಚಿತ್ತಾಪುರದಲ್ಲಿ ಸಂಪನ್ಮೂಲ ಲೂಟಿ ಆಗುವುದನ್ನು ತಡೆಯಲು ಆಗುತ್ತಿಲ್ಲ. ಹಾಗಾಗಿ ಶ್ರೀಕಾಂತ್ ಪಟ್ಟೇದಾರ್ ಅವರ ಮೇಲಿನ ಪ್ರಕರಣವನ್ನು ಬೇಶರತ್ತಾಗಿ ರದ್ದುಪಡಿಸಬೇಕು ಎಂದು ಅವರು ಒತ್ತಾಯಿಸಿದರು.

ಕಾಂಗ್ರೆಸ್ ಸರ್ಕಾರ ಪಂಚ ಗ್ಯಾರಂಟಿಗಳ ಹೆಸರಿನಲ್ಲಿ ಅಧಿಕಾರಕ್ಕೆ ಬಂದಾಗ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಭ್ರಷ್ಟಾಚಾರದ ವಿರುದ್ಧದ ಆರನೇ ಗ್ಯಾರಂಟಿ ಕುರಿತು ಮಾತನಾಡಿದ್ದರು. ಅಕ್ರಮ ಹಾಗೂ ಅವ್ಯವಹಾರದ ಆರೋಪದ ಮೇಲೆ ಅಧಿಕಾರಿ ಭೀಮಾಶಂಕರ್? ತೆಗ್ಗಳ್ಳಿ, ಮಾಜಿ ಸಂಸದ ಬಸವರಾಜ್ ಪಾಟೀಲ್ ಸೇಡಂ, ರೆಡ್ಡಿ ಮುಂತಾದವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವ ಕುರಿತು ಮಾತನಾಡಿದ್ದರು. ಈಗ ನೋಡಿದರೆ ತೆಗ್ಗಳ್ಳಿ ಅವರನ್ನು ತಮ್ಮ ಆಪ್ತ ಕಾರ್ಯದರ್ಶಿಗಳನ್ನಾಗಿ ಹಾಗೂ ರೆಡ್ಡಿ ಅವರನ್ನು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯಲ್ಲಿ ನೇಮಕ ಮಾಡಿದ್ದಾರೆ ಎಂದು ಅವರು ದೂರಿದರು.

ಕೂಡಲೇ ಚಿತ್ತಾಪುರದಲ್ಲಿನ ಅಕ್ರಮ ಮರಳುಗಾರಿಕೆ ಶಾಶ್ವತವಾಗಿ ನಿಲ್ಲಬೇಕು. ರೈತರಿಗೆ ವಿಮೆ ಹಣ ಹಾಗೂ ಬೆಳೆ ನಷ್ಟದ ಪರಿಹಾರ ಹಣ ಕೊಡಬೇಕು. ಕೂಡಲೇ ಜಿಲ್ಲಾ ಉಸ್ತುವಾರಿ ಸಚಿವ ಸ್ಥಾನವನ್ನು ನಿಭಾಯಿಸುವಲ್ಲಿ ವಿಫಲವಾಗಿರುವ ಪ್ರಿಯಾಂಕ್ ಖರ್ಗೆ ಅವರನ್ನು ವಜಾಗೊಳಿಸಿ, ಜಿಲ್ಲೆಯನ್ನು ಕಾಪಾಡಬೇಕು ಎಂದು ಕೋರಿ ಮುಖ್ಯಮಂತ್ರಿಗಳ ಬಳಿಗೆ ನಿಯೋಗ ಹೋಗಲಾಗುವುದು ಎಂದರು.

## ಪಾಕಿಸ್ತಾನದ ಕೈವಾಡದಿಂದ ಉಗ್ರರ ಅಟ್ಟಹಾಸ: ಬಿ.ವೈ.ವಿಜಯೇಂದ್ರ

**ರಾಯಚೂರು, ಏ. 24:** ಜಮ್ಮು–ಕಾಶ್ಮೀರದ ಪೆಹಲ್ಗಾಮ್‌ನಲ್ಲಿ ನಡೆದ ಉಗ್ರರ ದಳಿ ಖಂಡನೀಯ. ಭಾರತ ಹೇಡಿಯಲ್ಲ. ಹಿಂದೆ ಪುಲ್ವಾಮಾ ದಾಳಿಯ ನಂತರ ನಡೆದ ಸರ್ಜಿಕಲ್ ಸ್ಟ್ರೈಕ್‌ನಿಂದ ಸುಮಾರು 300ಕ್ಕೂ ಹೆಚ್ಚು ಉಗ್ರರನ್ನುಹತ್ಯೆ ಮನಾಡಲಾಗಿತ್ತು. ಆದರೂ ಪಾಕಿಸ್ತಾನ ತನ್ನ ಬುದ್ಧಿ ಬಿಟ್ಟಿಲ್ಲ. ಇಡೀ ಪಾಕಿಸ್ತಾನವೇ ಉಗ್ರರ ದೇಶವಾಗಿದೆ. ಇದಕ್ಕೆ ಪಾಠ ಕಲಿಸದೇ ಬಿಡುವದಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿದರು.

ಕಾಂಗ್ರೆಸ್ ವಿರುದ್ಧ ನಗರದಲ್ಲಿಂದು ಆಯೋಜಿಸಿದ್ದ ಜನಾಕ್ರೋಶ ರ‍್ಯಾಲಿಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಉತ್ಸಾಹದಿಂದ ಬಂದ ಜನರಿಗೆ ಕೃತಜ್ಞತೆ ಸಲ್ಲಿಸುತ್ತೇನೆ. ಪೆಹ್ಲಗಾಮ್ ಘಟನೆಯ ಹಿನ್ನೆಲೆಯಲ್ಲಿ ನಾಳೆ ನಾಡಿದ್ದು ನಡೆಯಬೇಕಾದ ಜನಾಕ್ರೋಶ ಯಾತ್ರೆ ಮುಂದೂಡಿದ್ದೇನೆ ಎಂದೂ ತಿಳಿಸಿದರು.

ಈ ದಾಳಿ ವೇಳೆ ಮೃತಪಟ್ಟ ಬೆಂಗಳೂರಿನ ಭರತ್ ಭೂಷಣ್ ಅವರ ಅಂತ್ಯಕ್ರಿಯೆಯಲ್ಲಿ ನಾಳೆ ನಾನು ಭಾಗವಹಿಸಲಿದ್ದೇನೆ. ಉಗ್ರರು ಎಲ್ಲೇ ಅಡಗಿದ್ದರೂ, ಯಾವ ದೇಶದ ಕುಮ್ಮಕ್ಕು ಇದ್ದರೂ ಅದನ್ನು ಮಟ್ಟ ಹಾಕುವ ಶಕ್ತಿ ಭಾರತಕ್ಕಿದೆ. ದೇಶದಲ್ಲಿ ನರೇಂದ್ರ ಮೋದಿಜೀ ಅವರು ಪ್ರಧಾನಿಯಾಗಿದ್ದಾರೆ ಎಂಬುದೇ ಈ ವಿಶ್ವಾಸಕ್ಕೆ ಕಾರಣ ಎಂದು ತಿಳಿಸಿದರು. ಉಕ್ಕಿನ ಮನುಷ್ಯ ಎನಿಸಿದ ಗೃಹ ಸಚಿವ ಅಮಿತ್ ಶಾ ಜೀ ಜೊತೆಗಿದ್ದಾರೆ. ಯಾವುದೇ ಉಗ್ರರನ್ನು ಸುಮ್ಮನೆ ಬಿಡುವುದಿಲ್ಲ ಎಂದು ಹೇಳಿದರು.


ರಾಯಚೂರಲ್ಲಿ ಬಿಜೆಪಿ ಆಯೋಜಿಸಿದ ಜನಾಕ್ರೋಶ ರ‍್ಯಾಲಿಯನ್ನುದ್ದೇಸಿಸಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಮಾತನಾಡಿದರು.

ಕಾಶ್ಮೀರದಲ್ಲಿ ಹಿಂದಿದ್ದ ರಕ್ತದೋಕುಳಿ ಬದಲು ಶಾಂತಿ ನೆಲೆಸಿತ್ತು. ಪ್ರವಾಸಿಗರೂ ದೊಡ್ಡ ಸಂಖ್ಯೆಯಲ್ಲಿ ಅಲ್ಲಿಗೆ ಹೋಗುತ್ತಿದ್ದರು. ಮೋದಿಜೀ ಅವರ ಸರಕಾರವು ಮತ್ತೆ 3ನೇ ಬಾರಿ ಅಧಿಕಾರಕ್ಕೆ ಬಂದಾಗ ಕಾಶ್ಮೀರದಲ್ಲಿ ಶಾಂತಿ ಸುವ್ಯವಸ್ಥೆ ಸಹಿಸಲು ಸಾಧ್ಯವಾಗದೇ ಪಾಕಿಸ್ತಾನದ ಕೈವಾಡದಿಂದ ಉಗ್ರರು ಅಟ್ಟಹಾಸ ಮೆರೆದಿದ್ದಾರೆ. ಭಾರತದ ಪ್ರಧಾನಿ ಮೋದಿಜೀ ಅವರು ಕೈಗೆ ಬಳೆ ತೊಟ್ಟಿಲ್ಲ. ಅವರು ಉಗ್ರರನ್ನು ಮಟ್ಟಹಾಕುವ ಕೆಲಸ ಮಾಡಲಿದ್ದಾರೆ. ಜಮ್ಮು–ಕಾಶ್ಮೀರದ ಘಟನೆ ಹಿನ್ನೆಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿಯವರು ಸೌದಿ ಅರೇಬಿಯದಿಂದ ಕೂಡಲೇ ವಾಪಸ್ ಬಂದಿದ್ದಾರೆ. ಕೇಂದ್ರದ ಗೃಹ ಸಚಿವ ಅಮಿತ್ ಶಾ ಜೀ ಅವರು ಕೂಡ ಜಮ್ಮು– ಕಾಶ್ಮೀರಕ್ಕೆ ಧಾವಿಸಿದ್ದಾರೆ. ರಾಜ್ಯದ 28 ಜನರು ಈ ದುಷ್ಕೃತ್ಯದಲ್ಲಿ ಪ್ರಾಣ ಕಳಕೊಂಡಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದರು.

ಕಾಂಗ್ರೆಸ್ ಮುಖಂಡರು ಮನ ಬಂದಂತೆ ಮಾತನಾಡುತ್ತಿದ್ದಾರೆ. ಕಾಶ್ಮೀರದ ಸಮಸ್ಯೆ ಸಮಸ್ಯೆಯಾಗಿಯೇ ಉಳಿದುದಕ್ಕೆ ಈ ದೇಶವನ್ನು 60–65 ವರ್ಷ ಆಳಿದಂಥ ಕಾಂಗ್ರೆಸ್ ಪಕ್ಷವೇ ಹೊಣೆ ಹೊರಬೇಕು ಎಂದು ಒತ್ತಾಯಿಸಿದರು. ಏಕ್ ದೇಶ್ ಮೇ ದೊ ನಿಶಾನ್, ದೊ ವಿಧಾನ್, ದೊ ಪ್ರಧಾನ್ ನಹೀ ಚಲೇಗಾ ನಹೀ ಚಲೇಗಾ ಎಂದು ಬಿಜೆಪಿ ಸಂಸ್ಥಾಪಕರಲ್ಲೊಬ್ಬರಾದ ಶ್ಯಾಮಪ್ರಸಾದ್ ಮುಖರ್ಜಿ ಅವರು ಅವತ್ತೇ ಹೇಳಿದ್ದರು ಎಂದು ವಿವರಿಸಿದರು. ಕಾಂಗ್ರೆಸ್ಸಿನ ಪಿತೂರಿಯಿಂದ ಅವರು ಕಾಶ್ಮೀರದಲ್ಲೇ ಪ್ರಾಣ ಕಳಕೊಳ್ಳಬೇಕಾಯಿತು ಎಂದು ಆರೋಪಿಸಿದರು.

ಆರ್ಟಿಕಲ್ 370ರ ಪರಿಣಾಮವಾಗಿ ಕಾಶ್ಮೀರದಲ್ಲಿ ಸಾವಿರಾರು ಯೋಧರು ತಮ್ಮ ಪ್ರಾಣ ಕಳಕೊಂಡಿದ್ದಾರೆ. ಅಲ್ಲದೇ ಅನೇಕ ಹಿಂದೂಗಳು ಇದೇ ಕಾರಣಕ್ಕೆ ತಮ್ಮ ಕುಟುಂಬವನ್ನು ಕಳಕೊಂಡಿದ್ದಾರೆ. ಕೇಂದ್ರದಲ್ಲಿ ಬಿಜೆಪಿ ಅಧಿಕಾರಕ್ಕೆ ಬಂದಾಗ ಆ ಕುಟುಂಬಗಳು, ಯುವಕರಿಗೆ ನ್ಯಾಯ ಕೊಡಲು 370ನೇ ವಿಧಿ ರದ್ದು ಮಾಡುವುದಾಗಿ ಬಿಜೆಪಿ ಶಪಥ ಮಾಡಿತ್ತು. ನರೇಂದ್ರ ಮೋದಿಜೀ ಅವರ ನೇತೃತ್ವದ ಬಿಜೆಪಿ ಸರಕಾರ ಅಧಿಕಾರಕ್ಕೆ ಬಂದಾಗ ಆರ್ಟಿಕಲ್ 370 ಅನ್ನು ರದ್ದು ಮಾಡಿದ್ದೇವೆ ಎಂದರು.


ಸಿದ್ದರಾಮಯ್ಯರವರ ನೇತೃತ್ವದ ಕಾಂಗ್ರೆಸ್ ಪಕ್ಷವು ಬೆಲೆ ಏರಿಕೆಯ ಗ್ಯಾರಂಟಿಯನ್ನು ರಾಜ್ಯದ ಜನತೆಗೆ ನೀಡಿದೆ ಎಂದು ಆಕ್ಷೇಪಿಸಿದರು. ಮುಸ್ಲಿಮರ ತುಷ್ಟೀಕರಣ ನೀತಿ ಹಾಗೂ ದಲಿತರ ಅಭಿವೃದ್ಧಿಗೆ ಮೀಸಲಿಟ್ಟ ಕೋಟ್ಯಂತರ ರೂಪಾಯಿಯನ್ನು ದುರುಪಯೋಗ ಮಾಡಿಕೊಂಡ ಸರಕಾರದ ಕ್ರಮವನ್ನು ಅವರು ಖಂಡಿಸಿದರು.

ಈ ಸಭೆಯಲ್ಲಿ ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಮಾಜಿ ಸಚಿವ ಬಿ.ಶ್ರೀರಾಮುಲು, ವಿಧಾನಪರಿಷತ್ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್. ರವಿಕುಮಾರ್, ಶಾಸಕರಾದ ಡಾ.ಶಿವರಾಜ್ ಪಾಟೀಲ್, ಮಾನಪ್ಪ ಡಿ.ವಜ್ಜಲ್, ರಾಯಚೂರು ಜಿಲ್ಲಾಧ್ಯಕ್ಷ ವೀರನಗೌಡ ಲೆಕ್ಕಿಹಾಳ, ಮಾಜಿ ಸಚಿವರು, ಮಾಜಿ ಶಾಸಕರು, ಮಾಜಿ ಸಂಸದರು, ರಾಜ್ಯ ಪದಾಧಿಕಾರಿಗಳು, ಮಂಡಲ ಅಧ್ಯಕ್ಷರು ಮತ್ತು ಪಕ್ಷದ ಮುಖಂಡರು ಪಾಲ್ಗೊಂಡಿದ್ದರು.



ಬೆಂಗಳೂರಿನ ಗಾಂಧಿ ಭವನದಲ್ಲಿ ಗುರುವಾರ 'ಸರ್ವಾಧಿಕಾರದ ಅಡಿಯಲ್ಲಿ ಕನ್ನಡ ಸಾಹಿತ್ಯ ಪರಿಷತ್ತು' ಕುರಿತು ಸಮಾಲೋಚನಾ ಸಭೆಯಲ್ಲಿ ಬರಹಗಾರರು ಮತ್ತು ಚಿಂತಕರು ಪಾಲ್ಗೊಂಡಿದ್ದರು.

## ಕಾಶ್ಮೀರ ಪ್ರವಾಸಕ್ಕೆ ತೆರಳಿದವರ ನೆರವು
## ಕಲಬುರಗಿ–ಯಾದಗಿರಿ ಜಿಲ್ಲಾಡಳಿತದಿಂದ ಸಹಾಯವಾಣಿ


ಕಲಬುರಗಿ ಡಿ.ಸಿ ಬಿ.ಫೌಜಿಯಾ ತರನ್ನುಮ್–ಯಾದಗಿರಿ ಡಿ.ಸಿ ಡಾ.ಸುಶೀಲಾ .

**ಕಲಬುರಗಿ, ಏ. 24–** ಜಮ್ಮು ಮತ್ತು ಕಾಶ್ಮೀರದ ಅನಂತನಾಗ್ ಜಿಲ್ಲೆಯ ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ಭಯೋತ್ಪಾದಕರು ದಾಳಿ ನಡೆಸಿದ್ದು, ದಾಳಿಯಲ್ಲಿ ಕೆಲವು ಪ್ರವಾಸಿಗರು ಮೃತರಾಗಿ ಹಾಗೂ ಹಲವರು ಗಾಯಗೊಂಡಿದ್ದಾರೆ. ಹೀಗಾಗಿ ಜಿಲ್ಲೆಯಿಂದ ಜಮ್ಮು ಕಾಶ್ಮೀರ ಪ್ರವಾಸಕ್ಕೆ ತೆರಳಿ ಸಂಕಷ್ಟದಲ್ಲಿರುವವರ ಮಾಹಿತಿ ತಿಳಿಸುವಂತೆ ಕಲಬುರಗಿ ಮತ್ತು ಯಾದಗಿರಿ ಜಿಲ್ಲಾಡಳಿತ ಮನವಿ ಮಾಡಿದೆ. ಜಿಲ್ಲಾ ವಿಪತ್ತು ನಿಯಂತ್ರಣ ಕೊಠಡಿ ದೂರವಾಣಿ ಸಂಖ್ಯೆ 08472–278677 ಹಾಗೂ ಪೊಲೀಸ್ ಕಂಟ್ರೋಲ್ ಸಂಖ್ಯೆ 9480805500, 9480803500, 08472–263604ಗೆ ಕರೆ ಮಾಡಿ ಮಾಹಿತಿ ನೀಡಬಹುದು ಎಂದು ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವರು ತಿಳಿಸಿದ್ದಾರೆ.

**ಯಾದಗಿರಿ:** ಜಮ್ಮು ಕಾಶ್ಮೀರಕ್ಕೆ ಪ್ರವಾಸಕ್ಕೆ ತೆರಳಿದವರ ಮಾಹಿತಿ ಕಲೆಹಾಕಲು ಯಾದಗಿರಿ ಜಿಲ್ಲಾಡಳಿತ ಮುಂದಾಗಿದೆ. ಜಮ್ಮು ಮತ್ತು ಕಾಶ್ಮೀರದ ಅನಂತನಾಗ್ ಜಿಲ್ಲೆಯ ಪಹಲ್ಗಾಮ್‌ನಲ್ಲಿ ಮಂಗಳವಾರ ಪ್ರವಾಸಿಗರ ಮೇಲೆ ಭಯೋತ್ಪಾದಕರು ದಾಳಿ ನಡೆಸಿದ್ದು, ದಾಳಿಯಲ್ಲಿ ಕೆಲವು ಪ್ರವಾಸಿಗರು ಮೃತರಾಗಿ ಹಾಗೂ ಹಲವರು ಗಾಯಗೊಂಡಿದ್ದಾರೆ. ಯಾದಗಿರಿ ಜಿಲ್ಲೆಯಿಂದ ಜಮ್ಮು ಕಾಶ್ಮೀರ ಪ್ರವಾಸಕ್ಕೆ ತೆರಳಿ ಭಯೋತ್ಪಾದಕರ ದಾಳಿಯಲ್ಲಿ ಸಿಲುಕಿಕೊಂಡಿದಲ್ಲಿ ಅವರ ಮಾಹಿತಿಯನ್ನು ಸಂಬಂಧಿಸಿದವರು ಕೂಡಲೇ ಜಿಲ್ಲಾ ವಿಪತ್ತು ನಿಯಂತ್ರಣ ಕೊಠಡಿ ದೂರವಾಣಿ ಸಂಖ್ಯೆ 08473–253700 ಹಾಗೂ ಪೊಲೀಸ್ ಕಂಟ್ರೋಲ್ ಸಂಖ್ಯೆ 9480803600, 08473–253736 ಗೆ ಕರೆ ಮಾಡಿ ಮಾಹಿತಿ ನೀಡುವಂತೆ ಜಿಲ್ಲಾಧಿಕಾರಿ ಡಾ. ಸುಶೀಲ ಬಿ. ಮನವಿ ಮಾಡಿದ್ದಾರೆ.

## ಬಳ್ಳಾರಿಯಲ್ಲಿ ಸಾರ್ವಜನಿಕರ ಅನುಕೂಲಕ್ಕೆ ಮಿನಿ ಅಂಬುಲೆನ್ಸ್ ಸೇವೆಗೆ ಡಿಎಚ್‌ಓ ಅವರಿಂದ ಚಾಲನೆ

**ಬಳ್ಳಾರಿ, ಏ.24–** ಗ್ರಾಮೀಣ ಜನರ ಆರೋಗ್ಯ ಸೇವೆಗಳಿಗಾಗಿ ತುರ್ತು ಸಂದರ್ಭದಲ್ಲಿ ಉಪಯುಕ್ತವಾದ ಅಂಬುಲೆನ್ಸ್ ಸೇವೆಯನ್ನು ಸಾರ್ವಜನಿಕರು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಹೇಳಿದರು.

ವಿ.ಆರ್.ಕೆ.ಪಿ ಸ್ಪಾಂಜ್ ಅಂಡ್ ಪವರ್ ಪ್ಲಾಂಟ್ ಎಲ್.ಎಲ್.ಪಿ ಹಲಕುಂದಿ ಇವರು ಹಲಕುಂದಿ, ಹೊನ್ನಳ್ಳಿ ತಾಂಡ ಹಾಗೂ ಹೊನ್ನಳ್ಳಿ ಗ್ರಾಮಗಳಿಗೆ ಒಳಗೊಂಡಂತೆ ತುರ್ತು ಸನ್ನಿವೇಶಗಳಲ್ಲಿ ಸಹಾಯಕವಾಗುವ ಮಿನಿ ಅಂಬುಲೆನ್ಸ್ ಚಾಲನಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.



ಆರೋಗ್ಯದ ಸಮಸ್ಯೆಗಳು ವ್ಯಕ್ತಿಗೆ ಯಾವ ಸಂದರ್ಭದಲ್ಲಿ ಯಾವ ರೀತಿ ಬಂದೆರುಗುವುದನ್ನು ಊಹಿಸಲು ಯಾರಿಗೂ ಸಾಧ್ಯವಿಲ್ಲ. ಅಂತಹ ಸಂದರ್ಭದಲ್ಲಿ ಮನೆಯ ಹತ್ತಿರವೇ ಆಗಮಿಸಿ ಜಿಲ್ಲಾ ಮಟ್ಟದ ಆಸ್ಪತ್ರೆಗಳಿಗೆ ರೋಗಿಗಳನ್ನು ಕರೆದುಕೊಂಡು ಹೋಗುವ ಸೌಲಭ್ಯವನ್ನು ಅವಶ್ಯಕತೆ ಇರುವ ತುರ್ತು ಸಂದರ್ಭದಲ್ಲಿ ಪಡೆಯುವ ಮೂಲಕ ಸ್ವಾಸ್ಥ್ಯ ಸಮಾಜ ನಿರ್ಮಾಣಕ್ಕೆ ಜನತೆಯು ಕೈ ಜೋಡಿಸಬೇಕು ಎಂದು ಹೇಳಿದರು.

ಸರ್ಕಾರವು ಸಾರ್ವಜನಿಕರ ಸೇವೆಗೆ ತುರ್ತು ಸಂದರ್ಭಗಳಲ್ಲಿ ಮನೆಯಿಂದ ಹತ್ತಿರದ ಆಸ್ಪತ್ರೆಗಳಿಗೆ ತೆರಳಲು 108 ತುರ್ತು ವಾಹನದ ಸೌಲಭ್ಯ ಒದಗಿಸಿದ್ದು, ಪ್ರಸ್ತುತ ಸಮುದಾಯದ ಆರೋಗ್ಯ ಸೇವೆಯನ್ನು ಮನಗಂಡು ವಿ.ಆರ್.ಕೆ.ಪಿ ಕಂಪನಿಯ ಸಿಎಸ್‌ಆರ್ ಅನುದಾನದ ಅಡಿ ಒದಗಿಸಿರುವ ಅಂಬುಲೆನ್ಸ್ ಅನ್ನು ಗರ್ಭಿಣಿ ಮಹಿಳೆಯರು, ಅಪಘಾತ ಸಂದರ್ಭದಲ್ಲಿ, ಬೆಂಕಿ ಅವಘಡ ಮತ್ತು ಇತರೆ ಯಾವುದೇ ತುರ್ತು ಸನ್ನಿವೇಶಗಳಲ್ಲಿ ಸದುಪಯೋಗ ಪಡಿಸಿಕೊಂಡು ಆರೋಗ್ಯ ಸುಧಾರಣೆಗೆ ಕೈ ಜೋಡಿಸಲು ವಿನಂತಿಸಿದರು.

ವಿ.ಆರ್.ಕೆ.ಪಿ ಕಂಪನಿಯ ಮಾನವ ಸಂಪನ್ಮೂಲ ಅಧಿಕಾರಿ ಸಂದೀಪ್ ಮಾತನಾಡಿ ಸಿ.ಎಸ್.ಆರ್ ಅನುದಾನದಡಿ ರೂ.8 ಲಕ್ಷ ವೆಚ್ಚದಲ್ಲಿ ಅಂಬುಲೆನ್ಸ್ ಒದಗಿಸಲಾ ಗಿದ್ದು, ಇಬ್ಬರು ತರಬೇತಿ ಪಡೆದ ವಾಹನ ಚಾಲಕರು ಸರತಿಯ ಮೇಲೆ ಕಾರ್ಯನಿರ್ವಹಿಸುತ್ತಾರೆ.

ಅಂಬುಲೆನ್ಸ್‌ನಲ್ಲಿ ಆಕ್ಸಿಜನ್ ಸೌಲಭ್ಯ ಹಾಗೂ ಸ್ಟ್ರೆಚರ್ ಹೊಂದಿದ ಬೆಡ್‌ನೊಂದಿಗೆ ರೋಗಿಗಳೊಂದಿಗೆ ಪಾಲಕರು ಕುಳಿತುಕೊಳ್ಳುವ ಆಸನದ ವ್ಯವಸ್ಥೆ ಇದ್ದು, ಸಾರ್ವಜನಿಕರು ಬಳ್ಳಾರಿಯ ಆಸ್ಪತ್ರೆಗಳಿಗೆ ಚಿಕಿತ್ಸೆಗೆ ಕರೆದುಕೊಂಡು ಹೋಗುವ

## ಚೆಸ್: ಮಕ್ಕಳ ಅಭಿವೃದ್ಧಿಗೆ ಮಕ್ಕಳ ಬುದ್ಧಿವಂತಿಕೆಗೆ ಹೆಸರುವಾಸಿಯಾದಂತ ಗೇಮ್–ಪೋಲಾ ಪ್ರವೀಣ್



**ಬಳ್ಳಾರಿ, ಏ.24–** ಬಳ್ಳಾರಿ ನಗರದ ಪೋಲ ಹೋಟೆಲಿನಲ್ಲಿ ಬಳ್ಳಾರಿ ಜಿಲ್ಲಾ ಚೆಸ್ ಅಸೋಸಿಯೇಷನ್ ವತಿಯಿಂದ ಏಳು ವರ್ಷದ ಒಳಗಿನ ಮತ್ತು 9 ವರ್ಷದ ಒಳಗಿನ ಬಾಲಕ ಬಾಲಕೀಯರಿಗಾಗಿ ಚೆಸ್ ಪಂದ್ಯಾವಳಿಯನ್ನು ಆಯೋಜನೆ ಮಾಡಲಾಗಿತ್ತು.

ಪಂದ್ಯಾವಳಿಯ ಉದ್ಘಾಟನೆಯನ್ನು ಪೋಲಾ ಪ್ರವೀಣ್ ಹಾಗೂ ಜಿಲ್ಲಾಧ್ಯಕ್ಷರಾದ ವಿರುಪಾಕ್ಷಯ್ಯ ಹಾಗೂ ಅಂತರಾಷ್ಟ್ರೀಯ ಆರ್ಬಿಟರ್ ಆಗಿದ್ದಂತ ಬಸವರಾಜ್ ಸಾಮಾಜಿಕ ಹೋರಾಟಗಾರ, ಅಮ್ಮ ಆದ್ಮಿ ಪಕ್ಷದ ಜಿಲ್ಲಾಧ್ಯಕ್ಷರಾದ ಯುವ ಮುಖಂಡ ಮಂಜುನಾಥ ಜಮಾಪುರ್, ಜಗದೀಶ್ ಹಾಗೂ ಜಿಲ್ಲಾ ಪ್ರಧಾನ ಕಾರ್ಯದರ್ಶಿ ನಾಗರಾಜ್ ಹಾಗು ಬೆಳಗಲ್ ವೀರಣ್ಣನವರ ಪುತ್ರರಾದ ಬೆಳಗಲ್ ಹನುಮಂತು ಇವರು ನಡೆಸಿಕೊಟ್ಟರು.

ನೂತನವಾಗಿ ಜಿಲ್ಲಾ ಗೌರವಾಧ್ಯಕ್ಷರಾಗಿ ಪೋಲ ಪ್ರವೀಣ್ ಅವರನ್ನು ಆಯ್ಕೆ ಮಾಡಲಾಯಿತು. ಅವರು ಮಾತನಾಡುತ್ತಾ ಚೆಸ್ ಮೈಂಡ್ ಗೇಮ್ , ಮಕ್ಕಳ ಅಭಿವೃದ್ಧಿಗೆ ಮಕ್ಕಳ ಬುದ್ಧಿವಂತಿಕೆಗೆ ಹೆಸರುವಾಸಿಯಾದಂತ ಗೇಮ್, ಇದನ್ನ ಬಳ್ಳಾರಿ ಜಿಲ್ಲೆಯಲ್ಲಿ ಉನ್ನತ ಮಟ್ಟಕ್ಕೆ ಬೆಳಸಲು ನನ್ನ ಸಹಕಾರವಿರುತ್ತದೆ ಎಂದು ತಿಳಿಸಿದರು.

ಜಿಲ್ಲಾಧ್ಯಕ್ಷರು ಮಾತನಾಡುತ್ತಾ ಬಳ್ಳಾರಿಯಲ್ಲಿ ರಾಜ್ಯದಿಂದ ಮಾನ್ಯತೆ ಪಡೆದ ಚೆಸ್ ಅಸೋಸಿಯೇಷನ್ ನಮ್ಮದಾಗಿದ್ದು ಇನ್ನೂ ಹೆಚ್ಚಿನ ರೀತಿಯಲ್ಲಿ ಬೆಳೆಸಲು ಪ್ರಯತ್ನಿಸಬೇಕು ಎಂದು ತಿಳಿಸಿದರು.

## ಉಗ್ರರಿಗೆ ಮೋದಿ ಸರ್ಕಾರ ತಕ್ಕ ಪಾಠ ಕಲಿಸಲಿ ವೈ.ಎಂ.ಸತೀಶ್, ಸೋಮಶೇಖರರೆಡ್ಡಿ ಒತ್ತಾಯ




ಬಳ್ಳಾರಿ, ಏ.24– ಜಮ್ಮು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಹಿಂದೂ ಪ್ರವಾಸಿಗರ ಮೇಲೆ ಭಯೋತ್ಪಾದಕರಿಂದ ನಡೆದ ನರಮೇಧ ಖಂಡಿಸಿ' ನಗರದಲ್ಲಿ ಬಿಜೆಪಿಯಿಂದ ಪ್ರತಿಭಟನೆ ಮತ್ತು ಮೃತರ ಆತ್ಮಕ್ಕೆ ಶಾಂತಿ ಕೋರಿ ಮೇಣದ ಬತ್ತಿಯೊಂದಿಗೆ ಶ್ರದ್ಧಾಂಜಲಿ ಸಲ್ಲಿಸಲಾಯ್ತು. ವಿಧಾನ ಪರಿಷತ್ ಸದಸ್ಯ ವೈ.ಎಂ.ಸತೀಶ್, ನಗರದ ಮಾಜಿ ಶಾಸಕ ಸೋಮಶೇಖರ್ ರೆಡ್ಡಿ ನೇತೃತ್ವದಲ್ಲಿ ಮೌನ ಪ್ರತಿಭಟನಾ ಮೆರವಣಿಗೆ ಈಡಿಗ ಹಾಸ್ಟಲ್‌ನಿಂದ ಗಡಿಗಿ ಚೆನ್ನಪ್ಪ ವೃತ್ತದಲ್ಲಿ ನಡೆಯಿತು.

## ಅಲೆಮಾರಿ ಸಮುದಾಯಕ್ಕೆ ಸವಲತ್ತು ನೀಡಿ: ಪಲ್ಲವಿ ಸೂಚನೆ

**ಕಲಬುರಗಿ, ಏ.24–** ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಹಾಗೂ ಅರೇ ಅಲೆಮಾರಿ ಜನರ ಕಲ್ಯಾಣಕ್ಕೆ ಸರ್ಕಾರ ಹತ್ತಾರು ಯೋಜನೆ ರೂಪಿಸಿದ್ದು, ಇದನ್ನು ಸಮರ್ಪಕವಾಗಿ ಅನುಷ್ಠಾನಕ್ಕೆ ತರುವ ಜವಾಬ್ದಾರಿ ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳ ಜವಾಬ್ದಾರಿಯಾಗಿದ್ದು, ಅಧಿಕಾರಿಗಳು ಮುತುವರ್ಜಿಯಿಂದ ಕಾರ್ಯನಿರ್ವಹಿಸಬೇಕು ಎಂದು ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಪಲ್ಲವಿ ಜಿ. ಅವರು ಹೇಳಿದರು.

ಅಲೆಮಾರಿ ಸಮುದಾಯ ಯೋಜನೆಗಳ ಅನುಷ್ಠಾನ ನಿಟ್ಟಿನಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯ ಅನುಷ್ಠಾನ ಸಮಿತಿಗೆ ಹೊಸದಾಗಿ ಸದಸ್ಯರನ್ನು ಕೂಡಲೆ ನೇಮಿಸಬೇಕು. ನಿಗಮದಿಂದ ವಸತಿ ರಹಿತರಿಗೆ ಸಾಲ ನೀಡಲಾಗುತ್ತದೆ. ಆದರೆ ಜಿಲ್ಲೆಯಿಂದ ಇದುವರೆಗೆ ಕೇವಲ 8 ಪ್ರಸ್ತಾವನೆ ಬಂದಿವೆ. ಹೆಚ್ಚಿನ ಪ್ರಸ್ತಾವನೆಗಳು ಕಳುಹಿಸಿದಲ್ಲಿ ನಿಗಮದಿಂದ ಅನುಮೋದನೆ ನೀಡಲಾಗುವುದು. ಇನ್ನು ಬ್ಯಾಂಕ್ ಲಿಂಕೇಜ್ ಕಾರ್ಯಕ್ರಮಗಳಲ್ಲಿ ಫಲಾನುಭವಿಗಳಿಗೆ ಬ್ಯಾಂಕ್‌ಗಳು ಅನಗತ್ಯ ಕಿರಿಕಿರಿ ಮಾಡಬಾರದು ಎಂದು ಸೂಚಿಸಿದರು.




ಅಲೆಮಾರಿ ಸಮುದಾಯ ದಿನನಿತ್ಯ ಸಂಚಾರ ಮಾಡುತ್ತಾ ಊರಿಂದ ಊರಿಗೆ ಅಲೆಯುತ್ತಾರೆ. ಹೀಗಾಗಿ ಇಲ್ಲಿ ಮಕ್ಕಳು ಶಿಕ್ಷಣದಿಂದ ವಂಚಿತರಾಗುವುದು ಸರ್ವೇ ಸಾಮಾನ್ಯ. ಹೀಗಾಗಿ ಇಂತಹ ಮಕ್ಕಳನ್ನು ಶಿಕ್ಷಕರು, ಶಿಕ್ಷಣ ಇಲಾಖೆ ಗುರುತಿಸಿ ಅವರಿಗೆ ಪ್ರಾಥಮಿಕ ಶಿಕ್ಷಣ ಕೊಡಿಸಬೇಕು. ಇನ್ನು 6ನೇ ತರಗತಿ ಪ್ರವೇಶಕ್ಕೆ ಸಮಾಜ ಕಲ್ಯಾಣ ಇಲಾಖೆ ಅಧೀನದ ಕ್ರೈಸ್ ವಸತಿ ಶಾಲೆಯಲ್ಲಿ ಪ್ರವೇಶ ಪರೀಕ್ಷೆ ಇಲ್ಲದೆ ಅಲೆಮಾರಿ ಸಮುದಾಯದ ಮಕ್ಕಳಿಗೆ ಪ್ರವೇಶಾತಿ ಕಲ್ಪಿಸಲು ಸರ್ಕಾರದ ಆದೇಶವಿದ್ದು, ಈ ಬಗ್ಗೆ ಸಮುದಾಯದ ಜನರಿಗೆ ಅರಿವು ಮೂಡಿಸಬೇಕು. ಅಲೆಮಾರಿ ಸಮುದಾಯದಲ್ಲಿ ಬಾಲ್ಯ ವಿವಾಹ ಪ್ರಕರಣಗಳು ಹೆಚ್ಚಿದ್ದು, ಇದರ ನಿವಾರಣೆಗೆ ಜಾಗೃತಿ ಕೆಲಸ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಮಾಡಬೇಕು ಎಂದು ಪಲ್ಲವಿ ಜಿ. ಅಭಿಪ್ರಾಯಪಟ್ಟರು. ಡಿ.ಸಿ. ಬಿ.ಫೌಜಿಯಾ ತರನ್ನುಮ್ ಮಾತನಾಡಿ, ಮಿಷನ್ ಸುರಕ್ಷಾ ಯೋಜನೆಯಡಿ 450 ತರಬೇತಿದಾರರನ್ನು ಬಳಸಿಕೊಂಡು ಕಲಬುರಗಿ ಜಿಲ್ಲೆಯಲ್ಲಿ ಬಾಲ್ಯ ವಿವಾಹ, ಪೋಕ್ಸೋ, ಸೇಫ್ ಟಚ್, ಅನಸೇಫ್ ಕುರಿತು ವ್ಯಾಪಕ ಪ್ರಚಾರ ಮಾಡಲಾಗಿದೆ. ಅಲೆಮಾರಿ ಸಮುದಾಯದ ಜನರು ಹೆಚ್ಚಿರುವ ಸ್ಥಳಗಳಲ್ಲಿ ಈ ಬಗ್ಗೆ ಇನ್ನು ಹೆಚ್ಚು ಪ್ರಚಾರ ಕೈಗೊಳ್ಳಿ ಎಂದರು.

ದೌರ್ಜನ್ಯ ಪ್ರಕರಣದಲ್ಲಿ ಪರಿಹಾರ ಕೂಡಲೆ ನೀಡಿ ಸಂತ್ರಸ್ತ ಕುಟುಂಬ ಸದಸ್ಯರಿಗೆ ನೌಕರಿ ನೀಡುವ ನಿಟ್ಟಿನಲ್ಲಿ ಅಧಿಕಾರಿಗಳು ಹೆಚ್ಚು ಮುತುವರ್ಜಿ ವಹಿಸಬೇಕು. ದೌರ್ಜನ್ಯ ಸಮಿತಿಗೆ ಅಲೆಮಾರಿ ಸಮುದಾಯ ಮುಖಂಡರನ್ನು ವಿಶೇಷ ಆಹ್ವಾನಿತರಾಗಿ ಕರೆಯಬೇಕು ಎಂದ ಅಧ್ಯಕ್ಷೆ ಪಲ್ಲವಿ ಜಿ. ಅವರು ಸೇಡಂ ತಾಲೂಕಿನ ಮುಧೋಳದ ಸರ್ವೆ ನಂ.37ರಲ್ಲಿ 60 ಬುಡ್ಗ ಜಂಗಮ ಕುಟುಂಬಗಳು ವಾಸಿಸುತ್ತಿದ್ದು, ಇವರಿಗೆ ಅಗತ್ಯ ಮೂಲಸೌಕರ್ಯ ಇಲ್ಲ. ಮೂಲಸೌಕರ್ಯ ಇಲ್ಲದೆ ಬದುಕು ಸಾಗಿಸೋದು ಹೇಗೆ ಎಂದು ಪ್ರಶ್ನಿಸಿ, ಕೂಡಲೆ ಅಗತ್ಯ ಸೌಲಭ್ಯ ಒದಗಿಸಿ ಎಂದು ನಿರ್ದೇಶನ ನೀಡಿದರು.

## ಉಗ್ರರ ದಾಳಿಗೆ ಬಲಿಯಾದ ಹಿಂದೂ ಬಾಂಧವರ ಆತ್ಮಕ್ಕೆ ಶಾಂತಿ ಸಿಗಲಿ– ಎಂ.ಎಸ್.ಸಿದ್ದಪ್ಪ




**ಬಳ್ಳಾರಿ, ಏ.24–** ಜಮ್ಮು–ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಉಗ್ರರ ದಾಳಿಯಲ್ಲಿ ಮೃತಪಟ್ಟ ಹಿಂದೂ ಬಾಂಧವರ ಆತ್ಮಕ್ಕೆ ಶಾಂತಿ ಸಿಗಲಿ ಮತ್ತು ಅವರ ಕುಟುಂಬಕ್ಕೆ ಆ ಭಗವಂತ ದುಃಖವನ್ನು ಬರಿಸುವ ಶಕ್ತಿ ನೀಡಲಿ ಎಂದು ಬಿಜೆಪಿ ಯುವಮೋರ್ಚ ಜಿಲ್ಲಾಧ್ಯಕ್ಷರು ಮತ್ತು ಬಿಜೆಪಿ ಮುಖಂಡರು ಪ್ರಾರ್ಥಿಸುತ್ತಾ. ಬಿಜೆಪಿ ಪಾರ್ಟಿ ಕಚೇರಿಯಿಂದ ಗಾಂಧಿ ವೃತದ ವರೆಗೆ ಮೇಣದ ಬತ್ತಿ ಹಿಡಿದು ಕಾಲ್ನಡಿಗೆ ಮುಖಾಂತರ ಕಾರ್ಯಕರ್ತರೊಂದಿಗೆ ಭಾಗಿಯಾಗಿ ಉಗ್ರರ ದಾಳಿಯಲ್ಲಿ ಮೃತಪಟ್ಟಿರುವ ನನ್ನ ಹಿಂದು ಬಾಂಧವರ ಆತ್ಮಕ್ಕೆ ಶಾಂತಿ ಸಿಗಲಿ ಎಂದು ಶ್ರದ್ಧಾಂಜಲಿ ಸಲ್ಲಿಸಲಾಯಿತು.

# ಸಿಂಧೂ ಜಲ ಒಪ್ಪಂದ ನಿಲ್ಲಿಸುವುದು ಯುದ್ಧದ ಬೆದರಿಕೆ: ಭಾರತಕ್ಕೆ ಪಾಕಿಸ್ತಾನದ ತೀಕ್ಷ್ಣ ಪ್ರತಿಕ್ರಿಯೆ



ಪಹಲ್ಗಾಮ್ ದಾಳಿ ಬೆನ್ನಲ್ಲೇ ಭಾರತ ಕೈಗೊಂಡ ಕ್ರಮಗಳಿಗೆ ಪ್ರತಿಯಾಗಿ ಪಾಕಿಸ್ತಾನ ಸರ್ಕಾರ ತಿರುಗೇಟು ನೀಡಿದೆ. ಭಾರತದ ವಿಮಾನಗಳಿಗೆ ಪಾಕ್ ವಾಯು ಪ್ರದೇಶ ನಿಷೇಧ, ವ್ಯಾಪಾ ವಹಿವಾಟು ಸ್ಥಗಿತ ಸೇರಿದಮತೆ ಹಲವು ನಿರ್ಣಯಗಳನ್ನು ಪ್ರಧಾನಿ ಷಾಬಾಜ್ ಶರೀಫ್ ನೇತೃತ್ವದಲ್ಲಿ ಸಭೆ ಕೈಗೊಂಡಿದೆ. 1960 ರ ಸಿಂಧೂ ಜಲ ಒಪ್ಪಂದವನ್ನು ತಡೆಹಿಡಿಯುವುದು ಸಿಂಧೂ ಜಲ ಒಪ್ಪಂದವನ್ನು ಅಮಾನತುಗೊಳಿಸುವುದು ಯುದ್ಧದ ಕೃತ್ಯದಂತೆ ಎಂದು ಎಚ್ಚರಿಕೆ ನೀಡಿದೆ.

**ಇಸ್ಲಾಮಾಬಾದ್, ಏಪ್ರಿಲ್ 24:** ಸಿಂಧೂ ನದಿ ನೀರಿನ ಹರಿವನ್ನು ಬೇರೆಡೆಗೆ ತಿರುಗಿಸಲು ಭಾರತ ಕೈಗೊಳ್ಳುವ ಯಾವುದೇ ಕ್ರಮವನ್ನು "ಯುದ್ಧಪ್ರಯೋಗ"ವೆಂದು ಪರಿಗಣಿಸಲಾಗುತ್ತದೆ ಎಂದು ಪಾಕಿಸ್ತಾನ ಇಂದು ಎಚ್ಚರಿಸಿದೆ.

ಪಾಕಿಸ್ತಾನ ಪ್ರಧಾನಿ ಶೆಹಬಾಜ್ ಷರೀಫ್ ಅಧ್ಯಕ್ಷತೆಯಲ್ಲಿ ಗುರುವಾರ ನಡೆದ ಉನ್ನತ ನಾಗರಿಕ-ಮಿಲಿಟರಿ ನಿರ್ಧಾರ ತೆಗೆದುಕೊಳ್ಳುವ ಸಂಸ್ಥೆಯಾದ ರಾಷ್ಟ್ರೀಯ ಭದ್ರತಾ ಸಮಿತಿ (ಎನ್‌ಎಸ್‌ಸಿ) ಸಭೆಯಲ್ಲಿ ಇದನ್ನು ನಿರ್ಧರಿಸಲಾಯಿತು. ಭಾರತದ ಸಂಬಂಧಗಳನ್ನು ಕೆಳಮಟ್ಟಕ್ಕಿಳಿಸಿದ್ದಕ್ಕೆ ತಕ್ಷಣದ ಪ್ರತಿಕ್ರಿಯೆಯ ಭಾಗವಾಗಿ, ಪಾಕಿಸ್ತಾನ ಸರ್ಕಾರವು ಏಪ್ರಿಲ್ 30 ರಿಂದ ಜಾರಿಗೆ ಬರುವಂತೆ ಇಸ್ಲಾಮಾಬಾದ್‌ನಲ್ಲಿರುವ ಭಾರತೀಯ ಹೈಕಮಿಷನ್‌ನ ರಾಜತಾಂತ್ರಿಕ ಸಿಬ್ಬಂದಿಯನ್ನು ಗರಿಷ್ಠ 30 ಸಿಬ್ಬಂದಿಗೆ ನಿರ್ಬಂಧಿಸುವುದಾಗಿ ಘೋಷಿಸಿತು. ಪಾಕಿಸ್ತಾನವು ತಕ್ಷಣದಿಂದ ಜಾರಿಗೆ ಬರುವಂತೆ ಭಾರತೀಯ ಒಡೆತನದ ಅಥವಾ ನಿರ್ವಹಿಸುವ ಎಲ್ಲಾ ವಿಮಾನಗಳಿಗೆ ತನ್ನ ವಾಯುಪ್ರದೇಶವನ್ನು ಮುಚ್ಚಿದೆ. ಮೂರನೇ ದೇಶಗಳ ಮೂಲಕ ಸಾಗಿಸುವ ವ್ಯಾಪಾರಗಳು ಸೇರಿದಂತೆ ಭಾರತದೊಂದಿಗಿನ ಎಲ್ಲಾ ರೀತಿಯ ವ್ಯಾಪಾರವನ್ನು ಸ್ಥಗಿತಗೊಳಿಸಲು ಸಮಿತಿ ನಿರ್ಧರಿಸಿದೆ.

ಇದಲ್ಲದೆ, ವಾಘಾ ಗಡಿ ದಾಟುವಿಕೆಯನ್ನು ತಕ್ಷಣ ಮುಚ್ಚುವುದಾಗಿ ಅದು ಘೋಷಿಸಿದೆ. ಭಾರತದ ಪ್ರತಿಕೂಲ ಕ್ರಮಗಳಿಗೆ ಪಾಕಿಸ್ತಾನವು ಸಂಪೂರ್ಣ ರಾಷ್ಟ್ರೀಯ ಶಕ್ತಿಯಿಂದ ಪ್ರತಿಕ್ರಿಯಿಸುತ್ತದೆ ಎಂದು ಒಬಿಅ ಪ್ರತಿಜ್ಞೆ ಮಾಡಿದೆ, ಯಾವುದೇ ರೀತಿಯ ಆಕ್ರಮಣವನ್ನು ಎದುರಿಸಲು ರಾಷ್ಟ್ರ ಮತ್ತು ಅದರ ಸಶಸ್ತ್ರ ಪಡೆಗಳು ಸಂಪೂರ್ಣವಾಗಿ ಸಿದ್ಧವಾಗಿವೆ ಎಂದು ಘೋಷಿಸಿದೆ ಎಂದು ಜಿಯೋ ನ್ಯೂಸ್ ವರದಿ ಮಾಡಿದೆ.

ಭಾರತದ ವಿದೇಶಾಂಗ ಸಚಿವಾಲಯ (ಒಇಂ) ಐದು ಕ್ರಮಗಳನ್ನು ರೂಪಿಸಿದ ನಂತರ ಇಸ್ಲಾಮಾಬಾದ್‌ನ ಪ್ರತಿಕ್ರಿಯೆ ಬಂದಿದೆ, ಇದನ್ನು ನವದೆಹಲಿ "ಗಡಿಯಾಚೆಗಿನ ಭಯೋತ್ಪಾದನೆಗೆ ನಿರ್ಣಾಯಕ ಪ್ರತಿಕ್ರಿಯೆ" ಎಂದು ಕರೆದಿದೆ. ವಿಶ್ವಬ್ಯಾಂಕ್‌ನಿಂದ ಸುಗಮಗೊಳಿಸಲ್ಪಟ್ಟ ಭಾರತ ಮತ್ತು ಪಾಕಿಸ್ತಾನದ ನಡುವಿನ ನೀರು ಹಂಚಿಕೆ ಒಪ್ಪಂದವಾದ ಸಿಂಧೂ ಜಲ ಒಪ್ಪಂದವನ್ನು ಭಾರತ ನಿನ್ನೆ ಅಮಾನತುಗೊಳಿಸಿದೆ. ಇದು ಸಿಂಧೂ ಜಲಾನಯನ ಪ್ರದೇಶದ ಮೂರು ಪೂರ್ವ ನದಿಗಳ (ರವಿ, ಬಿಯಾಸ್ ಮತ್ತು ಸಟ್ಲೆಜ್) ಮೇಲೆ ಭಾರತಕ್ಕೆ ನಿಯಂತ್ರಣವನ್ನು ನೀಡುತ್ತದೆ ಮತ್ತು ಮೂರು ಪಶ್ಚಿಮ ನದಿಗಳ (ಸಿಂಧೂ, ಝೀಲಂ ಮತ್ತು ಚೆನಾಬ್) ಮೇಲೆ ಪಾಕಿಸ್ತಾನಕ್ಕೆ ಅಧಿಕಾರವನ್ನು ನೀಡುತ್ತದೆ.

ಭಾರತ ಘೋಷಿಸಿದ ಇತರ ಕ್ರಮಗಳಲ್ಲಿ ಅಟ್ಟಾರಿ ಇಂಟಿಗ್ರೇಟೆಡ್ ಚೆಕ್ ಪೋಸ್ಟ್ ಅನ್ನು ತಕ್ಷಣ ಮುಚ್ಚುವುದರ ಜೊತೆಗೆ, ಪಾಕಿಸ್ತಾನಿಗಳು ಮೇ 1, 2025 ರ ಮೊದಲು ದೇಶವನ್ನು ತೊರೆಯಲು ಗಡುವು ನೀಡುವುದು ಸೇರಿವೆ. ಅಲ್ಲದೆ, ಸಾರ್ಕ್ ವೀಸಾ ವಿನಾಯಿತಿ ಯೋಜನೆ (SVES) ಅಡಿಯಲ್ಲಿ ಪಾಕಿಸ್ತಾನಿ ಪ್ರಜೆಗಳಿಗೆ ಭಾರತಕ್ಕೆ ಪ್ರಯಾಣಿಸಲು ಅನುಮತಿ ಇರುವುದಿಲ್ಲ ಮತ್ತು ಹಿಂದೆ ಪಾಕಿಸ್ತಾನಿ ಪ್ರಜೆಗಳಿಗೆ ನೀಡಲಾದ ಯಾವುದೇ SVES ವೀಸಾಗಳನ್ನು ಈಗ ರದ್ದುಗೊಳಿಸಲಾಗಿದೆ ಎಂದು ಪರಿಗಣಿಸಲಾಗುತ್ತದೆ. ಖಗಇಖ ವೀಸಾದ ಅಡಿಯಲ್ಲಿ ಪ್ರಸ್ತುತ ಭಾರತದಲ್ಲಿ ಇರುವ ಯಾವುದೇ ಪಾಕಿಸ್ತಾನಿ ಪ್ರಜೆ ಭಾರತವನ್ನು ತೊರೆಯಲು 48 ಗಂಟೆಗಳ ಕಾಲಾವಕಾಶವಿದೆ. ಪಾಕಿಸ್ತಾನ ಸಂಬಂಧಿತ ಭಯೋತ್ಪಾದಕರು 26 ಪ್ರವಾಸಿಗರನ್ನು ಗುಂಡಿಕ್ಕಿ ಕೊಂದ ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಭಾರತ ಈ ಕ್ರಮಗಳನ್ನು ಪ್ರಕಟಿಸಿದೆ.



ಪಹಲ್ಗಾಮ್ ಭಯೋತ್ಪಾದಕ ಹತ್ಯಾಕಾಂಡದ ಬಗ್ಗೆ ದೇಶಾದ್ಯಂತ ಆಕ್ರೋಶ ವ್ಯಕ್ತವಾಗುತ್ತಿರುವ ನಡುವೆ ಭಾರತ ಮತ್ತು ಪಾಕಿಸ್ತಾನದ ನಡುವೆ ಕಹಿ ಹೆಚ್ಚುತ್ತಿದೆ. "ಪ್ರತಿಯೊಬ್ಬ ಭಯೋತ್ಪಾದಕ, ಅವರ ನಿರ್ವಾಹಕರು ಮತ್ತು ಅವರ ಬೆಂಬಲಿಗರನ್ನು" "ಅವರ ಕಲ್ಪನೆಗೂ ಮೀರಿದ" ಕ್ರಮಗಳ ಮೂಲಕ ಶಿಕ್ಷಿಸುವ ಮೂಲಕ ಸೇಡು ತೀರಿಸಿಕೊಳ್ಳುವುದಾಗಿ ಪ್ರತಿಜ್ಞೆ ಮಾಡಿದರು.

– ಪ್ರಧಾನಿ ನರೇಂದ್ರ ಮೋದಿ



ಬರೆದುಕೊಂಡಿರುವ ಪಾಕಿಸ್ತಾನದ ಇಂಧನ ಸಚಿವ ಅವೈಸ್ ಲೆಘಾರಿ, ಸಿಂಧೂ ನದಿ ನೀರು ಒಪ್ಪಂದವನ್ನು ಭಾರತ ಅಜಾಗರೂಕತೆಯಿಂದ ಅಮಾನತುಗೊಳಿಸಿರುವುದು ಜಲಯುದ್ಧದ ಕೃತ್ಯ; ಹೇಡಿತನದ, ಕಾನೂನುಬಾಹಿರ ನಡೆ. ಪ್ರತಿಯೊಂದು ಹನಿಯೂ ನಮ್ಮದಾಗಿದೆ, ಮತ್ತು ನಾವು ಅದನ್ನು ಕಾನೂನುಬದ್ಧವಾಗಿ, ರಾಜಕೀಯವಾಗಿ ಮತ್ತು ಜಾಗತಿಕವಾಗಿ ಪೂರ್ಣ ಬಲದಿಂದ ರಕ್ಷಿಸುತ್ತೇವೆ ಎಂದು ಹೇಳಿದ್ದಾರೆ.

## ಪಹಲ್ಗಾಮ್ ಉಗ್ರ ದಾಳಿ: ಭಯೋತ್ಪಾದಕ ಸೈಫುಲ್ಲಾ ಕಸೂರಿ ಸಂಚುಕೋರ

**ನವದೆಹಲಿ, ಏಪ್ರಿಲ್ 24:** ಭಾರತದ ವರ್ತನೆ ನೋಡಿ ಲಷ್ಕರ್-ಎ-ತೊಯ್ಯಾ ಉಪ ಮುಖ್ಯಸ್ಥ ಸೈಫುಲ್ಲಾ ಕಸೂರಿ ಭಯಭೀತನಾಗಿದ್ದು, ಪಹಲ್ಲಾಮ್ ಭಯೋತ್ಪಾದಕ ದಾಳಿಯಲ್ಲಿ ಯಾವುದೇ ಪಾತ್ರವನ್ನು ನಿರಾಕರಿಸಿದ್ದಾನೆ. ಸೈಫುಲ್ಲಾ ಒಂದು ವಿಡಿಯೋ ಬಿಡುಗಡೆ ಮಾಡಿದ್ದು ಅವನ ಕಣ್ಣಲ್ಲಿ ನೀರು ತುಂಬಿತ್ತು ಮತ್ತು ಯಾರೋ ಪಾಕಿಸ್ತಾನದ ಶಾಂತಿಯನ್ನು ಕದಡಲು ಪ್ರಯತ್ನಿಸುತ್ತಿದ್ದಾರೆ ಎಂದು ವೀಡಿಯೊದಲ್ಲಿ ಹೇಳುವುದನ್ನು ಕೇಳಬಹುದು. ಭಾರತವು ಸಿಂಧೂ ನದಿ ನೀರು ಒಪ್ಪಂದವನ್ನು ಅಮಾನತುಗೊಳಿಸಿದೆ. ಭಾರತವನ್ನು ಬೆಂಬಲಿಸಬೇಡಿ ಎಂದು ಹೇಳಿದ್ದಾನೆ. ನಾವು ಅದನ್ನು ಖಂಡಿಸುತ್ತೇವೆ. ಭಾರತ ಸರ್ಕಾರ 10 ಲಕ್ಷ ಸೈನಿಕರನ್ನು ಕಳುಹಿಸುವ ಮೂಲಕ ಕಾಶ್ಮೀರದಲ್ಲಿ ಯುದ್ಧದಂತಹ ಪರಿಸ್ಥಿತಿಯನ್ನು ಸೃಷ್ಟಿಸಿದೆ. ಭಾರತವು ಪಾಕಿಸ್ತಾನದ ಶಾಂತಿಯನ್ನು ಕದಡಲು ಬಯಸುತ್ತದೆ.



ಭಾರತವನ್ನು ಕುರುಡಾಗಿ ಬೆಂಬಲಿಸಬೇಡಿ ಮತ್ತು ಸತ್ಯವನ್ನು ಬೆಂಬಲಿಸುವಂತೆ ನಾವು ವಿಶ್ವದ ದೇಶಗಳಿಗೆ ಮನವಿ ಮಾಡುತ್ತೇವೆ. ಕಾಶ್ಮೀರದ ಪಹಲ್ಯಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯು ಭಾರತದ ಪಿತೂರಿಯಾಗಿದೆ. ಇದಕ್ಕೂ ಪಾಕಿಸ್ತಾನಕ್ಕೂ ಯಾವುದೇ ಸಂಬಂಧವಿಲ್ಲ ಎಂದು ಹೇಳಿದ್ದಾನೆ. ಏಪ್ರಿಲ್ 22 ರಂದು ಜಮ್ಮು ಮತ್ತು ಕಾಶ್ಮೀರದ ಪಹಲ್ಯಾಮ್‌ನಲ್ಲಿ ಭಯೋತ್ಪಾದಕ ದಾಳಿ ನಡೆದು 27 ಜನರು ಪ್ರಾಣ ಕಳೆದುಕೊಂಡರು. ಭಾರತೀಯ ಮಾಧ್ಯಮಗಳು ಈ ದಾಳಿಯನ್ನು ಭಯೋತ್ಪಾದಕರ ಮೇಲೆ ಹೊರಿಸಿ 27 ಜನರ ಸಾವಿಗೆ ಕಾರಣವಾದವು. ಭಾರತೀಯ ಮಾಧ್ಯಮಗಳು 24 ಗಂಟೆಗಳಿಂದ ಆರೋಪಗಳನ್ನು ಮಾಡುತ್ತಿವೆ. ಭಾರತವು ಸಿಂಧೂ ನದಿ ನೀರು ಒಪ್ಪಂದವನ್ನು ರದ್ದುಗೊಳಿಸಿದೆ.

## ಪ್ರತಿಸುಂಕ ನಿಲ್ಲಿಸಲು ಸೂಚಿಸುವಂತೆ ವಾಣಿಜ್ಯ ನ್ಯಾಯಾಲಯಕ್ಕೆ ಮೊರೆ

**ನ್ಯೂಯಾರ್ಕ್, ಏಪ್ರಿಲ್ 24:** 'ಪ್ರತಿಸುಂಕ ಹೇರಿದ ಕ್ರಮವನ್ನು ನಿಲ್ಲಿಸುವಂತೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರಿಗೆ ಸೂಚನೆ ನೀಡಿ' ಎಂದು 12 ರಾಜ್ಯಗಳು ಅಂತರರಾಷ್ಟ್ರೀಯ ವ್ಯಾಪಾರ ನ್ಯಾಯಾಲಯದಲ್ಲಿ ಅರ್ಜಿ ಸಲ್ಲಿಸಿವೆ. ಕಾನೂನುಬಾಹಿರವಾದ ಈ ಕ್ರಮವು ಅಮೆರಿಕದ ಆರ್ಥಿಕತೆಯನ್ನು ಅಸ್ತವ್ಯಸ್ತ ಸ್ಥಿತಿಗೆ ತಲುಪಿಸಿದೆ ಎಂದೂ ದೂರಿವೆ. 'ಕಾನೂನುಬದ್ಧವಾಗಿ ಉತ್ತಮ ರೀತಿಯಲ್ಲಿ ಅಧಿಕಾರ ಚಲಾಯಿಸುವುದಕ್ಕಿಂತ ಟ್ರಂಪ್ ಅವರು ತಮ್ಮ ಸ್ವಹಿತಾಸಕ್ತಿಗಾಗಿ ದೇಶದ ವ್ಯಾಪಾರ ನೀತಿಯನ್ನು ಬಳಸಿಕೊಳ್ಳುತ್ತಿದ್ದಾರೆ. ಸುಂಕವನ್ನು ಅಕ್ರಮ ಎಂದು ಘೋಷಿಸಿ, ಸರ್ಕಾರಿ




ಸಂಸ್ಥೆಗಳು ಮತ್ತು ಅಧಿಕಾರಿಗಳಿಗೆ ಇರುವ ಸುಂಕ ಹೇರುವ ಅಧಿಕಾರವನ್ನು ರದ್ದು ಮಾಡಿ' ಎಂದೂ ಅರ್ಜಿಯಲ್ಲಿ ಮನವಿ ಮಾಡಲಾಗಿದೆ. 'ಅಂತರರಾಷ್ಟ್ರೀಯ ತುರ್ತು ಆರ್ಥಿಕ ಅಧಿಕಾರ ಕಾಯ್ದೆ 'ಯಡಿ ನಾನು ಪ್ರತಿಸುಂಕ ಹೇರುವ ಕ್ರಮವನ್ನು ಕೈಗೊಳ್ಳುತ್ತಿದ್ದೇನೆ' ಎಂದು ಟ್ರಂಪ್ ಹೇಳುತ್ತಿದ್ದಾರೆ. ಆದರೆ, ಕಾಂಗ್ರೆಸ್‌ಗೆ (ಸಂಸತ್ತು) ಮಾತ್ರವೇ ಸುಂಕವನ್ನು ಹೇರುವ ಅಧಿಕಾರವಿದೆ. ದೇಶವು ಬೆದರಿಕೆ ಎದುರಿಸುತ್ತಿದ್ದರೆ ಮಾತ್ರ ಅಧ್ಯಕ್ಷರು ಈ ಕಾಯ್ದೆಯಲ್ಲಿನ ಅಧಿಕಾರ ಬಳಸಿಕೊಳ್ಳಬಹುದು' ಎಂದು ಹೇಳಿದ್ದಾರೆ

## ಒತ್ತೆಯಾಳುಗಳನ್ನು ಬಿಡುಗಡೆಗೊಳಿಸಿ ಹಮಾಸ್‌ಗೆ ಪ್ಯಾಲೆಸ್ತೀನ್ ಅಧ್ಯಕ್ಷರ ಕರೆ

**ಗಾಜಾ, ಏಪ್ರಿಲ್ 24:** ಹಮಾಸ್ ಉಗ್ರರ ವಶದಲ್ಲಿರುವ ಇಸ್ರೇಲ್ ಒತ್ತೆಯಾಳುಗಳನ್ನು ಬಿಡುಗಡೆಗೊಳಿಸುವಂತೆ ಪ್ಯಾಲೆಸ್ಟೀನ್ ಅಧ್ಯಕ್ಷ ಮೊಹಮ್ಮದ್ ಅಬ್ಬಾಸ್ ಆಗ್ರಹಿಸಿದ್ದಾರೆ. ಅಲ್ಲದೇ, 'ಹಮಾಸ್‌ನ ಕೃತ್ಯಗಳಿಗೆ ನಾನು ಮತ್ತು ನನ್ನ ಪ್ರಜೆಗಳು ಬೆಲೆತೆರುವಂತಾಗಿದೆ, ಇನ್ನಾದರೂ ಒತ್ತೆಯಾಳುಗಳನ್ನು ಬಿಡುಗಡೆಗೊಳಿಸಿ, ನಮಗೆ ಮುಕ್ತಿ ನೀಡಿ' ಎಂದು ಮನವಿ ಮಾಡಿದ್ದಾರೆ. ನಿರಾಶ್ರಿತರಿದ್ದ ಶಾಲೆಯ ಮೇಲೆ ಇಸ್ರೇಲ್ ನಡೆಸಿದ ವೈಮಾನಿಕ ದಾಳಿಯಲ್ಲಿ 25 ಮಂದಿ ಮೃತಪಟ್ಟಿದ್ದರು. ಈ ಹಿನ್ನೆಲೆಯಲ್ಲಿ ಮಾತನಾಡಿದ ಅಬ್ಬಾಸ್, 'ಗಾಜಾದ ಮೇಲೆ ಇಸ್ರೇಲ್ ದಾಳಿ ನಡೆಸಲು ಈಗಾಗಲೇ ಹಲವು ಕಾರಣಗಳನ್ನು ಹಮಾಸ್ ನೀಡಿದೆ. ಅದರಲ್ಲಿ ಪ್ರಮುಖವಾದುದು ಒತ್ತೆಯಾಳುಗಳನ್ನು ಇರಿಸಿಕೊಂಡಿರುವುದು. ಇದರಿಂದ ಪ್ರತಿ ದಿನವೂ



ಗಾಜಾ ಸಾವುಗಳನ್ನು ಕಾಣುವಂತಾಗಿದೆ. ಸಹೋದರರೆ, ಒತ್ತೆಯಾಳುಗಳನ್ನು ಅವರಿಗೆ ಒಪ್ಪಿಸಿ, ಸಂಕಷ್ಟದಿಂದ ನಮ್ಮನ್ನು ಹೊರತನ್ನಿ' ಎಂದೂ ಹೇಳಿದ್ದಾರೆ. ಅಬ್ಬಾಸ್ ಅವರ ಮನವಿಯನ್ನು ಹಮಾಸ್ ನಾಯಕ ಬಸ್ಸೆಮ್ ನೈಮ್ ತಿರಸ್ಕರಿಸಿದ್ದಾರೆ. ಅಬ್ಬಾಸ್ ನಡೆ ಅವಮಾನಕರ ಎಂದೂ ಟೀಕಿಸಿದ್ದಾರೆ.

## ಪ್ರತಿಸುಂಕ ಹೇರಿಕೆ ತಪ್ಪಿಸಲು ಭಾರತದ ಕ್ರಮ, ಅಮೆರಿಕ ಜೊತೆ ದ್ವಿಪಕ್ಷೀಯ ವಾಣಿಜ್ಯ ಒಪ್ಪಂದಕ್ಕೆ ಶೀಘ್ರದಲ್ಲೇ ಸಹಿ ಸಾಧ್ಯತೆ


**ವಾಶಿಂಗ್ಟನ್, ಏಪ್ರಿಲ್ 24:** ಭಾರತೀಯ ರಫ್ತುಗಳ ಮೇಲೆ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಪ್ರತಿ ಸುಂಕ ಹೇರಿಕೆಯನ್ನು ತಪ್ಪಿಸಲು ಅಮೆರಿಕದ ಜೊತೆಗೆ ದ್ವಿಪಕ್ಷೀಯ ವಾಣಿಜ್ಯ ಒಪ್ಪಂದಕ್ಕೆ ಸಹಿಹಾಕಲಿರುವ ಮೊದಲ ರಾಷ್ಟ್ರ ಭಾರತವಾಗುವ ಸಾಧ್ಯತೆಯಿದೆ ಎಂದು ಅಮೆರಿಕದ ಖಜಾನೆ ಕಾರ್ಯದರ್ಶಿ ಸ್ಕಾಟ್ ಬೆಸ್ಸೆಂಟ್ ಅವರು ತಿಳಿಸಿದ್ದಾರೆ.

ಭಾರತದ ಜೊತೆಗಿನ ವ್ಯಾಪಾರಿ ಮಾತುಕತೆಗಳು ಪೂರ್ಣಗೊಳ್ಳುವ ಸನಿಹಕ್ಕೆ ಬಂದಿವೆ. ಯಾಕೆಂದರೆ ಭಾರತವು ವ್ಯಾಪಾರ ಕ್ರಮಗಳು ತುಲಾನಾತ್ಮಕವಾಗಿ ಮುಕ್ತವಾದುದಾಗಿವೆ ಎಂದು ಅವರು ಹೇಳಿದ್ದಾರೆ. ವಿಶ್ವ ಬ್ಯಾಂಕ್ ಹಾಗೂ ಅಂತಾರಾಷ್ಟ್ರೀಯ ಹಣಕಾಸು ನಿಧಿಯ ವಾರ್ಷಿಕ ಸಭೆಗಳ ಸಂದರ್ಭ ದುಂಡು ಮೇಜಿನ ಸಭೆಯಲ್ಲಿ ಮಾತನಾಡುತ್ತಿದ್ದಾಗ ಬೆಸ್ಸೆಂಟ್ ಅವರು ಈ ಮಾಹಿತಿ ನೀಡಿದ್ದಾರೆ. " ಭಾರತವು ಅಲ್ಪ ಮಟ್ಟದ ಸುಂಕರಹಿತ ವಾಣಿಜ್ಯ ನಿರ್ಬಂಧಗಳನ್ನು ಹೊಂದಿದೆ. ನಗದು ದುರ್ಬಳಕೆ ಇರುವುದಿಲ್ಲ ಹಾಗೂ




ಅತ್ಯಂತ ಕಡಿಮೆ ಪ್ರಮಾಣದ ಸರಕಾರಿ ಸಬ್ಸಿಡಿಗಳಿರುತ್ತದೆ. ಹೀಗಾಗಿ ಭಾರತದ ಜೊತೆ ವ್ಯವಹಾರ ಕುದುರಿಸಿಕೊಳ್ಳುವುದು ತುಂಬಾ ಸುಲಭ" ಎಂದು ಬೆಸ್ಸೆಂಟ್ ಅವರು ತಿಳಿಸಿರುವುದಾಗಿ ದಿ ನ್ಯೂಯಾರ್ಕ್ ಪೋಸ್ಟ್ ವರದಿ ಮಾಡಿದೆ. ಪ್ರಸಕ್ತ ಭಾರತದ ರಫ್ತುಗಳಿಗೆ ಅಮೆರಿಕವು ಶೇ.26ರಷ್ಟು ಪ್ರತಿ ಸುಂಕವನ್ನು ವಿಧಿಸಿದೆಯಾದರೂ, ಅದನ್ನು 90 ದಿನಗಳವರೆಗೆ ಅಮಾನತಿನಲ್ಲಿರಿಸಿದೆ. ಈ ಗಡುವು ಜುಲೈ 8ರೊಳಗೆ ಮುಕ್ತಾಯಗೊಳ್ಳಲಿದೆ.

ತನ್ನ ಪತ್ನಿ ಉಷಾ ವ್ಯಾನ್ಸ್ ಹಾಗೂ ಮೂವರು ಮಕ್ಕಳೊಂದಿಗೆ ಭಾರತ ಪ್ರವಾಸಕ್ಕೆ ಆಗಮಿಸಿದ ಅಮೆರಿಕ ಉಪಾಧ್ಯಕ್ಷ ಜೆ.ಡಿ.ವಾನ್ಸ್ ಮಂಗಳವಾರ ಜೈಪುರದಲ್ಲಿ ಹೇಳಿಕೆಯೊಂದನ್ನು ನೀಡಿ ಭಾರತವು ಸುಂಕೇತರ ನಿರ್ಬಂಧಗಳನ್ನು ತಗ್ಗಿಸಬೇಕೆಂದು ಆಗ್ರಹಿಸಿದ್ದರು. ಉಭಯದೇಶಗಳ ನಡುವೆ ಬಲವಾದ ಬಾಂಧವ್ಯವನ್ನು ನಿರ್ಮಿಸುವ ಪ್ರಸ್ತಾವನೆ ಮಾಡಿದ ಅವರು ಭಾರತವು ಅಮೆರಿಕನ್ ಸರಕುಗಳು, ಇಂಧನ ಹಾಗೂ ಸೇನಾ ಉಪಕರಣಗಳನ್ನು ಹೆಚ್ಚಿನ ಪ್ರಮಾಣದಲ್ಲಿ ಆಮದು ಮಾಡಿಕೊಳ್ಳಬೇಕೆಂದು ಕರೆ ನೀಡಿದ್ದರು.




ನ್ಯೂಜಿಲೆಂಡ್‌ನ ಕ್ರೈಸ್ಟ್‌ಚರ್ಚ್‌ನಲ್ಲಿ ನಡೆದ 'ಸಾಂಗ್ಸ್ ಆಫ್ ಇನ್ನರ್ ಮಂಗೋಲಿಯಾ' ಪ್ರದರ್ಶನದ ಸಂದರ್ಭದಲ್ಲಿ ನರ್ತಕಿಯೊಬ್ಬರು ಪ್ರದರ್ಶನ ನೀಡಿದರು. ನ್ಯೂಜಿಲೆಂಡ್‌ನ ದಕ್ಷಿಣ ದ್ವೀಪದ ಅತಿದೊಡ್ಡ ನಗರವಾದ ಕ್ರೈಸ್ಟ್‌ಚರ್ಚ್‌ನಲ್ಲಿ ಗುರುವಾರ 'ಸಾಂಗ್ಸ್ ಆಫ್ ಇನ್ನರ್ ಮಂಗೋಲಿಯಾ' ಪ್ರದರ್ಶನವು ಕೇಂದ್ರ ಹಂತವನ್ನು ಪಡೆದುಕೊಂಡಿತು, ಚೀನಾದ ಉತ್ತರದ ಹುಲ್ಲುಗಾವಲುಗಳಿಂದ ಸಾಂಪ್ರದಾಯಿಕ ಸಂಗೀತ ಮತ್ತು ನೃತ್ಯದ ರೋಮಾಂಚಕ ಪ್ರದರ್ಶನದೊಂದಿಗೆ ಪ್ರೇಕ್ಷಕರನ್ನು ಮೋಡಿ ಮಾಡಿತು.

## ಐಪಿಎಲ್: ರಾಜಸ್ಥಾನ ರಾಯಲ್ಸ್ ವಿರುದ್ಧ ಆರ್‌ಸಿಬಿಗೆ 11 ರನ್‌ಗಳ ರೋಚಕ ಗೆಲುವು: ಕೊಹ್ಲಿ ಸ್ಫೋಟಕ ಬ್ಯಾಟಿಂಗ್

ಗುರುವಾರ ನಡೆದ ರೋಮಾಂಚಕ ಪಂದ್ಯದಲ್ಲಿ ರಾಜಸ್ಥಾನ್ ರಾಯಲ್ ವಿರುದ್ಧದ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವು 2025 ರ ಐಪಿಎಲ್‌ನ ಮೊದಲ ಗೆಲುವು ದಾಖಲಿಸುವ ಮೂಲಕ ತನ್ನ ಸೋಲಿನ ಸರಣಿಯನ್ನು ಮುರಿದಿದೆ. ಎಚ್ಚರಿಕೆ ಬ್ಯಾಟಿಂಗ್ ಮಾಡಿದ ಆರ್ ಸಿಬಿ ಮೊದಲ ಮೂರು ಪಂದ್ಯಗಳಲ್ಲಿ ಆಕ್ರಮಣಕಾರಿ ಬ್ಯಾಟಿಂಗ್ ಮಾಡಲು ಹೋಗಿದ್ದ ಆರ್ ಸಿಬಿ ಬ್ಯಾಟರ್ ಗಳು ಬೇಗನೆ ವಿಕೆಟ್ ಕಳೆದುಕೊಂಡಿದ್ದರು. ತವರಿನಲ್ಲಿ ನಾಲ್ಕನೇ ಬಾರಿಯೂ ಟಾಸ್ ಸೋತ ಆರ್ ಸಿಬಿ ಮೊದಲು ಬ್ಯಾಟಿಂಗ್ ಮಾಡಬೇಕಾಯಿತು. ಆದರೆ ಈ ಬಾರಿ ಫಿಲ್ ಸಾಲ್ಟ್ ಮತ್ತು ಕೊಹ್ಲಿ ಎಚ್ಚರಿಕೆಯಿಂದ ಬ್ಯಾಟಿಂಗ್ ಆರಂಭಿಸಿದರು. ವಿಕೆಟ್ ಬೀಳದಂತೆ ನೋಡಿಕೊಂಡ ಈ ಜೋಡಿ ಮೊದಲ ವಿಕೆಟ್‌ಗೆ 61 ರನ್ ಕಲೆಹಾಕಿತು. ಸಾಲ್ಟ್ 26 ರನ್ ಗಳಿಸಿದರು. ಬಳಿಕ ಬಂದ ದೇವದತ್ ಕೊಹ್ಲಿ ಜೊತೆಗೂಡಿ ಎರಡನೇ ವಿಕೆಟ್‌ಗೆ 94 ರನ್ ಕಲೆಹಾಕಿದರು. ಕೊಹ್ಲಿ 70 ರನ್ ಗಳಿಸಿದರೆ, ಪಡಿಕ್ಕಲ್ 50 ರನ್ ಗಳಿಸಿದರು. ನಾಯಕ ರಜತ್ ಪಟಿದಾರ್ ಕೇವಲ 1 ರನ್ ಗಳಿಸಿ ಔಟಾದರು. ಟಿವ್‌ಂ‌




ಡೇವಿಡ್ 15 ಎಸೆತಗಳಲ್ಲಿ 23 ರನ್ ಗಳಿಸಿದರೆ, ಜಿತೇಶ್ ಶರ್ಮಾ 10 ಎಸೆತಗಳಲ್ಲಿ 20 ರನ್ ಗಳಿಸಿದರು. ಆರ್ ಸಿಬಿ 20 ಓವರ್ ಗಳಲ್ಲಿ 5 ವಿಕೆಟ್ ಕಳೆದುಕೊಂಡು 205 ರನ್ ಕಲೆಹಾಕಿತು. ಸುಲಭ ಗೆಲುವಿನ ಅವಕಾಶ ಕೈಚೆಲ್ಲಿದ ಆರ್ ಆರ್ 206 ರನ್‌ಗಳ ಬೃಹತ್ ಮೊತ್ತವನ್ನು ಬೆನ್ನಟ್ಟಿದ ರಾಜಸ್ಥಾನ ರಾಯಲ್ಸ್ ಸ್ಫೋಟಕ ಆರಂಭ ಪಡೆಯಿತು. ವೈಭವ್ ಸೂರ್ಯವಂಶಿ ಮತ್ತು ಜೈಸ್ವಾಲ್ ಕೇವಲ 4.2 ಓವರ್ ಗಳಲ್ಲೇ ಮೊದಲ ವಿಕೆಟ್‌ಗೆ 52 ರನ್ ಕಲೆಹಾಕಿದರು. ಬಳಿಕ ಜೈಸ್ವಾಲ್ ಅಬ್ಬರದ ಬ್ಯಾಟಿಂಗ್ ಮುಂದುವರೆಸಿದರು. 5.5 ಓವರ್ ಗಳಲ್ಲಿ 72 ರನ್ ಗಳಿಸಿದ್ದ ರಾಜಸ್ಥಾನ ರಾಯಲ್ಸ್ ಜೈಸ್ವಾಲ್ ಅವರ ವಿಕೆಟ್ ಕಳೆದುಕೊಂಡಿತು. ಜೈಸ್ವಾಲ್ 19 ಎಸೆತಗಳಲ್ಲಿ 49 ರನ್ ಗಳಿಸಿ ಔಟಾದರು. ಆದರೂ 18ನೇ ಓವರ್ ನಲ್ಲಿ 22 ರನ್ ಬಾರಿಸುವ ಮೂಲಕ ರಾಜಸ್ಥಾನ ರಾಯಲ್ಸ್ ಮತ್ತೆ ಗೆಲುವಿನ ಸನಿಹ ಬಂದಿತು. ಆದರೆ 19ನೇ ಓವರ್ ಇಡೀ ಪಂದ್ಯದ ದಿಕ್ಕನ್ನೇ ಬದಲಾಯಿಸಿತು. ಕೊನೆಯ 2 ಓವರ್ ನಲ್ಲಿ ಆರ್ ಆರ್ ಗೆಲುವಿಗೆ 17 ರನ್ ಬೇಕಿತ್ತು. ಜೋಶ್ ಹೇಜಲ್‌ವುಡ್ 19ನೇ ಓವರ್ ನಲ್ಲಿ ಕೇವಲ 1 ರನ್ ನೀಡಿ 2 ವಿಕೆಟ್ ಪಡೆಯುವ ಮೂಲಕ ಆರ್ ಸಿಬಿ ಮೇಲುಗೈ ಸಾಧಿಸುವಂತೆ ನೋಡಿಕೊಂಡರು. ಕೊನೆಯ ಎರಡು ಓವರ್ ಗಳಲ್ಲಿ 4 ವಿಕೆಟ್ ಕಳೆದುಕೊಂಡ ಆರ್ ಆರ್ 11 ರನ್‌ಗಳಿಂದ ಸೋಲು ಕಂಡಿತು.



## ಟೋಕಿಯೊದಲ್ಲಿ ಕೊನೆಯ ಸ್ಪರ್ಧೆ: ಸ್ಪ್ರಿಂಟ್ ತಾರೆ ದಲೀಲಾ

ಬೆಂಗಳೂರು: 'ಸೆಪ್ಟೆಂಬರ್‌ನಲ್ಲಿ ನಡೆಯಲಿರುವ ಟೋಕಿಯೊ ವಿಶ್ವ ಅಥ್ಲೆಟಿಕ್ಸ್ ಚಾಂಪಿಯನ್‌ಷಿಪ್ ನನ್ನ ಪಾಲಿಗೆ ಮಹತ್ವದ ಕೂಟ. ಅದು ವೃತ್ತಿಜೀವನದ ಕೊನೆಯ ಸ್ಪರ್ಧೆಯಾಗಿರಲಿದೆ' ಎಂದು ಡಬಲ್ ಒಲಿಂಪಿಕ್ ಚಾಂಪಿಯನ್, ಅಮೆರಿಕದ ಸ್ಪ್ರಿಂಟ್ ತಾರೆ ದಲೀಲಾ ಮುಹಮ್ಮದ್ ಹೇಳಿದರು. ನಗರದಲ್ಲಿ ಇದೇ 27ರಂದು ನಡೆಯಲಿರುವ ಟಿಸಿಎಸ್ ವಿಶ್ವ 10ಕೆ ಓಟದ 17ನೇ ಆವೃತ್ತಿಯ ರಾಯಭಾರಿಯಾಗಿರುವ 'ಸ್ವೀನ್ ಆಫ್ ದಿ ಕ್ವಾರ್ಟರ್ ಮೈಲ್' ಖ್ಯಾತಿಯ ದಲೀಲಾ ಗುರುವಾರ ಬೆಂಗಳೂರಿಗೆ ಬಂದಿದ್ದು, ತಮ್ಮ ವೃತ್ತಿಜೀವನ ಮತ್ತು ನಿವೃತ್ತಿ ಕುರಿತು ಮಾಧ್ಯಮದವರೊಂದಿಗೆ ಮುಕ್ತವಾಗಿ ಮಾತನಾಡಿದರು. 35 ವರ್ಷ ವಯಸ್ಸಿನ ಸ್ಪ್ರಿಂಟ್ ತಾರೆ ದಲೀಲಾ




ಅವರು 2016ರ ರಿಯೊ ಒಲಿಂಪಿಕ್ಸ್‌ನ 400 ಮೀಟರ್ ಹರ್ಡಲ್ಸ್ ನಲ್ಲಿ ಚಿನ್ನ ಮತ್ತು 2020ರ ಟೋಕಿಯೊ ಕೂಟದಲ್ಲಿ 4ಥ400 ಮೀಟರ್ ರಿಲೇನಲ್ಲಿ ಚಿನ್ನ ಮತ್ತು 400 ಮೀ. ಹರ್ಡಲ್ಸ್‌ನಲ್ಲಿ ಬೆಳ್ಳಿಯ ಸಾಧನೆ ಮೆರೆದಿದ್ದಾರೆ. ವಿಶ್ವ ಚಾಂಪಿಯನ್‌ಷಿಪ್ ನಲ್ಲೂ ಎರಡು ಚಿನ್ನ ಸೇರಿದಂತೆ ಐದು ಪದಕಗಳನ್ನು ಮುಡಿಗೇರಿಸಿಕೊಂಡಿದ್ದಾರೆ. ವಿಶ್ವ ಅಥ್ಲೆಟಿಕ್ಸ್ ಚಾಂಪಿಯನ್‌ಷಿಪ್‌ನಲ್ಲಿ ಉತ್ತಮ ಪ್ರದರ್ಶನದೊಂದಿಗೆ ವಿದಾಯಕ್ಕೆ ತಜಭಿ್ರಂಟಚಿ_{2} ನಿರ್ಧರಿಸಿದ್ದೇನೆ' ಎಂದು 2021ರಲ್ಲಿ 400 ಮೀ ಹರ್ಡಲ್ಸ್‌ನಲ್ಲಿ ವಿಶ್ವದಾಖಲೆ ಜಟಣಿಣಥಿಜಣ 0 ದಲೀಲಾ (51.58 ಸೆ). ತಿಳಿಸಿದರು. ಪ್ರಸ್ತುತ ಈ ದಾಖಲೆ ಅಮೆರಿಕದ ಸಿಡ್ನಿ ಮೆಕ್‌ಲಾಫ್ಲಿನ್ ಲೆವ್ರೋನ್ (50.37ಸೆ) ಹೆಸರಿನಲ್ಲಿದೆ.